ಸಂಪುಟ: 04 ಸಂಚಿಕೆ: 245 ಪುಟಗಳು: 08 ಸೋಮವಾರ 18 ನವೆಂಬರ್ 2024 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ದೊಡ್ಡ ಗುರಿಯನ್ನು ಹೊಂದುವುದು, ನಿರಂತರವಾಗಿ ಜ್ಞಾನವನ್ನು ಪಡೆದುಕೊಳ್ಳುವುದು, ಪರಿಶ್ರಮ ಪಡುವುದು, ತಾಳ್ಮೆಯಿಂದಿರುವುದು ಈ ನಾಲ್ಕು ವಿಷಯಗಳನ್ನು ಅನುಸರಿಸಿದರೆ ನೀವು ಏನನ್ನಾದರೂ ಸಾಧಿಸಬಹುದು

# ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಜಿಲ್ಲೆಗಳಲ್ಲಿ ಬಿಜೆಪಿ ಹೋರಾಟ

• ಉದಯವಾಹಿನಿ, ಬೆಂಗಳೂರು

ವಕ್ಫ್ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ನವೆಂಬರ್ 21 ಅಥವಾ 22 ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಹೋರಾಟ ನಡೆಸಲು ಬಿಜೆಪಿ ಮುಂದಾಗಿದೆ. ಪಕ್ಷದ ರಾಜ್ಯ ಕಚೇರಿಯಲ್ಲಿ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ಅವರು, ರಾಜ್ಯಾದ್ಯಂತ ರೈತರು ಹಾಗೂ ಮಠಗಳ ಪಹಣಿಯಲ್ಲಿ ಸರ್ಕಾರದಿಂದ ವಕ್ಫ್ ಆಸ್ತಿ ಎಂದು ನಮೂದಿಸಿರುವುದರ ನೈಜ ವರದಿಯನ್ನು ಸಂಗ್ರಹಿಸಲು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು 'ನಮ್ಮ ಭೂಮಿ- ನಮ್ಮ ಹಕ್ಕು' ಘೋಷವಾಕ್ಯದಡಿ ಮೂರು ತಂಡಗಳನ್ನು ರಚಿಸಿದ್ದಾರೆ.

ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಪರಿಷತ್ತಿನ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ನೇತೃತ್ವದ ಮೂರು ತಂಡಗಳಲ್ಲಿ ರಾಜ್ಯದ ಕೇಂದ್ರ ಸಚಿವರು, ಮಾಜಿ ಸಿಎಂಗಳಾದ ಡಿ.ವಿ.ಸದಾನಂದಗೌಡ, ಬಸವರಾಜ ಬೊಮ್ಮಾಯಿ ಸೇರಿದಂತೆ ಹಲವು ಮುಖಂಡರು



ರಾಜ್ಯಾದ್ಯಂತ ಪ್ರತಿ ಜಿಲ್ಲೆಗಳಲ್ಲಿ ಪ್ರವಾಸ ಮಾಡಲಿದ್ದಾರೆ. ಈ ವೇಳೆ ಶೋಷಣೆಗೆ ಒಳಗಾದ ಸಹಸ್ರಾರು ಸಂಖ್ಯೆಯ ಸಾರ್ವಜನಿಕರು, ರೈತರನ್ನು ಬೆಳಿಗ್ಗೆಯಿಂದ ಸಂಜೆತನಕ ವೇದಿಕೆಗೆ ಬರಮಾಡಿಕೊಂಡು ಅಹವಾಲು ಸ್ವೀಕರಿಸುತ್ತೇವೆ. ಸಮಸ್ಯೆಯ ಗಂಭೀರತೆಯನ್ನು

> ಇದೇ ವೇಳೆ ಪಕ್ಷದಲ್ಲಿನ ಭಿನ್ನಾಭಿಪ್ರಾಯ ಕುರಿತ ಪ್ರಶ್ನೆಗೆ ಉತ್ತರಿಸಿ, ಪಕ್ಷದೊಳಗೆ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಬಸನಗೌಡ ಪಾಟೀಲ್ ಯತ್ನಾಳ್ ಹಿರಿಯ ನಾಯಕರಾಗಿದ್ದು, ಜಿಲ್ಲೆಗಳಿಗೆ ಭೇಟಿ ನೀಡುವ ತಂಡಗಳಲ್ಲಿ ಅವರೂ ಇದ್ದಾರೆ. ಪಕ್ಷದ ಶಾಸಕರು, ಸಂಸದರು, ಮಾಜಿ ಶಾಸಕರು, ಸಂಸದರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದು, ಯಾರನ್ನೂ ಬಿಡುವ ಪ್ರಶ್ನೆಯೇ ಇಲ್ಲ
>
> – ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

ಜಿಲ್ಲಾವಾರು ಪರಾಮರ್ಶೆ ಮಾಡುತ್ತೇವೆ ಎಂದು ಹೇಳಿದರು.

ರೈತರು, ಮಠಮಾನ್ಯಗಳು ಮತ್ತು ಸಾರ್ವಜನಿಕರ ಸಮಸ್ಯೆಯನ್ನು ಆಲಿಸಲಿದೆ. ಅವರ ಸಮಸ್ಯೆಯನ್ನು ಮುಂಬರುವ ಬೆಳಗಾವಿ ಅಧಿವೇಶನದಲ್ಲಿ ಪ್ರಸ್ತಾಪಿಸುತ್ತೇವೆ. ನೈಜ ವರದಿಯನ್ನು ತರಲಿದ್ದೇವೆ ಎಂದು ತಿಳಿಸಿದರು. ಕೇಂದ್ರದ 3 ಸಚಿವರು, ಮಾಜಿ ಮುಖ್ಯಮಂತ್ರಿಗಳಾದ ಡಿ.ವಿ.ಸದಾನಂದಗೌಡ, ಬಸವರಾಜ ಬೊಮ್ಮಾಯಿಯವರು ಸೇರಿ ಪ್ರಮುಖ ನಾಯಕರು ಇರುವ ಪ್ರತಿ ತಂಡವು ಕನಿಷ್ಠ 8–10 ಜಿಲ್ಲೆಗಳನ್ನು ಪ್ರವಾಸ ಮಾಡಲಿದೆ. ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಸದನದಲ್ಲಿ ವಾಸ್ತವಿಕ ಸಮಸ್ಯೆಗಳ ಕಡೆ ಬೆಳಕು ಚೆಲ್ಲುವ ಕೆಲಸ ಮಾಡಲಿದೆ. ಡಿಸೆಂಬರ್ ಮೊದಲ ವಾರದಿಂದ ಈ ಪ್ರವಾಸ ಇರುತ್ತದೆ ಎಂದು ಮಾಹಿತಿ ನೀಡಿದರು. ಬೆಳಗಾವಿ ಅಧಿವೇಶನದ ವೇಳೆ ಬೆಳಗಾವಿಯಲ್ಲಿ ಬೃಹತ್ ಪ್ರತಿಭಟನೆಯನ್ನೂ ಆಯೋಜಿಸಲಾಗುತ್ತಿದ್ದು, ಸುಮಾರು 50ರಿಂದ 60 ಸಾವಿರ ಸಾರ್ವಜನಿಕರು, ರೈತರನ್ನು ಸೇರಿಸಿ ರಾಜ್ಯಾಧ್ಯಕ್ಷರ ನೇತೃತ್ವದಲ್ಲಿ ಪ್ರತಿಭಟನೆಯನ್ನು ಏರ್ಪಡಿಸುತ್ತೇವೆ. ಪ್ರತಿ ಜಿಲ್ಲೆ, ಹೋಬಳಿ, ಪಂಚಾಯಿತಿ ಮಟ್ಟದಲ್ಲಿ ವಕ್ಫ್ ಸಮಸ್ಯೆಗಳನ್ನು ಆಲಿಸುತ್ತಿದ್ದೇವೆಂದು ವಿವರಿಸಿದರು.

## ಬಹುಮತ ಹೊಂದಿರುವ ಸರ್ಕಾರ ಬೀಳಿಸುವುದು ಹುಚ್ಚುತನದ ಪರಮಾವಧಿ

• ಉದಯವಾಹಿನಿ, ಶಿವಮೊಗ್ಗ

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರವನ್ನು ಬೀಳಿಸುವ ಕೆಲಸವನ್ನು ಯಾರೂ ಮಾಡುತ್ತಿಲ್ಲ. ಪೂರ್ಣ ಬಹುಮತ ಹೊಂದಿರುವ ಸರ್ಕಾರವನ್ನು ಬೀಳಿಸುವುದು ಹುಚ್ಚುತನದ ಪರಮಾವಧಿ' ಎಂದು ಬಿಜೆಪಿ



ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಹೇಳಿದರು.

ಸರ್ಕಾರ ಬೀಳಿಸುವುದಕ್ಕಾಗಿ ಕಾಂಗ್ರೆಸ್ ಶಾಸಕರನ್ನು ಯಾರೂ ಬಿಜೆಪಿಗೆ ಕರೆಯುತ್ತಿಲ್ಲ' ಎಂದು ಇಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದರು. 'ಕೋವಿಡ್ ಸಂದರ್ಭದಲ್ಲಿ ಜೀವ ಉಳಿಸುವ ಕೆಲಸ ಮಾಡಿದ್ದೇವೆ. ಯಾವುದೇ ಭ್ರಷ್ಟಾಚಾರ ಅಥವಾ ಹಣಕಾಸಿನ ಏರುಪೇರು ಆಗಿಲ್ಲ. ರಾಜ್ಯ ಸರ್ಕಾರ ದುರುದ್ದೇಶದಿಂದ ಎಸ್ಐಟಿ ರಚನೆ ಮಾಡಿದೆ. ತನ್ನ ವೈಫಲ್ಯಗಳಿಂದ ಜನರ ಗಮನ ಬೇರೆಡೆ ಸೆಳೆಯಲು ಕೋವಿಡ್ ವಿಚಾರ ಪ್ರಸ್ತಾಪಿಸಿದೆ. ನಾವು ಎಲ್ಲಾ ರೀತಿಯ ತನಿಖೆ ಎದುರಿಸಿ ಆಪಾದನೆಗಳಿಂದ ಮುಕ್ತರಾಗಿ ಹೊರಗೆ ಬರುತ್ತೇವೆ' ಎಂದು ತಿಳಿಸಿದರು. ರಾಜ್ಯದ ಮೂರು ಕ್ಷೇತ್ರಗಳಿಗೆ ನಡೆದ ಉಪ ಚುನಾವಣೆಯಲ್ಲಿ ಎನ್‌ಡಿಎ ಬೆಂಬಲಿತ ಅಭ್ಯರ್ಥಿಗಳು ಗೆಲ್ಲುತ್ತಾರೆ. ವಕ್ಫ್ ವಿಚಾರವಾಗಿ ಬಿಜೆಪಿಯಿಂದ ರಚಿಸಿರುವ ಸಮಿತಿ ರಾಜ್ಯದಲ್ಲಿ ಪ್ರವಾಸ ಮಾಡಿ ವರದಿ ಕೊಡಲಿದೆ ಎಂದರು.

## ಕಾಂಗ್ರೆಸ್ ಶಾಸಕರು ಕುರಿ, ಕೋಣ, ಕತ್ತೆಗಳೇ?: ಸಿಎಂಗೆ ಜೋಶಿ ತಿರುಗೇಟು

• ಉದಯವಾಹಿನಿ, ಹುಬ್ಬಳ್ಳಿ

ಕಾಂಗ್ರೆಸ್ ಶಾಸಕರೇನು ಕುರಿ, ಕೋಣ, ಕತ್ತೆಗಳೇ? ತನಗೆ ಹಣ ಕೊಟ್ಟು ಖರೀದಿಸಲು ಬಂದಿದ್ದರು ಎಂದು ಒಬ್ಬ ಶಾಸಕರಾದರೂ ಹೇಳಿದ್ದಾರೆಯೇ? ಮುಖ್ಯಮಂತ್ರಿ ಸಿದ್ದರಾಮಯ್ಯ ಜವಾಬ್ದಾರಿಯಿಂದ ಮಾತನಾಡಬೇಕು' ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಗ್ರಹಿಸಿದ್ದಾರೆ. 'ಸರ್ಕಾರ ಬೀಳಿಸಲು ಬಿಜೆಪಿ ಶಾಸಕರನ್ನು ಹಣಕೊಟ್ಟು ಖರೀದಿಸಲು ಯತ್ನಿಸುತ್ತಿದೆ' ಎನ್ನುವ ಸಿಎಂ ಸಿದ್ದರಾಮಯ್ಯ ಆರೋಪಕ್ಕೆ ಭಾನುವಾರ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, 'ಸಿಎಂ ತಮ್ಮ



ಮತ್ತು ಸರ್ಕಾರದ ಮೇಲಿರುವ ಆರೋಪಗಳ ವಿಷಯಾಂತರಕ್ಕೆ ಹೀಗೆಲ್ಲ ಅಸಂಬದ್ಧ ಅವಿವೇಕದ ಹೇಳಿಕೆ ನೀಡುತ್ತಿದ್ದಾರೆ. ಇಂತಹ ಹುಚ್ಚುತನದ ಮಾತುಗಳು ಪ್ರಜಾಪ್ರಭುತ್ವದ ವ್ಯವಸ್ಥೆ ಮೇಲೆ ಪರಿಣಾಮ ಬೀರುತ್ತದೆ' ಎಂದು ಅಸಮಧಾನ ವ್ಯಕ್ತಪಡಿಸಿದರು.

ಬಿಜೆಪಿ 50 ಕೋಟಿ ಆಫರ್ ನೀಡಿದೆ ಎಂದು ಅಥವಾ ಮಧ್ಯವರ್ತಿಯ ಹೆಸರನ್ನು ಕಾಂಗ್ರೆಸ್ಸಿನ ಒಬ್ಬ ಶಾಸಕರಾದರೂ ಹೇಳಿದ್ದಾರೆಯೇ ಕುರಿ, ಕೋಣಗಳನ್ನು ಮಾತ್ರ ಮಾರಾಟ ಮಾಡುತ್ತಾರೆ, ಶಾಸಕರನ್ನು ಯಾರೂ ಮಾರಾಟ ಮಾಡುವುದಿಲ್ಲ. ಸಿ.ಎಂ ಹಾಗೂ ಮತ್ತವರ ತಂಡದ ಆರೋಪ ನೋಡಿದರೆ ಕಾಂಗ್ರೆಸ್ ಶಾಸಕರನ್ನು ಇವರು ಮಾರುಕಟ್ಟೆಯಲ್ಲಿ ಇಟ್ಟಂತೆ ಕಾಣುತ್ತದೆ' ಎಂದು ವ್ಯಂಗ್ಯವಾಡಿದರು.

ಒಬ್ಬೊಬ್ಬ ಶಾಸಕರಿಗೆ 50 ಕೋಟಿ ಅಂದರೆ, 50 ಶಾಸಕರಿಗೆ 2,500 ಕೋಟಿ ಆಗುತ್ತದೆ. ಸಿದ್ದರಾಮಯ್ಯ ಅವರಿಗೆ ಸ್ವಲ್ಪವಾದರೂ ಜ್ಞಾನವಿದೆಯೇ ಎಂದು ಪ್ರಶ್ನಿಸಿದ ಸಚಿವ ಜೋಶಿ, ರಾಜಕಾರಣ ಮಾಡಬೇಕೆಂಬ ಕಾರಣಕ್ಕೆ ವ್ಯಾಪ್ತಿಮೀರಿ ಮಾತನಾಡುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಗ್ರಾಮೀಣ ಭಾಗಗಳಲ್ಲಿ ಉದ್ವಿಗ್ನ ವಾತಾವರಣ ಜನರ ಮಧ್ಯೆ ಕದಡಿದ ಸಾಮರಸ್ಯ

• ಉದಯವಾಹಿನಿ, ಧಾರವಾಡ

ಗ್ರಾಮೀಣ ಪ್ರದೇಶಗಳಲ್ಲಿ ವಕ್ಫ್ ಆಸ್ತಿ ಗುರುತು ಹಾಕುವ ಮೂಲಕ ಸಮುದಾಯಗಳನ್ನು ವಿಭಜಿಸಲಾಗುತ್ತಿದ್ದು, ಹಳ್ಳಿಭಾಗಗಳಲ್ಲಿ ಜಾತ್ಯತೀತ ತತ್ವದಡಿಯಲ್ಲಿ ಬದುಕುವ ಜನರ ಜೀವನದ ಮೇಲೆ ಕುಂದುಂಟಾಗುತ್ತಿದೆ.ಇದಕ್ಕೆ ಸಾಕ್ಷಿ ಎಂಬಂತೆ ಇತ್ತೀಚೆಗೆ ಕಲಘಟಗಿಯಲ್ಲಿ ವಕ್ಫ್ ಬೋರ್ಡ್ ಪ್ರಕ್ರಿಯೆ ವಿರೋಧಿಸಿ ನಡೆದ ಪ್ರತಿಭಟನೆ ವೇಳೆ ಹಿಂದೂಪರ ಸಂಘಟನೆಗಳು ರಾಜ್ಯ ಸರ್ಕಾರವನ್ನು ಪ್ರಶ್ನಿಸಿ ಘೋಷಣೆಗಳನ್ನು ಕೂಗಿ ಬೇರೆ ಸಮುದಾಯದ ವ್ಯಕ್ತಿಯೊಬ್ಬರು ಆಕ್ಷೇಪ ವ್ಯಕ್ತಪಡಿಸಿದ್ದು, ಮಾರಾಮಾರಿ ನಡೆದಿದೆ.

ಇದೀಗ ಕಲಘಟಗಿಯಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ. ವಕ್ಫ್ ತನ್ನ ಆಸ್ತಿಗಳನ್ನು ಗುರುತಿಸಲು ಅದಾಲತ್‌ಗಳನ್ನು ಆಯೋಜಿಸಲು ಪ್ರಾರಂಭಿಸಿದಾಗಿನಿಂದ ಪ್ರತಿಭಟನೆಗಳು ಮತ್ತು ಪರಸ್ಪರ ನಿಂದನೆಗಳು ಇಲ್ಲಿ ನಡೆಯುತ್ತಲೇ ಇವೆ. ಕಲಘಟಗಿಯಲ್ಲಿ ಪರಿಸ್ಥಿತಿ ಎಲ್ಲೆ ಮೀರಿದ್ದು, ಜನರು ಇದನ್ನು ವೈಯಕ್ತಿಕವಾಗಿ ತೆಗೆದುಕೊಂಡಿದ್ದು, ಹಳ್ಳಿಗಳಲ್ಲಿದ್ದ ಭಾತೃತ್ವ ಹಾಗೂ ಸಾಮಾಜಿಕ ಸಾಮರಸ್ಯ ಹಾಳಾಗುತ್ತಿದೆ. ಪ್ರತಿಭಟನೆ ನಡೆಸುತ್ತಾ ಪ್ರತಿಭಟನಾಕಾರರು ಘೋಷಣೆಗಳನ್ನು ಕೂಗುತ್ತಿದ್ದರು. ರಾಷ್ಟ್ರದ ಆಸ್ತಿ ಯಾರಿಗೂ ಸೇರಿದ್ದಲ್ಲ ಎಂದು ಹೇಳುತ್ತಿದ್ದರು. ಇದು ತಮ್ಮ ತಂದೆಯ ಆಸ್ತಿಯಲ್ಲ ಎನ್ನುತ್ತಿದ್ದರು. ಶೀಘ್ರದಲ್ಲೇ, ಇನ್ನೊಂದು ಸಮುದಾಯದ ವ್ಯಕ್ತಿಯೊಬ್ಬರು ಆಸ್ತಿ ನಿಮ್ಮ ತಂದೆಯಲ್ಲ ಎನ್ನುತ್ತಿದ್ದರು. ಹೀಗಾಗಿ ಪ್ರತಿಭಟನಾಕಾರರು ಪರಸ್ಪರ ಆರೋಪ ಮಾಡುತ್ತಿದ್ದು, ಸಮಯೋಚಿತ ಪೊಲೀಸ್ ಮಧ್ಯಸ್ಥಿಕೆ ಅಹಿತಕರ ಘಟನೆಯನ್ನು ತಪ್ಪಿಸಿತು, ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳುತ್ತಾರೆ.




• ಉದಯವಾಹಿನಿ, ನವದೆಹಲಿ

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಒಡಿಶಾದ ಕರಾವಳಿಯ ಡಾ.ಎಪಿಜೆ ಅಬ್ದುಲ್ ಕಲಾಂ ದ್ವೀಪದಲ್ಲಿ ದೀರ್ಘ-ಶ್ರೇಣಿಯ ಹೈಪರ್‌ಸಾನಿಕ್ ಕ್ಷಿಪಣಿ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿದೆ. DRDO ಪರೀಕ್ಷಿಸಿದ ಹೈಪರ್ ಸಾನಿಕ್ ಕ್ಷಿಪಣಿಯನ್ನು ಭಾರತೀಯ ಸಶಸ್ತ್ರ ಪಡೆಗಳ ಎಲ್ಲಾ ಸೇವೆಗಳಿಗಾಗಿ 1,500 ಕಿಮೀಗಿಂತ ಹೆಚ್ಚಿನ ವ್ಯಾಪ್ತಿಯ ವಿವಿಧ ಸಿಡಿತಲೆಗಳನ್ನು ಸಾಗಿಸಲು ವಿನ್ಯಾಸಗೊಳಿಸಲಾಗಿದೆ. ಚೀನಾ, ರಷ್ಯಾ, ಅಮೆರಿಕ ಈಗಾಗಲೇ ಹೈಪರ್ ಸಾನಿಕ್ ಕ್ಷಿಪಣಿಯನ್ನು ಅಭಿವೃದ್ಧಿ ಪಡಿಸಿದ್ದು ಈ ಪಟ್ಟಿಗೆ ಈಗ ಭಾರತ ಸೇರ್ಪಡೆಯಾಗಿದೆ.

ಕ್ಷಿಪಣಿಯನ್ನು ಹೈದರಾಬಾದ್‌ನ ಡಾ ಎಪಿಜೆ ಅಬ್ದುಲ್ ಕಲಾಂ ಕ್ಷಿಪಣಿ ಪ್ರಯೋಗಾಲಯ, ಇತರ ಡಿಆರ್‌ಡಿಒ ಪ್ರಯೋಗಾಲಯಗಳು ಮತ್ತು ಇತರ ಉದ್ಯಮ ಪಾಲುದಾರರಿಂದ ದೇಶೀಯವಾಗಿ ಅಭಿವೃದ್ಧಿ ಪಡಿಸಲಾಗಿದೆ. DRDO ಮತ್ತು ಸಶಸ್ತ್ರ ಪಡೆಗಳ ಹಿರಿಯ ವಿಜ್ಞಾನಿಗಳ ಸಮ್ಮುಖದಲ್ಲಿ ಪ್ರಯೋಗವನ್ನು ನಡೆಸಲಾಯಿತು. ಕ್ಷಿಪಣಿಯ ಯಶಸ್ವಿ ಹಾರಾಟದ ಪ್ರಯೋಗಕ್ಕಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಡಿಆರ್‌ಡಿಒ ವನ್ನು ಅಭಿನಂದಿಸಿದ್ದಾರೆ.

- ■ ಕ್ಷಿಪಣಿಯ ಯಶಸ್ವಿ ಹಾರಾಟದ ಪ್ರಯೋಗಕ್ಕಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಭಿನಂದನೆ
- ■ ನಿರೀಕ್ಷಿತ ಎತ್ತರದಲ್ಲಿ ಕ್ಷಿಪಣಿ ಹೈಪರ್ಸಾನಿಕ್ ವೇಗ ಪಡೆಯುತ್ತದೆ.
- ■ ಒಡಿಶಾದ ಕರಾವಳಿಯ ಡಾ.ಎಪಿಜೆ ಅಬ್ದುಲ್ ಕಲಾಂ ದ್ವೀಪದಿಂದ ದೀರ್ಘ ವ್ಯಾಪ್ತಿಯ ಹೈಪರ್ ಸಾನಿಕ್ ಕ್ಷಿಪಣಿಯ ಹಾರಾಟ

ಒಡಿಶಾದ ಕರಾವಳಿಯ ಡಾ.ಎಪಿಜೆ ಅಬ್ದುಲ್ ಕಲಾಂ ದ್ವೀಪದಿಂದ ದೀರ್ಘ ವ್ಯಾಪ್ತಿಯ ಹೈಪರ್ ಸಾನಿಕ್ ಕ್ಷಿಪಣಿಯ ಹಾರಾಟವನ್ನು ಯಶಸ್ವಿಯಾಗಿ ನಡೆಸುವ ಮೂಲಕ ಭಾರತವು ಪ್ರಮುಖ ಮೈಲಿಗಲ್ಲನ್ನು ಸಾಧಿಸಿದೆ. ಇದೊಂದು ಐತಿಹಾಸಿಕ ಕ್ಷಣವಾಗಿದೆ. ಈ ಮಹತ್ವದ ಸಾಧನೆಯಿಂದ ಆಯ್ದ ದೇಶಗಳ ಸಾಲಿನಲ್ಲಿ ನಮ್ಮ ದೇಶವು ಸ್ಥಾನ ಪಡೆದಿದೆ ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

**ಭಾರತದ ಸೇನೆಗೆ ಆನೆಬಲ**

ಹೈಪರ್‌ಸಾನಿಕ್ ಕ್ಷಿಪಣಿಗಳು ಮೇಲಿನ ವಾತಾವರಣದಲ್ಲಿ ಶಬ್ದಕ್ಕಿಂತ ಐದು ಪಟ್ಟು ಹೆಚ್ಚು ವೇಗದಲ್ಲಿ ಚಲಿಸುತ್ತವೆ ಅಥವಾ ಗಂಟೆಗೆ 6,200 ಕಿಮೀ (3,850 mph) ವೇಗದಲ್ಲಿ ಹೋಗುತ್ತದೆ. ಆದರೆ ಇದು ಖಂಡಾಂತರ ಕ್ಷಿಪಣಿಗಿಂತ ನಿಧಾನವಾಗಿರುತ್ತದೆ.

**ಎಲ್ಲಿ ತಯಾರಾದ ಕ್ಷಿಪಣಿ..?:** ಹೈಪರ್‌ಸಾನಿಕ್ ಕ್ಷಿಪಣಿ ಹೈದರಾಬಾದ್‌ನ ಡಾ. ಎಪಿಜೆ ಅಬ್ದುಲ್ ಕಲಾಂ ಕ್ಷಿಪಣಿ ಸಂಕೀರ್ಣದ ಪ್ರಯೋಗಾಲಯಗಳು ದೇಶದ ಉಳಿದ ಭಾಗದಲ್ಲಿರುವ ಡಿಆರ್‌ಡಿಒ ಪ್ರಯೋಗಾಲಯಗಳು ಮತ್ತು ಉದ್ಯಮ ಪಾಲುದಾರರ ಸಹಭಾಗಿತ್ವದೊಂದಿಗೆ ದೇಶೀಯವಾಗಿ ನಿರ್ಮಿಸಲಾಗಿದೆ. ಹಿರಿಯ ಡಿಆರ್‌ಡಿಒ ವಿಜ್ಞಾನಿಗಳು ಮತ್ತು ಸಶಸ್ತ್ರ ಪಡೆಗಳ ಸದಸ್ಯರ ಸಮ್ಮುಖದಲ್ಲಿ ಕ್ಷಿಪಣಿಯನ್ನು ಪರೀಕ್ಷೆಗೆ ಒಳಪಡಿಸಲಾಗಿದೆ.

### ಕ್ಷಿಪಣಿಗಳು ಹೇಗೆ ಕೆಲಸ ಮಾಡುತ್ತವೆ?



ಹೈಪರ್ಸಾನಿಕ್ ಕ್ಷಿಪಣಿಗಳನ್ನು ರಾಕೆಟ್ ಯಂತ್ರಗಳ ಮೂಲಕ ಉಡಾಯಿಸಲಾಗುತ್ತದೆ. ಗ್ಲೈಡ್ ವೆಹಿಕಲ್ ಮತ್ತು ಮಿಸೈಲ್‌ಗಳನ್ನು ಈ ರಾಕೆಟ್‌ಗಳು ಗರಿಷ್ಠ ಎತ್ತರಕ್ಕೆ ಕೊಂಡೊಯ್ಯುತ್ತವೆ. ನಿರೀಕ್ಷಿತ ಎತ್ತರದಲ್ಲಿ ಕ್ಷಿಪಣಿ ಹೈಪರ್ಸಾನಿಕ್ ವೇಗ ಪಡೆಯುತ್ತದೆ. ಕ್ರೂಸ್ ಕ್ಷಿಪಣಿಗಳಾದರೆ ಸ್ಕ್ರಾಮ್ಜೆಟ್ ಎಂಜಿನ್‌ಗಳನ್ನು ಬಳಸಲಾಗುತ್ತದೆ. ಒಳ ನುಗ್ಗುವ ಗಾಳಿಯನ್ನು ಇಂಧನದೊಂದಿಗೆ ಬೆರೆಸಿಕೊಂಡು ಶಬ್ದಕ್ಕಿಂತ ಐದು ಪಟ್ಟು ವೇಗದಲ್ಲಿ ಹಾರುತ್ತದೆ. ಸಾಂಪ್ರದಾಯಿಕ ಬ್ಯಾಲಿಸ್ಟಿಕ್ ಕ್ಷಿಪಣಿಗಳಿಗಿಂತ ಭಿನ್ನವಾಗಿ, ಹೈಪರ್‌ಸಾನಿಕ್ ಕ್ಷಿಪಣಿಗಳು ಹಾರಾಟದ ಸಮಯದಲ್ಲಿ ಕೌಶಲ ಪ್ರದರ್ಶಿಸುತ್ತವೆ. ಈ ಕ್ಷಿಪಣಿ ಸಾಗುವ ಪಥವನ್ನು ನಿರೀಕ್ಷಿಸುವುದು ಕಷ್ಟ. ಪ್ರತಿದಾಳಿ ಸಾಧ್ಯವಿಲ್ಲ. ಗ್ಲೈಡ್ ವಾಹನಗಳು ತಮ್ಮ ಗುರಿಗಳ ಕಡೆಗೆ ವೇಗದಲ್ಲಿ ಸಾಗಲು ಏರೋಡೈನಾಮಿಕ್ ಲಿಫ್ಟ್ ಬಳಸಿಕೊಳ್ಳುತ್ತದೆ. ಕ್ರೂಸ್ ಕ್ಷಿಪಣಿಗಳು ವೇಗ ಮತ್ತು ದಿಕ್ಕಿನಡೆಗೆ ಎಂಜಿನ್ ಸಹಾಯದಿಂದ ಸಾಗುತ್ತದೆ.

**ಸವಾಲು ಮೀರಿದ ಭಾರತ**

ಹೈಪರ್‌ಸಾನಿಕ್ ಕ್ಷಿಪಣಿಗಳ ಹಾರಾಟ ಸುಲಭವಲ್ಲ. ಅದು ತೀವ್ರ ಶಾಖ ಉತ್ಪಾದನೆ ಮಾಡುವ ಕಾರಣ ನಿಯಂತ್ರಣ ಕಷ್ಟ. ನ್ಯಾವಿಗೇಷನ್ ಕೂಡ ಕ್ಲಿಷ್ಟಕರ. ಕ್ಷಿಪಣಿಯ ಪತ್ತೆ ಮತ್ತು ಟ್ರ್ಯಾಕಿಂಗ್ ತೊಂದರೆಗಳು ಇರುತ್ತವೆ. ಪ್ರತಿದಾಳಿಯ ವಿರುದ್ಧದ ಹೋರಾಟ ಸೇರಿದಂತೆ ಹಲವು ಸವಾಲುಗಳು ಇರುತ್ತವೆ. ಹೀಗಾಗಿ ಈ ಯಶಸ್ವಿ ಪರೀಕ್ಷೆಯ ಮೂಲಕ ಭಾರತದ ವಿಜ್ಞಾನಿಗಳು ಸವಾಲುಗಳನ್ನು ಗೆದ್ದುಸಂಭ್ರಮಿಸಿದ್ದಾರೆ. ಹೈಪರ್ ಸಾನಿಕ್ ಕ್ಷಿಪಣಿಗಳು ಅವುಗಳ ವೇಗ, ಕುಶಲತೆ ಮತ್ತು ರೇಂಜ್‌ನಿಂದ ಯುದ್ಧದಲ್ಲಿ ಕ್ರಾಂತಿಯನ್ನುಂಟು ಮಾಡುತ್ತದೆ. ಈ ಕ್ಷಿಪಣಿಗಳು ಮಿಲಿಟರಿ ಕಾರ್ಯಾಚರಣೆಯಲ್ಲಿ ಒಟ್ಟು ಪ್ರತಿಕ್ರಿಯೆಯ ಸಮಯ ಕಡಿಮೆ ಮಾಡುತ್ತದೆ ಮತ್ತು ಸಾಂಪ್ರದಾಯಿಕ ಕ್ಷಿಪಣಿ ವ್ಯವಸ್ಥೆಗಳ ಬಳಕೆ ತಗ್ಗಿಸುತ್ತದೆ .

**1500 ಕಿಮೀ ಸಾಮರ್ಥ್ಯದ ಕ್ಷಿಪಣಿ**

ಹೈಪರ್‌ಸಾನಿಕ್ ಕ್ಷಿಪಣಿ 1,500 ಕಿ.ಮೀ.ಗೂ ಹೆಚ್ಚು ದೂರ ಹಲವು ಪೇಲೋಡ್‌ಗಳನ್ನು ಹೊತ್ತೊಯ್ಯುವ ಸಾಮರ್ಥ್ಯ ಹೊಂದಿದ್ದು, ಭಾರತದ ಸೇನಾಪಡೆಗಳ ನೆರವಿಗೆ ಬರಲಿದೆ.ಷಿಪಣಿ ಉಡಾಯಿಸಿದ ಬಳಿಕ ವಿವಿಧೆಡೆ ನಿಯೋಜಿಸಲಾದ ರೇಂಜ್ ಸಿಸ್ಟಂಗಳ ಮೂಲಕ ಅದನ್ನು ಸೂಕ್ಷ್ಮವಾಗಿ ಗಮನಿಸಲಾಗಿದೆ. ಹಾರಾಟದ ದತ್ತಾಂಶಗಳನ್ನು ಡೌನ್‌ರೇಂಜ್ ಶಿಪ್ ಸ್ಟೇಷನ್‌ಗಳ ಮೂಲಕ ಸಂಗ್ರಹಿಸಲಾಗಿದ್ದು, ನಿಖರತೆ ಮತ್ತು ಪೂರ್ವ ಯೋಜನೆಯಂತೆಯೇ ವಿವಿಧ ಚಲನೆಗಳು ಯಶಸ್ವಿಯಾಗಿವೆ ಎಂದು ದೃಢಪಡಿಸಲಾಗಿದೆ. ಕ್ಷಿಪಣಿಯನ್ನು ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಮಿಸೈಲ್ ಕಾಂಪ್ಲೆಕ್ಸ್ ಹೈದರಾಬಾದ್‌ನಲ್ಲಿರುವ ಪ್ರಯೋಗಾಲಯಗಳು ಮತ್ತು ಡಿಆರ್‌ಡಿಒದ ವಿವಿಧ ಪ್ರಯೋಗಾಲಯಗಳು,ಕೈಗಾರಿಕಾ ಪಾಲುದಾರರ ಜೊತೆಗೂಡಿ ಸ್ವದೇಶಿ ಯವಾಗಿ ಅಭಿವೃದ್ಧಿಪಡಿಸಲಾಗಿತ್ತು. ಉಡ್ಡಯನದ ವೇಳೆ ಡಿಆರ್‌ಡಿಒದ ಹಿರಿಯ ವಿಜ್ಞಾನಿಗಳು ಮತ್ತು ಸೇನಾಪಡೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಭಾರತ ಇದೀಗ ಈ ಕ್ಷೇತ್ರದಲ್ಲಿ ಸಾಧನೆ ಮಾಡಿದೆ. ಇನ್ನುಳಿದಂತೆ ಯುನೈಟೆಡ್ ಸ್ಟೇಟ್ಸ್ ಆಫ್ ಅಮೆರಿಕ , ರಷ್ಯಾ ಮತ್ತು ಚೀನಾ ಸೇರಿದಂತೆ ಹಲವಾರು ದೇಶಗಳು ಹೈಪರ್‌ಸಾನಿಕ್ ಕ್ಷಿಪಣಿಗಳನ್ನು ಹೊಂದಿವೆ.

## ಜೋಗ್ ಫಾಲ್ಸ್ ಅಂತಾರಾಷ್ಟ್ರೀಯ ಮಟ್ಟದ ಪ್ರವಾಸಿ ತಾಣವಾಗಬೇಕು

• ಉದಯವಾಹಿನಿ, ಶಿವಮೊಗ್ಗ

ಜಿಲ್ಲೆಯ ಜೋಗ ಜಲಪಾತ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರವಾಸೋದ್ಯಮ ತಾಣ ಆಗಬೇಕು ಎಂದು ಸಂಸದ ಬಿ.ವೈ ರಾಘವೇಂದ್ರ ಹೇಳಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಲೆನಾಡಿನ ಪ್ರಕೃತಿ ಕೊಟ್ಟ ಪ್ರವಾಸೋದ್ಯಮ ಸ್ಥಳ ಜೋಗ ಜಲಪಾತ. ಇಲ್ಲಿ ಪ್ರವಾಸಿಗರಿಗಾಗಿ ಹೋಟೆಲ್ ನಿರ್ಮಾಣಕ್ಕೆ ಅನುಮತಿ ಸಿಕ್ಕಿದೆ. ಆದರೆ ಸರ್ಕಾರ ಅನುದಾನ ಬಿಡುಗಡೆ ಮಾಡಿಲ್ಲ ಎಂದು ಆರೋಪಿಸಿದ್ದಾರೆ. ಅಭಿವೃದ್ಧಿ ಬಗ್ಗೆ ಅನೇಕ ಸರ್ಕಾರಗಳು ಭಾಷಣ ಮಾಡಿಕೊಂಡು ಬರುತ್ತಿವೆ. ಜೋಗ ಅಭಿವೃದ್ಧಿಗೆ ಯಡಿಯೂರಪ್ಪ ಸಾಕಷ್ಟು ಅನುದಾನ ಕೊಟ್ಟು, ಸಾಕಷ್ಟು ಅಭಿವೃದ್ಧಿಯಾಗುತ್ತಿದೆ. ಹೋಟೆಲ್ ನಿರ್ಮಾಣ ಮಾಡಲು ಅನುಮತಿ ಸಿಕ್ಕಿದೆ. ಹೊರಗಡೆಯಿಂದ ಬರುವ ಪ್ರವಾಸಿಗರಿಗೆ ಹೋಟೆಲ್ ಅವಶ್ಯಕತೆ ಇತ್ತು. ಆದಷ್ಟು ಬೇಗ ಕಾಮಗಾರಿ ಮುಗಿಯಬೇಕು. ಶಿವಮೊಗ್ಗ ಸಮಗ್ರ ಪ್ರವಾಸಿ ತಾಣವಾಗಬೇಕು ಎಂದಿದ್ದಾರೆ.

ಪ್ರವಾಸಿಗರು ಬಂದಾಗ ಎಲ್ಲಾ ರೀತಿಯ ಸೌಲಭ್ಯಗಳು ಇಲ್ಲಿ ಸಿಗಬೇಕು. ನೋವಿನ ಸಂಗತಿ ಎಂದರೆ ಪ್ರವಾಸೋದ್ಯಮ ಇಲಾಖೆ ಸಕ್ರೆಬೈಲು ಅಭಿವೃದ್ಧಿಯ 60 ಕೋಟಿ ರೂ. ಹಣ ವಾಪಸ್ ಪಡೆದಿದೆ. ಜೋಗದ ಅಭಿವೃದ್ಧಿಗೆ 180 ಕೋಟಿ ರೂ. ಹಣ ಹಿಂದಿನ ಸರ್ಕಾರ ಬಿಡುಗಡೆ ಮಾಡಿತ್ತು. ಈಗ ಕೇವಲ 80 ಕೋಟಿ ರೂ. ಮಾತ್ರ ಹಣ ಬಿಡುಗಡೆ ಮಾಡಿದ್ದಾರೆ ಎಂದಿದ್ದಾರೆ.

## ಅನುದಾನ ಕಡಿತ: ಡಿ.ಕೆ.ಶಿವಕುಮಾರ್ ವಿರುದ್ಧ ಸಿಡಿದೆದ್ದ ಜಯನಗರ ಜನತೆ, ಪ್ರತಿಭಟನೆಗೆ ಮುಂದು

• ಉದಯವಾಹಿನಿ, ಬೆಂಗಳೂರು

ಕ್ಷೇತ್ರಕ್ಕೆ ಅನುದಾನ ಕಡಿತಗೊಳಿಸಿದ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ವಿರುದ್ಧ ಜಯನಗರ ನಿವಾಸಿಗಳು ಸಿಡಿದೆದ್ದಿದ್ದು, ನನ್ನ ತೆರಿಗೆ ನನ್ನ ಹಕ್ಕು ಎಂಬ ಘೋಷಣೆಯಡಿ ಹೋರಾಟಕ್ಕೆ ಮುಂದಾಗಿದ್ದಾರೆ. ಬೆಂಗಳೂರಿನಲ್ಲಿ ಬಿಜೆಪಿ ಶಾಸಕರು ಪ್ರತಿನಿಧಿಸುವ ಕ್ಷೇತ್ರಗಳಿಗೆ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎಂದು ಆರೋಪಿಸಿರುವ 70 ವಿವಿಧ ಸಂಘಟನೆಗಳು, ಇದರ ವಿರುದ್ಧ ಪ್ರತಿಭಟನೆಗೆ ಮುಂದಾಗಿದೆ.

ಈ ಪ್ರತಿಭಟನೆಗೆ ಸಂಬಂಧಿಸಿದಂತೆ ಮಾತನಾಡಿದ ಜಯನಗರ ಶಾಸಕ ರಾಮಮೂರ್ತಿ ಅವರು, ಬೆಂಗಳೂರಿನ 27 ವಿಧಾನಸಭಾ ಕ್ಷೇತ್ರಗಳಿಗೆ ರಾಜ್ಯ ಸರ್ಕಾರ ತಲಾ 10 ಕೋಟಿ ರೂ.ಯಂತೆ ಒಟ್ಟು 270 ಕೋಟಿ ಅನುದಾನ ಬಿಡುಗಡೆ ಮಾಡಿತ್ತು. ಆದರೆ, ಡಿಸಿಎಂ ಶಿವಕುಮಾರ್ ಅವರು ಉದ್ದೇಶಪೂರ್ವಕವಾಗಿ ಜಯನಗರ ಕ್ಷೇತ್ರವನ್ನು ಕೈಬಿಟ್ಟಿದ್ದಾರೆಂದು ಆರೋಪಿಸಿದ್ದಾರೆ.

> ಅನುದಾನ ವಿಚಾರವನ್ನು ಕೇಳಿದ್ದಕ್ಕೆ ನನ್ನ ಮುಂದೆ ತಗ್ಗಿ ಬಗ್ಗಿ ನಡೆಯಬೇಕು ಎಂದು ಹೇಳಿದ್ದಾರೆ. ನಾನು ನನ್ನ ಕ್ಷೇತ್ರದ ಜನರು, ಗುರು ಹಿರಿಯರ ಮುಂದೆ ತಗ್ಗಿ ಬಗ್ಗಿ ನಡೆಯುತ್ತೇನೆ. ಜಯನಗರ ಜನರು ತೆರಿಗೆ ಪಾವತಿಸುತ್ತಿದ್ದಾರೆ. ಈ ಕಾರಣಕ್ಕೆ ನನ್ನ ತೆರಿಗೆ ನನ್ನ ಹಕ್ಕು ಹೆಸರಿನಲ್ಲಿ ಬೃಹತ್ ಹೋರಾಟವನ್ನು ಮಾಡುತ್ತೇವೆ ಎಂದು ಹೇಳಿದರು.



ವಿಧಾನಸಭೆಯಲ್ಲಿ ಬ್ರ್ಯಾಂಡ್ ಬೆಂಗಳೂರು ಬಗ್ಗೆ ಶಾಸಕ ಸಿ.ಕೆ.ರಾಮಮೂರ್ತಿ ಮಾತಾಡಿದ್ದರು ಎಂಬ ಕಾರಣಕ್ಕೆ ಜಯನಗರಕ್ಕೆ ಅನುದಾನ ನೀಡಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

## ಬಿಇಎಂಎಲ್ ಹೊರಗುತ್ತಿಗೆ ಕಾರ್ಮಿಕರ ಸಮಸ್ಯೆ ಬಗ್ಗೆ ರಕ್ಷಣಾ ಸಚಿವರ ಜತೆ ಚರ್ಚೆ

• ಉದಯವಾಹಿನಿ, ಕೋಲಾರ

ಬಿಇಎಂಎಲ್ ಹೊರಗುತ್ತಿಗೆ ಕಾರ್ಮಿಕರ ಸಮಸ್ಯೆಗಳ ಬಗ್ಗೆ ರಕ್ಷಣಾ ಸಚಿವರಾದ ರಾಜನಾಥ್ ಸಿಂಗ್ ಅವರೊಂದಿಗೆ ಚರ್ಚೆ ನಡೆಸುತ್ತೇನೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಸ್ಪಷ್ಟ ಭರವಸೆ ನೀಡಿದರು. ಕೆಜಿಎಫ್ ನಲ್ಲಿ ಕಳೆದ 13 ದಿನಗಳಿಂದ ಕಾರ್ಮಿಕರು ಧರಣಿ ನಡೆಸುತ್ತಿರುವ ಸ್ಥಳಕ್ಕೆ ಕೋಲಾರ ಸಂಸದ ಮಲ್ಲೇಶ್ ಬಾಬು, ಶಾಸಕರಾದ ವೆಂಕಟ ಶಿವಾರೆಡ್ಡಿ, ಸಮೃದ್ಧಿ ಮಂಜುನಾಥ್ ಅವರೊಂದಿಗೆ ಭೇಟಿ ನೀಡಿ ಮಾತುಕತೆ ನಡೆಸಿದರು ಸಚಿವರು. ನಿಮ್ಮ ಬೇಡಿಕೆಗಳ ಬಗ್ಗೆ ಈಗಾಗಲೇ ಕಂಪನಿಯ ಸಿಎಂಡಿ (ಅಧ್ಯಕ್ಷ – ವ್ಯವಸ್ಥಾಪಕ ನಿರ್ದೇಶಕ) ಅವರೊಂದಿಗೆ ಚರ್ಚೆ ನಡೆಸಿದ್ದೇನೆ.

ಅವರು ಉತ್ತಮ ರೀತಿಯಲ್ಲಿ ಸ್ಪಂದಿಸಿದ್ದಾರೆ. ನಾನು ಸೋಮವಾರ ಬೆಳಗ್ಗೆ ದೆಹಲಿಗೆ ತೆರಳುತ್ತಿದ್ದು, ರಕ್ಷಣಾ ಸಚಿವರಾದ ರಾಜನಾಥ್ ಸಿಂಗ್ ಹಾಗೂ ರಕ್ಷಣಾ ಸಚಿವಾಲಯದ ಕಾರ್ಯದರ್ಶಿ ಅವರನ್ನು ಭೇಟಿಯಾಗಿ ನಿಮ್ಮ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸುತ್ತೇನೆ.

ಸಿಂಗ್ ಅವರಿಗೆ ಕರ್ನಾಟಕದ ಬಗ್ಗೆ ವಿಶೇಷ ಕಾಳಜಿ ಇದ್ದು, ನಿಮ್ಮ ಸಮಸ್ಯೆಗಳಿಗೆ ಅವರು ಖಂಡಿತಾ ಸಕಾರಾತ್ಮಕವಾಗಿ ಸ್ಪಂದಿಸುತ್ತಾರೆ ಎನ್ನುವ ಭರವಸೆ ಇದೆ ಎಂದರು.

# ಕಾಂಗ್ರೆಸ್ ದುರ್ಮಾರ್ಗದಿಂದ ಅಧಿಕಾರಕ್ಕೆ ಬಂದಿದೆ ಎನ್ನಲು ಇಲ್ಲಿದೆ ಸಾಕ್ಷಿ


**▶▶ ಪೇಸಿಎಂ ಅಭಿಯಾನ, 40% ಕಮಿಷನ್ ಆರೋಪಕ್ಕೆ ಈಗ ಲೋಕಾಯುಕ್ತ ತನಿಖೆಯಿಂದ ಸತ್ಯ ಹೊರ ಬಿದ್ದಿದೆ ಈ ವಿಚಾರವಾಗಿ ವಿಜಯೇಂದ್ರ ಕೈ ವಿರುದ್ಧ ವಾಗ್ದಾಳಿ**

• ಉದಯವಾಹಿನಿ, ಬೆಂಗಳೂರು

ಹಾಲಿ ಸಂಸದ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಿಎಂ ಆಗಿದ್ದಾಗ ಕಾಂಗ್ರೆಸ್ ನಡೆಸಿದ ಪೇಸಿಎಂ ಅಭಿಯಾನ, 40% ಕಮಿಷನ್ ಆರೋಪಕ್ಕೆ ಈಗ ಲೋಕಾಯುಕ್ತ ತನಿಖೆಯಿಂದ ಸತ್ಯ ಹೊರ ಬಿದ್ದಿದೆ. ಈ ವಿಚಾರವಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್ ಪಕ್ಷದ ಆಧಾರರಹಿತ- ಹಸೀ ಸುಳ್ಳು ಆರೋಪ ಲೋಕಾಯುಕ್ತ ತನಿಖೆಯಿಂದ ಬಹಿರಂಗ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ವಿಜಯೇಂದ್ರ, ಮಾನ್ಯ ಬಸವರಾಜ್ ಬೊಮ್ಮಾಯಿ ಅವರ ನೇತೃತ್ವದ ನಮ್ಮ ಬಿಜೆಪಿ ಸರ್ಕಾರ ಆಡಳಿತದಲ್ಲಿದ್ದಾಗ 40% ಕಮಿಷನ್ ಎಂಬ ಸುಳ್ಳು ಅಪಪ್ರಚಾರ ನಡೆಸಿದ್ದ ಕಾಂಗ್ರೆಸ್ ಪಕ್ಷದ ಆರೋಪ ಆಧಾರರಹಿತ ಹಾಗೂ ಹಸೀ ಸುಳ್ಳು ಎಂಬುದು ಇದೀಗ ಲೋಕಾಯುಕ್ತ ತನಿಖೆಯಲ್ಲೇ ಬಹಿರಂಗವಾಗಿದೆ. ಭ್ರಷ್ಟತೆಯ ಕೂಪದಲ್ಲಿ ಮುಳುಗಿರುವ ರಾಜ್ಯ ಕಾಂಗ್ರೆಸ್, ರಾಜ್ಯ ಸರ್ಕಾರ ತಾನು ಹೇಳುವುದೆಲ್ಲಾ ಸುಳ್ಳು, ಕಟ್ಟುಕಥೆ ಕಟ್ಟುವಲ್ಲಿ ತಾನು ನಿಸ್ಸೀಮ ಎಂಬುದು ಸಾಬೀತಾಗಿದೆ ಎಂದು ಕಿಡಿಕಾರಿದರು.

ಕಾಂಗ್ರೆಸ್ಸಿಗರು ದುರ್ಮಾರ್ಗ, ಅನೀತಿ ಯಿಂದ ಅಧಿಕಾರಕ್ಕೇರಿದ್ದಾರೆ ನೈತಿಕ ಮಾರ್ಗದಲ್ಲಿ ಎಂದೂ ಅಧಿಕಾರ ಹಿಡಿ ಯದ ಕಾಂಗ್ರೆಸ್ಸಿಗರು ದುರ್ಮಾರ್ಗ, ಅನೀತಿ, ಅಪಪ್ರಚಾರ, ಸಮಾಜ ಒಡೆಯುವ ಕೆಲಸಗಳಿಂದಲೇ ಅಧಿಕಾರ ಕಬಳಿಸಿದ್ದಾರೆ ಎಂಬುದಕ್ಕೆ ಪ್ರಸ್ತುತ ಬಹಿರಂಗವಾಗಿರುವ ಲೋಕಾಯುಕ್ತ ವರದಿ ಸಾಕ್ಷಿ ಹೇಳುತ್ತಿದೆ ಎಂದು



> ಕೋವಿಡ್ ಹಗರಣದ ಆರೋಪದಲ್ಲೂ ಮುಖಭಂಗವೇ ಕಟ್ಟಿಟ್ಟ ಬುತ್ತಿ ಜನಪರ ಹಾಗೂ ಅಭಿವೃದ್ಧಿಪರ ಆಡಳಿತ ನೀಡುತ್ತಿದ್ದ ಮಾನ್ಯ ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಬಿಜೆಪಿ ಸರ್ಕಾರದ ವಿರುದ್ಧ ಅಪಪ್ರಚಾರ ನಡೆಸಿದವರಿಗೆ ಜನರೇ ತಕ್ಕ ಶಾಸ್ತಿ ಮಾಡಲಿದ್ದಾರೆ. ಆದರೆ ಇದೀಗ ತಮ್ಮ ಕರಾಳತೆಯ ಭ್ರಷ್ಟ ಮುಖವನ್ನು ಮುಚ್ಚಿ ಕೊಳ್ಳಲು ಕೋವಿಡ್ ಸಂದರ್ಭದಲ್ಲಿ ಅವ್ಯವಹಾರ ನಡೆದಿದೆ ಎಂಬ ಮಧ್ಯಂತರ ವರದಿಯನ್ನು ತರಾತುರಿಯಲ್ಲಿ ತರಿ ಸಿಕೊಂಡು SIT ರಚಿಸಲು ಹೊರಟಿದ್ದೀರಿ ಈ ತನಿಖೆಯಿಂದಲೂ ನಿಮಗೆ ಮುಖಭಂಗವೇ ಕಟ್ಟಿಟ್ಟ ಬುತ್ತಿಯಾಗಲಿದೆ
>
> –ಬಿವೈ ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

**ಸರ್ಕಾರದ ವಿರುದ್ಧ ಗುಡುಗಿದ ಬಿವೈವಿ**

ಆಕ್ರೋಶ ಹೊರಹಾಕಿದ್ದಾರೆ.

ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವಾಗಲೇ ಲೋಕಾಯುಕ್ತ ತನಿಖಾ ವರದಿ ಬಹಿರಂಗ ಕರ್ನಾಟಕದ ಜನತೆಯನ್ನು ವಂಚಿಸಿ, ಸುಳ್ಳು ಹೇಳಿ ಅಧಿಕಾರಕ್ಕೆ ಬಂದಿರುವ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಈ ಕೂಡಲೇ ಅಧಿಕಾರದಿಂದ ಕೆಳಗಿಳಿದು ಕರ್ನಾಟಕದ ಜನತೆಯ ಕ್ಷಮೆ ಕೋರಲಿ ಎಂದು ಒತ್ತಾಯಿಸುತ್ತೇನೆ.

ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವಾಗಲೇ ಲೋಕಾಯುಕ್ತ ತನಿಖಾ ವರದಿ ಬಹಿರಂಗವಾಗಿರುವ ಹಿನ್ನೆಲೆಯಲ್ಲಿ ಈ ಕುರಿತು ಕಾಂಗ್ರೆಸ್ಸಿಗರು ಇನ್ನೇನೂ ಸಮಜಾಯಿಸಿ ನೀಡುವುದಕ್ಕಾಗಲಿ, ವಿತಂಡವಾದ ಮಾಡುವುದಕ್ಕಾಗಲಿ ಅವಕಾಶವೇ ಇಲ್ಲ ಎಂದು ವಿಜಯೇಂದ್ರ, ಹೇಳಿದರು.

ರಾಜ್ಯದಲ್ಲಿರುವುದು 40% ಅಲ್ಲ 80% ಕಾಂಗ್ರೆಸ್ ಸರ್ಕಾರ ಸದ್ಯ ಬಾಕಿ ಬಿಲ್ ಪಾವತಿಯಾಗದೇ ಕಣ್ಣೀರಿನಲ್ಲಿ ಕೈ ತೊಳೆಯುತ್ತಿರುವ ಗುತ್ತಿಗೆದಾರರು ರಾಜ್ಯದಲ್ಲಿರುವುದು 40% ಅಲ್ಲ 80% ಕಾಂಗ್ರೆಸ್ ಸರ್ಕಾರ ಎಂಬ ಅಸಲಿ ಸತ್ಯವನ್ನು ಬಹಿರಂಗ ಪಡಿಸುತ್ತಿದ್ದಾರೆ.

ಒಂದರ ಮೇಲೊಂದು ಹಗರಣಗಳ ತನಿಖೆಯ ಕಾನೂನಿನ ಉರುಳು ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಸರ್ಕಾರವನ್ನು ಸುತ್ತಿಕೊಳ್ಳುತ್ತಿದೆ. ಇದರ ಬೆನ್ನಲ್ಲೇ ಕಾಂಗ್ರೆಸ್ ಶಾಸಕರು ಮಾರಾಟವಾಗುತ್ತಿದ್ದಾರೆ ಎಂದು ಮುಖ್ಯಮಂತ್ರಿಗಳೇ ಅಧಿಕೃತ ಹೇಳಿಕೆ ನೀಡಿ ಕರ್ನಾಟಕದ ಗೌರವವನ್ನು ಹರಾಜು ಹಾಕುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,565/Gram24ct ₹6,935/Gram22ct | ಬೆಳ್ಳಿ: ₹89.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಚೌಲದಲ್ಲಿ ಡೌಲ

ಇತ್ತೀಚೆಗೆ ಜಮಖಂಡಿ ತಾಲ್ಲೂಕಿನ ಚಿಕ್ಕ ಪಡಸಲಗಿಯ ಸಿದ್ಧಲಿಂಗ ಕಮರಿಮಠಕ್ಕೆ ಭೇಟಿ ನೀಡಿದೆ. ಮಾತೃಶ್ರೀ ಅಕ್ಕಮಹಾದೇವಿಯವರು ಒಂದು ಎಕರೆ ಭೂಮಿ ಖರೀದಿಸಿ ಸುಂದರ ಮಠ ನಿರ್ಮಿಸಿದ್ದಾರೆ. ಒಬ್ಬ ಮಹಿಳೆ ಸಂನ್ಯಾಸಿನಿಯಾಗಿ ಸ್ವತಂತ್ರ ನೆಲೆ ಕಂಡಿದ್ದಾರೆ. ಸಿದ್ಧಲಿಂಗ ಸ್ವಾಮಿಗಳ ದುರ್ಗಾದೇವಿಯ ಚಿಕ್ಕ ಚೊಕ್ಕ ಎರಡು ಕಲ್ಲಿನ ದೇವಾಲಯಗಳು. ನಾನೆಂದೆ ಈ ಮಠ ಬಲು ಚೆನ್ನ. ಮಾತೃಶ್ರೀ ಹೇಳಿದರು ಚೌಲದಲ್ಲಿ ಡೌಲ. ಸೊಗಸಾದ ಮಾತು. ಚೌಲ ನಾಲ್ಕಾಣೆ ಇಪ್ಪತ್ತೈದು ಪೈಸೆ. ಡೌಲ ವೈಭೋಗ. ವೈಭೋಗಕ್ಕೆ ಸಿರಿತನ ಇರಬೇಕೆಂಬುದು ಬಹುತೇಕರ ಲೆಕ್ಕಾಚಾರ. ಹಾಗೇನೂ ಇಲ್ಲ. ಬುದ್ಧಿವಂತಿಕೆ ಇದ್ದರೆ ಕಡಿಮೆ ಖರ್ಚಿನಲ್ಲಿಯೂ ವೈಭವವನ್ನು ಮೆರೆಯಬಹುದು. ಇದಕ್ಕೆ ನಿದರ್ಶನ ಇದೇ ಮಠ. ವೈಭೋಗ ವೈಭವಕ್ಕೆ ಪ್ರಮಾಣ ದೊಡ್ಡದು ಸಲಕರಣೆಗಳು ದುಬಾರಿಯೇ ಆಗಿರಬೇಕೆಂದಿಲ್ಲ. ಸರಳತೆ ಕಡಿಮೆ ಖರ್ಚಿನದೂ ಸಾಕಾಗುವುದು. ಕಂಠದಲ್ಲಿ ಬೆಲೆಬಾಳುವ ಆಭರಣ ಇಲ್ಲದೆಯೂ ನೊಸಲಿನ ವಿಭೂತಿ ಕುಂಕುಮ ಚಂದನಗಳು ಮುಖಕಮಲಕ್ಕೆ ಮೆರುಗು ನೀಡುತ್ತವೆ. ಕಲಾಕಾರನ ಕುಂಚದಿಂದ ಅರಳಿದ ಚಿತ್ರಗಳು ನಿಜರೂಪದ ಕಳೆಕಟ್ಟುತ್ತವೆ! ಪ್ಲಾಸ್ಟಿಕ್ ಹಾರ ಕುಂಡ, ಬಣ್ಣದ ಹಾಳೆಯ ತೋರಣ, ಬಣ್ಣದ ದೀಪ ಕಾರಂಜಿ ಚಿತ್ತಾಕರ್ಷಕ! ಸರಳತೆಯಲ್ಲಿನ ವೈಭವ ಕಾಣುವ ಕಣ್ಣು ತೆರೆದಿರಬೇಕು, ಮನ ಹೃದಯ ಅರಳಿರಬೇಕು.

## ಯುಜಿಸಿ ವೇತನ ಶ್ರೇಣಿ ಮಂಜೂರು ಮಾಡಿ ಆದೇಶ

• ಉದಯವಾಹಿನಿ ಬೆಂಗಳೂರು

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರಿಗೆ ಸಿ.ಎ.ಎಸ್ ರಡಿಯಲ್ಲಿ 2018ರ ಯುಜಿಸಿ ನಿಯಮಗಳ ಅನ್ವಯ ಶೈಕ್ಷಣಿಕ ಹಂತ 13ಎ ರ ವೇತನ ಶ್ರೇಣಿ ರೂ.131400–217100 ರಲ್ಲಿ ಸ್ಥಾನೀಕರಣ ಮಂಜೂರು ಮಾಡುವ ಬಗ್ಗೆ ಕಾಲೇಜು ಶಿಕ್ಷಣ ಇಲಾಖೆ ಮಹತ್ವದ ಆದೇಶ ಹೊರಡಿಸಿದೆ. ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರಿಗೆ 2016 ರ ಪರಿಷ್ಕೃತ ಯು.ಜಿ.ಸಿ. ವೇತನ ಶ್ರೇಣಿಗಳನ್ನು ಉಲ್ಲೇಖ (1) ಹಾಗೂ (2) ರ ಆದೇಶಗಳಲ್ಲಿ ಜಾರಿಗೊಳಿಸಲಾಗಿರುತ್ತದೆ. ಈ ಆದೇಶದಲ್ಲಿ ಸಹಾಯಕ ಪ್ರಾಧ್ಯಾಪಕರಿಗೆ ಶೈಕ್ಷಣಿಕ ಹಂತ 12ರ ಯು.ಜಿ.ಸಿ ವೇತನ ಶ್ರೇಣಿ ರೂ.79800–21150 ರಲ್ಲಿ ಪೂರೈಸಿರುವ 03 ವರ್ಷಗಳ ಅರ್ಹತಾ ಅವಧಿಯನ್ನು ಪರಿಗಣಿಸಿ ಸಿ.ಎ.ಎಸ್ ರಡಿಯಲ್ಲಿ ಶೈಕ್ಷಣಿಕ ಹಂತ 13ಎ ರ ವೇತನ ಶ್ರೇಣಿ ರೂ.131400–217100 ರಲ್ಲಿ ಸ್ಥಾನೀಕರಣ ಹೊಂದಲು ಅವಕಾಶ ಕಲ್ಪಿಸಲಾಗಿರುತ್ತದೆ.

## ಎಐನಿಂದ ಉದ್ಯೋಗ ನಷ್ಟವಿಲ್ಲ, ಉತ್ಪಾದಕತೆ ಹೆಚ್ಚಳ: ಮದನ್ ಪದಕ್ಕಿ

• ಉದಯವಾಹಿನಿ ಆನೇಕಲ್

ತಾಲ್ಲೂಕಿನ ಎಲೆಕ್ಟ್ರಾನಿಕ್‌ಸಿಟಿಯ ಐಎಸ್‌ಬಿಆರ್ ಕಾಲೇಜಿನಲ್ಲಿ ಘಟಿಕೋತ್ಸವ ನಡೆಯಿತು.ಘಟಿಕೋತ್ಸವ ಉದ್ಘಾಟಿಸಿದ ಟೈ ಗ್ಲೋಬಲ್ ಕಂಪನಿಯ ಸಿಇಓ ಅಧ್ಯಕ್ಷ ಮದನ್ ಪದಕ್ಕಿ, ವಿದ್ಯಾರ್ಥಿಗಳು ಕ್ರಿಯಾಶೀಲರಾಗಬೇಕು. ತಾವು ಪಡೆದ ಪದವಿ ಸಮಾಜಕ್ಕೆ ಕೊಡುಗೆಯಾಗಬೇಕು. ಪ್ರತಿಯೊಬ್ಬ ವಿದ್ಯಾರ್ಥಿಗೂ ಪದವಿಯ ನಂತರ ಜವಾಬ್ದಾರಿ ಹೆಚ್ಚುತ್ತದೆ. ವಿದ್ಯಾರ್ಥಿಗಳು ನಿರಂತರ ಕಲಿಕೆಯನ್ನು ಜೀವನದ ಭಾಗವನ್ನಾಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇತ್ತೀಚಿನ ದಿನಗಳಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರಕ್ಕೆ ಹೆಚ್ಚು ಆದ್ಯತೆ ದೊರೆತಿದೆ. ಹಾಗಾಗಿ ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ(ಎಐ), ಮೆಷಿನ್ ಲರ್ನಿಂಗ್‌ನಂತರ ಆಧುನಿಕ ತಂತ್ರಜ್ಞಾನವನ್ನು ವೃತ್ತಿ ಜೀವನದಲ್ಲಿ ಸಮರ್ಪಕವಾಗಿ ಬಳಸಿಕೊಳ್ಳಬೇಕು. ಇದರಿಂದ ವಿಪುಲ ಅವಕಾಶಗಳು ತೆರೆದುಕೊಳ್ಳಲಿದೆ ಎಂದು ಹೇಳಿದರು. ಐಎಸ್‌ಬಿಆರ್ ಸಂಸ್ಥೆಯ ಮನೀಷ್ ಕೊಠಾರಿ, ಶಿಕ್ಷಣ ಕ್ಷೇತ್ರದಲ್ಲಿಯೂ ಕೃತಕ ಬುದ್ಧಿಮತ್ತೆಯ ಪ್ರಭಾವ ಹೆಚ್ಚಾಗಿದೆ. ಆನ್‌ಲೈನ್, ಆಫ್‌ಲೈನ್ ಪದ್ಧತಿ ರೂಢಿಯಾಗಿದೆ. ಕೃತಕ ಬುದ್ಧಿಮತ್ತೆಯು ಉದ್ಯೋಗಗಳನ್ನು ಕಸಿಯುವುದಿಲ್ಲ ಬದಲಿಗೆ ಉತ್ಪಾದಕತೆ ಹೆಚ್ಚಿಸುತ್ತದೆ ಎಂದರು. ಘಟಿಕೋತ್ಸವದಲ್ಲಿ ಪದವಿ ಪಡೆದ ವಿದ್ಯಾರ್ಥಿಗಳು ತಮ್ಮ ಶಿಕ್ಷಣವನ್ನು ವೃತ್ತಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಯಶಸ್ಸು ಅಡ್ಡದಾರಿ ಯಿಂದ ದೊರೆಯುವುದಿಲ್ಲ.

## ಡಿಜಿಟಲ್ ಲಗೇಜ್ ಲಾಕರ್ : ಪ್ರಯಾಣಿಕರು ಇದನ್ನು ಹೇಗೆ ಬಳಸಬೇಕು

• ಉದಯವಾಹಿನಿ ಬೆಂಗಳೂರು

ಬೆಂಗಳೂರು ಮೆಟ್ರೋ ರೈಲು ನಿಗಮ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಮೆಜೆಸ್ಟಿಕ್ ಮೆಟ್ರೋ ನಿಲ್ದಾಣ ಸೇರಿದಂತೆ ಆಯ್ದ ಸ್ಟೇಷನ್‌ಗಳಲ್ಲಿ ವಿನೂತನ 'ಡಿಜಿಟಲ್ ಲಗೇಜ್ ಲಾಕರ್' ವ್ಯವಸ್ಥೆ ಅಳವಡಿಸಿದೆ. ಈ ಯಂತ್ರವನ್ನು ಸ್ವಯಂ ಪ್ರೇರಿತವಾಗಿ ನೀವು ಆಪರೇಟ್ ಮಾಡುವ ಮೂಲಕ ನಿಮ್ಮ ಲಗೇಜ್ ಅನ್ನು ಇಟ್ಟು ತೆರಳಬಹುದಾಗಿದೆ. ಬೇರೆ ಬೇರೆ ಊರುಗಳಿಂದ ಬೆಂಗಳೂರಿಗೆ ಒಂದು ದಿನದ ಮಟ್ಟಿಗೆ ಬರುವವರಿಗೆ ಲಗೇಜ್ ಎಲ್ಲಿ ಇಡಬೇಕು ಎಂಬುದೇ ತಲೆನೋವಾಗಿ ಬಿಟ್ಟಿರುತ್ತದೆ. ಇಲ್ಲಿ ಓಡಾಡಲು ಹರಸಾಹಸ ಪಡಬೇಕಾದ ಈ ಮಹಾನಗರದಲ್ಲಿ ಲಗೇಜ್ ಸಮೇತ ಓಡಾಡುವುದು ಕಿರಿಕಿರಿ. ಹೀಗಾಗಿ ನಮ್ಮ ಮೆಟ್ರೋ ಪ್ರಯಾಣಿಕರಿಗೆ ಬಿಎಂಆರ್‌ಸಿಎಲ್ ಅದ್ಭುತ ವ್ಯವಸ್ಥೆ ಪರಿಚಯಿಸಿದೆ. ನಮ್ಮ ಮೆಟ್ರೋ ಮೆಜೆಸ್ಟಿಕ್ ನಿಲ್ದಾಣ ಸೇರಿದಂತೆ ಒಂದೆರಡು ನಿಲ್ದಾಣಗಳಲ್ಲಿ ಈ ಹೊಸ 'ಸ್ಮಾರ್ಟ್ ಡಿಜಿಟಲ್ ಲಗೇಜ್ ಲಾಕರ್ ಸೌಲಭ್ಯ' ನೀಡಿದೆ. ನಿಮ್ಮ ಮಧ್ಯಮ ಗಾತ್ರ ಬ್ಯಾಗ್‌ಗಳನ್ನು 6 ಗಂಟೆಗಳ ಕಾಲ ಇದರಲ್ಲಿ ಇಡಲು ಕೇವಲ 70 ಹಾಗೂ ದೊಡ್ಡ ಗಾತ್ರದ ಲಗೇಜ್ ಇಡಲು 100 ಚಾರ್ಜ್ ಮಾಡಲಾಗುತ್ತದೆ. ನಿಮ್ಮ ಕೆಲಸ ಮುಗಿಸಯುವವರೆಗೂ ಸುರಕ್ಷಿತವಾಗಿ ಲಗೇಜ್ ಇರಲಿವೆ.

## ಆರ್ಟ್ ಆಫ್ ಲಿವಿಂಗ್‌ನ ಆಶ್ರಮದಲ್ಲಿ ಕಾರ್ತಿಕ ದೀಪೋತ್ಸವ ಸಂಭ್ರಮ

• ಉದಯವಾಹಿನಿ ಬೆಂಗಳೂರು

ಆರ್ಟ್ ಆಫ್ ಲಿವಿಂಗ್‌ನ ಆಶ್ರಮದಲ್ಲಿ ಭಕ್ತಿಯ ಮೆರಗಿನಿಂದ ವೈಭವಯುತವಾಗಿ ಕಾರ್ತಿಕ ದೀಪೋತ್ಸವವನ್ನು ಆಚರಿಸಲಾಯಿತು. ಕಾರ್ತಿಕ ದೀಪವು ತಮಿಳುನಾಡಿನ ಅತೀ ಪವಿತ್ರವಾದ ಹಬ್ಬಗಳಲ್ಲಿ ಒಂದಾಗಿದ್ದು, ಕತ್ತಲಿನ ಮೇಲೆ ದೀಪದ ವಿಜಯವನ್ನು ಮತ್ತು ದೈವೀಶಕ್ತಿಯ ಅನಂತ ಅಸ್ತಿತ್ವವನ್ನು ಸಂಭ್ರಮಿಸುವ ಹಬ್ಬವಾಗಿದೆ. ಭಗವಾನ್ ಶಿವ ಮತ್ತು ಭಗವಾನ್ ಮುರುಗನ ಪೌರಾಣಿಕ ಕಥೆಗಳ ಆಧಾರವನ್ನು ಹೊಂದಿರುವ ಈ ಹಬ್ಬವನ್ನು, ಆಂತರ್ಯದ ಜಾಗೃತಿಯ ಸೂಚಕವಾದ ದೀಪಗಳನ್ನು ಬೆಳಗಿಸಿ ಆಚರಿಸಲಾಗುತ್ತದೆ. ಜಗನ್ಮಾತೆ ಪಾರ್ವತಿಯ ಪುತ್ರನಾದ ಮುರುಗನ ದೈವೀ ಬೆಳಕನ್ನು, ಬೆಳಗಿಸಲಾಗುವ ದೀಪಗಳು ಸೂಚಿಸುತ್ತವೆ. ಈ ದೈವೀ ಬೆಳಕು ಭಕ್ತರನ್ನು ಜ್ಞಾನ, ಸಾಮರಸ್ಯ ಮತ್ತು ಆಧ್ಯಾತ್ಮಿಕ ಜಾಗೃತಿಯತ್ತ ಕರೆದೊಯ್ಯುತ್ತದೆ. ಈ ಶುಭ ಸಂದರ್ಭದಲ್ಲಿ ತಮಿಳುನಾಡಿನ ಭಕ್ತರು ಎಲ್ಲಾ ಮುರುಗನ ದೇವಸ್ಥಾನಗಳಲ್ಲೂ ವಿಶೇಷ ಪೂಜೆಗಳನ್ನು ಸಲ್ಲಿಸುತ್ತಾರೆ. ಈ ಎಲ್ಲಾ ದೇವಸ್ಥಾನಗಳಿಂದಲೂ ಗುರುದೇವರಿಗೆ ಪ್ರಸಾದವನ್ನು ತಲುಪಿಸಲಾಯಿತು. ಕಾರ್ತಿಕೇಯನನ್ನು ಮತ್ತಷ್ಟು ವಿವರಿಸುತ್ತಾ ಗುರುದೇವರು, ಭಗವಾನ್ ಕಾರ್ತಿಕೇಯನು ಅಂತಿಮ ಸೌಂದರ್ಯ. ಅವನಲ್ಲಿ ಎಷ್ಟು ಸೌಂದರ್ಯವಿದೆಯೆಂದರೆ, ಅದನ್ನು ಯಾರಿಂದಲೂ ತಳ್ಳಿ ಹಾಕಲು ಸಾಧ್ಯವಿಲ್ಲ. ಅವನು ಶೂರನೂ ಹೌದು, ಅಪ್ರತಿಮನಾದ ಜ್ಞಾನವೂ ಅವನು. ಆದ್ದರಿಂದಲೇ ತನ್ನ ತಂದೆಯಾದ ಭಗವಾನ್ ಶಿವನಿಗೇ ಗುರುವಾದ ಮತ್ತು ಅವನು ತುಂಟನೂ ಹೌದು'' ಎಂದರು. ಕಾರ್ತಿಕ ದೀಪೋತ್ಸವದ ಸಂಜೆಯು, ಕಾಲಾತೀತವಾದ ಕಾರ್ತಿಕ ದೀಪೋತ್ಸವದ ಸಂದೇಶವನ್ನು ಹೊತ್ತ ಭಕ್ತಿಯ, ಸಾಂಸ್ಕೃತಿಕ ವೈಭವದ ಬೆಸುಗೆಯಾಗಿತ್ತು.

# ಇ- ಖಾತಾಗಾಗಿ ಬಿಬಿಎಂಪಿಯಿಂದ ಹೊಸ ಪೋರ್ಟಲ್ ಪರಿಚಯ!

## ಬೆಂಗಳೂರಿನಲ್ಲಿ ಆಸ್ತಿಗಳ ಮಾರಾಟ, ಖರೀದಿಯಲ್ಲಿ ಆಗುತ್ತಿರುವ ಅಥವಾ ಆಗುವ ಮೋಸವನ್ನು ತಪ್ಪಿಸುವ ಉದ್ದೇಶ

• ಉದಯವಾಹಿನಿ ಬೆಂಗಳೂರು

ಬಿಬಿಎಂಪಿಯು ನಗರದಲ್ಲಿ ಆಸ್ತಿ ಮಾಲೀಕರ ಸಮಸ್ಯೆಗೆ ಸ್ಪಂದಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಆಸ್ತಿಗಳಿಗೆ ಸಂಬಂಧಿಸಿದಂತೆ ಇ – ಖಾತಾ ನೀಡಲಾಗುತ್ತಿದ್ದು. ಈಗಾಗಲೇ ಹಲವು ಆಸ್ತಿದಾರರು ಇ– ಖಾತಾ ಪಡೆದುಕೊಂಡಿದ್ದಾರೆ.
ಆದರೆ, ಇ–ಖಾತಾ ಪಡೆಯುವುದರಲ್ಲಿ ಗೊಂದಲ ಗಳು ಸೃಷ್ಟಿಯಾಗುತ್ತಿವೆ.

ಸಾರ್ವಜನಿಕರು ಸರಳವಾಗಿ ಇ –ಖಾತಾ ಪಡೆಯುವುದಕ್ಕೆ ಬೆಂಗಳೂರು ಒನ್ ಸೇರಿದಂತೆ ಹಲವು ಸೌಲಭ್ಯಗಳನ್ನು ಕಲ್ಪಿಸಲಾಗಿದ್ದರೂ, ಗೊಂದಲ ತಪ್ಪಿಲ್ಲ ಎಂದು ಕೆಲವು ಸಾರ್ವಜನಿಕರು ದೂರಿದ್ದಾರೆ. ಈ ಹಿನ್ನೆಲೆಯಲ್ಲಿ ಹೊಸ ಪೋರ್ಟಲ್ ಪರಿಚಯಿಸಲು ಬಿಬಿಎಂಪಿ ಮುಂದಾಗಿದೆ.

ಬೆಂಗಳೂರಿನಲ್ಲಿ ಆಸ್ತಿಗಳ ಮಾರಾಟ ಹಾಗೂ ಖರೀದಿಯಲ್ಲಿ ಆಗುತ್ತಿರುವ ಅಥವಾ ಆಗುವ ಮೋಸವನ್ನು ತಪ್ಪಿಸುವ ಉದ್ದೇಶದಿಂದ ಬಿಬಿಎಂಪಿ ಆಸ್ತಿಗಳಿಗೆ ಇ – ಖಾತಾ (ಆಸ್ತಿಗಳ ಡಿಜಿಟಲೀಕರಣಕ್ಕೆ) ಮುಂದಾಗಿದೆ. ಈಗಾಗಲೇ ಬೆಂಗಳೂರಿನಲ್ಲಿ 5 ಲಕ್ಷ ಆಸ್ತಿಗಳನ್ನು ಇ– ಖಾತಾ ಮಾಡಲಾಗುತ್ತಿದೆ. ಇ– ಖಾತಾಗೆ ಆದ್ಯತೆ ನೀಡುತ್ತಿರುವುದರ ಹಿಂದೆ ಎರಡು ಲೆಕ್ಕಾಚಾರ ಅಡಗಿದೆ. ಮೊದಲನೆಯದಾಗಿ ಎಲ್ಲಾ ಆಸ್ತಿದಾರರಿಗೆ ಇ –ಖಾತಾ ಮಾಡಿಸಿಕೊಳ್ಳುವುದರಿಂದ ಆಸ್ತಿಯಲ್ಲಿ ಆಗುವ ಮೋಸವನ್ನು ತಪ್ಪಿಸಬಹುದು. ಅಲ್ಲದೇ ಬಿಬಿಎಂಪಿಗೆ ಆದಾಯ



ಉದಯವಾಹಿನಿ ಚಿತ್ರ

**ವಾರ್ಷಿಕ ಆದಾಯ ತೆರಿಗೆ ಸಂಗ್ರಹ**

ಸಂಗ್ರಹವಾಗುವುದು ಸಹ ಹೆಚ್ಚಳವಾಗಲಿದೆ. ಬಿಬಿಎಂಪಿಯ ವಾರ್ಷಿಕ ಆದಾಯ ತೆರಿಗೆ ಸಂಗ್ರಹ ಸುಧಾರಿಸಲಿದೆ ಎನ್ನುವುದು ಮುಖ್ಯ ಕಾರಣವಾಗಿದೆ. ಪಾಲಿಕೆಯಿಂದ ಹೊಸ ಇ – ಖಾತಾ: ಬಿಬಿಎಂಪಿಯು (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು) ಇ – ಖಾತಾಗಾಗಿ ಹೊಸ ಪೋರ್ಟ್ ಪರಿಚಯಿಸಲು ಮುಂದಾಗಿದೆ. ಪಾಲಿಕೆಯ ವತಿಯಿಂದ ಇಷ್ಟರಲ್ಲೇ ಇ –ಖಾತಾ ಶುರುವಾಗಲಿದೆ. ಈ ಹೊಸ ಪೋರ್ಟ್‌ನಿಂದ ಆಸ್ತಿದಾರರಿಗೆ ಮಹತ್ವದ ಅನುಕೂಲ ಆಗಲಿದೆ ಎಂದು ಬಿಬಿಎಂಪಿಯ ಅಧಿಕಾರಿಗಳು ಹೇಳಿದ್ದಾರೆ. ಇಲ್ಲಿಯ ವರೆಗೆ ಬೆಂಗಳೂರಲ್ಲಿ ಆಸ್ತಿ ಹೊಂದಿದ್ದು, ಯಾವುದೇ ಖಾತೆ ಇಲ್ಲದೆ ಇರುವ ಆಸ್ತಿ ಮಾಲೀಕರಿಗೂ ಇದು ಅನುಕೂಲವಾಗಲಿದೆ. ಇಲ್ಲಿಯವರೆಗೆ ಯಾವುದೇ ಮಾದರಿಯ ಖಾತಾ ಇಲ್ಲದೆ ಇರುವವರೂ ಸಹ ಹೊಸ ಇ–ಖಾತಾವನ್ನು ಪಡೆದುಕೊಳ್ಳಬಹುದಾಗಿದೆ ಎಂದು

**ಹೊಸ ಖಾತಾವನ್ನು ಪಡೆದುಕೊಳ್ಳುವವರು ನೋಂದಣಿ ಮಾಡಿಸಿಕೊಂಡ ದಿನದಿಂದ ತೆರಿಗೆ ಬಾಕಿಯನ್ನು ಪಾವತಿಸಬೇಕಾಗುತ್ತದೆ. ಈಗಾಗಲೇ ಖಾತಾ ಹೊಂದಿದ್ದರೆ, ಇದೀಗ ಪೋರ್ಟಲ್‌ನಲ್ಲಿ ಹೊಸ ಖಾತಾಗೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇಲ್ಲ. ಅಲ್ಲದೇ ಕೆಲವು ವಿಷಯಗಳ ಬಗ್ಗೆ ಸಾಕಷ್ಟು ಗೊಂದಲಗಳು ಸಹ ಇದ್ದು, ಈ ಎಲ್ಲಾ ಗೊಂದಲಗಳಿಗೂ ಹೊಸ ಮಾರ್ಗಸೂಚಿಯ ಮೂಲಕ ಪರಿಹಾರ ಕಂಡುಕೊಳ್ಳುವುದಾಗಿ ಪಾಲಿಕೆಯ ಕಂದಾಯ ವಿಭಾಗದ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.**

ಬಿಬಿಎಂಪಿಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

**ಆಸ್ತಿ ತೆರಿಗೆ ಪಾವತಿಸದವರಿಗೆ ಸಂಕಷ್ಟ:** ಬಿಬಿಎಂಪಿಯ ಈ ಹೊಸ ಕ್ರಮದಿಂದ ಆಸ್ತಿ ತೆರಿಗೆ ಪಾವತಿ ಮಾಡದೆ ಇರುವವರಿಗೆ ಸಂಕಷ್ಟ ಕಾದಿದೆ ಎಂದೂ ಹೇಳಲಾಗುತ್ತಿದೆ. ಬೆಂಗಳೂರಿನಲ್ಲಿ ಅಂದಾಜು 5 ಲಕ್ಷ ಆಸ್ತಿಗಳಿಗೆ ಖಾತಾ ನೀಡಿಲ್ಲ ಎನ್ನಲಾಗಿದೆ. ಇದೀಗ ಇ –ಖಾತಾವನ್ನು ನೀಡುವ ಮೂಲಕ ಈ ಎಲ್ಲಾ ಆಸ್ತಿದಾರರನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ತರುವ ಉದ್ದೇಶವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮುಂದಾಗಿದೆ.

ಆಸ್ತಿ ತೆರಿಗೆ ವ್ಯಾಪ್ತಿಯಿಂದ ಹೊರಗೆ ಉಳಿದಿರುವವರನ್ನು ಇ –ಖಾತಾದ ಮೂಲಕ ಆಸ್ತಿ ತೆರಿಗೆ ವ್ಯಾಪ್ತಿಗೆ ಸೇರಿಸಲು ಬಿಬಿಎಂಪಿ ಮುಂದಾಗಿದೆ ಎಂದು ಹೇಳಲಾಗಿದೆ. ಬೆಂಗಳೂರಿನಲ್ಲಿ 5 ಲಕ್ಷ ಸ್ವತ್ತುಗಳಿಗೆ ಖಾತಾ ಪಡೆದಿಲ್ಲ.

ಕೆಲವು ನಿರ್ದಿಷ್ಟ ಆಸ್ತಿಗಳಿಗೂ ಕ್ರಯಪತ್ರ ಸಹ ಇಲ್ಲ. ತೆರಿಗೆಯನ್ನೂ ಕೂಡ ಪಾವತಿ ಮಾಡಿಲ್ಲ. ಇದರಲ್ಲಿ ಕೆಲವರು ನಿವೇಶನ (ಖಾಲಿ ಜಾಗಕ್ಕೆ)ಕ್ಕಷ್ಟೇ ಖಾತೆ ಪಡೆದಿದ್ದಾರೆ. ಆದರೆ, ಅದರಲ್ಲಿ ನಿರ್ಮಾಣ ಮಾಡಲಾಗಿರುವ ಫ್ಲ್ಯಾಟ್‌ಗಳಿಗೆ ಖಾತಾ ಮಾಡಿಸಿಕೊಂಡಿಲ್ಲ ಎನ್ನಲಾಗಿದೆ.ಈ ರೀತಿಯ ಸಂಕೀರ್ಣ ಸಮಸ್ಯೆಗಳು ಸಾಕಷ್ಟಿವೆ. ಇಂತಹ ಗೊಂದಲ ಮತ್ತು ಸಮಯದ ನಷ್ಟವನ್ನು ತಪ್ಪಿಸಲು ಪ್ರತ್ಯೇಕ ಮಾರ್ಗಸೂಚಿಯನ್ನು 2–3 ದಿನಗಳಲ್ಲಿ ಬಿಡುಗಡೆ ಮಾಡಲಾಗುವುದು ಎಂದರು.

**ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡವರಿಗೆ ಆಸ್ತಿ ಮಾಲೀಕರು ನ.30ರೊಳಗೆ ಬಾಕಿ ತೆರಿಗೆ ಪಾವತಿಸದರೆ ದಂಡ ಮತ್ತು ಬಡ್ಡಿ ಮನ್ನಾ ಆಗಲಿದೆ. ಒಂದು ವೇಲೆ ಬಾಕಿ ತೆರಿಗೆ ಪಾವತಿಸದಿದ್ದರೆ ಡಿ.1ರಿಂದ ಬಾಕಿ ತೆರಿಗೆ ಜೊತೆಗೆ ದುಬಾರಿ ದಂಡ ಮತ್ತು ಬಡ್ಡಿ ವಸೂಲಿ ಮಾಡಲಾಗುವುದು. ವಸತಿಯೇತರ ಆಸ್ತಿಗಳಿಗೆ ಬೀಗ ಮುದ್ರ ಹಾಕಲಾಗುವುದು. ಖಾತಾ ಹೊಂದಿಲ್ಲದ ಆಸ್ತಿಗಳ ಮಾಲೀಕರು ಈಗಲೇ ಎಚ್ಚೆತ್ತುಕೊಂಡು ತೆರಿಗೆ ಪಾವತಿಸಬೇಕು. ಇಲ್ಲದಿದ್ದರೆ ದುಬಾರಿ ಮೊತ್ತ ಪಾವತಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.**

## ಸಂಬಂಧವೇ ಇಲ್ಲದ ಆರೋಪಿಯ ಜಾಮೀನಿಗೆ ಸಹಕರಿಸಿದ ದುನಿಯಾ ವಿಜಯ್

• ಉದಯವಾಹಿನಿ ಬೆಂಗಳೂರು

ಸ್ಯಾಂಡಲ್‌ವುಡ್ ನಟ ಮತ್ತು ನಿರ್ದೇಶಕ ದುನಿಯಾ ವಿಜಯ್ ಅವರು ಯಾರಿಗಾದರೂ ತೊಂದರೆ ಕಂಡು ಬಂದಲ್ಲಿ ಮೊದಲು ಅವರಿರುತ್ತಾರೆ. ಇತ್ತೀಚೆಗೆ ನಿರ್ದೇಶಕರೊಬ್ಬರ ಸಾವಿನ ಸಂದರ್ಭದಲ್ಲಿ ಮುಂದೆ ನಿಂತು ಎಲ್ಲಾ ಕಾರ್ಯ ಮಾಡಿದ್ದರು. ದುನಿಯಾ ವಿಜಯ್ ಅವರ ಇಂತಹ ಮಾನವೀಯತೆ ಕಾರ್ಯವೇ ಅವರಿಗೀಗ ಸಂಕಷ್ಟ ತಂದೊಡ್ಡಿದೆ.ಪೊಲೀಸರು ನೋಟಿಸ್ ನೀಡಿ ಅವರನ್ನು ವಿಚಾರಣೆಗೆ ಕರೆಯುವ ಸಿದ್ಧತೆಯಲ್ಲಿದ್ದಾರೆ.

ಹೌದು... ಆರೋಪಿ ಸುರೇಶ್ ಸೇರಿದಂತೆ ಒಟ್ಟು 10 ಮಂದಿಗೆ ಜೈಲಿನಿಂದ ಬಿಡುಗಡೆ ಆಗಲು ಜಾಮೀನಿಗೆ ದುನಿಯಾ ವಿಜಯ್ ಅವರು ಸಹಕರಿಸಿದ್ದರು. ಕಳೆದ 10 ತಿಂಗಳು ಹಿಂದಷ್ಟೇ ಆ ಆರೋಪಿಗೆ ಶೂರಿಟಿ ಕೊಟ್ಟು ಜಾಮೀನಿನ ಮೇಲೆ ಬಿಡಿಸಿದ್ದರು. ಆದರೆ ಆರೋಪಿ ಸುರೇಶ್ ಜೈಲಿನಿಂದ ಬಂದು ಇದೇ ನವೆಂಬರ್ 11ರಂದು ಬಾಗಲೂರಿನಲ್ಲಿ



ಇಬ್ಬರ ಸಾವಿಗೆ ಕಾರಣವಾಗಿದ್ದಾನೆ. ಜೋಡಿ ಹತ್ಯೆ ಮಾಡಿದ್ದರಿಂದ ಆತನನ್ನು ಪೊಲೀಸರು ಬಂಧಿಸಿದ್ದರು. ಆರೋಪಿ ಬಗ್ಗೆ ಮಾಹಿತಿ ಕಲೆ ಹಾಕಿದ ಪೊಲೀಸರಿಗೆ ನಟ, ನಿರ್ದೇಶಕ ದುನಿಯಾ ವಿಜಯ್ ಅವರೇ ಕೆಲವು ತಿಂಗಳ ಹಿಂದೆ ಆರೋಪಿಗೆ ಸುರೇಶ್ ಜಾಮೀನಿಗೆ ಶೂರಿಟಿ ಕೊಟ್ಟದ್ದರು ಎಂಬುದು ಗೊತ್ತಾಗಿದೆ. ಪ್ರಕರಣ ತನಿಖೆ ಮುಂದುವರಿದ ಭಾಗವಾಗ ಜೈಲಿನಿಂದ ಬಿಡುಗಡೆಯಾಗಲು ಸಹಕರಿಸಿದ್ದ ಕಾರಣದಿಂದ ದುನಿಯಾ ವಿಜಯ್ ಅವರನ್ನು ವಿಚಾರಣೆಗೆ ಕರೆಯಲು ಮುಂದಾಗಿದ್ದಾರೆ. ಯಾವ ಕ್ಷಣದಲ್ಲಾದರೂ ನೋಟಿಸ್ ಜಾರಿ ಮಾಡಲಿದ್ದಾರೆ ಎನ್ನಲಾಗಿದೆ.

ಅದೇನೆಂದರೆ, ಜೋಡಿ ಸಾವಿನ ಬಳಿಕ ವಶಕ್ಕೆ ಪಡೆದ ಪೊಲೀಸರು ನಿನ್ನನ್ನು ನಟ ದುನಿಯಾ ವಿಜಯ್ ಬಿಡಿಸಿದ್ದೇಕೆ ಎಂಬ ಪ್ರಶ್ನೆಗೆ ಆರೋಪಿಗಳು, ನಮ್ಮನ್ನು ಬಿಡಿಸಿದ್ದು ಯಾರು ಎಂಬುದೇ ನಮಗೆ ಗೊತ್ತಿಲ್ಲ. ಅವರು ನಮ್ಮನ್ನು ಏಕೆ ಬಿಡಿಸಿದರು ಎಂಬ ಬಗ್ಗೆ ಮಾಹಿತಿ ಇಲ್ಲ ಎಂದು ಹೇಳಿದ್ದಾರೆ.

ಒಬ್ಬ ನಟ ಮಾನವೀಯತೆಯಿಂದ ತಮಗೆ ಸಹಾಯ ಮಾಡಿದರೂ ಆ ಬಗ್ಗೆ ಕೃತಜ್ಞತೆ ಇಲ್ಲದೇ ನಡೆದುಕೊಂಡಿದ್ದಾರೆ. ಈ ಮಾನವೀಯ ಗುಣವೇ ನಟ ದುನಿಯಾ ವಿಜಯ್ ಅವರಿಗೆ ತೊಂದರೆ ತಂದೊಡ್ಡಿದೆ. ಇದೆಲ್ಲ ನೋಡಿದರೆ ನಟನಿಗೂ ಹಾಗು ಆರೋಪಿಗೆ ಸಂಬಂಧವೇ ಇಲ್ಲ ಎಂಬುದು ಗೊತ್ತಾಗುತ್ತದೆ. ಹಾಗಾದರೆ ಬಿಡಿಸಿದ್ದೇಕೆ ಎಂಬಿತ್ಯಾದಿ ಮಾಹಿತಿ ಪಡೆಯಲು ಪೊಲೀಸರ ದುನಿಯಾ ವಿಜಯ್ ಅವರಿಗೆ ನೋಟಿಸ್ ನೀಡುವ ಸಾಧ್ಯತೆ ಇದೆ. ವಿಚಾಯರ ನಡೆಸಬಹುದು ಎಂದು ತಿಳಿದು ಬಂದಿದೆ.

## ಪ್ರತಿ ಕ್ವಿಂಟಾಲ್ ರಾಗಿಗೆ ರೂ.4,290 ಬೆಂಬಲ ಬೆಲೆ

• ಉದಯವಾಹಿನಿ ದೇವನಹಳ್ಳಿ

ಕನಿಷ್ಠ ಬೆಂಬಲ ಬೆಲೆಯಡಿ ರೈತರಿಂದ ರಾಗಿ ಖರೀದಿ ನೋಂದಣಿ ಪ್ರಕ್ರಿಯೆ ಡಿ.1 ರಿಂದ ಶುರುವಾಗಲಿದ್ದು, ನೋಂದಣಿ ಪ್ರಕ್ರಿಯೆಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಎನ್. ಶಿವಶಂಕರ್ ಸೂಚಿಸಿದರು.

ತಾಲ್ಲೂಕಿನ ಜಿಲ್ಲಾಡಳಿತ ಭವನದಲ್ಲಿ ನಡೆದ ರೈತರಿಂದ ರಾಗಿ ಖರೀದಿ ಪೂರ್ವ ಸಿದ್ಧತಾ ಕ್ರಮಗಳ ಮೊದಲನೆಯ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಮಾತನಾಡಿದರು. ಪ್ರತಿ ಕ್ವಿಂಟಾಲ್ ರಾಗಿಗೆ 4,290 ಬೆಂಬಲ ಬೆಲೆಯನ್ನು ಸರ್ಕಾರ ನಿಗದಿ ಪಡಿಸಿದೆ. ಕನಿಷ್ಟ ಬೆಂಬಲ ಯೋಜನೆಯಡಿ ರಾಗಿ ಖರೀದಿಗೆ ಸಂಬಂಧಿಸಿದಂತೆ ಸಂಗ್ರಹಣ ಏಜೆನ್ಸಿಗಳು ಪ್ರತಿ ತಾಲ್ಲೂಕು ಹಂತದಲ್ಲಿ ಅಗತ್ಯಕ್ಕೆ ತಕ್ಕಂತೆ ಖರೀದಿ ಕೇಂದ್ರಗಳನ್ನು ತೆರೆಯಬೇಕು ಎಂದರು. ರಾಗಿ ಖರೀದಿಗೆ ಸಂಬಂಧಿಸಿದಂತೆ ನೋಂದಣಿ ಪ್ರಕ್ರಿಯೆಗೆ ನಿಗದಿತ ಸ್ಥಳಗಳನ್ನು ಗುರುತಿಸಿ ರೈತರಿಗೆ ಮುಂಚಿತವಾಗಿ ಮಾಹಿತಿ ನೀಡಬೇಕು. ಖರೀದಿ ಕೇಂದ್ರಗಳ ನೋಂದಣಿಗೆ ಅವಶ್ಯಕತೆ ಇರುವ ಟೇಬಲ್, ಚೇರ್,



ಉದಯವಾಹಿನಿ ಚಿತ್ರ

ಕಂಪ್ಯೂಟರ್‌ಗಳು, ವಿದ್ಯುತ್ ಸಂಪರ್ಕ, ಇಂಟರ್‌ನೆಟ್, ತೂಕದ ಯಂತ್ರ ವ್ಯವಸ್ಥೆ ಮಾಡಿ ಎಂದು ಸೂಚಿಸಿದರು.

ರೈತರಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಿ, ಡಿ.1 ರಿಂದ ನೋಂದಣಿ ಪ್ರಕ್ರಿಯೆ ಶುರುವಾಗಲಿದ್ದು, ಜನವರಿಯಲ್ಲಿ ರಾಗಿ ಖರೀದಿ ಪ್ರಕ್ರಿಯೆ ಶುರುವಾಗಲಿದೆ. ಹಾಗಾಗಿ ರೈತರಿಂದ ಖರೀದಿಸಿದ ರಾಗಿಯನ್ನು ಕ್ರೋಢಿಕರಿಸಿ ಶೇಖರಿಸಲು ಉಗ್ರಾಣಗಳು ವ್ಯವಸ್ಥಿತ ಗುಣಮಟ್ಟದಲ್ಲಿ ಇದೆಯೇ ಎಂದು ಪರಿಶೀಲಿಸಿ, ಅವಶ್ಯವಿದ್ದಲ್ಲಿ ಹೆಚ್ಚುವರಿ ಉಗ್ರಾಣಗಳನ್ನು ತೆರೆಯಿರಿ ಎಂದರು. ರೈತರು ಕಡ್ಡಾಯವಾಗಿ ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ ಫ್ರೂಟ್ಸ್ ದತ್ತಾಂಶದಲ್ಲಿ ನೋಂದಾಯಿಸಿಕೊಂಡು, ಫ್ರೂಟ್ಸ್ ಐಡಿ ಪಡೆದಿರಬೇಕು. ನೋಂದಣಿ ಪ್ರಕ್ರಿಯೆಯಲ್ಲಿ ಫ್ರೂಟ್ಸ್ ಐಡಿ ಕಡ್ಡಾಯ ಎಂದು ಜಿಲ್ಲಾಧಿಕಾರಿ ಹೇಳಿದರು.

## ನಾವು 40 ಪರ್ಸೆಂಟ್ ಆರೋಪ ಮಾಡಿ ಅಧಿಕಾರಕ್ಕೆ ಬಂದಿದ್ದೇವೆ ಎಂಬುದು ಸುಳ್ಳು: ಡಾ. ಜಿ.ಪರಮೇಶ್ವರ್

• ಉದಯವಾಹಿನಿ ಬೆಂಗಳೂರು

ನಮ್ಮಪಕ್ಷ ಅಧಿಕಾರಕ್ಕೆ ಬಂದರೆ ಗ್ಯಾರಂಟಿ ಯೋಜನೆಗಳನ್ನು ನೀಡುತ್ತೇವೆ ಎಂದು ಜನರಿಗೆ ಮನೆಮನೆಗೆ ಹೋಗಿ ಭರವಸೆ ಕೊಟ್ಟಿದ್ದೆವು. 40 ಪರ್ಸೆಂಟ್ ಆರೋಪ ಮಾಡಿ ಅಧಿಕಾರಕ್ಕೆ ಬಂದಿದ್ದೇವೆ ಎಂಬುದು ಸುಳ್ಳು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು. ಸದಾಶಿವನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗುತ್ತಿಗೆದಾರರ ಸಂಘದ ಅಧ್ಯಕ್ಷರಾಗಿದ್ದ ಕೆಂಪಣ್ಣ ಅವರು ಅಂದಿನ ರಾಜ್ಯ ಸರ್ಕಾರದ ವಿರುದ್ಧ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದರು. ಭ್ರಷ್ಟಚಾರ ಜಾಸ್ತಿಯಾಗಿದೆ. ಕಾಮಗಾರಿಗಳಲ್ಲಿ ಹಣ ತೆಗೆದುಕೊಳ್ಳುತ್ತಿದ್ದಾರೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದ ಆಧಾರದ ಮೇಲೆ ನಾವು 40 ಪರ್ಸೆಂಟ್ ಆರೋಪ ಮಾಡಿದ್ದೇವೆ.



ನೋಂದಾಯಿತ ಸಂಘವು ಅಧಿಕೃತವಾಗಿ ಪ್ರಧಾನ ಮಂತ್ರಿಗಳಿಗೆ ಪತ್ರ ಬರೆದಾಗ ನಾವು ಕೂಡ ಪಕ್ಷವಾಗಿ ಜನರ ಹಿತ ದೃಷ್ಟಿಯಿಂದ ಪ್ರಶ್ನೆ ಮಾಡಿದ್ದೇವೆ. ಯಾವ ಆಧಾರದ ಮೇಲೆ 40 ಪರ್ಸೆಂಟ್ ನಡೆದಿಲ್ಲ ಎನ್ನುತ್ತಿದ್ದಾರೆ ಎಂಬುದು ನನಗೆ ಗೊತ್ತಿಲ್ಲ. ಚುನಾವಣೆ ಸಂದರ್ಭದಲ್ಲಿ ಜನಗಳಿಗೆ ಗ್ಯಾರಂಟಿ ಯೋಜನೆಗಳನ್ನು ಕೊಡುತ್ತೇವೆ ಎಂದು ನಾವು ಭರವಸೆ ಕೊಟ್ಟಿದ್ದೇವೆ. ಬರೀ 40 ಪರ್ಸೆಂಟ್ ಆರೋಪದಿಂದ ನಾವು ಅಧಿಕಾರಕ್ಕೆ ಬಂದಿದ್ದೇವೆ ಎಂಬುದು ಸುಳ್ಳು ಎಂದರು. ವಕ್ಫ್ ವಿಷಯವನ್ನು ಬಿಜೆಪಿಯವರು ರಾಜಕೀಯ ಅಸ್ತ್ರವಾಗಿ ಉಪಯೋಗ ಮಾಡಿಕೊಳ್ಳುತ್ತಿದ್ದಾರೆ. ಕೋಮುಗಲಭೆ, ಶಾಂತಿ ಹಾಳು ಮಾಡಲು ಅವರು ಏನಾದರು ಮಾಡಬಹುದು. ಅದಕ್ಕಾಗಿ ಪಾದಯಾತ್ರೆ ಮಾಡುತ್ತಿದ್ದಾರೆ. ಮುಂದಕ್ಕೆ ಯಾವರೀತಿ ತೆಗೆದುಕೊಳ್ಳುತ್ತದೆ ಎಂದು ಈಗ ಊಹೆ ಮಾಡಲು ಆಗುವುದಿಲ್ಲ ಎಂದರು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡಿಸಿ ರಾಷ್ಟ್ರಪತಿ ಆಡಳಿತ ಹೇರುವ ಬಿಜೆಪಿಯವರ ಪ್ರಯತ್ನದ ಕುರಿತು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಅದೆಲ್ಲ ಸಾಧ್ಯವಿಲ್ಲ. ಪೊಲೀಸ್ ಇಲಾಖೆಯು ಸಮರ್ಥವಾಗಿ ಕಳೆದ ಒಂದೂವರೆ ವರ್ಷದಿಂದ ಶಾಂತಿಯನ್ನು ಕಾಪಾಡಿಕೊಂಡು ಬಂದಿದ್ದೇವೆ.

ರಾಜ್ಯದಲ್ಲಿ ಶಾಂತಿ ಕದಡಲು ಅಥವಾ ಶಾಂತಿ ಭಂಗ ಮಾಡಲು ಪ್ರಯತ್ನಿಸಿದರೆ ಕಠಿಣವಾಗಿ ಕ್ರಮ ತೆಗೆದುಕೊಳ್ಳುತ್ತೇವೆ. ಅಷ್ಟು ಸುಲಭವಾಗಿ ಬಿಟ್ಟುಬಿಡುತ್ತೇವೆಯೇ ಎಂದು ಎಚ್ಚರಿಸಿದರು. ಶಾಸಕರಿಗೆ 50 ಕೋಟಿ ರೂ. ಆಮಿಷದ ಕುರಿತು ಸಿಎಂ ಆರೋಪಕ್ಕೆ ಬಿಜೆಪಿಯವರು ದಾಖಲೆ ಕೇಳಿರುತ್ತಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ನರೇಂದ್ರ ಮೋದಿ ಅವರು ರಾಜ್ಯ ಸರ್ಕಾರದ ವಿರುದ್ಧ ಮಾಡಿರುವ 200 ಕೋಟಿ ರೂ. ಆರೋಪಕ್ಕೆ ದಾಖಲೆ ಕೊಟ್ಟಿದ್ದಾರೆಯೇ ಇನ್ನಷ್ಟು ಜೋರಾಗಿ ಪ್ರತಿಭಟನೆ ಮಾಡುತ್ತೇವೆ, ರೂ. 200 ಕೋಟಿ ಆರೋಪಕ್ಕೆ ದಾಖಲೆಗಳನ್ನು ಕೊಡಿ ಎಂದು ರಾಜ್ಯ ಬಿಜೆಪಿ ಮುಖಂಡರು ಪ್ರಧಾನಮಂತ್ರಿಯನ್ನು ಕೇಳಲಿ. ಆನಂತರ ನಾವು ದಾಲೆಗಳನ್ನು ಕೊಡುತ್ತೇವೆ ಎಂದು ಟೀಕಿಸಿದರು.

## ಐತಿಹಾಸಿಕ ಬಸನವಗುಡಿ ಕಡಲೆಕಾಯಿ ಪರಿಷೆಗೆ ಮಹೂರ್ತ

• ಉದಯವಾಹಿನಿ ಬೆಂಗಳೂರು

ಬೆಂಗಳೂರು ಐತಿಹಾಸಿಕ ಬಸನವಗುಡಿ ಕಡಲೆಕಾಯಿ ಪರಿಷೆಗೆ ಮಹೂರ್ತ ನಿಗದಿಯಾಗಿದೆ. ಪ್ರತಿ ವರ್ಷದಂತೆ ವರ್ಷವು ಬುಲ್ ಟೆಂಪಲ್ ರಸ್ತೆಯಲ್ಲಿ ಎರಡು ದಿನದ ಅದ್ದೂರಿ ಪರಿಷೆಗೆ ಸರ್ಕಾರ ಸಜ್ಜಾಗಿದೆ. ಈ ಕುರಿತು ಸಾರಿಗೆ ಸಚಿವ ಮತ್ತು ಮುಜರಾಯಿ ಇಲಾಖೆ ರಾಮಲಿಂಗಾ ರೆಡ್ಡಿ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಯಿತು. ಇದೇ ನವೆಂಬರ್‌ನಲ್ಲಿ ಕಡಲೆಕಾಯಿ ಪರಿಷೆ ನಡೆಸುವುದಾಗಿ ಅವರು ತಿಳಿಸಿದ್ದಾರೆ.

ನವೆಂಬರ್ 25 ಮತ್ತು 26ರಂದು 2 ದಿನಗಳ ಕಾಲ ಬೆಂಗಳೂರಿನ ಬಸವನಗುಡಿ ದೊಡ್ಡ ಗಣಪತಿ ದೇವಸ್ಥಾನ ಆವರಣದಲ್ಲಿ ಎಂದಿನಂತೆ ವಿಶೇಷ ಪೂಜೆ ಪುನಸ್ಕಾರಗಳು, ಧಾರ್ಮಿಕ ಕೈಂಕರ್ಯಗಳ ಸಮೇತವಾಗಿ ವಿಜೃಂಭಣೆಯ ಪರಿಷೆ ನಡೆಯಲಿದೆ. ಈ ಸಂಬಂಧ ಬಿಬಿಎಂಪಿಯು ಅಗತ್ಯ ಸಿದ್ಧತೆಯಲ್ಲಿ ತೊಡಗಿದೆ. ಮೊನ್ನೆಯಷ್ಟೇ ಮಲ್ಲೇಶ್ವರಂನಲ್ಲಿ ಕಡಲೆಕಾಯಿ ಪರಿಷೆ ನಡೆದಿತ್ತು. ಅದರ ಬೆನ್ನಲ್ಲೆ ಐತಿಹಾಸಿಕ ಹಿನ್ನೆಲೆ ಇರುವ ಬಸವನಗುಡಿ ಕಡಲೆಕಾಯಿ ಪರಿಷೆ ನಡೆಯಲಿದೆ. ಈ ಭಾರಿ ಇಲ್ಲಿ ಹಾಕುವ ಮಳಿಗೆಗಳಿಂದ ಯಾವುದೇ ಶುಲ್ಕ ಪಡೆಯದೇ ಅವಕಾಶ ನೀಡಲು ತೀರ್ಮಾನಿಸಲಾಗಿದೆ ಎಂದು ಸಭೆಯಲ್ಲಿ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

**ಕೈಂಕರ್ಯ ಸಮೇತವಾಗಿ ವಿಜೃಂಭಣೆಯ ಪರಿಷೆ**

ಬೀದಿ ಬದಿ ವ್ಯಾಪಾರಿಗಳಿಂದ ಸುಂಕ ಸಂಗ್ರಹಿಸಲು ಟೆಂಡರ್ ವ್ಯವಸ್ಥೆ ಇದೆ. ಹೀಗಿದ್ದರೂ ಕಳೆದ ಬಾರಿಗೆ ಹಣ ವಸೂಲಿ ಮಾಡಲಾಗಿತ್ತು ಎಂಬ ದೂರುಗಳು ಕೇಳಿ ಬಂದಿವೆ. ಕಡಲೆಕಾಯಿ ಪರಿಷೆಯಲ್ಲಿ ಬಲವಂತದಿಂದ ಗುತ್ತಿಗೆದಾರರು ಮಳಿಗೆದಾರರಿಂದ ಹಣ ಪಡೆದಿದ್ದಾರೆ ಎನ್ನಲಾಗಿದೆ. ಇನ್ನೂ ಈ ಬಾರಿಯು ಎರಡು ದಿನ ಕಡಲೆಕಾಯಿ ಪರಿಷೆಯಲ್ಲಿ ಲಕ್ಷಗಟ್ಟಲೇ ಭಕ್ತರು ಆಗಮಿಸುತ್ತಾರೆ. ಬಸನ ಮೂರ್ತಿ



ಉದಯವಾಹಿನಿ ಚಿತ್ರ

**ಈ ಕಾರಣದಿಂದಾಗಿ ಈ ವರ್ಷ ಸುಂಕ ವಸೂಲಾತಿ ಟೆಂಡರ್ ಕೈ ಬಿಡಬೇಕು. ಪರಿಷೆಯಲ್ಲಿ ಅವಕಾಶ ನೀಡಲಾದ ಮಳಿಗೆಗಳಿಂದ ಯಾವುದೇ ಶುಲ್ಕ ಪಡೆಯದಂತೆ ಅವರು ಸೂಚಿಸಿದ್ದಾರೆ. ಇದರ ಹೊರತಾಗಿಯೂ ಗುತ್ತಿಗೆದಾರರು ಪರಿಷೆಯಲ್ಲಿ ಆಟಿಕೆಗಳು, ಕಡಲೆಕಾಯಿ ಮಾರಾಟಗಾರರು, ಇನ್ನಿತರ ಮಳಿಗೆಗಳಿಂದ ಹಣ ವಸೂಲಿ ಮಾಡಿದ್ದು ಕಂಡು ಬಂದರೆ, ಪೊಲೀಸರು ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.**

ಪೂಜೆ ಸಲ್ಲಿಸಲು, ದೊಡ್ಡ ಗಣಪತಿ ದೇವರ ದರ್ಶನಕ್ಕೆ ಬರಲಿದ್ದಾರೆ. ಹೀಗಾಗಿ ನೂಕು ನುಗ್ಗಲು ಆಗದಂತೆ ಅಗತ್ಯ ವ್ಯವಸ್ಥೇ ಮಾಡಲಾಗುತ್ತದೆ.

ಸರತಿ ಸಾಲಿನಲ್ಲಿ ಬರಲು, ಹೋಗಲು ಅನುಕೂಲವಾಗುವಂತೆ ಬ್ಯಾರಿಕೇಡ್ ಅಳವಡಿಸಲಾಗುತ್ತದೆ. ಮಹಿಳೆಯರು, ಮಕ್ಕಳು, ಹಿರಿಯನಾಗರಿಕರು ಸರಾಗವಾಗಿ ದೇವಸ್ಥಾನದ ಒಳಗೆ ಬಂದು ಹೋಗಲು ಅನುವಾಗುವಂತೆ ವ್ಯವಸ್ಥೆ ಮಾಡಲಾಗುವುದು ಎಂದರು.

# ಆರೋಗ್ಯ ಇಲಾಖೆಯ ಎನ್‌ಹೆಚ್‌ಎಮ್ ಗುತ್ತಿಗೆ, ಹೊರಗುತ್ತಿಗೆ ನೌಕರರು: ಮುಷ್ಕರ

## ಸಿಬ್ಬಂದಿಗಳ ಬೇಡಿಕೆಗಳನ್ನು ಈಡೇರಿಸಲು ಅನಿರ್ಧಿಷ್ಠಾವಧಿ ಮುಷ್ಕರ ಮಾಡಲು ಸರ್ಕಾರಕ್ಕೆ ನೋಟಿಸ್

• ಉದಯವಾಹಿನಿ ಬೆಂಗಳೂರು

ರಾಜ್ಯದ ಆರೋಗ್ಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವಂತ ಎನ್‌ಹೆಚ್‌ಎಮ್ ಗುತ್ತಿಗೆ, ಹೊರಗುತ್ತಿಗೆ ನೌಕರರು, ತಮ್ಮ ಬೇಡಿಕೆ ಈಡೇರಿಸಲು ಆಗ್ರಹಿಸಿ, ಮುಷ್ಕರ ನಡೆಸಲು ಮುಂದಾಗಿದ್ದಾರೆ. ಈಗಾಗಲೇ ಸಿಬ್ಬಂದಿಗಳ ಬೇಡಿಕೆಗಳನ್ನು ಈಡೇರಿಸಲು ಅನಿರ್ಧಿಷ್ಠಾವಧಿ ಮುಷ್ಕರ ಮಾಡಲು ನೋಟಿಸ್‌ನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಹಂಚಿಕೊಂಡಿರುವಂತ ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಯ ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರ ಸಂಘದ ಅಧ್ಯಕ್ಷ ಶ್ರೀಕಾಂತ್ ಸ್ವಾಮಿ ಅವರು, ಆರೋಗ್ಯ ಇಲಾಖೆ, ರಾಷ್ಟ್ರೀಯ ಆರೋಗ್ಯ ಅಭಿಯಾನದ ಎನ್‌ಹೆಚ್‌ಎಮ್ ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರ ಬೇಡಿಕೆಗಳನ್ನು ಈಡೇರಿಸುವಂತೆ ಈಗಾಗಲೇ ಸಾಕಷ್ಟು ಬಾರಿ ಹೋರಾಟಗಳನ್ನು ಮಾಡಿದ್ದು ಸರ್ಕಾರದಿಂದ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗಿತ್ತು. ಆದರೆ ಇಲ್ಲಿಯವರೆಗೂ ಬೇಡಿಕೆಗಳ ಅನುಷ್ಟಾನದಲ್ಲಿ ಸರ್ಕಾರ ಯಾವುದೇ ಕ್ರಮಗಳನ್ನು ಕೈಗೊಂಡಿರುವುದಿಲ್ಲ. ನಿವೃತ್ತ ಐಎಎಸ್ ಅಧಿಕಾರಿ ಶ್ರೀನಿವಾಸಾಚಾರಿ ವರದಿಯನ್ನೂ ಸಂಪೂರ್ಣವಾಗಿ ಅನುಷ್ಠಾನಗೊಳಿಸಿರುವುದಿಲ್ಲ ಎಂಬುದಾಗಿ ಹೇಳಿದ್ದಾರೆ. 1. ಈಗಾಗಲೇ ಮಾನ್ಯ ಆಯುಕ್ತರು ತಿಳಿಸಿದಂತೆ ಮಣಿಪುರ ರಾಜ್ಯದಲ್ಲಿ 2140 ಸಿಬ್ಬಂದಿಗಳನ್ನು ಖಾಯಂ



ಉದಯವಾಹಿನಿ ಚಿತ್ರ



ಗೊಳಿಸಿದ್ದು ಹಾಗೂ ಇನ್ನೂ ಕೆಲವು ರಾಜ್ಯಗಳಲ್ಲಿ ಎನ್.ಹೆಚ್.ಎಮ್ ಸಿಬ್ಬಂದಿಗಳನ್ನು ಖಾಯಂಮಾಡಲು ನಿಯಮಗಳನ್ನು ರೂಪಿಸಿದ್ದು, ಅದರಂತೆ ನಮ್ಮ ರಾಜ್ಯದಲ್ಲಿಯೂ ಸಹ ನಿಯಮಗಳನ್ನು ರೂಪಿಸಿ ಖಾಯಂಗೊಳಿಸುವುದು.

2. ಕನಿಷ್ಠ ವೇತನದ ಬದಲು ದೆಹಲಿ ಮಾದರಿಯಲ್ಲಿ ಸಮಾನ ಕೆಲಸಕ್ಕೆ ಸಮಾನ ವೇತನ ಜಾರಿ ಮಾಡುವುದು.

3. ಈಗಾಗಲೇ ಜಿಲ್ಲೆಯಿಂದ ಜಿಲ್ಲೆಗೆ ವರ್ಗಾವಣೆ ನೀಡುವ ಬಗ್ಗೆ ಮಾನ್ಯ ಆರೋಗ್ಯ ಸಚಿವರ ಸೂಚನೆಯಂತೆ ಕಾನೂನು ಇಲಾಖೆ ಒಪ್ಪಿಗೆ ನೀಡಿದ್ದು ಅದರಂತೆ ಖಾಲಿ ಇರುವ, ಪರಸ್ಪರ ಒಪ್ಪಿಗೆ, ವೈದ್ಯಕೀಯ ಹಾಗೂ ಪತಿಪತ್ನಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಿಂದ ಜಿಲ್ಲೆಗೆ ವರ್ಗಾವಣೆ ಆದೇಶವನ್ನು ಕೂಡಲೇ ಹೊರಡಿಸುವುದು.

4. ಈಗಾಗಲೇ ಜಿಲ್ಲೆಯ ಒಳಗೆ ವರ್ಗಾವಣೆ ನೀಡುವ ಬಗ್ಗೆ ಆದೇಶ ಹೊರಡಿಸಿದ್ದು ಈ ಆದೇಶದಲ್ಲಿ ಕೇವಲ ಪರಸ್ಪರ ವರ್ಗಾವಣೆಗೆ ಮಾತ್ರ ಅವಕಾಶ ನೀಡಿದ್ದು, ಈ ಆದೇಶವನ್ನು ಪರಿಷ್ಕರಿಸಿ ಪರಸ್ಪರ ಒಪ್ಪಿಗೆ ಜೊತೆಗೆ ಖಾಲಿ ಇರುವ ಹುದ್ದೆಗಳಿಗೆ, ಪತಿಪತ್ನಿ ಪ್ರಕರಣಗಳು ಮತ್ತು ವೈದ್ಯಕೀಯ ಪ್ರಕರಣಗಳಿಗೂ ಸಹ ಜಿಲ್ಲೆಯ ಒಳಗಡೆ ವರ್ಗಾವಣೆ ನೀಡಲು ಆದೇಶಿಸಬೇಕು.

5. ಹಲವಾರು ಸುತ್ತಿನ ಸಭೆಗಳು ಆದರೂ ಈವರೆಗೂ ಆರೋಗ್ಯ ವಿಮೆ ಜಾರಿ ಆಗದೇ ಇರುವುದು ಮತ್ತು ಹಲವಾರು ಸಿಬ್ಬಂದಿಗಳು ಮೃತ ಪಟ್ಟರೂ ಬ್ಯಾಂಕರ್ಸ್ ಜೊತೆ ಸಭೆಗಳನ್ನು ಮಾಡಿದ ನಂತರವೂ ಟರ್ಮ್ ವಿಮೆ ಜಾರಿ ಆಗದೇ ಇದ್ದು ಕೂಡಲೇ ಅಂತಿಮ ಆದೇಶ ಹೊರಡಿಸುವುದು.

6. ಸರ್ಕಾರಿ ಆದೇಶದಂತೆ ಜಿಲ್ಲೆಗಳಿಗೆ ಪ್ರಸಕ್ತ ಆರ್ಥಿಕ ವರ್ಷದ 15% ವೇತನ ಹೆಚ್ಚಳದ ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು ಅನುದಾನವನ್ನು ಕೂಡಲೇ ಬಿಡುಗಡೆ ಮಾಡುವುದು.

7. ಶಾಲಾ ಆರೋಗ್ಯ ಕಾರ್ಯಕ್ರಮಗಳನ್ನು ಮಾಡಲು ಖಃಖಎ ಕಾರ್ಯಕ್ರಮದಡಿಯಲ್ಲಿ ವೈದ್ಯರ ಸಹಿತ ಸಿಬ್ಬಂದಿಗಳನ್ನು ನೇಮಕಾತಿ ಮಾಡಿದ್ದು ಬೇರೆ ಜಿಲ್ಲೆಗಳಲ್ಲಿ ಹೆಚ್ಚುವರಿ ಬೇಡಿಕೆ ಇರುವ ಕಾರಣ 24 ತಂಡದ 96 ಸಿಬ್ಬಂದಿಗಳನ್ನು ಕೈ ಬಿಡದೇ ಆ ಸಿಬ್ಬಂದಿಗಳಿಗೆ ಅದೇ ಜಿಲ್ಲೆಯಲ್ಲಿ ಪರ್ಯಾಯ ವ್ಯವಸ್ಥೆ ಮಾಡುವುದು.

### ಪ್ಯಾರಾ ಮೆಡಿಕಲ್ ನೇಮಕಾತಿ ಪ್ರಕ್ರಿಯೆ

- ಎನ್.ಹೆಚ್‌ಎಮ್ ಸಿಬ್ಬಂದಿಗಳಿಗೆ 2017–18ರಲ್ಲಿ ಮೂಲ ವೇತನ ನಿಗದಿ ಮಾಡಿದ್ದು ಈವರೆಗೂ ಪರಿಷ್ಕರಣೆ ಮಾಡದೇ ಇದ್ದು, ಕಾಲಕಾಲಕ್ಕೆ ಮೂಲ ವೇತನವನ್ನು ಪರಿಷ್ಕರಣೆ ಮಾಡುವಂತೆ ಮನವಿ.
- ಪ್ಯಾರಾ ಮೆಡಿಕಲ್ ವಿಶೇಷ ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು ಈ ಪ್ರಕ್ರಿಯೆಯನ್ನು ಕೂಡಲೇ ಪೂರ್ಣಗೊಳಿಸುವುದು.
- ನಿವೃತ್ತ ಐಎಎಸ್ ಅಧಿಕಾರಿ ಶ್ರೀನಿವಾಸಾಚಾರಿ ವರದಿಯಂತೆ ಕೃಪಾಂಕವನ್ನು ನೀಡಿ ನೇಮಕಾತಿ ಮಾಡಿಕೊಳ್ಳುತ್ತಿದ್ದು ಆದರೆ ವರ್ಷಕ್ಕೆ 2% ಇರುವ ಕೃಪಾಂಕವನ್ನು 3% ರಷ್ಟು ಮಾಡಿ ಗರಿಷ್ಠ 30 ಕ್ಕೆ ಹೆಚ್ಚಿಸುವುದು ಹಾಗೂ ಬೇರೆ ಇಲಾಖೆಯಲ್ಲಿ ಮಾಡಿಕೊಳ್ಳುವ ನೇಮಕಾತಿಗಳಿಗೂ ಸಹ ಅರ್ಹ ಎನ್.ಹೆಚ್‌ಎಮ್ ಸಿಬ್ಬಂದಿಗಳು ಅರ್ಜಿ ಹಾಕುವಾಗ ಕೃಪಾಂಕ ಮತ್ತು ವಯೋಮಿತಿ ನೀಡಲು ಮನವಿ.

# ವಿದ್ಯುತ್ ಉಪಕೇಂದ್ರ ಸ್ಥಾಪನೆ: ಇಂಧನ ಖಾತೆ ಸಚಿವ ಕೆ.ಜೆ.ಜಾರ್ಜ್

## • ಕೊಡಗು ಜಿಲ್ಲೆಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ಆಗುವ ತೊಂದರೆಗಳನ್ನು ಸಂಪೂರ್ಣವಾಗಿ ನಿವಾರಿಸಲಾಗುವುದು

• ಉದಯವಾಹಿನಿ ಮಡಿಕೇರಿ

ಕೊಡಗು ಜಿಲ್ಲೆಯಲ್ಲಿ ಒಟ್ಟು 13 ವಿದ್ಯುತ್ ಸರಬರಾಜು ಉಪಕೇಂದ್ರಗಳ ಸ್ಥಾಪನೆಗೆ ಉದ್ದೇಶಿಸಲಾಗಿದ್ದು, ಇವುಗಳಲ್ಲಿ ಈಗಾಗಲೇ 4 ಉಪಕೇಂದ್ರಕ್ಕೆ ಟೆಂಡರ್ ಕರೆಯಲಾಗಿದೆ. ಇನ್ನುಳಿದ ಕೇಂದ್ರಗಳ ಸ್ಥಾಪನೆಗೂ ತ್ವರಿತ ಕ್ರಮ ಕೈಗೊಂಡು ಕೊಡಗು ಜಿಲ್ಲೆಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ಆಗುವ ತೊಂದರೆಗಳನ್ನು ಸಂಪೂರ್ಣವಾಗಿ ನಿವಾರಿಸಲಾಗುವುದು ಎಂದು ಇಂಧನ ಖಾತೆ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

ನನಗೆ ಕೊಡಗು ಎಂದರೆ ಹೆಚ್ಚು ಪ್ರೀತಿ. ಇಲ್ಲಿಯೇ ಓದಿದ್ದೇನೆ, ನನ್ನ ಬೆಳವಣಿಗೆಗೂ ಕೊಡಗು ಕಾರಣವಾಗಿದೆ. ಹಾಗಾಗಿ, ನಾನು ಯಾವುದೇ ಸಂದರ್ಭದಲ್ಲೂ ಕೊಡಗನ್ನು ಅಲಕ್ಷಿಸುವ ಪ್ರಶ್ನೆಯೇ ಇಲ್ಲ' ಎಂದ ಹೇಳಿದರು. ನೆಲದೊಳಗೆ ಕೇಬಲ್ ಹಾಕುವ ಪ್ರಸ್ತಾವವೂ ಇದೆ. ಅತಿ ಶೀಘ್ರದಲ್ಲಿ ಅದು ಸಹ ಜಾರಿಗೆ ಬರಲಿದ್ದು, ಜಿಲ್ಲೆಯಲ್ಲಿರುವ ವಿದ್ಯುತ್ ಸಮಸ್ಯೆ ನೀಗಿಸಲು ಎಲ್ಲಾ ಬಗೆಯ ಕ್ರಮ ಕೈಗೊಳ್ಳಲಾಗುವುದು ಎಂದರು. ಜಿಲ್ಲೆಗೆ ಲೈನ್‌ಮೆನ್‌ಗಳು ಬರುವುದು ಕಡಿಮೆ. ಹಾಗಿದ್ದರೂ, ಹೆಚ್ಚುವರಿ ಲೈನ್‌ಮೆನ್‌ಗಳನ್ನು ನಿಯೋಜಿಸಿಕೊಂಡು, ಈ ಬಾರಿ ಮಳೆಗಾಲದಲ್ಲಿ ತ್ವರಿತವಾಗಿ ಸಂಪರ್ಕ ನೀಡಲಾಯಿತು ಎಂದು ಹೇಳಿದರು. ಜಿಲ್ಲೆಯ ಹಾಡಿಗಳು ಸೇರಿದಂತೆ ಎಲ್ಲಾ ಕುಗ್ರಾಮಗಳಿಗೂ ಸಹ ವಿದ್ಯುತ್ ಸಂಪರ್ಕ ಕಲ್ಪಿಸಲು ಪ್ರಯತ್ನಿಸಲಾಗಿದೆ. ಆ ನಿಟ್ಟಿನಲ್ಲಿ ಸೆಸ್ಕ್ ಮತ್ತು ಅರಣ್ಯ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಕಾರ್ಯ ನಿರ್ವಹಿಸುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ 636 ಮಂಜೂರಾದ ಹುದ್ದೆಗಳಿದ್ದು, 242 ಮಂದಿ ಕಾರ್ಯನಿರ್ವಹಿಸುತಿದ್ದಾರೆ. ಖಾಲಿ ಇರುವ ಹುದ್ದೆಗಳ ಭರ್ತಿಗೆ ಕೂಡಲೇ ಕ್ರಮವಹಿಸಲಾಗುವುದು ಎಂದು ತಿಳಿಸಿದರು. 'ಗೃಹಜ್ಯೋತಿ' ಯೋಜನೆಯು ರಾಜ್ಯಾದ್ಯಂತ ಉತ್ತಮವಾಗಿ ನಡೆಯುತ್ತಿದ್ದು, ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ 1,56,022 ಕುಟುಂಬಗಳು ಹೆಸರು ನೋಂದಣಿ ಮಾಡಿದ್ದು, ಶೇ 99.59 ರಷ್ಟು ಪ್ರಗತಿ ಸಾಧಿಸಲಾಗಿದೆ. ಇದಕ್ಕಾಗಿ ಪ್ರತಿ ತಿಂಗಳು 6.9 ಕೋಟಿ ಸಹಾಯಧನದ ಬೇಡಿಕೆ ಇದೆ' ಎಂದು ಮಾಹಿತಿ ನೀಡಿದರು.

ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿ, ವಿರಾಜಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹುದಿಕೇರಿ, ಸಿದ್ದಾಪುರ, ಬಾಳೆಲೆಯಲ್ಲಿ ವಿದ್ಯುತ್ ಉಪ ಕೇಂದ್ರ ನಿರ್ಮಾಣಕ್ಕೆ ಟೆಂಡರ್ ಆಹ್ವಾನಿಸಲಾಗಿದ್ದು, ಕಾಮಗಾರಿ ಸದ್ಯದಲ್ಲೇ ಆರಂಭವಾಗಲಿದೆ. ಸಂಪಾಜೆ, ಭಾಗಮಂಡಲ ಭಾಗದಲ್ಲಿಯೂ ಸಹ ವಿದ್ಯುತ್ ಉಪ ಕೇಂದ್ರ ಸ್ಥಾಪಿಸಲು ಮುಂದಾಗಲಾಗಿದೆ ಎಂದರು.

ಈ ವೇಳೆ ಮಾತನಾಡಿದ ಇಂಧನ ಇಲಾಖೆಯ ಅಧಿಕಾರಿಯೊಬ್ಬರು ಸಂಪಾಜೆ ಮತ್ತು ಭಾಗಮಂಡಲ ವ್ಯಾಪ್ತಿಯಲ್ಲಿ ಅರಣ್ಯವಿರುವುದರಿಂದ 33 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ನಿರ್ಮಾಣ ಮಾಡಲಾಗುತ್ತದೆ ಎಂದು ಹೇಳಿದರು. ಮಧ್ಯಪ್ರವೇಶಿಸಿದ ಶಾಸಕ ಡಾ.ಮಂತರ್ ಗೌಡ, '33 ಕೆ.ವಿ.ವಿದ್ಯುತ್ ಉಪ ಕೇಂದ್ರ ನಿರ್ಮಾಣ ಮಾಡುವುದರಿಂದ ಸಮರ್ಪಕವಾಗಿ ವಿದ್ಯುತ್ ಒದಗಿಸಲು ಸಾಧ್ಯವಿಲ್ಲ. ಆದ್ದರಿಂದ ಭವಿಷ್ಯದ ದೃಷ್ಟಿಯಿಂದ 66 ಕೆ.ವಿ. ವಿದ್ಯುತ್ ಉಪಕೇಂದ್ರ ನಿರ್ಮಾಣ ಮಾಡುವುದು ಒಳ್ಳೆಯದು' ಎಂದು ಸಲಹೆ ನೀಡಿದರು.

ಸೆಸ್ಕ್ ಅಧ್ಯಕ್ಷ ರಮೇಶ್ ಬಂಡಿಸಿದ್ದೇಗೌಡ ಮಾತನಾಡಿ, 'ಸದ್ಯ ಈಗಾಗಲೇ ಇರುವ ಪ್ರಸ್ತಾವನೆಯಂತೆ 33 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ನಿರ್ಮಿಸಲಿ, ನಂತರ ಮುಂದಿನ ಹಂತದಲ್ಲಿ 66 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ನಿರ್ಮಿಸಲು ಪ್ರಯತ್ನಿಸಬಹುದು' ಎಂದರು.

ಪ್ರಸಕ್ತ ಸಾಲಿನ ಮುಂಗಾರಿನಲ್ಲಿನ ಸೆಸ್ಕ್ ಕಾರ್ಯನಿರ್ವಹಣೆಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಶ್ಲಾಘಿಸಿದರು. ಆಗ ಇಲ್ಲಿ ಸೆಸ್ಕ್ ಕಾರ್ಯನಿರ್ವಾಹಕ ಎಂಜಿನಿಯರ್ ಆಗಿದ್ದ ಅನಿತಾ ಬಾಯಿ ಹಾಗೂ ಲೈನ್‌ಮೆನ್‌ಗಳು ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದರು. ಇದರಿಂದ ಕಳೆದ ವರ್ಷಕ್ಕಿಂತ ಹೆಚ್ಚು ಮಳೆ ಸುರಿದರೂ ಹಾಗೂ ಬಿರುಗಾಳಿ ಬೀಸಿದರೂ 3472 ಅಧಿಕ ವಿದ್ಯುತ್ ಕಂಬಗಳು ಉರುಳಿದರೂ ಬೇಗನೇ ವಿದ್ಯುತ್ ಸಂಪರ್ಕ ಮರುಸ್ಥಾಪಿಸಲು ಸಹಾಯವಾಯಿತು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

### 76 ಕಾಮಗಾರಿಗಳಿಗೆ ವಿದ್ಯುತ್

**ಗಂಗಾ ಕಲ್ಯಾಣ ಮತ್ತು ಕುಡಿಯುವ ನೀರು ಪೂರೈಕೆ ಯೋಜನೆಯಡಿ ಕಳೆದ ವರ್ಷ 87 ಮತ್ತು 52 ಕಾಮಗಾರಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಪ್ರಸಕ್ತ ವರ್ಷದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ 19 ಮತ್ತು ಕುಡಿಯುವ ನೀರು ಪೂರೈಕೆ ಯೋಜನೆಯಡಿ 76 ಕಾಮಗಾರಿಗಳಿಗೆ ವಿದ್ಯುತ್ ಸಂಪರ್ಕಿಸಲಾಗಿದೆ ಎಂದರು.**



ಉದಯವಾಹಿನಿ ಚಿತ್ರ

**ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆನಂದ್ ಪ್ರಕಾಶ್ ಮೀನಾ, ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕಿ ಜಿ.ಶೀಲಾ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಘಟಕ ಅಧ್ಯಕ್ಷ ಧರ್ಮಜ ಉತ್ತಪ್ಪ ಭಾಗವಹಿಸಿದ್ದರು.**

**ನನ್ನ ಬೆಳವಣಿಗೆಗೂ ಕೊಡಗು ಕಾರಣ**

---

# ಕಳ್ಳನಕೆರೆಯಲ್ಲಿ ಹಲವರಿಗೆ ಕಚ್ಚಿದ ನಾಯಿ

• ಉದಯವಾಹಿನಿ ಕಿಕ್ಕೇರಿ

ಹೋಬಳಿಯ ಕಳ್ಳನಕೆರೆ ಗ್ರಾಮದಲ್ಲಿ ನಾಯಿಯೊಂದು ಹಲವು ಜನರನ್ನು ಕಚ್ಚಿ ತೀವ್ರವಾಗಿ ಗಾಯಗೊಳಿಸಿದೆ. ರೈತರು ಜಮೀನು ಕಡೆಗೆ ತೆರಳುವಾಗ ಈ ಘಟನೆ ನಡೆದಿದ್ದು, ನಾಯಿ ದಾಳಿಗೆ ಒಳಗಾದವರು ಬಹುತೇಕ ರೈತರಾಗಿದ್ದು ಜಮೀನುಗಳಿಗೆ ಒಂಟಿಯಾಗಿ ತೆರಳಲು ಭಯಪಡುವಂತೆ ಆಗಿದೆ.

ಗ್ರಾಮದ ಪುನೀತ್ ಕುಮಾರ್, ದಿಲೀಪ್, ಸುರೇಶ ಹಾಗೂ ನಿವೃತ್ತ ಶಿಕ್ಷಕ ಗಂಗಾಧರ್ ಅವರಿಗೆ ನಾಯಿ ಕಚ್ಚಿದ್ದು, ಗ್ರಾಮ ಸೇರಿದಂತೆ ಸುತ್ತಮುತ್ತಲ ಪ್ರದೇಶಗಳಲ್ಲಿ ನಾಯಿಗಳ ಕಾಟ ಈಚೆಗೆ ಬಹಳ ಹೆಚ್ಚಾಗಿದ್ದು, ನಾಯಿಗಳ ನಿಯಂತ್ರಣಕ್ಕೆ ಕಡಿವಾಣ ಇಲ್ಲವಾಗಿದೆ' ಎಂದು ಗ್ರಾಮಸ್ಥರು ದೂರಿದ್ದಾರೆ.

ರಾತ್ರಿ ವೇಳೆ ಗ್ರಾಮದ ಹೊಲ, ತೋಟ, ಕಬ್ಬಿನ ಗದ್ದೆಗಳಲ್ಲಿ ತಂಗುತ್ತಿವೆ. ಬೆಳಿಗ್ಗೆಯೇ ದಿಢೀರನೆ ಗ್ರಾಮಕ್ಕೆ ನುಗ್ಗುತ್ತಿದ್ದು, ರೈತರು ಹಾಲಿನ ಡೇರಿ, ಹೊಲ ಗದ್ದೆಗೆ ತೆರಳಲು ಕೋಲು ಹಿಡಿದುಕೊಂಡು ಹೋಗಬೇಕಾದ ಸ್ಥಿತಿ ಬಂದಿದೆ. 'ಮಕ್ಕಳನ್ನು ಶಾಲೆಗೆ ಕಳುಹಿಸಲು ಭಯವಾಗಿದ್ದು, ಪೋಷಕರೇ ನಿಗದಿತ ಸ್ಥಳಕ್ಕೆ ಬಿಡಬೇಕಿದೆ. ರಾತ್ರಿ ವೇಳೆ ಗ್ರಾಮದವರೇ ಊರಿಗೆ ಪ್ರವೇಶ ಮಾಡಲು ಭಯಪಡುವ ಸ್ಥಿತಿ ಎದುರಾಗಿದೆ. ಜನ– ಜಾನುವಾರು ಮೇಲೆ ಎಗರುವ ನಾಯಿಗಳ ಉಪಟಳಕ್ಕೆ ಕಡಿವಾಣ ಇಲ್ಲದಂತಾಗಿದೆ' ಎಂದು ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಲಿಂಗರಾಜೇಗೌಡ ಅಳಲು ತೋಡಿಕೊಂಡರು. ಗಾಯಾಳುಗಳನ್ನು ಕಿಕ್ಕೇರಿಯ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆತಂದಿದ್ದು, ಆಸ್ಪತ್ರೆಯಲ್ಲಿ ನಾಯಿ ಕಡಿತಕ್ಕೆ ಚುಚ್ಚುಮದ್ದು ಇಲ್ಲದೆ ಹಾಸನ ಆಸ್ಪತ್ರೆಗೆ ಕರೆದುಕೊಂಡು ಹೋಗಬೇಕಾಯಿತು.

ನಾಯಿಗಳ ನಿಯಂತ್ರಣಕ್ಕೆ ಕಾನೂನಾತ್ಮಕವಾಗಿ ಕ್ರಮವಹಿಸಲು ಮೇಲಧಿಕಾರಿಗಳಿಗೆ ಮನವಿ ಮಾಡಲಾಗುವುದು' ಎಂದು ಕಿಕ್ಕೇರಿ ಗ್ರಾಪಂ ಪಿಡಿಒ ಚಲುವರಾಜ್ ತಿಳಿಸಿದ್ದಾರೆ.

**ನಾಯಿಗಳ ನಿಯಂತ್ರಣಕ್ಕೆ ಕಡಿವಾಣ ಇಲ್ಲ**



ಉದಯವಾಹಿನಿ ಚಿತ್ರ

---

# ಅಕ್ಕಿಹೆಬ್ಬಾಳು ಬಸ್ ನಿಲ್ದಾಣದ ಉದ್ಘಾಟನೆಗೆ 'ಗ್ರಹಣ'

• ಉದಯವಾಹಿನಿ ಕೆ.ಆರ್.ಪೇಟೆ

ತಾಲ್ಲೂಕಿನ ಅಕ್ಕಿಹೆಬ್ಬಾಳುವಿನಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಕೆಎಸ್‌ಆರ್‌ಟಿಸಿಯಿಂದ ಸುಸಜ್ಜಿತ ಬಸ್ ನಿಲ್ದಾಣ ಕಾಮಗಾರಿ ಬಹುತೇಕ ಪೂರ್ಣಗೊಂಡಿದ್ದರೂ ಲೋಕಾರ್ಪಣೆಯಾಗಿಲ್ಲ. ಇದರಿಂದಾಗಿ ಈ ಮಾರ್ಗದಲ್ಲಿ ಪ್ರತಿನಿತ್ಯ ಪ್ರಯಾಣಿಸುವ ಜನ ಮತ್ತು ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದ್ದಾರೆ. ಅಕ್ಕಿಹೆಬ್ಬಾಳು ಮೂಲಕವೇ ಭೇರ್ಯ, ಕೆ.ಆರ್. ನಗರ, ಹೊಳೆನರಸೀಪುರ, ಹಾಸನ, ಕೆ.ಆರ್.ಪೇಟೆ, ಮಿರ್ಲೆ , ರಾಮನಾಥಪುರ ಪಟ್ಟಣಗಳಿಗೆ ಸಾವಿರಾರು ಪ್ರಯಾಣಿಕರು ಪ್ರಯಾಣಿಸುತ್ತಾರೆ. ಆದರೆ ಬಸ್ ನಿಲ್ದಾಣವಿಲ್ಲದೇ ರಸ್ತೆ ಬದಿಯಲ್ಲೇ ನಿಂತು ಬಸ್‌ಗಾಗಿ ಕಾಯಬೇಕಿತ್ತು. ಇದನ್ನು ಮನಗಂಡು ಗ್ರಾಮಸ್ಥರ ಬೇಡಿಕೆಯಂತೆ ಕಳೆದ ಸರ್ಕಾರದ ಅವಧಿಯಲ್ಲಿ ಬಸ್ ನಿಲ್ದಾಣ ಮಂಜೂರಾಗಿ ಆಗ ಸಚಿವರಾಗಿದ್ದ ನಾರಾಯಣಗೌಡ ಶಂಕುಸ್ಥಾಪನೆ ನೆರವೇರಿಸಿದ್ದರು.

ಕಾಮಗಾರಿ ಮುಗಿದು ಐದಾರು ತಿಂಗಳಾದರೂ ಬಸ್ ನಿಲ್ದಾಣವನ್ನು ಲೋಕಾರ್ಪಣೆ ಮಾಡುವ ಪ್ರಯತ್ನವನ್ನು ಸಾರಿಗೆ ಇಲಾಖೆ ಮಾಡಿದಂತಿಲ್ಲ. ಅಕ್ಕಿಹೆಬ್ಬಾಳು ಹೋಬಳಿ ಕೇಂದ್ರವಾಗಿರುವುದಲ್ಲದೆ, ಇಲ್ಲಿ ಹಲವು ಪ್ರಸಿದ್ಧ ದೇವಾಲಯಗಳಿವೆ. ಹೀಗಾಗಿ ಪ್ರತಿನಿತ್ಯ ದೇವರ ದರ್ಶನ, ವ್ಯಾಪಾರ, ವ್ಯವಹಾರಗಳಿಗೆ ಜನರು ಇಲ್ಲಿಗೆ ಬರುತ್ತಾರೆ. ಅಲ್ಲದೇ ಪ್ರತಿನಿತ್ಯ ನೂರಾರು ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ಪರಊರಿಗೆ ಪ್ರಯಾಣ ಮಾಡುತ್ತಾರೆ. ಆದರೆ ಅವರು ಬಸ್ಸಿಗೆ ಕಾಯಲು, ಹತ್ತಲು ಇಳಿಯಲು ಸರಿಯಾದ ಸ್ಥಳ ಅವಕಾಶವಿಲ್ಲದೇ ಪರದಾಡುವಂತಾಗಿದೆ. ಆದ್ದರಿಂದ ಶಾಸಕರು ಗಮನಹರಿಸಿ ಬಸ್ ನಿಲ್ದಾಣದ ಲೋಕಾರ್ಪಣೆಗೆ ಆದ್ಯತೆ ನೀಡಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

'ನಮ್ಮ ಊರಿಗೆ ಬಸ್ ನಿಲ್ದಾಣವಾಗಬೇಕು ಎಂಬುದು ದಶಕದ ಬೇಡಿಕೆ. ಈಗ ಅದು ಈಡೇರಿದ್ದರೂ ಲೋಕಾರ್ಪಣೆಯಾಗಿಲ್ಲ. ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಮತ್ತು ಶಾಸಕರು ಬಸ್ ನಿಲ್ದಾಣ ಉದ್ಘಾಟನೆಗೆ ಗಮನಹರಿಸಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಬೇಕು' ಎಂದು ಅಕ್ಕಿಹೆಬ್ಬಾಳಿನ ಮುಖಂಡ ರಘು ಮತ್ತು ಎಂಜಿನಿಯರಿಂಗ್ ವಿದ್ಯಾರ್ಥಿ ಮೊಹಮ್ಮದ್ ಅಜರುದ್ದೀನ್ ಆಗ್ರಹಿಸಿದ್ದಾರೆ.



ಉದಯವಾಹಿನಿ ಚಿತ್ರ

**ಕಾಮಗಾರಿ ಮುಗಿದು 6 ತಿಂಗಳಾದರೂ ಉದ್ಘಾಟನೆಯಾಗಿಲ್ಲ ಪ್ರತಿನಿತ್ಯ ನೂರಾರು ವಿದ್ಯಾರ್ಥಿಗಳು, ಪ್ರಯಾಣಿಕರ ಸಂಚಾರ ಅಕ್ಕಿಹೆಬ್ಬಾಳು ಪ್ರಸಿದ್ಧ ಧಾರ್ಮಿಕ ತಾಣ ಅಕ್ಕಿ ಹೆಬ್ಬಾಳು ಬಸ್ ನಿಲ್ದಾಣ ಲೋಕಾರ್ಪಣೆಗೆ ಸಜ್ಜಾಗಿದೆ. ನಿಲ್ದಾಣದ ಮುಂದೆ ರಾಜ್ಯ ಹೆದ್ದಾರಿ ಇದ್ದು ಬಸ್‌ಗಳು ನಿಲ್ದಾಣದ ಒಳಗೆ ಹೋಗಿ ಬರಲು ಯೂ ಟರ್ನ್ ತೆಗೆದುಕೊಳ್ಳಬೇಕು. ಅದಕ್ಕಾಗಿ ರಸ್ತೆ ಸರಿಪಡಿಸಸಬೇಕಿದೆ. ಈ ಬಗ್ಗೆ ತಜ್ಞರ ತಂಡ ಪರಿಶೀಲಿಸಲಿದ್ದು ಶೀಘ್ರದಲ್ಲಿಯೇ ಕಾಮಗಾರಿ ಮುಗಿಸಿ ಸಾರ್ವಜನಿಕರ ಸೇವೆಗೆ ಮುಕ್ತಗೊಳಿಸಲಾಗುವುದು -ಎ.ಡಿ.ಕುಮಾರ್, ಬಸ್ ಡಿಪೋ ವ್ಯವಸ್ಥಾಪಕ**

---

# ಡಿಸಿಸಿ ಬ್ಯಾಂಕ್ ಸಾಲ ಸೌಲಭ್ಯ ಸ್ಥಗಿತ: ಮೀಟರ್ ದಂಧೆಗೆ ನಲುಗಿದ ರೈತರು

• ಉದಯವಾಹಿನಿ ಬಾಗೇಪಲ್ಲಿ

ಮಹಿಳೆಯರು ಹಾಗೂ ರೈತರ ಆರ್ಥಿಕ ಸಬಲೀಕರಣಕ್ಕೆ ಡಿಸಿಸಿ ಬ್ಯಾಂಕ್‌ನ ಕೇಂದ್ರ ಕಚೇರಿಯಿಂದ ವಿತರಣೆ ಮಾಡುತ್ತಿದ್ದ ಬಡ್ಡಿರಹಿತ ಸಾಲ ಸೌಲಭ್ಯ ಕಳೆದ ಒಂದೂವರೆ ವರ್ಷದಿಂದ ಸ್ಥಗಿತಗೊಂಡಿದೆ. ಇದನ್ನೇ ಬಂಡವಾಳ ಮಾಡಿಕೊಂಡಿರುವ ಕೆಲ ಮೈಕ್ರೊ ಫೈನಾನ್ಸ್ ಮೀಟರ್ ಬಡ್ಡಿ ದಂಧೆಕೋರರು ಬಡಜನರ ರಕ್ತ ಹೀರುತ್ತಿದ್ದಾರೆ ಎಂಬ ಆರೋಪವೂ ಇದೆ.ಸಂಬಂಧಪಟ್ಟ ಪೊಲೀಸ್ ಇಲಾಖೆ ಜಾಣ ಮೌನ ವಹಿಸಿದೆ ಎಂದು ದೂರಲಾಗಿದೆ.

ಡಿಸಿಸಿ ಬ್ಯಾಂಕ್‌ನಿಂದ ಪಡೆದ ಸಾಲ ಸೌಲಭ್ಯ ಮಹಿಳೆಯರು, ರೈತರಿಗೆ ವರದಾನ ಆಗಿದೆ. ಸೀಮೆ ಹಸು, ಕುರಿ, ಮೇಕೆ, ಹಂದಿ ಸಾಗಾಣಿಕೆ, ಹೈನುಗಾರಿಕೆ, ಹೊಲಿಗೆ ಯಂತ್ರ ಖರೀದಿ ಸೇರಿದಂತೆ ವಿವಿಧ ಚಟುವಟಿಕೆಗಳಿಗೆ ಹಾಗೂ ಗೃಹೋಪಯೋಗಿ ಕೆಲಸಗಳಿಗೆ ಸಾಲದ ಹಣ ಬಳಕೆ ಮಾಡುತ್ತಿದ್ದರು. ಮಕ್ಕಳ ವಿದ್ಯಾಭ್ಯಾಸ ಹಾಗೂ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಅನುಕೂಲ ಆಗಿತ್ತು.ರೈತರಿಗೆ ವಿತರಿಸಿದ ಕೆಸಿಸಿ ಸಾಲದಲ್ಲಿ ಹಸು, ಕುರಿ ಶೆಡ್, ಸೀಮೆಹಸು ಖರೀದಿ ಮಾಡಿ ಜೀವನ ಕಟ್ಟಿಕೊಂಡಿದ್ದಾರೆ. ಆದರೆ, ಇದೀಗ ಡಿಸಿಸಿ ಬ್ಯಾಂಕ್ ಸಾಲ ಸೌಲಭ್ಯ ನಿಲ್ಲಿಸಲಾಗಿದೆ. ಇದು ರೈತರಿಗೆ ಸಂಕಷ್ಟ ತಂದಿದೆ.

ಡಿಸಿಸಿ ಬ್ಯಾಂಕ್‌ನ ಕೇಂದ್ರ ಕಚೇರಿಯಲ್ಲಿ ಇದೀಗ ಆಡಳಿತ ಮಂಡಳಿ ಇಲ್ಲ. ಇದರಿಂದ ಬಡ್ಡಿರಹಿತ ಸಾಲ ಸೌಲಭ್ಯ ನಿಲ್ಲಿಸಲಾಗಿದೆ. ಮಹಿಳೆಯರು, ರೈತರಿಗೆ ಬಡ್ಡಿರಹಿತ ಸಾಲ ಸಿಗದೆ ಅತಂತ್ರ ಪರಿಸ್ಥಿತಿಯಲ್ಲಿ ಇದ್ದಾರೆ. ಕೃಷಿ ಕೂಲಿಕಾರ್ಮಿಕರು ಮನೆ, ಇಟ್ಟಿಗೆ, ಮರಗೆಲಸ, ಸಿಮೆಂಟ್ ಕೆಲಸ, ಕೃಷಿ ಹಾಗೂ ತರಕಾರಿ ಬಿಡಿಸುವುದು, ಸ್ವಚ್ಛ ಮಾಡುವುದು, ವಿವಿಧ ಕೆಲಸಗಳಿಗೆ ಹೋಗುತ್ತಿದ್ದಾರೆ. ಕೂಲಿ ಹಣದಲ್ಲಿ ಜೀವನ ಸಾಗಿಸುವಂತೆ ಆಗಿದೆ. ಇದನ್ನೇ ಬಂಡವಾಳ ಮಾಡಿಕೊಂಡ ಕೆಲ ಆಂಧ್ರಪ್ರದೇಶದ ಮೈಕ್ರೊ ಫೈನಾನ್ಸ್‌ನವರು ಪಟ್ಟಣಕ್ಕೆ ಲಗ್ಗೆ ಇಟ್ಟಿದ್ದಾರೆ. ಬಡಜನರಿಗೆ ಸಾಲ ನೀಡುವ ನೆಪದಲ್ಲಿ ಹೆಚ್ಚುವರಿ ಬಡ್ಡಿ ವಸೂಲಿ ಮಾಡುತ್ತಿದ್ದಾರೆ.

ಕೆಲವರು ಲಕ್ಷಾಂತರ ಹಣ ಜನರಿಗೆ ವಿತರಿಸಿ, ಬಡ್ಡಿ ರೂಪದಲ್ಲಿ ಸಾಲ ನೀಡಿದ್ದಾರೆ. ಬಡ್ಡಿ ಹಣ ಇಟ್ಟುಕೊಂಡು ಉಳಿದ ಹಣ ನೀಡುತ್ತಾರೆ. ಕೆಲ ಮೈಕ್ರೊ ಫೈನಾನ್ಸ್‌ನವರು ಪ್ರತಿದಿನ ಸಂಜೆ ವಸೂಲಿ ಮಾಡಿದರೆ, ಕೆಲವರು ವಾರಕ್ಕೊಮ್ಮೆ ವಸೂಲಿ ಮಾಡುತ್ತಿದ್ದಾರೆ.

ಹೂವು, ಹಣ್ಣು, ತರಕಾರಿ ಸೇರಿದಂತೆ ತಳ್ಳುವ ಗಾಡಿಗಳ ವ್ಯಾಪಾರಸ್ಥರು, ಬಡತನ ರೇಖೆಗಿಂತ ಕಡಿಮೆ ಇರುವವರು, ಕೂಲಿಕಾರ್ಮಿಕರ ಕುಟುಂಬಗಳ ನಿರ್ವಹಣೆಗೆ ಸಣ್ಣ ಪುಟ್ಟ ವ್ಯಾಪಾರಕ್ಕೆ, ಮಕ್ಕಳ ವಿದ್ಯಾಭ್ಯಾಸಕ್ಕೆ, ಪೋಷಕರ ಆಸ್ಪತ್ರೆ ಖರ್ಚಿಗಾಗಿ ಹಣ ಪಡೆದವರಿಗೆ ತೀವ್ರ ತೊಂದರೆ ಆಗಿದೆ. ಸಾಲ ಹಾಗೂ ಬಡ್ಡಿ ಹಣ ತೀರಿಸಲಾಗದೆ ಪರಿತಪಿಸುತ್ತಿದ್ದಾರೆ.




ಉದಯವಾಹಿನಿ ಚಿತ್ರ

**ತಳ್ಳುವ ಗಾಡಿಗಳಲ್ಲಿ ವ್ಯಾಪಾರ ಆಗದೆ ಕೂಲಿ ಕೆಲಸ ಹಣ ಸಿಗದೇ ಇರುವವರ ಪರಿಸ್ಥಿತಿ ಹೇಳತೀರದಾಗಿದೆ. ಒಂದು ವಾರ ತಪ್ಪಿದರೆ, ಮೈಕ್ರೊ ಫೈನಾನ್ಸ್‌ನವರು ಸಾಲದ ಹಾಗೂ ಬಡ್ಡಿ ಹಣ ವಸೂಲಿ ಮಾಡಲು ಮನೆಗಳ ಮುಂದೆ ಬರುತ್ತಾರೆ. ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾರೆ ಎನ್ನುವುದು ಸ್ಥಳೀಯರ ಆರೋಪ.**

---

# ಪೆಟ್ರೋಲ್ ಬಂಕ್ ನೌಕರನಿಂದ ಹಣ ಕಿತ್ತು ಪರಾರಿಯಾಗಿದ್ದ ನಾಲ್ವರ ಬಂಧನ

• ಉದಯವಾಹಿನಿ ಚನ್ನಪಟ್ಟಣ

ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿರುವ ಗಾಂಧಿ ಭವನದ ಪಕ್ಕದ ಪೆಟ್ರೋಲ್ ಬಂಕ್ ನೌಕರನ ಮೇಲೆ ಹಲ್ಲೆ ನಡೆಸಿ ಹಣ ಕಿತ್ತುಕೊಂಡು ಪರಾರಿಯಾಗಿದ್ದ ಬೆಂಗಳೂರಿನ ನಾಲ್ವರು ಆರೋಪಿಗಳನ್ನು ಇಲ್ಲಿಯ ಪುರ ಪೊಲೀಸರು ಬಂಧಿಸಿದ್ದಾರೆ.

ಬೆಂಗಳೂರಿನ ಲಕ್ಕಸಂದ್ರದ ಮಹಮ್ಮದ್ ಸೂಫಿಯಾನ್, ಉಮ್ರಾಜ್ ಪಾಷಾ, ಮೊಹಮ್ಮದ್ ಅಫ್ರಾ, ಸೈಯ್ಯದ್ ಶೋಹೆಬ್ ಬಂಧಿತರು.ಕೃತ್ಯಕ್ಕೆ ಬಳಸಿದ್ದ ಕಾರು ಹಾಗೂ ಚಾಕುವನ್ನು ಆರೋಪಿಗಳಿಂದ ವಶಪಡಿಸಿಕೊಳ್ಳಲಾಗಿದೆ. ನ.7 ರಂದು ಮುಂಜಾನೆ ಬೆಂಗಳೂರು–ಮೈಸೂರು ಹೆದ್ದಾರಿಯ ಪೆಟ್ರೋಲ್ ಬಂಕ್‌ಗೆ ತೆರಳಿದ್ದ ಆರೋಪಿಗಳು ಬಂಕ್ ನೌಕರನಿಗೆ ಐದು ಸಾವಿರ ನಗದು ಕೊಡುವಂತೆ ಮತ್ತು ಅದಕ್ಕೆ ಬದಲಾಗಿ ಮೊಬೈಲ್ ವಾಲೆಟ್‌ನಿಂದ ಹಣ ವರ್ಗಾಯಿಸುವುದಾಗಿ ಹೇಳಿದ್ದರು.

ಅದನ್ನು ನಂಬಿದ ನೌಕರ ಬ್ಯಾಗ್‌ನಿಂದ ಹಣ ತೆಗೆದು ಕೊಡಲು ಮುಂದಾದಾಗ ಮೊಬೈಲ್‌ನಿಂದ ಹಣ ವರ್ಗಾಯಿಸಲು ಸಾಧ್ಯವಾಗುತ್ತಿಲ್ಲ ಎಂದು ಯುವಕರ ತಂಡ ನಾಟಕವಾಡಿತ್ತು. ಆಗ ಹಣ ನೀಡಲು ನಿರಾಕರಿಸಿದ ಬಂಕ್ ನೌಕರ ಹಣವನ್ನು ಮತ್ತೆ ಬ್ಯಾಗ್‌ನೊಳಗೆ ಹಾಕಿಕೊಂಡಿದ್ದ.

ಆರೋಪಿಗಳು ಚಾಕುವಿನಿಂದ ಆತನ ಮೇಲೆ ಹಲ್ಲೆ ಮಾಡಿ ಬ್ಯಾಗ್‌ನಲ್ಲಿದ್ದ 22 ಸಾವಿರ ನಗದು ಕಿತ್ತುಕೊಂಡು ಪರಾರಿಯಾಗಿದ್ದರು. ಚನ್ನಪಟ್ಟಣದ ಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪೆಟ್ರೋಲ್ ಬಂಕ್‌ನಲ್ಲಿ ಅಳವಡಿಸಿದ್ದ ಸಿಸಿಟಿವಿ ದೃಶ್ಯ ಪರಿಶೀಲಿಸಿದ ಪೊಲೀಸರು ಆರೋಪಿಗಳ ಬಗ್ಗೆ ಮಾಹಿತಿ ಕಲೆ ಹಾಕಿದ್ದರು. ಸರ್ಕಲ್ ಇನ್ಸ್‌ಪೆಕ್ಟರ್ ರವಿಕಿರಣ್ ನೇತೃತ್ವದ ತಂಡ ಬೆಂಗಳೂರಿನ ಲಕ್ಕಸಂದ್ರದಲ್ಲಿದ್ದ ನಾಲ್ವರು ಆರೋಪಿಗಳನ್ನು ಬಂಧಿಸಿ ಕರೆತಂದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.



ಉದಯವಾಹಿನಿ ಚಿತ್ರ

---

# 30 ಎಕರೆ ಬೆಳೆ ನಾಶ: ರೈತರ ಪ್ರತಿಭಟನೆ

• ಉದಯವಾಹಿನಿ, ಕುಣಿಗಲ್

ತಾಲ್ಲೂಕಿನ ಬೇಗೂರು ಕೆರೆ ತುಂಬಿಸುವ ನೆಪದಲ್ಲಿ ಚನ್ನತಿಮ್ಮಯ್ಯನಪಾಳ್ಯದ 30 ಎಕರೆ ಬೆಳೆ ನಾಶವಾಗುತ್ತಿದ್ದು, ಅಧಿಕಾರಿಗಳು ಗಮನಹರಿಸಿಲ್ಲ ಎಂದು ಆರೋಪಿಸಿ ತಾಲ್ಲೂಕು ಕಚೇರಿ ಮುಂದೆ ರೈತರು ಪ್ರತಿಭಟನೆ ನಡೆಸಿ ತಹಶೀಲ್ದಾರ್ ರೇಷ್ಮಾ ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನಾ ಸಭೆಯಲ್ಲಿ ಮಾತನಾಡಿದ ರೈತ ಮುಖಂಡ ಹೊನ್ನಪ್ಪ, ತಾಲ್ಲೂಕಿನಲ್ಲಿ ಹೇಮಾವತಿ ನಾಲಾ ವಲಯದಲ್ಲಿ ನೀರು ಹರಿಯುತ್ತಿದ್ದು, ಬೇಗೂರು ಕೆರೆ ತುಂಬಿಸಲು ಹರಿಸುತ್ತಿರುವ ನೀರು ಚನ್ನತಿಮ್ಮಯ್ಯನಪಾಳ್ಯ ವ್ಯಾಪ್ತಿಯ ರೈತರ ಜಮೀನಿಗೆ ಹರಿಯುತ್ತಿದ್ದು, 30 ಎಕರೆ ಪ್ರದೇಶದಲ್ಲಿ ನೀರು ತುಂಬಿದ್ದು, ಬೆಳೆಗಳು ನಾಶವಾಗುವ ಹಂತಕ್ಕೆ ತಲುಪಿದೆ. ಕೆಲ ಸಮಯದವರೆಗೂ ನೀರು ಹರಿಸದಂತೆ ಅಧಿಕಾರಿಗಳಿಗೆ ಮನವಿ ಮಾಡಿದ್ದರೂ ಗಮನಹರಿಸದ ಕಾರಣ ಬೆಳೆ ನಾಶವಾಗುತ್ತಿದೆ.

ಹೇಮಾವತಿ ನಾಲಾ ವಲಯದ ಎಂಜಿನಿಯರ್ ಮತ್ತು ತಹಶೀಲ್ದಾರ್ ಅವರಿಗೆ ಮನವಿ ಮಾಡಿದ್ದರೂ, ಪ್ರಯೋಜನವಾಗಿಲ್ಲ ಎಂದರು. ಕೆಆರ್‌ಎಸ್ ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷ ಚನ್ನಯ್ಯ, ಮಂಜುನಾಥ್, ರಮೇಶ್, ಚಲುವಯ್ಯ, ಹಾಜರಿದ್ದರು.

---

# ಜಾಲ ತಾಣ: ದಾರಿ ತಪ್ಪಿದ ವಿದ್ಯಾರ್ಥಿಗಳು

• ಉದಯವಾಹಿನಿ ತುಮಕೂರು

ಸಾಮಾಜಿಕ ಜಾಲ ತಾಣಗಳಲ್ಲಿ ಕೇವಲ ನಕಾರಾತ್ಮಕ ವಿಚಾರ ಬಿತ್ತರಿಸುತ್ತಿದ್ದು, ವಿದ್ಯಾರ್ಥಿಗಳು ಸಹ ಇಂತಹ ವಿಚಾರಗಳ ಕಡೆಗೆ ಗಮನ ಹರಿಸುತ್ತಿರುವುದು ಆತಂಕದ ವಿಚಾರ ಎಂದು ರಾಮಕೃಷ್ಣ- ವಿವೇಕಾನಂದ ಆಶ್ರಮ ಸ್ವಾಮಿ ವೀರೇಶಾನಂದ ಸರಸ್ವತಿ ಎಚ್ಚರಿಸಿದರು. ನಗರದ ವಿದ್ಯೋದಯ ಕಾನೂನು ಕಾಲೇಜಿನಲ್ಲಿ ಈಚೆಗೆ ಪ್ರಸಕ್ತ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್ ಎಸ್‌ಎಸ್, ಕಾನೂನು ಸೇವಾ ಕೇಂದ್ರ, ಯೂಥ್ ರೆಡ್‌ಕ್ರಾಸ್, ರೆಡ್‌ರಿಬ್ಬನ್ ಕ್ಲಬ್ ಚಟುವಟಿಕೆಗಳಿಗೆ ಚಾಲನೆ ನೀಡಿ ಮಾತನಾಡಿದರು. ವಿದ್ಯಾರ್ಥಿಗಳಿಗೆ ಸಂಸ್ಕಾರಯುತ ಶಿಕ್ಷಣ ನೀಡದಿದ್ದರೆ ದೇಶದ ಅಭಿವೃದ್ಧಿಗೆ ತೊಡಕಾಗಲಿದೆ. ಸ್ವಾಮಿ ವಿವೇಕಾನಂದರ ತತ್ವ, ಸಂದೇಶಗಳನ್ನು ಶಾಲಾ, ಕಾಲೇಜುಗಳಲ್ಲಿ ತಿಳಿಸುವ ಮೂಲಕ ಉತ್ತಮ ಸಂಸ್ಕಾರ, ಮೌಲ್ಯಯುತ ಶಿಕ್ಷಣ ನೀಡಬೇಕಿದೆ ಎಂದು ಸಲಹೆ ನೀಡಿದರು. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಹಿಂಜರಿಕೆ ಹಾಗೂ ಕಷ್ಟಗಳ ಬಗ್ಗೆ ಚಿಂತಿಸುವುದನ್ನು ಬಿಡಬೇಕು. ಕಷ್ಟದಲ್ಲೇ ಬೆಳೆದು ಸಾಧನೆ ಮಾಡಿದ ವಿಶ್ವೇಶ್ವರಯ್ಯ ಅವರಂತಹ ವ್ಯಕ್ತಿಗಳ ಜೀವನ ಚರಿತ್ರೆಯನ್ನು ತಿಳಿಯುವ ಮೂಲಕ ನೀವೂ ಸಾಧನೆ ಮಾಡಬೇಕು ಎಂದು ಹೇಳಿದರು.

ಕಾಲೇಜಿನ ಮ್ಯಾನೇಜಿಂಗ್ ಟ್ರಸ್ಟಿ ಎಚ್.ಎಸ್. ರಾಜು, ಸಿಇಒ ಪ್ರೊ.ಕೆ.ಚಂದ್ರಣ್ಣ, ಪ್ರಾಂಶುಪಾಲರಾದ ಶಮಾಸ್ಸೆಯಿದಿ, ಐಕ್ಯುಎಸಿ ಸಮನ್ವಯಾಧಿಕಾರಿ ಎನ್.ಎಚ್.ಕುಮಾರ್ ಉಪಸ್ಥಿತರಿದ್ದರು.

ಕಳೆದ ಸಾಲಿನಲ್ಲಿ ಅತಿಹೆಚ್ಚು ಅಂಕಗಳಿಸಿದ, ಕ್ರೀಡೆ, ಎನ್‌ಎಸ್‌ಎಸ್‌ನಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.



ಉದಯವಾಹಿನಿ ಚಿತ್ರ

---

# ಆದಾಯದ ಮೂಲ ಅರಣ್ಯ ಕೃಷಿ: ಮಿಶ್ರ ಬೇಸಾಯ ಪದ್ಧತಿಯಲ್ಲೂ ಲಾಭ

## • ಕೃಷಿಯನ್ನು ಶ್ರದ್ಧೆಯಿಂದ ಹಾಗೂ ವೈಜ್ಞಾನಿಕವಾಗಿ ಮಾಡಿದರೆ ಉತ್ತಮ ಬದುಕು ಕಟ್ಟಿಕೊಳ್ಳಬಹುದು: ಅಶೋಕರೆಡ್ಡಿ

• ಉದಯವಾಹಿನಿ, ಚಿಂತಾಮಣಿ

ಕೈವಾರ ಹೋಬಳಿ ಮುತ್ತುಕದಹಳ್ಳಿ ಅಶೋಕರೆಡ್ಡಿ ಕುಟುಂಬ ಅರಣ್ಯ ಕೃಷಿ, ಮಿಶ್ರ ಬೇಸಾಯ ಪದ್ಧತಿ ಹಾಗೂ ಸಮಗ್ರ ಕೃಷಿಯಲ್ಲಿ ಉತ್ತಮ ಲಾಭಗಳಿಸುತ್ತಿದೆ. ಇದರಲ್ಲೇ ಉತ್ತಮ ಬದುಕು ರೂಪಿಸಿಕೊಂಡಿದೆ.

ಅಶೋಕರೆಡ್ಡಿ ಪದವೀಧರ. ಮಳೆ–ಬೆಳೆ ಇಲ್ಲ ಎಂದು ಉದ್ಯೋಗ ಅರಿಸಿ ಬೆಂಗಳೂರಿಗೆ ತೆರಳಿದ್ದರು.

ಕೋವಿಡ್ ಸಂದರ್ಭದಲ್ಲಿ ಗ್ರಾಮಕ್ಕೆ ವಾಪಸ್ ಬಂದವರು ಮತ್ತೆ ಉದ್ಯೋಗ ಅರಸಿಕೊಂಡು ಬೆಂಗಳೂರಿಗೆ ಹೋಗದೆ ಕೃಷಿಯಲ್ಲೇ ಬದುಕು ಕಟ್ಟಿಕೊಂಡಿದ್ದಾರೆ. ಕಡಿಮೆ ನೀರಾವರಿ ಬಳಕೆ ಮಾಡುವ ಅರಣ್ಯ ಕೃಷಿಗೆ ಆದ್ಯತೆ ನೀಡಿದ್ದಾರೆ. ಎರಡು ಎಕರೆ ಪ್ರದೇಶದಲ್ಲಿ 800 ಶ್ರೀಗಂಧದ ಮರ ಬೆಳೆಸಿದ್ದಾರೆ.

ಶ್ರೀಗಂಧ ಪರಾವಲಂಬಿ ಆಗಿರುವುದರಿಂದ ಅದರಲ್ಲಿ 100 ಹೆಬ್ಬೇವು, 50 ನಲ್ಲಿ, ನುಗ್ಗೆ, 50 ಮಹಾಗಣಿ, 20 ತೇಗದ ಮರ ಬೆಳೆಸಿದ್ದಾರೆ. ಶ್ರೀಗಂಧ ದೀರ್ಘಾವಧಿ ಬೆಳೆ ಆಗಿರುವುದರಿಂದ ಇತರ ಮರಗಳಿಂದ ಆದಾಯ ಪಡೆಯುತ್ತಾರೆ. ಮಿಶ್ರ ಬೆಳೆಯಾಗಿ ಮೇವು ಬೆಳೆಯುತ್ತಾರೆ. ಅಧಿಕ ಇಳುವರಿ ಕೊಡುವ ಜೋಳ, 3–4 ತಳಿ ಸೀಮೆಹುಲ್ಲು ಬೆಳೆದಿದ್ದಾರೆ. ಮೇವು ಮಾರಾಟದಿಂದ ಆದಾಯ ಗಳಿಸುತ್ತಾರೆ. ಎರಡು ಎಕರೆ ಪ್ರದೇಶದಲ್ಲಿ ರೇಷ್ಮೆ ಹುಳುಗಳಿಗೆ ಆಹಾರವಾದ ಹಿಪ್ಪುನೇರಳೆ ಸೊಪ್ಪು ಬೆಳೆಯುತ್ತಿದ್ದಾರೆ. ಮೂರು ಎಕರೆ ಹೊಲದಲ್ಲಿ ರಾಗಿ, ನೆಲಗಡಲೆ, ತೊಗರಿ, ಹುರುಳಿ ಬೆಳೆಯುತ್ತಾರೆ. ಮನೆಗೆ ಅಗತ್ಯವಾದ ಆಹಾರ ಪದಾರ್ಥ, ಸೊಪ್ಪು ಮೊದಲಾದ ತರಕಾರಿ ಬೆಳೆದುಕೊಳ್ಳುತ್ತಾರೆ.

ಟೊಮೆಟೊ, ಕೊತ್ತುಂಬರಿ ಸೊಪ್ಪು, ಕ್ಯಾರೆಟ್, ಕಲ್ಲಂಗಡಿ, ಬೀಟ್ ರೂಟ್, ಕುಂಬಳಕಾಯಿ, ಎಲೆಕೋಸು ಮತ್ತಿತರ ತರಕಾರಿ ಬೆಳೆ ಬೆಳೆಯುತ್ತಾರೆ. ಹೀಗೆ ನಾಲ್ಕಾರು ಬೆಳೆ ಬೆಳೆಯುವ ಮೂಲಕ ಕೃಷಿಯನ್ನು ಲಾಭದಾಯಕ ಮಾಡಿಕೊಳ್ಳಬಹುದು ಎನ್ನುತ್ತಾರೆ ಅಶೋಕರೆಡ್ಡಿ.

ಸಮಗ್ರ ಕೃಷಿಗೆ ಪೂರಕವಾಗಿ ಹುಣಸೆ, ಮಹಾಗಣಿ ಮರ ಬೆಳೆಸಿದ್ದಾರೆ. ಮೇಕೆ, ನಾಟಿ ಕೋಳಿ, ಮಲೆನಾಡ ಗಿಡ್ಡ ಹಸು ಸಾಕಾಣಿಕೆ ಮಾಡಿದ್ದಾರೆ. ತಮ್ಮ ತೋಟದಲ್ಲಿ ಸಿಗುವ ಹೆಬ್ಬೇವು ಸೊಪ್ಪು ಅನ್ನು ಮೇಕೆಗಳಿಗೆ ಆಹಾರವಾಗಿ ಬಳಸುತ್ತಾರೆ. ಸೀಮೆಹುಲ್ಲು ಹಸುಗಳಿಗೆ ಬಳಸುತ್ತಾರೆ. ಜೇನು ಕೃಷಿ ಸಹ ಕೈಗೊಂಡಿದ್ದಾರೆ.

ಅವರ ತೋಟದಲ್ಲಿ ಮೂರು ಕೊಳವೆ ಬಾವಿ, ಎರಡು ಕೃಷಿ ಹೊಂಡ ಇವೆ. ಅವರು ಯಾವುದೇ ಒಂದು ಬೆಳೆಗೆ ಜೋತು ಬೀಳದೆ ವಿವಿಧ ಬೆಳೆ ಬೆಳೆಯುತ್ತಾರೆ. ಒಂದು ಬೆಳೆ ಕೈಕೊಟ್ಟರೂ ಮತ್ತೊಂದು ಕೈಹಿಡಿಯುತ್ತದೆ.

ಕೃಷಿಯನ್ನು ಶ್ರದ್ಧೆಯಿಂದ ಹಾಗೂ ವೈಜ್ಞಾನಿಕವಾಗಿ ಮಾಡಿದರೆ ಉತ್ತಮ ಬದುಕು ಕಟ್ಟಿಕೊಳ್ಳಬಹುದು. ಆದರೆ, ಕೃಷಿಕರದು ಕಷ್ಟಕರವಾದ ಕೆಲಸ. ಹಗಲು–ರಾತ್ರಿ, ಮಳೆ–ಬಿಸಿಲು ಎನ್ನದೆ ದುಡಿಯಬೇಕಾಗುತ್ತದೆ. ಅನಾವೃಷ್ಟಿಯಿಂದ ಬೆಳೆ ನಷ್ಟ, ಜತೆಗೆ ಬೆಲೆ ಕುಸಿತದ ಕಾರಣಗಳಿಂದ ಇತ್ತೀಚಿನ ವರ್ಷಗಳಲ್ಲಿ ಕೃಷಿಯಿಂದ ವಿಮುಖರಾಗಿ ಬೇರೆ ಬೇರೆ ಕ್ಷೇತ್ರಗಳಿಗೆ ವಲಸೆ ಹೋಗುತ್ತಿದ್ದಾರೆ ಎನ್ನುತ್ತಾರೆ ಅಶೋಕರೆಡ್ಡಿ.

ರೈತರು ಪೂರ್ವಿಕರ ಕೃಷಿ ಪದ್ಧತಿಗೆ ಮರುಳಬೇಕು. ಹಿಂದಿನ ಕಾಲದಲ್ಲಿ ಮನೆಗೆ ಅಗತ್ಯವಾದ ಈರುಳ್ಳಿ, ಬೆಳ್ಳುಳ್ಳಿ, ಹಸಿಮೆಣಸಿನ ಕಾಯಿ, ಕೊತ್ತಂಬರಿ, ಸೊಪ್ಪು ಸೇರಿದಂತೆ ಅಗತ್ಯವಾದ ಎಲ್ಲಾ ತರಕಾರಿ ಬೆಳೆಯುತ್ತಿದ್ದರು. ಮಳೆಯಾಶ್ರಿತ ಕೃಷಿ ಮಾಡುತ್ತಿದ್ದರು. ಆಧುನಿಕ ಯುಗದಲ್ಲಿ ರೈತರು ಹೆಚ್ಚಿನ ಲಾಭದ ಆಸೆಯಿಂದ ಹಿಂದೆ ಬೆಳೆಯುತ್ತಿದ್ದ ಎಲ್ಲ ಬೆಳೆಗಳಿಗೂ ತಿಲಾಂಜಲಿ ನೀಡಿ ಅಧಿಕ ಲಾಭದ ಆಸೆಯಿಂದ ಟೊಮೆಟೊ ಮತ್ತಿತರ ಒಂದೇ ಬೆಳೆಗೆ ಜೋತು ಬೀಳುತ್ತಿದ್ದಾರೆ. ಅಕಸ್ಮಾತ್ ಬೆಳೆ ಹಾಳಾದರೆ ಅಥವಾ ಬೆಲೆ ಕುಸಿತವಾದರೆ ರೈತ ಸಂಪೂರ್ಣವಾಗಿ ನೆಲಕಚ್ಚುತ್ತಾನೆ. ಮಿಶ್ರ ಬೆಳೆ ಪದ್ಧತಿ ಅಳವಡಿಸಿಕೊಂಡರೆ ಒಂದಲ್ಲ ಒಂದು ಬೆಳೆ ಕೈಹಿಡಿಯುತ್ತದೆ ಎನ್ನುವುದು ಅಶೋಕರೆಡ್ಡಿ ಅಭಿಪ್ರಾಯ.



ಉದಯವಾಹಿನಿ ಚಿತ್ರ

**ಕಡಿಮೆ ನೀರಾವರಿ ಬಳಕೆ**

**ಸರ್ಕಾರ ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯ, ಕೃಷಿ ವಿಜ್ಞಾನ ಕೇಂದ್ರಗಳ ಮೂಲಕ ರೈತರಿಗೆ ಮಾರ್ಗದರ್ಶನ ನೀಡಲಾಗುತ್ತಿದೆ. ಆದರೆ, ಬಹುತೇಕ ರೈತರು ನಿರಾಸಕ್ತಿ ತೋರುತ್ತಾರೆ. ಅವರು ಆಯೋಜಿಸುವ ಕೃಷಿ ಮೇಳ, ತರಬೇತಿಗಳಲ್ಲಿ ಭಾಗವಹಿಸುವುದಿಲ್ಲ. ಆಧುನಿಕ ತಾಂತ್ರಿಕ ಯುಗದಲ್ಲಿ ಆಯಾ ಕಾಲದ ಋತುಮಾನ, ಅವಲೋಕನ ಮಾಡಿ ಬೆಳೆ ಬೆಳೆಯಬೇಕು -ಅಶೋಕರೆಡ್ಡಿ, ರೈತ**

### ಶ್ರೀಗಂಧ ಬೆಳೆಯುವ ಅವಕಾಶ

**ಸರ್ಕಾರ ಶ್ರೀಗಂಧ ಬೆಳೆಯುವ ಅವಕಾಶ ರೈತರಿಗೆ ನೀಡಿದೆ. ಆದರೆ, ಅನೇಕ ಗೊಂದಲಗಳಿಂದ ರೈತರು ಕಂಗಾಲಾಗಿದ್ದಾರೆ. ಅರಣ್ಯ ಇಲಾಖೆ ವ್ಯಾಪ್ತಿಯಲ್ಲಿರುವುದರಿಂದ ಕೊಯ್ಲಿಗೆ ಅನುಮತಿ ಪಡೆಯಬೇಕು. ತೃಪ್ತಿಕರವಾದ ದರ ನೀಡುವುದಿಲ್ಲ. ಕಳ್ಳತನ ಪ್ರಕರಣಗಳಲ್ಲಿ ಸೂಕ್ತ ಕ್ರಮ ಕೈಗೊಳ್ಳುವುದಿಲ್ಲ. ರೈತರಿಗೆ ಬೆಳೆಯಲು ಅವಕಾಶ ನೀಡುವಾಗ ಅದನ್ನು ತೋಟದ ಬೆಳೆಯಾಗಿ ತೋಟಗಾರಿಕೆ ಇಲಾಖೆಗೆ ವಹಿಸಬೇಕು ಎಂದು ಒತ್ತಾಯಿಸುತ್ತಾರೆ.**

---

## ಮಿನಿ ನ್ಯೂಸ್

### ಕಾಡಾನೆಗಳ ನಡುವೆ ಕಾಳಗ: ಗಂಡಾನೆ ಸಾವು

• ಉದಯವಾಹಿನಿ ಕೊಡಗು

ಸಮೀಪದ ದುಬಾರೆ ಮೀಸಲು ಅರಣ್ಯದಲ್ಲಿ ಕಾಡಾನೆಗಳ ನಡುವಿನ ಕಾಳಗದಲ್ಲಿ 35 ವರ್ಷ ವಯಸ್ಸಿನ ಗಂಡಾನೆ ಮೃತಪಟ್ಟಿದೆ.ಎರಡು ದಿನಗಳ ಹಿಂದ ಕುಶಾಲನಗರ ಅರಣ್ಯ ವ್ಯಾಪ್ತಿಯ ದುಬಾರೆ ಮೀಸಲು ಅರಣ್ಯದ ಲಿಂಗಾಪುರ ಗೇಟ್ ಸಮೀಪದ ಅರಣ್ಯದಲ್ಲಿ ಕಾಡಾನೆಗಳ ನಡುವೆ ಕಾಳಗ ನಡೆದಿದ್ದು, ಗಂಡಾನೆ ಮೃತಪಟ್ಟಿದೆ.

ಪಶು ವೈದ್ಯ ಚೆಟ್ಟಿಯಪ್ಪ ಮರಣೋತ್ತರ ಪರೀಕ್ಷೆ ನಡೆಸಿದ ನಂತರ ಅರಣ್ಯದಲ್ಲೇ ಅಂತ್ಯಸಂಸ್ಕಾರ ನಡೆಸಲಾಯಿತು. ಈ ವೇಳೆ ಎಸಿಎಫ್ ಗೋಪಾಲ್, ವಲಯ ಅರಣ್ಯ ಅಧಿಕಾರಿ ರತನ್ ಕುಮಾರ್, ಮಾಲ್ದಾರೆ ಉಪ ವಲಯ ಅಧಿಕಾರಿ ಹಂಝು ಭಾಗವಹಿಸಿದ್ದರು.

### ತೋಟದಲ್ಲಿ ಮೇಯಲು ಬರುತ್ತವೆಂದು ವಿಷ ಹಾಕಿ ಕೋಳಿಗಳನ್ನು ಕೊಂದ ವ್ಯಕ್ತಿ

• ಉದಯವಾಹಿನಿ, ಮುಳಬಾಗಿಲು

ತೋಟದಲ್ಲಿ ಮೇಯಲು ಬರುತ್ತವೆ ಎಂಬ ಸಣ್ಣ ವಿಚಾರಕ್ಕೆ ವಿಷ( ಫೋರೇಟ್) ಸಿಂಪಡಿಸಿ 27 ನಾಟಿ ಕೋಳಿಗಳನ್ನು ಕೊಂದಿರುವ ಘಟನೆ ತಾಲ್ಲೂಕಿನ ಗುಟ್ಲೂರಿನಲ್ಲಿ ನಡೆದಿದೆ ಬೆಳಗ್ಗೆ ನಡೆದಿದೆ.

ಸುತ್ತಮುತ್ತಲಿನ ಕೋಳಿಗಳು ತೋಟಕ್ಕೆ ಬಂದು ಓಡಾಡುತ್ತವೆ ಎನ್ನುವ ಕಾರಣಕ್ಕೆ ಮೂರು ಜನರಿಗೆ ಸೇರಿದ 27 ಕೋಳಿಗಳನ್ನು ಜಮೀನು ಮಾಲೀಕ ಅಂಬರೀಶ್ ನಾರಾಯಣಪ್ಪ ಫೋರೇಟ್ ವಿಷ ಹಾಕಿ ಸಾಯಿಸಿದ್ದಾರೆ ಎಂದು ಕೋಳಿ ಮಾಲೀಕ ಶಿವರಾಜ್ ದೂರು ನೀಡಿದ್ದಾರೆ. ಗ್ರಾಮದ ಶಿವರಾಜ್ ಎಂಬುವವರಿಗೆ ಸೇರಿದ 18 , ನಾಗರಾಜ್ ಎಂಬುವವರ 7 ಹಾಗೂ ಶಿವಪ್ಪ ಎಂಬುವವರ 3 ಕೋಳಿಗಳನ್ನು ಅಂಬರೀಶ್ ನಾರಾಯಣಪ್ಪ ಸಾಯಿಸಿದ್ದಾರೆ. ಕೋಳಿಗಳನ್ನು ಸಾಯಿಸಿರುವವರ ಕಡೆಯಿಂದ ಪರಿಹಾರ ಕೊಡಿಸಿ ಎಂದು ಪೊಲೀಸರಲ್ಲಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಕೋಳಿ ಮಾಲೀಕರು ಹೇಳಿದ್ದಾರೆ.

ಕೋಳಿ ಹಾಗೂ ಮೊಟ್ಟೆಗಳನ್ನು ಮಾರಿ ಜೀವನ ಸಾಗಿಸುತ್ತಿದ್ದೆವು. ಸಣ್ಣ ಕಾರಣಕ್ಕೆ ಕೋಳಿಗಳನ್ನು ಕೊಂದಿದ್ದಾರೆ. ಈ ಬಗ್ಗೆ ಮುಳಬಾಗಿಲು ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಕೋಳಿಗಳನ್ನು ಕೊಂದಿರುವವರ ವಿರುದ್ಧ ಕ್ರಮ ಜರುಗಿಸಬೇಕು ಹಾಗೂ ಇದಕ್ಕೆ ಸೂಕ್ತ ಪರಿಹಾರ ದೊರಕಿಸಿಕೊಡಬೇಕು' ಎಂದು ಕೋಳಿ ಮಾಲೀಕ ಶಿವರಾಜ್ ಆಗ್ರಹಿಸಿದ್ದಾರೆ.

### ವ್ಯಾಪಾರಿಗೆ 80 ಲಕ್ಷ ವಂಚನೆ

• ಉದಯವಾಹಿನಿ ರಾಮನಗರ

ಆನ್‌ಲೈನ್ ವಂಚಕರ ಬಲೆಗೆ ಸಿಲುಕಿದ ನಗರದ ವ್ಯಾಪಾರಿಯೊಬ್ಬರು ಬರೋಬ್ಬರಿ 80 ಲಕ್ಷ ಕಳೆದುಕೊಂಡಿದ್ದಾರೆ. ಈ ಕುರಿತು ನಗರದ ಸಿಇಎನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ನಗರದ ಕೂರಂ ಪಾಷಾ ಹಣ ಕಳೆದುಕೊಂಡ ವ್ಯಾಪಾರಿ. ವಂಚಕರು ವ್ಯಾಪಾರಿಯನ್ನು ವಾಟ್ಸ್ ಆಪ್ ಗ್ರೂಪ್‌ಗೆ ಸೇರಿಸಿದ್ದರು.ಅದರಲ್ಲಿ ಜೆರೋದಾ ಓಟಿಸಿ ಅಕೌಂಟ್ ಮಾಡಿಸಿದರು. ಅದರಲ್ಲಿ ಬಂದ ಸೂಚನೆ ಅನುಸರಿಸಿದ ವ್ಯಾಪಾರಿಯು ಟ್ರೇಡಿಂಗ್‌ಗಾಗಿ ವಂಚಕರು ತಿಳಿಸಿದ ವಿವಿಧ ಬ್ಯಾಂಕ್ ಅಕೌಂಟ್ ನಂಬರ್‌ಗಳಿಗೆ ಹಂತಹಂತವಾಗಿ 80,34,563 ಹಣ ಹಾಕಿದ್ದಾರೆ. ಕೊನೆಗೆ ಮೋಸ ಹೋಗಿರುವುದು ಗೊತ್ತಾಗಿ ವಂಚಕರ ವಿರುದ್ಧ ದೂರು ದಾಖಲಿಸಿದ್ದಾರೆ.

### ನಂದಿ ವಿಗ್ರಹಕ್ಕೆ 'ಮಹಾಮಸ್ತಕಾಭಿಷೇಕ'

• ಉದಯವಾಹಿನಿ ಮೈಸೂರು

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿರುವ ದೇಶದ ಮೂರನೇ ಅತೀ ದೊಡ್ಡ ನಂದಿ ವಿಗ್ರಹಕ್ಕೆ ಮಹಾಮಸ್ತಾಭಿಷೇಕ ನೆರವೇರಿಸಲಾಯಿತು. ಹೌದು.. ಭಾರತದ ಮೂರನೇ ಅತಿದೊಡ್ಡ ನಂದಿ ವಿಗ್ರಹ ಎಂಬ ಖ್ಯಾತಿ ಪಡೆದಿರುವ ಚಾಮುಂಡಿ ಬೆಟ್ಟದ ನಂದಿಗೆ ಇಂದು ಮಹಾಮಸ್ತಾಭಿಷೇಕ ನೆರವೇರಿದ್ದು, ಚಾಮುಂಡಿ ಬೆಟ್ಟ ಬಳಗ ಚಾರಿಟಬಲ್ ಟ್ರಸ್ಟ್‌ನಿಂದ 19ನೇ ವರ್ಷದ ಮಹಾ ಮಸ್ತಾಭಿಷೇಕ ನೆರವೇರಿಸಿದೆ.

ಅಭಿಷೇಕದಲ್ಲಿ ನಂದಿ ವಿಗ್ರಹಕ್ಕೆ 34 ಬಗೆಯ ದ್ರವ್ಯಗಳು ಸೇರಿದಂತೆ 38 ವಿಧಗಳಲ್ಲಿ ಅಭಿಷೇಕ ನೆರವೇರಿಸಲಾಯಿತು. ಈ ನಂದಿ ವಿಗ್ರಹವು 1659 ರಿಂದ 1673ರವರೆಗೆ ಮೈಸೂರು ಸಂಸ್ಥಾನವನ್ನಾಳಿದ ದೊಡ್ಡ ದೇವರಾಜ ಒಡೆಯರ್ ಕಾಲದಲ್ಲಿ ನಿರ್ಮಾಣವಾಗಿದ್ದು, 350ಕ್ಕೂ ಅಧಿಕ ವರ್ಷಗಳ ಇತಿಹಾಸ ಹೊಂದಿದೆ.

ಇದನ್ನು ಚಾಮುಂಡಿ ಬೆಟ್ಟವನ್ನು ಕಾಲ್ನಡಿಗೆಯ ಮೂಲಕ ಹತ್ತುವಾಗ 700 ಮೆಟ್ಟಿಲುಗಳ ಬಳಿ ಏಕಶಿಲಾ ಮೂರ್ತಿಯನ್ನಾಗಿ ಕೆತ್ತನೆ ಮಾಡಲಾಗಿದೆ. ಅಲ್ಲದೇ ಈ ವಿಗ್ರಹವು 16 ಅಡಿ ಎತ್ತರ ಹಾಗೂ 25 ಅಡಿ ಉದ್ದವಿದೆ. ಚಾಮುಂಡಿ ಬೆಟ್ಟದಲ್ಲಿರುವ ಈ ನಂದಿ ವಿಗ್ರಹವು ತಮಿಳುನಾಡಿನ ತಂಜಾವೂರಿನ ಬೃಹದೇಶ್ವರ ದೇವಾಲಯದ ನಂದಿ ಹಾಗೂ ಆಂಧ್ರ ಪ್ರದೇಶದ ಲೇಪಾಕ್ಷಿಯ ವೀರಭದ್ರ ದೇವಸ್ಥಾನದ ನಂದಿಯನ್ನು ಬಿಟ್ಟರೆ, ಇದೇ ದೇಶದ ಮೂರನೇ ಅತೀ ದೊಡ್ಡ ನಂದಿ ವಿಗ್ರಹವಾಗಿದೆ.

### ಅತ್ಯಾಚಾರಿ ಸಹೋದರನಿಗೆ ಜೀವಾವಧಿ ಶಿಕ್ಷೆ

• ಉದಯವಾಹಿನಿ ತುಮಕೂರು

ಬಾಲಕಿ ಮೇಲೆ ಅತ್ಯಾಚಾರ ನಡೆಸಿ, ಗರ್ಭಿಣಿಯಾಗಲು ಕಾರಣನಾದ ವರಸೆಯಲ್ಲಿ ಸಹೋದರನಾಗಬೇಕಿದ್ದ ವ್ಯಕ್ತಿಗೆ ಜೀವಾವಧಿ (ಸಾಯುವವರೆಗೆ) ಶಿಕ್ಷೆ ವಿಧಿಸಿ ಜಿಲ್ಲಾ ಹೆಚ್ಚುವರಿ ಹಾಗೂ ಸೆಷನ್ಸ್ (ಪೋಕ್ಸೊ) ನ್ಯಾಯಾಲಯ ಆದೇಶಿಸಿದೆ.ಗುಬ್ಬಿ ತಾಲ್ಲೂಕು ನಿಟ್ಟೂರು ಹೋಬಳಿಯ ಹಳ್ಳಿಯೊಂದರ ಮೋಹಿತ್ ಕುಮಾರ್ ಎಂಬಾತನಿಗೆ ಜೀವಾವಧಿ ಶಿಕ್ಷೆಯ ಜತೆಗೆ 3.50 ಲಕ್ಷ ದಂಡವನ್ನು ವಿಧಿಸಲಾಗಿದೆ.

ಈಗಾಗಲೇ ಮದುವೆಯಾಗಿದ್ದ ಮೋಹಿತ್ ಕುಮಾರ್, ವರಸೆಯಲ್ಲಿ ಸಹೋದರಿ ಆಗಬೇಕಿದ್ದ 13 ವರ್ಷದ ಬಾಲಕಿಯನ್ನು ಪುಸಲಾಯಿಸಿ ಅತ್ಯಾಚಾರ ನಡೆಸಿದ್ದ. ನಂತರ ಬಾಲಕಿಯನ್ನು ಬೆದರಿಸಿ ನಿರಂತರವಾಗಿ ಅತ್ಯಾಚಾರ ಮಾಡಿದ್ದ. ಬಾಲಕಿ ಗರ್ಭಿಣಿಯಾದ ನಂತರ ಅತ್ಯಾಚಾರದ ವಿಚಾರ ಮನೆಯವರಿಗೆ ಗೊತ್ತಾಗಿದೆ.

ಈ ಸಂಬಂಧ ಗುಬ್ಬಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ತನಿಖೆ ನಡೆಸಿದ ಇನ್ಸ್‌ಪೆಕ್ಟರ್ ಗೋಪಿನಾಥ್, ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶರು ಅಪರಾಧಿಗೆ ಶಿಕ್ಷೆ ವಿಧಿಸಿದ್ದಾರೆ.

ದಂಡದ ಹಣದಲ್ಲಿ 3.45 ಲಕ್ಷ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ 7 ಲಕ್ಷ ಪರಿಹಾರ ಸೇರಿ ಒಟ್ಟು ?10.45 ಲಕ್ಷ ಪರಿಹಾರವನ್ನು ನೊಂದ ಬಾಲಕಿಗೆ ನೀಡುವಂತೆ ಆದೇಶಿಸಿದ್ದಾರೆ.

ಬಾಲಕಿ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕಿ ಕೆ.ಎಸ್. ಆಶಾ ವಾದ ಮಂಡಿಸಿದ್ದರು.

ಅಂತರಾಳದಿಂದ... EDITORIAL

# ಮತ್ತೆ ಏರಿದ ಹಣದುಬ್ಬರ; ರೆಪೊ ದರ ಇಳಿಕೆ ಸದ್ಯಕ್ಕಿಲ್ಲ

ಚಿಲ್ಲರೆ ಹಣದುಬ್ಬರ ದರವು ನಿಯಂತ್ರಣದಲ್ಲಿ ಇಲ್ಲ ಹಾಗೂ ಅದನ್ನು ನಿಯಂತ್ರಣಕ್ಕೆ ತರಲು ಹಲವು ತಿಂಗಳೇ ಬೇಕಾಗುತ್ತವೆ ಎಂಬುದು ಗೊತ್ತಿರುವ ಸಂಗತಿಯೇ ಆಗಿತ್ತು. ಅಲ್ಪಾವಧಿಯಲ್ಲಿ ಚಿಲ್ಲರೆ ಹಣದುಬ್ಬರ ಪ್ರಮಾಣವು ಹೆಚ್ಚಿನ ಮಟ್ಟದಲ್ಲಿಯೇ ಇರುತ್ತದೆ ಎಂಬ ಅಂದಾಜು ಭಾರತೀಯ ರಿಸರ್ವ್ ಬ್ಯಾಂಕ್‌ಗೆ (ಆರ್‌ಬಿಐ) ಕೂಡ ಇತ್ತು. ಆದರೆ ಅಕ್ಟೋಬರ್ ತಿಂಗಳಲ್ಲಿ ಚಿಲ್ಲರೆ ಹಣದುಬ್ಬರ ದರದ ಪ್ರಮಾಣವು ಶೇಕಡ 6.2ಕ್ಕೆ ಹೆಚ್ಚಳ ಕಂಡಿರುವುದು, ಅಂದರೆ 14 ತಿಂಗಳ ಗರಿಷ್ಠ ಮಟ್ಟವನ್ನು ಅದು ತಲುಪಿರುವುದು ಬಹಳ ಆಶ್ಚರ್ಯ ಮೂಡಿಸುವಂಥದ್ದು, ಚಿಲ್ಲರೆ ಹಣದುಬ್ಬರ ದರವು ಸೆಪ್ಟೆಂಬರ್ ತಿಂಗಳಿನಲ್ಲಿ ಶೇ 5.5ರಷ್ಟು ಇತ್ತು. ಅಕ್ಟೋಬನರ್‌ನಲ್ಲಿ ದಾಖಲಾಗಿರುವ ಹಣದುಬ್ಬರ ಪ್ರಮಾಣವು ಆರ್‌ಬಿಐ ನಿಗದಿ ಮಾಡಿಕೊಂಡಿರುವ ಮಿತಿಗಿಂತ ಹೆಚ್ಚು. ಚಿಲ್ಲರೆ ಹಣದುಬ್ಬರ ದರವನ್ನು ಶೇ 4ರಿಂದ ಶೇ 6ರ ನಡುವೆ ನಿಯಂತ್ರಿಸುವ ಹೊಣೆ ಆರ್‌ಬಿಐ ಮೇಲಿದೆ.

> **ಆಹಾರ ವಸ್ತುಗಳ ಬೆಲೆ ಹೆಚ್ಚಳ, ಅದರಲ್ಲೂ ಮುಖ್ಯವಾಗಿ ತರಕಾರಿಗಳ ಬೆಲೆಯಲ್ಲಿನ ಏರಿಕೆ. ಚಿಲ್ಲರೆ ಹಣದುಬ್ಬರ ದರವು ಹೆಚ್ಚಾಗುವಂತೆ ಮಾಡಿದೆ. ಸೆಪ್ಟೆಂಬರ್ ತಿಂಗಳಲ್ಲಿ ತರಕಾರಿಗಳ ಬೆಲೆ ಏರಿಕೆ ಪ್ರಮಾಣ ಶೇ.36ರಷ್ಟು ಇತ್ತು. ಅಕ್ಟೋಬರ್ ತಿಂಗಳಲ್ಲಿ ಅದು ಶೇ 42ರಷ್ಟು ಆಗಿದೆ. ಏಕದಳ ಧಾನ್ಯಗಳ ಬೆಲೆಯಲ್ಲಿ ಶೇ 7ರಷ್ಟು ಹಾಗೂ ದ್ವಿದಳ ಧಾನ್ಯಗಳ ಬೆಲೆಯಲ್ಲಿ ಶೇ 8ರಷ್ಟು ಏರಿಕೆ ದಾಖಲಾಗಿದೆ. ಅಡುಗೆಯಲ್ಲಿ ಬಳಸುವ ವಿವಿಧ ಬಗೆಯ ಎಣ್ಣೆಗಳ ಬೆಲೆ ಕೂಡ ಏರಿಕೆ ಕಂಡಿದೆ.**

ಮುಂದಿನ ತಿಂಗಳುಗಳಲ್ಲಿ ಆಹಾರ ವಸ್ತುಗಳ ಬೆಲೆಯಲ್ಲಿ ಇಳಿಕೆ ಕಂಡುಬರುವ ನಿರೀಕ್ಷೆ ಇದೆ. ಮುಂಗಾರು ಮಳೆಯು ಆಹಾರ ಬೆಳೆಗಳಿಗೆ ಅನುಕೂಲಕರವಾದ ರೀತಿಯಲ್ಲಿ ಚೆನ್ನಾಗಿ ಆಗಿದೆ. ಹೊಸದಾಗಿ ಕಟಾವು ಮಾಡಲಾದ ಬೆಳೆಗಳು ಮಾರುಕಟ್ಟೆಗೆ ಬಂದು, ಅವುಗಳ ಬೆಲೆಯಲ್ಲಿ ಒಂದಿಷ್ಟು ಇಳಿಕೆ ಕಂಡುಬರುವ ಸಾಧ್ಯತೆ ಇದೆ. ಹಿಂಗಾರು ಬೆಳೆ ಕೂಡ ಚೆನ್ನಾಗಿ ಆಗುವ ನಿರೀಕ್ಷೆ ಇದೆ. ಏಕದಳ ಧಾನ್ಯಗಳ ಸಂಗ್ರಹವು ಉತ್ತಮ ಮಟ್ಟದಲ್ಲಿ ಇರುವ ಕಾರಣ. ಅವುಗಳ ಬೆಲೆ ಏರಿಕೆಗೆ ಮಿತಿ ಇರುತ್ತದೆ. ಆದರೆ, ಅಕ್ಟೋಬರ್‌ನಲ್ಲಿ ದಾಖಲಾಗಿರುವ ಭಾರಿ ಪ್ರಮಾಣದ ಏರಿಕೆಯನ್ನು ಗಮನದಲ್ಲಿ ಇರಿಸಿಕೊಂಡು. ಪ್ರಸಕ್ತ ಹಣಕಾಸು ವರ್ಷದ ಮೂರನೆಯ ತ್ರೈಮಾಸಿಕದಲ್ಲಿ ಚಿಲ್ಲರೆ ಹಣದುಬ್ಬರ ಪ್ರಮಾಣ ಶೇ 4.8ರಷ್ಟು, ನಾಲ್ಕನೆಯ ತ್ರೈಮಾಸಿಕದಲ್ಲಿ ಶೇ 4.2ರಷ್ಟು ಇರಬಹುದು ಎಂದು ಆರ್‌ಬಿಐ ಮಾಡಿದ್ದ ತನ್ನ ಈ ಮೊದಲಿನ ಅಂದಾಜನ್ನು ಈಗ ಪರಿಷ್ಕರಿಸಬಹುದು. ಜಾಗತಿಕ ಪ್ರಭಾವಗಳ ಕಾರಣದಿಂದಾಗಿ ತೈಲ ಬೆಲೆಯು ಹೆಚ್ಚಳ ಕಂಡರೆ, ಅದರಿಂದಲೂ ಹಣದುಬ್ಬರ ಪ್ರಮಾಣ ಇನ್ನಷ್ಟು ಜಾಸ್ತಿ ಆಗುವ ಸಾಧ್ಯತೆ ಇದೆ. ಇತ್ತ, ಅಮೆರಿಕದ ಡಾಲರ್ ಎದುರು ಭಾರತದ ರೂಪಾಯಿ ಮೌಲ್ಯ ದಿನೇದಿನೇ ಕುಸಿಯುತ್ತಿರುವುದು ನಕಾರಾತ್ಮಕ ಪರಿಣಾಮ ಉಂಟುಮಾಡಲಿದೆ. ಆಹಾರ ವಸ್ತುಗಳು ಹಾಗೂ ಇಂಧನ ಹೊರತುಪಡಿಸಿ ಇತರ ಸರಕುಗಳು ಮತ್ತು ಸೇವೆಗಳ ಬೆಲೆ ಏರಿಕೆ ಪ್ರಮಾಣ ಕೂಡ ಶೇ 3.7ಕ್ಕೆ ಹೆಚ್ಚಳ ಕಂಡಿದೆ. ಸಗಟು ಹಣದುಬ್ಬರ ದರವು ನಾಲ್ಕು ತಿಂಗಳ ಗರಿಷ್ಠ ಮಟ್ಟವನ್ನು ತಲುಪಿದೆ. ಅರ್ಥವ್ಯವಸ್ಥೆಯ ಬೆಳವಣಿಗೆಯು ಮಂದವಾಗುವ ಸೂಚನೆಗಳು ಈಗಾಗಲೇ ಇವೆ. ಆರ್ಥಿಕ ವರ್ಷದ ಎರಡನೆಯ ತ್ರೈಮಾಸಿಕದಲ್ಲಿ ದೇಶದ ಒಟ್ಟು ಆಂತರಿಕ ಉತ್ಪಾದನೆಯ (ಜಿಡಿಪಿ) ಬೆಳವಣಿಗೆ ದರವು ಶೇ. 7ರಷ್ಟು ಇರಲಿದೆ ಎಂಬುದು ಆರ್‌ಬಿಐ ಅಂದಾಜು. ಇಡೀ ವರ್ಷಕ್ಕೆ ಜಿಡಿಪಿ ಬೆಳವಣಿಗೆಯು ಶೇ 7.2ರಷ್ಟು ಇರಲಿದೆ ಎಂದು ಅದು ಅಂದಾಜು ಮಾಡಿದೆ. ಆದರೆ ಬೆಳವಣಿಗೆ ದರವು ಶೇ 7ಕ್ಕಿಂತ ಕಡಿಮೆ ಇರಲಿದೆ ಎಂಬ ಅಂದಾಜುಗಳೂ ಇವೆ. ಅರ್‌ಬಿಐನ ಹಣಕಾಸು ನೀತಿ ಸಮಿತಿಯು (ಎಂಪಿಸಿ) ಕಳೆದ ತಿಂಗಳು ನಡೆದ ಸಭೆಯಲ್ಲಿ ರೆಪೊ ದರವನ್ನು ಯಥಾಸ್ಥಿತಿಯಲ್ಲಿ ಉಳಿಸಿಕೊಳ್ಳುವ ತೀರ್ಮಾನ ಕೈಗೊಂಡಿತು. ಆದರೆ ತನ್ನ ಹಣಕಾಸು ನಿಲುವು 'ಹೊಂದಾಣಿಕೆಯನ್ನು ಹಿಂಪಡೆಯುವುದು' ಎಂದು ಇದ್ದಿದ್ದನ್ನು 'ತಟಸ್ಥ' ಎಂದು ಬದಲಾಯಿಸಿತು. ಚಿಲ್ಲರೆ ಹಣದುಬ್ಬರ ದರವನ್ನು ಶೇ 4ಕ್ಕೆ ಇಳಿಸುವುದು ತನ್ನ ಆದ್ಯತೆ ಎಂಬುದನ್ನು ಆರ್‌ಬಿಐ ಸ್ಪಷ್ಟಪಡಿಸಿದ್ದರೂ ಹಣಕಾಸಿನ ನಿಲುವಿನಲ್ಲಿ ಬದಲಾವಣೆ ತಂದಿರುವುದು ಮುಂದೆ ರೆಪೊ ದರ ಇಳಿಕೆ ಆಗುವುದರ ಸೂಚನೆ ಎಂದು ನಂಬಲಾಗಿತ್ತು. ಇತ್ತ ಬೇರೆ ಬೇರೆ ದೇಶಗಳ ಕೇಂದ್ರೀಯ ಬ್ಯಾಂಕ್‌ಗಳು ರೆಪೊ ದರವನ್ನು ತಗ್ಗಿಸಿದ್ದುದು. ಡಿಸೆಂಬರ್‌ನಲ್ಲಿ ನಡೆಯುವ ಸಭೆಯಲ್ಲಿ ಆರ್‌ಬಿಐ ಕೂಡ ರೆಪೊ ದರ ಇಳಿಕೆಯ ತೀರ್ಮಾನ ಪ್ರಕಟಿಸಬಹುದು ಎಂಬ ನಿರೀಕ್ಷೆಗಳಿಗೆ ಕಾರಣವಾಗಿತ್ತು. ಆದರೆ, ಈಗ ಹಣದುಬ್ಬರವು ಮತ್ತೆ ಏರಿಕೆ ಆಗಿರುವ ಕಾರಣ, ಡಿಸೆಂಬರ್ ತಿಂಗಳ ಸಭೆಯಲ್ಲಿ ರೆಪೊ ದರವನ್ನು ಆರ್‌ಬಿಐ ತಗ್ಗಿಸುವುದಿಲ್ಲ ಎಂಬುದು ಖಾತರಿ ಆದಂತಾಗಿದೆ.

## ಗುರು ರಾಯರ ಸನ್ನಿಧಿಯಲ್ಲಿ ಲಕ್ಷ ದೀಪೋತ್ಸವ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ಅನುಗ್ರಹದೊಂದಿಗೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್. ಕೆ. ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಕಾರ್ತಿಕ ಪೌರ್ಣಮಿ ಮತ್ತು 'ಲೋಕ ಕಲ್ಯಾಣಕ್ಕಾಗಿ ಲಕ್ಷ ದೀಪೋತ್ಸವದ ಕಾರ್ಯಕ್ರಮವು ವಿಶೇಷವಾಗಿ ನೆರವೇರಿತು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು, ಈ ಸಂದರ್ಭದಲ್ಲಿ ಸನ್ನಿಧಿಗೆ ಆಗಮಿಸಿದ ಭಕ್ತರಿಗೆ ಮತ್ತು ಸೇವಾ ಕರ್ತೃಗಳಿಗೆ ಸಂಕಲ್ಪವನ್ನು ಅರ್ಚಕ ರಿಂದ ಮಾಡಿಸಲಾಯಿತು ತದನಂತರ ದೀಪಗಳನ್ನು ರಾಯ ಸನ್ನಿಧಿಯ ಪ್ರಕಾರದ ಸುತ್ತಲೂ ಮತ್ತು ಹೊರಭಾಗದಲ್ಲಿಯೂ ದೀಪಗಳನ್ನು ಪ್ರಜ್ವಲಿಸಿ ಚೊಕ್ಕ ಸುಡುವ ಮೂಲಕ ಮಹಾಮಂಗಳಾರತಿಯನ್ನು ನೆರವೇರಿಸಲಾಯಿತು ಭಕ್ತಾದಿಗಳು ಭಕ್ತಿಯಿಂದ ಲೋಕಕಲ್ಯಾಣಕ್ಕಾಗಿ ರಾಯರ ಮುಂದೆ ಪ್ರಾರ್ಥನೆಯನ್ನು ಸಲ್ಲಿಸಿ ದೀಪಗಳನ್ನು ಪ್ರಜ್ವಲಿಸಿ ಪ್ರಸಾದವನ್ನು ಸ್ವೀಕರಿಸಿ ಶ್ರೀ ಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು

## ರಾಮಾಯಣ



### ಸಗರ ಕುಮಾರರು ಭೂಮಿಯನ್ನು ಅಗೆದದ್ದು

• ಹಿಂದಿನ ಸಂಚಿಕೆಯಿಂದ 25ನೆಯ ಅಧ್ಯಾಯ

ಆ ಕುದುರೆಯನ್ನು ಕದ್ದವನನ್ನು ಸಂಹರಿಸು. ಇಲ್ಲದಿದ್ದರೆ ಈ ಯಜ್ಞವು ನಡೆಯಲಾರದು ಯಾಗ ವಿಘ್ನವಾದರೆ ನಮಗೆಲ್ಲರಿಗೂ ಕಷ್ಟವಾಗುವುದು. ಅದಕಾರಣ ಈ ಯಾಗಕ್ಕೆ ವಿಘ್ನವು ಬಾರದಹಾಗೆ ಉಪಾಯವನ್ನು ಮಾಡು' ಎಂದು ಹೇಳಿದರು. ಆ ಮಾತನ್ನು ಕೇಳಿ ಸಗರಚಕ್ರವರ್ತಿಯು ಆ ಯಾಗಶಾಲೆಯಲ್ಲಿದ್ದ ತನ್ನ ಅರವತ್ತು ಸಾವಿರ ಕುಮಾರರನ್ನು ಕುರಿತು ' ಮಕ್ಕಳಿರಾ, ರಾಕ್ಷಸರ ಕಪಟಮಾರ್ಗವನ್ನು ಅರಿಯಲಾಗದು. ಸಮಸ್ತ ಮಂತ್ರಗಳಿಂದ ಪವಿತ್ರವಾದ ಈ ಯಾಗವು ಉಪಕ್ರಮಿಸಲ್ಪಟ್ಟಿತು. ನೀವು ಶೀಘ್ರದಲ್ಲಿ ಕುದುರೆಯನ್ನು ಹುಡುಕಿ ಹಿಡಿದುಕೊಂಡು ಬನ್ನಿರಿ. ಒಬ್ಬೊಬ್ಬರು ಒಂದೊಂದು ಗಾವುದದಂತೆ ಹುಡುಕಿ ಕುದುರೆಯನ್ನು ಹೇಗಾದರೂ ಶೋಧಿಸಿರಿ. ಪಾತಾಳಲೋಕವನ್ನು ಪ್ರವೇಶಿಸಿ ದಿಗ್ಗಜಗಳನ್ನೂ ಮಹಾಶೇಷನನ್ನೂ ಕಂಡು ಗರುತ್ಮಂತನ ಸಹಾಯವನ್ನು ಪಡೆದು ಉದಯಗಿರಿ ಮೊದಲಾಗಿ ಅಸ್ತಾಧಿಪರಂತ ಸಂಚರಿಸಿ ಬಳಿಕ ಬ್ರಹ್ಮಲೋಕಕ್ಕೆ ಹೋಗಿ ಹೇಗಾದರೂ ಕುದುರೆಯನ್ನು ಹುಡುಕಿರಿ.

ಈ ಪುರೋಹಿತನೂ ನನ್ನ ಮೊಮ್ಮಗನಾದ ಅಂಶುಮಂತನೂ ನಾವೆಲ್ಲರೂ ನೀವು ಕುದುರೆಯನ್ನು ತರುವ ಪರ್ಯಂತ ಇಲ್ಲಿಯೇ ಇರುವವು ' ಎಂದು ನಿರೂಪಿಸಿದನು.

ಆ ಮಕ್ಕಳು ಮಹಾ ಪ್ರಸಾದವೆಂದು ತಮ್ಮ ತಂದೆಯ ಆಜ್ಞೆಯನ್ನು ಶಿರಸಾವಹಿಸಿ ಆತನಿಗೆ ನಮಸ್ಕಾರವನ್ನು ಮಾಡಿ ಸಕಲವಾದ ಭೂಮಿಯನ್ನು ಒಬ್ಬೊಬ್ಬರು ಒಂದೊಂದು ಗಾವುದದಂತೆ ಹುಡುಕಿದರು. ಅಶ್ವವನ್ನುಎಲ್ಲಿಯೂ ಕಾಣದೆ ಪೃಥ್ವಿಯನ್ನು ಅಗಿಯಲಾರಂಭಿಸಿದರು ಅವರು ಸಿಡಿಲಿಗೆ ಸಮಾನಗಳಾದ ತ್ರಿಶೂಲಗಳಿಂದಲೂ ಅತಿನಿಶಿತಗಳಾದ ನೇಗಿಲುಗಳಿಂದಲೂ ವಜ್ರಾಯುಧಕ್ಕೆ ಸಮಾನಗಳಾದ ಉಗುರುಗಳಿಂದಲೂ ಅಗೆಯಲಾಗಿ ಆ ಹೊಡೆತಗಳಿಂದ ನೊಂದು ಭೂಮಿಯು ಭೋರಿಡುತ್ತಿತ್ತು. ಅದರಲ್ಲಿದ್ದ ಆನೆಗಳು ರಾಕ್ಷಸರು ಮೊದಲಾದ ಸಮಸ್ತ ಪ್ರಾಣಿಗಳೂ ಗೋಳಿಡುತ್ತಿದ್ದವು ಈ ರೀತಿಯಲ್ಲಿ ಪರ್ವತಸಹಿತವಾದ ಜಂಬೂದ್ವೀಪವನ್ನು ಅಗೆದು ಸಂಚರಿಸುತ್ತಿರಲು ದೇವತೆಗಳೂ ನಾಗಲೋಕದವರೂ ಕಂಗೆಟ್ಟು ಬ್ರಹ್ಮಲೋಕಕ್ಕೆ ಹೋಗಿ ಮಹಾಖಿನ್ನರಾಗಿ ಬ್ರಹ್ಮದೇವನಿಗೆ ಅಭಿವಂದಿಸಿ ಬ್ರಹ್ಮದೇವ, ಸಮಸ್ತ ಲೋಕವನ್ನೂ ಅಗೆಯುತ್ತಿರುವ ಸಗರಚಕ್ರವರ್ತಿಯ ಮಕ್ಕಳಿಂದ ಲೋಕದಲ್ಲಿರುವ ಪ್ರಾಣಿಗಳು ಹತರಾದರು. ವರುಣನ ಮಕ್ಕಳು ಸಮಸ್ತ ದಾನವರ ಸಹಿತವಾಗಿ ಚೂರ್ಣೀಕೃತರಾದರು, ಸಮಸ್ತ ಪರ್ವತಗಳೂ ಜರ್ಝರಿತವಾದವು ಅಶ್ವವನ್ನು ಹುಡುಕುವ ನಿಮಿತ್ತದಿಂದ ಬಹುಪ್ರಾಣಿಗಳನ್ನು ಸಂಹರಿಸಿದರು ' ಎಂದು ನುಡಿದರು.

ಮುಂದುವರಿಯುವುದು...

# ಕನಕದಾಸರ ಜಯಂತಿ ಆಚರಣೆ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ




ಕನಕದಾಸರ ಜಯಂತಿಯನ್ನು ಪ್ರತಿ ವರ್ಷ ಕರ್ನಾಟಕದ ಜನರು ಸಾಮಾನ್ಯವಾಗಿ, ಕುರುಬ ಸಮುದಾಯದ ಜನರು ವಿಶೇಷವಾಗಿ ಆಚರಿಸುತ್ತಾರೆ. ಈ ದಿನವನ್ನು ಅವರ ಮಹಾನ್ ಕವಿ, ಸಂತ, ತತ್ವಜ್ಞಾನಿ, ಸಂಯೋಜಕ ಮತ್ತು ಸಂಗೀತಗಾರನ ಸ್ಮರಣಾರ್ಥವಾಗಿ ಆಚರಿಸಲಾಗುತ್ತದೆ. ಅವರು 1509ರಲ್ಲಿ ಜನಿಸಿದರು ಮತ್ತು ಕನ್ನಡ ಭಾಷೆಯಲ್ಲಿ ಅವರ ಉಗಾಭೋಗ, ಕೀರ್ತನೆಗಳು ಮತ್ತು ಕರ್ನಾಟಕ ಸಂಗೀತ ಸಂಯೋಜನೆಗಳಿಗಾಗಿ ಇಂದಿಗೂ ನೆನಪಿಸಿಕೊಳ್ಳುತ್ತಾರೆ. ಕರ್ನಾಟಕ ಸರ್ಕಾರವು ಈ ಮಹಾನ್ ಸಂತನಿಗೆ ಗೌರವ ಸಲ್ಲಿಸಲು ಈ ದಿನವನ್ನು ರಾಜ್ಯ ರಜಾದಿನವಾಗಿ ಆಚರಿಸುತ್ತದೆ, ಪ್ರತಿ ವರ್ಷ ನವೆಂಬರ್ ಅಥವಾ ಡಿಸೆಂಬರ್ ಆರಂಭದಲ್ಲಿ. ಕನಕದಾಸರ ಜಯಂತಿಯ ಬಗ್ಗೆ ಹೆಚ್ಚು ವಿವರವಾಗಿ ತಿಳಿಯಲು, ನೀವು ಅವರ ಕೊಡುಗೆಗಳ ಮಹತ್ವವನ್ನು ಓದಬೇಕು ಮತ್ತು ತಿಳಿಯಬೇಕು.

**ಈ ದಿನದ ಇತಿಹಾಸ, ಮಹತ್ವ :** ಕರ್ನಾಟಕ ರಾಜ್ಯವು ಯಾವುದೇ ಸಮುದಾಯ ಮತ್ತು ಜಾತಿಯನ್ನು ಲೆಕ್ಕಿಸದೆ ಭಕ್ತಿಯನ್ನು ಬೋಧಿಸುತ್ತಿದ್ದ ಸಂತರಿಗೆ ಹೆಸರುವಾಸಿಯಾಗಿದೆ. ಈ ಸಂತರು ಆ ದಿನಗಳಲ್ಲಿ ಎಲ್ಲರಿಗೂ ಸುಲಭವಾಗಿ ಅರ್ಥವಾಗುವ ಕನ್ನಡ ಭಾಷೆಯಲ್ಲಿ ಭಗವಾನ್ ನಾರಾಯಣ ಅಥವಾ ಹರಿ ಭಕ್ತಿಯನ್ನು ಬೋಧಿಸಿದರು. ಅಂತಹ ಸಂತರಲ್ಲಿ ಒಬ್ಬರು ಶ್ರೀ ಕನಕದಾಸರು. ಅವರು ನವೆಂಬರ್ 6, 1509ರಂದು ಕಾಗಿನೆಲೆ ಬಳಿ ಬ್ರಾಹ್ಮಣೇತರ ಬುಡಕಟ್ಟಿನಲ್ಲಿ ಜನಿಸಿದರು. ಕನಕದಾಸರು ದಾರ್ಶನಿಕ, ಕವಿ ಮತ್ತು ಸಂಗೀತಗಾರರಾಗಿ ಬೆಳೆದರು. ಅವರು ತಮ್ಮ ಕನ್ನಡ ಭಾಷೆಯ ಸಂಯೋಜನೆಗಳಿಂದ ಪ್ರಸಿದ್ಧರಾದರು. ನಂತರ ಅವರು ಕರ್ನಾಟಕದಲ್ಲಿ ನಡೆದ ಹರಿದಾಸ ಭಕ್ತಿ ಚಳುವಳಿಯ ಭಾಗವಾದರು. ಇದು ದಕ್ಷಿಣ ಭಾರತದ ರಾಜ್ಯಗಳ ವಿಶೇಷವಾಗಿ ಕರ್ನಾಟಕದ ತತ್ವಶಾಸ್ತ್ರ, ಸಂಸ್ಕೃತಿ ಮತ್ತು ಕಲೆಯನ್ನು ರೂಪಿಸಲು ಸಹಾಯ ಮಾಡಿತು. ಈ ಆಂದೋಲನವು ದಕ್ಷಿಣ ಭಾರತದ ಜನರು ಮತ್ತು ಸಾಮ್ರಾಜ್ಯಗಳಲ್ಲಿ ಆಧ್ಯಾತ್ಮಿಕ ಪ್ರಭಾವವನ್ನು ಹರಡಿತು. ಇದು ಕರ್ನಾಟಕದಲ್ಲಿ ಭಕ್ತಿ ಸಾಹಿತ್ಯವನ್ನು ಜನರಿಗೆ ಉಣಬಡಿಸಿದ್ದರಿಂದ ಇದು ಒಂದು ದೊಡ್ಡ ಸಾಹಿತ್ಯ ಚಳುವಳಿಯಾಗಿ ಹೊರಹೊಮ್ಮಿತು. ಶ್ರೀ ಕನಕದಾಸರು ಈ ಚಳವಳಿಯ ಅವಿಭಾಜ್ಯ ಅಂಗವಾದರು.

ಸುಪ್ರಸಿದ್ಧ ಸಂತ ಕನಕದಾಸರ ಕೆಲವು ಶ್ರೇಷ್ಠ ಕೃತಿಗಳೆಂದರೆ ಹರಿಭಕ್ತಿಸಾರ, ಮೋಹನತರಂಗಿಣಿ, ನರಸಿಂಹ ತವ, ರಾಮಧಾನ್ಯ ಚರಿತ್ರೆ, ನಳ ಚರಿತ್ರ. ಕನಕದಾಸರು ಕನ್ನಡ ಸಾಹಿತ್ಯಕ್ಕೆ ಅಂತಹ ಮಹತ್ತರವಾದ ಕೊಡುಗೆಯನ್ನು ನೀಡುವುದರ ಜೊತೆಗೆ ಸಾಮಾಜಿಕ, ತಾತ್ವಿಕ ಪ್ರಕ್ರಿಯೆಯನ್ನು ಪ್ರಾರಂಭಿಸಿದರು. ಇದು ಅವರಿಗೆ ಸಮಾನತೆಯ ಸಂದೇಶ ವನ್ನು ಹರಡಲು ಸಹಾಯ ಮಾಡಿತು. ಅವರು ಜಾತಿ ವ್ಯವಸ್ಥೆಗೆ ವಿರುದ್ಧವಾಗಿದ್ದರು ಮತ್ತು ಇದು ಜನರ ಸಾಮಾಜಿಕ-ಆರ್ಥಿಕ ಮತ್ತು ಧಾರ್ಮಿಕ ಜೀವನಕ್ಕೆ ಹಾನಿ ಮಾಡುತ್ತದೆ ಎಂದು ನಂಬಿದ್ದರು. ಅವರು ಇದನ್ನು ಸುಮಾರು 500 ವರ್ಷಗಳ ಹಿಂದೆ ಬೋಧಿಸುತ್ತಿದ್ದರು, ಆದರೆ ನಾವು ಇನ್ನೂ ಈ ಆದರ್ಶವನ್ನು ಪೂರೈಸಿಲ್ಲ ಮತ್ತು ಪ್ರತಿ ದಿನವೂ ಜಾತೀಯತೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ. ಆದ್ದರಿಂದ ಅಂತಹ ಮಹಾನ್ ಸಂತನ ಗೌರವಾರ್ಥವಾಗಿ ಕರ್ನಾಟಕವು ಪ್ರತಿ ವರ್ಷ ಕನಕದಾಸರ ಜಯಂತಿಯನ್ನು ಆಚರಿಸುತ್ತದೆ. ಈ ದಿನವು ರಾಜ್ಯದ ಸಾಮಾಜಿಕ ಮತ್ತು ಸಾಂಸ್ಕೃತಿಕ ಇತಿಹಾಸದಲ್ಲಿ ವಿಶೇಷ ಪ್ರಾಮುಖ್ಯತೆಯನ್ನು ಹೊಂದಿದೆ.

### ಕನಕದಾಸರ ಜಯಂತಿಯನ್ನು ಯಾವಾಗ ಆಚರಿಸಲಾಗುತ್ತದೆ

**ಶ್ರೀ ಕನಕದಾಸರ ಮಹಾನ್ ಕಾರ್ಯಗಳನ್ನು ಸ್ಮರಿಸಲು, ಕರ್ನಾಟಕ ಸರ್ಕಾರವು ಅವರ ಜನ್ಮದಿನವನ್ನು ಪ್ರಾದೇಶಿಕ ಸಾರ್ವಜನಿಕ ರಜಾದಿನವಾಗಿ ಸೇರಿಸಿದೆ. ಎಲ್ಲಾ ಸರ್ಕಾರಿ ಕಾಲೇಜುಗಳು, ಶಾಲೆಗಳು ಮತ್ತು ಕಚೇರಿಗಳು ಮುಚ್ಚಲ್ಪಟ್ಟಿವೆ ಮತ್ತು ಜನರು ಸಂಭ್ರಮಾಚರಣೆಯ ಭಾಗವಾಗುತ್ತಾರೆ. ಪ್ರತಿ ವರ್ಷ ಇದು ಕಾರ್ತಿಕ ಹಿಂದೂ ತಿಂಗಳ 18ನೇ ದಿನದಂದು ಬರುತ್ತದೆ. ಆದ್ದರಿಂದ ಇದು ಸಾಮಾನ್ಯವಾಗಿ ನವೆಂಬರ್ ತಿಂಗಳಲ್ಲಿ ನೀವು ಕನಕದಾಸರ ಜಯಂತಿಯ ದಿನಾಂಕವನ್ನು ಕಾಣಬಹುದು.**

ಕನಕದಾಸರ ಜಯಂತಿಯನ್ನು ಹೇಗೆ ಆಚರಿಸಬೇಕು ಕನ್ನಡಿಗರ ಹೃದಯದಲ್ಲಿ ವಿಶೇಷ ಸ್ಥಾನವನ್ನು ಹೊಂದಿರುವ ಕನಕದಾಸರ ಜಯಂತಿಯನ್ನು ಕರ್ನಾಟಕದ ಬಹುತೇಕ ಎಲ್ಲಾ ನಗರಗಳಲ್ಲಿ ಪ್ರತಿ ವರ್ಷವೂ ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಕನಕದಾಸರ ಜಯಂತಿ ಮತ್ತು ಕರ್ನಾಟಕಕ್ಕೆ ಶ್ರೀ ಕನಕದಾಸರ ಕೊಡುಗೆಗಳ ಬಗ್ಗೆ ಜನರಿಗೆ ಅರಿವು ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಬೆಂಗಳೂರು, ಬೆಳಗಾವಿ, ಮೈಸೂರು, ಉಡುಪಿ, ಬಡಾ ಮುಂತಾದ ನಗರಗಳಲ್ಲಿ ಪ್ರಮುಖ ಆಚರಣೆಗಳು ನಡೆಯುತ್ತವೆ ಮತ್ತು ಪತ್ರಿಕೆಗಳು ಮುಖ್ಯಾಂಶಗಳನ್ನು ಮಾಡುತ್ತವೆ. ಪ್ರತಿ ನಗರವು ಈ ದಿನವನ್ನು ನಿರ್ದಿಷ್ಟ ರೀತಿಯಲ್ಲಿ ಆಚರಿಸುತ್ತದೆ. ಆದರೆ ಪ್ರತಿ ನಗರದಲ್ಲಿ ಈ ಆಚರಣೆಗೆ ಕೆಲವು ಸಾಮಾನ್ಯ ಸಂಗತಿಗಳಿವೆ. ಹೂವಿನಿಂದ ಅಲಂಕರಿಸಲ್ಪಟ್ಟ ಮಹಾನ್ ಸಂತರ ವರ್ಣರಂಜಿತ ಮೆರವಣಿಗೆಯನ್ನು ಭಕ್ತರು ಬೀದಿಗಳಲ್ಲಿ ನಡೆಸುತ್ತಾರೆ. ನಗರದೊಳಗೆ ಕೆಲವು ಸ್ಥಳಗಳಲ್ಲಿ ಕನಕನ ವಿಗ್ರಹವನ್ನು ಸ್ಥಾಪಿಸಲಾಗಿದೆ ಮತ್ತು ಹೂವಿನಿಂದ ಅಲಂಕರಿಸಲಾಗುತ್ತದೆ. ಮೆರವಣಿಗೆಯಲ್ಲಿ ವಿವಿಧ ಜಾನಪದ ತಂಡಗಳು ಗೊಂಬೆ ಕುಣಿತ, ನಂದಿಧ್ವಜ, ಕಂಸಾಳೆ ಕುಣಿತ, ಸೋಮನ ಕುಣಿತ, ಕೋಲಾಟ, ವೀರಗಾಸೆ, ಕೋಲಾಟ, ಡೊಳ್ಳು ಕುಣಿತ ಮುಂತಾದ ಜಾನಪದ ಪ್ರದರ್ಶನಗಳನ್ನು ನೀಡುತ್ತವೆ. ವಿವಿಧ ನಗರಗಳಲ್ಲಿ, ವಿಭಿನ್ನ ನೃತ್ಯ ಪ್ರಕಾರಗಳಿಗೆ ಆದ್ಯತೆ ನೀಡಲಾಗುತ್ತದೆ ಮತ್ತು ಮೇಲಿನ ಒಂದು ಅಥವಾ ಹೆಚ್ಚಿನ ನೃತ್ಯ ಪ್ರಕಾರಗಳನ್ನು ನೀವು ಕಾಣಬಹುದು. ನಂತರ ಮಹಾನ್ ಸಂತನ ಉಪದೇಶ ಮತ್ತು ಜೀವನವನ್ನು ಚಿತ್ರಿಸುವ ಕೆಲವು ಭಿತ್ತಿ ಚಿತ್ರಗಳನ್ನು ಪ್ರದರ್ಶಿಸಲಾಗುತ್ತದೆ. ಕೆಲವು ನಗರಗಳಲ್ಲಿ, ವಿವಿಧ ಸಂಗೀತ ವಾದ್ಯಗಳನ್ನು ನುಡಿಸುವ ವಿದ್ಯಾರ್ಥಿಗಳ ಗುಂಪನ್ನು ನೀವು ಕಾಣಬಹುದು. ಕಳಸ ಹೊತ್ತ ಮಹಿಳೆಯರು ಮೆರವಣಿಗೆಗೆ ಶೋಭೆ ತರುತ್ತಾರೆ. ನಂತರ, ಮೆರವಣಿಗೆಯ ಪೂರ್ವ ನಿರ್ಧರಿಸಿದ ಕೊನೆಯ ಸ್ಥಳದಲ್ಲಿ, ವೇದಿಕೆಯ ಸಜ್ಜು ಇರುತ್ತದೆ. ಇಲ್ಲಿ, ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುವ ಕೆಲವು ಸರ್ಕಾರಿ ಅಧಿಕಾರಿಗಳು ಅಥವಾ ಮಂತ್ರಿಗಳನ್ನು ನೀವು ಕಾಣಬಹುದು. ಹೀಗೆ ಕನಕದಾಸರ ಜಯಂತಿಯನ್ನು ವಿಶಿಷ್ಟ ಪೂರ್ಣವಾಗಿ ಅದ್ಭುತವಾಗಿ ಕರ್ನಾಟಕದೆಲ್ಲೆಡೆ ಆಚರಿಸಲಾಗುತ್ತದೆ.

## ಐಕ್ಯ ನವ ಶಾಲೆಯಿಂದ ಫೈಂಡ್ ಫೆಸ್ಟಿವಲ್‌ನ ಎರಡನೇ ಆವೃತ್ತಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಭಾರತದ ಮೊದಲ ಏ-12 ಸ್ಕೂಲ್ ಆಫ್ ಇನ್ನೋವೇಶನ್, ಕ್ರಿಯೇಟಿವಿಟಿ ಮತ್ತು ಡಿಸೈನ್ ಎನಿಸಿರುವ ಐಕ್ಯ ನವ ಶಾಲೆ, ಕಲಿಕೆ, ಕಲಿಯುವವರು ಮತ್ತು ಶಿಕ್ಷಕರ ಸಂಭ್ರಮವಾಗಿರುವ 'ಫೈಂಡ್' ಫೆಸ್ಟಿವಲ್‌ಗೆ ಚಾಲನೆ ನೀಡಿದೆ. ಈ ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಶ್ರೀ ಮಧು ಬಂಗಾರಪ್ಪ ಮತ್ತು ಟಿಐಎಸ್‌ಬಿ ಮತ್ತು ನ್ಯಾಷನಲ್ ಪಬ್ಲಿಕ್ ಸ್ಕೂಲ್‌ಗಳ ಸಂಸ್ಥಾಪಕ ಅಧ್ಯಕ್ಷರಾದ ಡಾ.ಕೆ.ಪಿ.ಗೋಪಾಲಕೃಷ್ಣ

**ಐಕ್ಯ ವೃತ್ತಿಪರ ಅಭಿವೃದ್ಧಿ**



ಅವರು ಸೇರಿದಂತೆ ಗೌರವಾನ್ವಿತ ಗಣ್ಯರು ಭಾಗವಹಿಸಿ, ಪರಿವರ್ತನಾಶೀಲ ಶಿಕ್ಷಣದಲ್ಲಿ ಐಕ್ಯ ನವ ಶಾಲೆಯ ಬದ್ಧತೆಯನ್ನು ಶ್ಲಾಘಿಸಿದರು. ಮಧು ಬಂಗಾರಪ್ಪ ಮಾತನಾಡಿ, ಗುಣಮಟ್ಟದ ಶಿಕ್ಷಣವು ಅತ್ಯಂತ ಮುಖ್ಯವಾಗಿದೆ. ಅದನ್ನು ಸುಧಾರಿಸಲು, ನಾವು ಶಿಕ್ಷಣತಜ್ಞರು ಮತ್ತು ಸಂಸ್ಥೆಗಳಿಗೆ ನಾವೀನ್ಯತೆಯ ಸ್ವಾತಂತ್ರ್ಯವನ್ನು ನೀಡಬೇಕು ಎಂದರು.

ಡಿಸೈನ್ ಥಿಂಕಿಂಗ್ ಚಾಲೆಂಜ್, ಕಲಿಕೆಯ ಪ್ರದರ್ಶನ, ಸಂವಾದಾತ್ಮಕ ಕಾರ್ಯಾಗಾರಗಳು, ಪ್ಯಾನಲ್ ಚರ್ಚೆಗಳು, ಮ್ಯೂಸಿಯಂ ಅಳವಡಿಕೆ, ಮಾನವ ಗ್ರಂಥಾಲಯ ಮತ್ತು ವಿದ್ಯಾರ್ಥಿ ಗ್ಯಾಲರಿ ಸೇರಿದಂತೆ ಫೈಂಡ್ ಉತ್ಸವದ ಭಾಗವಾಗಿ ಹಲವಾರು ಚಟುವಟಿಕೆಗಳಿಗೆ ಚಾಲನೆ ನೀಡಲಾಯಿತು. ಐಕ್ಯ ವೃತ್ತಿಪರ ಅಭಿವೃದ್ಧಿ ಸಂಸ್ಥೆಯಿಂದ ಪ್ರಾಂಪ್ಟಿಂಗ್ ದಿ ಫ್ಯೂಚರ್- ಎಐ ಫಾರ್ ಟ್ರಾನ್ಸ್‌ಫಾರ್ಮೇಟಿವ್ ಟೀಚಿಂಗ್ ಪುಸ್ತಕದ ಬಿಡುಗಡೆಗೊಳಿಸಲಾಯಿತು.

ಮುಖ್ಯ ಅತಿಥಿಗಳ ಜೊತೆಗೆ, ಸಿಎಂಆರ್ ಗ್ರೂಪ್‌ನ ಅಧ್ಯಕ್ಷರಾದ, ಮಾಜಿ ಐಪಿಎಸ್ ಅಧಿಕಾರಿ ಹಾಗೂ ರಾಜ್ಯ ಸಭಾ ಮಾಜಿ ಸಂಸದ ಡಾ. ಕೆ.ಸಿ. ರಾಮಮೂರ್ತಿ, ಸಿಎಂಆರ್ ಜ್ಞಾನಧಾರ ಟ್ರಸ್ಟ್ ಅಧ್ಯಕ್ಷೆ ಹಾಗೂ ಸಿಎಂಆರ್ ವಿಶ್ವವಿದ್ಯಾಲಯದ ಕುಲಪತಿ ಸಬಿತಾ ರಾಮಮೂರ್ತಿ, ಐಕ್ಯ ಶಾಲೆಗಳ ನಿರ್ದೇಶಕರು ಮತ್ತು ಸಿಎಂಆರ್ ಗ್ರೂಪ್ ಆಫ್ ಎಜ್ಯುಕೇಷನ್ ಸಿಇಒ ಡಾ. ಶ್ರೀ. ಕೆ.ಆರ್.ಜಯದೀಪ್, ಐಕ್ಯ ಶಾಲೆ ಸಂಸ್ಥಾಪಕಿ ಡಾ.ತ್ರಿಸ್ಥ ರಾಮಮೂರ್ತಿ ಹಾಜರಿದ್ದರು.

> **ಉಪಸ್ಥಿತರಿದ್ದ ಟಿಐಎಸ್‌ಬಿ ಮತ್ತು ನ್ಯಾಷನಲ್ ಪಬ್ಲಿಕ್ ಸ್ಕೂಲ್‌ಗಳ ಸಂಸ್ಥಾಪಕ ಮತ್ತು ಅಧ್ಯಕ್ಷರಾದ ಡಾ.ಕೆ.ಪಿ.ಗೋಪಾಲಕೃಷ್ಣ ಅವರು ಮಾತನಾಡಿ ಶಿಕ್ಷಣದಲ್ಲಿ ಸಮಗ್ರ ಕಲಿಕೆಯತ್ತ ಗಮನ ಹೊರಳಿದೆ, ಇದು ವಿದ್ಯಾರ್ಥಿ ಜೀವನದ ಪ್ರಾಯೋಗಿಕ ಅಂಶಗಳನ್ನು ಅರ್ಥಮಾಡಿಕೊಳ್ಳಲು ಒತ್ತು ನೀಡುತ್ತದೆ. ಈ ಕ್ಷೇತ್ರದಲ್ಲಿ ಪ್ರಯೋಗ ಮತ್ತು ಸಂಶೋಧನೆಗೆ ಸಾಕಷ್ಟು ಅವಕಾಶವಿದೆ, ವಿದ್ಯಾರ್ಥಿಗಳಿಗೆ ವಿಮರ್ಶಾತ್ಮಕ ಚಿಂತನೆ ಮತ್ತು ಸೃಜನಶೀಲತೆಯನ್ನು ಅಭಿವೃದ್ಧಿಪಡಿಸಲು ಸಹಾಯ ಮಾಡುತ್ತದೆ ಎಂದರು.**

## ನಮ್ಮ ಸಂಸ್ಕೃತಿ, ಕಲೆ, ಪರಂಪರೆಯನ್ನು ಉಳಿಸಿ ಬೆಳಸಿ: ಸುಧೀಂದ್ರರಾವ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಮ್ಮ ಸಂಸ್ಕೃತಿ, ಕಲೆ, ಪರಂಪರೆಯನ್ನು ಉಳಿಸಿ ಬೆಳಸುವ ಜವಾಬ್ದಾರಿ ನಮ್ಮೆಲ್ಲರದು ಎಂದು ಹಿರಿಯ ಪತ್ರಕರ್ತನ. ಶ್ರೀ,ಸುಧೀಂದ್ರರಾವ್ ಹೇಳಿದರು,

ಅವರು ಎಸ್ ವಿ ಕೆ ಸಂಸ್ಥೆಯ ವಾರ್ಷಿಕೋತ್ಸವ ಹಾಗು ಸಂಗೀತ ಕಲಾ ಉತ್ಸವ ಕಾರ್ಯಕ್ರಮವನ್ನು ನಗರದ ಮಲ್ಲತ್ತಹಳ್ಳಿಯಲ್ಲಿರುವ ಕಲಾ ಗ್ರಾಮದಲ್ಲಿ ಜ್ಯೋತಿ ಬೆಳಗುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ ಸಂಗೀತಕ್ಕೆ ತನ್ನದೇ ಆದ ವಿಶಿಷ್ಟ ಶಕ್ತಿ ಇದೇ ಅದರಿಂದ ನಾವು ಮನೋಲ್ಲಾಸ ಹೊಂದಿ ಉತ್ತಮ ಅರೋಗ್ಯ ದಿಂದಿರಬಹುದು ಎಂದರು, ಯಾವುದೇ ಕಲೆ ಮತ್ತು ವಿದ್ಯೆಗೆ ಜಾತಿ ಮತ ವೆಂಬ ಬೇದವಿಲ್ಲ ಎಂದರು, ಕೆಂಗೇರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ॥ಹೆಚ್. ಜಿ ರಮೇಶ್ ರವರು ಮಾತನಾಡಿ ಕಾರ್ಯಕ್ರಮ ಅತ್ಯದ್ಭುತವಾಗಿ ಯಶಸ್ವಿಯಾಗಿ ಮೂಡಿ ಬಂದಿದ್ದು ಗುರು ವಿದುಷಿ ಶಶಿಕಲಾರವರ ನೇತೃತ್ವದಲ್ಲಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ, ಹಾಗೂ ಅಭಿನಯವು ವಾದ್ಯಗೋಷ್ಠಿಗಳೊಂದಿಗೆ ಯಶಸ್ವಿಯಾಗಿ ಮೂಡಿಬಂದಿದು ಯಶಸ್ವಿಯಾಗಿದೆ ಎಂದರು,

ಸಮಾರಂಭ ದಲ್ಲಿ ಜನಪದ ಕಲಾವಿದ ಮೈಲಾರಪ್ಪ ಕರಮುಡಿಯವರು ಹಾಗೂ ಕೆಂಗೇರಿ ಪ್ರಥಮ ದರ್ಜೆ ಕಾಲೇಜಿನ ಉಪಾಧ್ಯಯರಾದ ಡಿ. ಆರ್. ರಂಗಪ್ಪ ರವರು ಅತಿಥಿಯಾಗಿ ಆಗಮಿಸಿ ಮಾತನಾಡಿದರು, ಹಿಮ್ಮೆಳದಲ್ಲಿ ಮೃದಂಗ ನುಡಿಸಿದ ವಿಧ್ವಾನ್ ನರಸಿಂಹನ್ ರಾಮಸ್ವಾಮಿ ಅಯ್ಯಂಗಾರ್ ಮತ್ತು ವೈಲಿನ್ ವಾದ್ಯನುಡಿಸಿದ ವಿಧ್ವಾನ್ ರಾಘವೇಂದ್ರ ಹಾಗೂ ಕು. ಕಾವ್ಯ ರವರು ಸುಮಧುರವಾಗಿ ನುಡಿಸಿ ಸಂಗೀತಕ್ಕೆ ಮೆರಗು ಕೊಟ್ಟರು, ಎಸ್. ವಿ. ಕೆ ಸಂಸ್ಥೆಯ ಎಲ್ಲಾ ವಿದ್ಯಾರ್ಥಿಗಳು ಶಾಸ್ತ್ರಿಯ ಸಂಗೀತ, ಸುಗಮ ಸಂಗೀತ ಮತ್ತು ಅಭಿನಯದ ಜೊತೆಗೆ ಮುದ್ದಾಗಿ ಹಾಡುತ್ತ ಚಿತ್ರದುರ್ಗದ ಓಬವ್ವನ ಕಥೆ, ಕಣಿ ಹೇಳುವಿಕೆ,ತರಕಾರಿ ಗೀತೆ, ಕೇಳಿದ್ದು ಸುಳ್ಳಾಗಬಹುದು ಹೇಳಿದ್ದು ಸುಳ್ಳಾಗಬಹುದು ಎಂಬ ಮುಂಗಿಸಿಯ ಪ್ರಾಮಾಣಿಕಥೆ ಮತ್ತು ಪುಣ್ಯಕೋಟಿಯ ನೀತಿ ಕಥೆಯನ್ನ ತಮ್ಮ ಸುಮದುರ ಕಂಠದಿಂದ ಹಾಡಿ ಹಾಗೆಯೆ ನಿಷ್ಕಲ್ಮಶವಾದ ಅಭಿನಯದ ಮೂಲಕ ಪ್ರೇಕ್ಷಕರ ಮನಸ್ಸನ್ನು ಮುಟ್ಟುವಂತೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು .

## ಸಮಾಜಕ್ಕೆ ಕೀರ್ತನೆಗಳ ಮೂಲಕ ಭಕ್ತಿ ಸಾರ ನೀಡಿದ ನಿಷ್ಕಲ್ಮಶ ಕನಕದಾಸರ



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ,
ವಿಮರ್ಶಕರು

ಕನಕದಾಸರ ಕಾಲ 16ನೆಯ ಶತಮಾನ. ಇವರ ಸ್ಥಳ ಧಾರವಾಡ ಜಿಲ್ಲೆಯ ಬಾಡ ಎಂಬ ಗ್ರಾಮ. ತಂದೆ ಹೆಸರು ಬೀರಪ್ಪ,ತಾಯಿ ಹೆಸರು ಬಾಚಮ್ಮ. ಇವರ ಮೂಲ ಹೆಸರು ತಿಮ್ಮಪ್ಪ ನಾಯಕ. ತಿಮ್ಮಪ್ಪ ನಾಯಕನಿಗೆ ಒಮ್ಮೆ ಭೂಮಿಯಲ್ಲಿ ಹುದುಗಿದ್ದ ರಹಸ್ಯ ನಿಧಿ ದೊರತದ್ದರಿಂದ ಅವರಿಗೆ ಕನಕ ಎಂದು ಹೆಸರು ಬಂದಿತು. ಕನಕದಾಸರ ವೈಶಿಷ್ಟ್ಯ ಏನೆಂದರೆ ಇವರು ಕೀರ್ತನೆಗಳೊಂದಿಗೆ ಸುಂದರವಾದ ಕಾವ್ಯಗಳಿಂದ ರಚಿಸಿ ಕನ್ನಡ ಸಾಹಿತ್ಯವನ್ನು ಸಮೃದ್ಧಿ ಗೊಳಿಸಿದ್ದಾರೆ. ಪುರಂದರ ದಾಸರು ಮತ್ತು ಕನಕದಾಸರು ಸಮಕಾಲೀನರು ಹಾಗೂ ಸಮಾನ ಮನೋ ಧರ್ಮವುಳ್ಳವರಾಗಿದ್ದರು.

ವ್ಯಾಸ ತೀರ್ಥರ ಶಿಷ್ಯರಾಗಿ ಗುರುವಿನ ಅನುಗ್ರಹಕ್ಕೆ ಪಾತ್ರರಾದರು.ಇವರು ತಾವು ಪಡೆದ ಅನುಭವ, ಭಕ್ತಿ ಜ್ಞಾನ ಇವುಗಳನ್ನು ತಮ್ಮ ಕೃತಿಗಳ ಮೂಲಕ ಜನರ ಹೃದಯದಲ್ಲಿ


ಉದಯವಾಹಿನಿ ಚಿತ್ರ

ಬಿಂಬಿಸಿದ ದಾಸ ಶ್ರೇಷ್ಠರು ಕನಕದಾಸರು. ಹಲವಾರು ಹಾಡುಗಳನ್ನು, ಕೀರ್ತನೆಗಳನ್ನು ರಚಿಸಿದ್ದಾರೆ. ಅವುಗಳಲ್ಲಿ ಭಕ್ತಿಭಾವ,ಲೋಕ ಜೀವನದ ಅನುಭವ, ಸಾಮಾಜಿಕ ಪ್ರಶ್ನೆ ಅತ್ಯಂತ ಆರೋಗ್ಯವಾಗಿ ಹಾಗೂ ಪರಿಣಾಮಕಾರಿಯಾಗಿ ಅಭಿವೃದ್ಧಿಗೊಂಡಿವೆ. ಬದುಕಿನ ಅರ್ಥ ಜೀವನ ಮೌಲ್ಯಗಳು ಸಂಗ್ರಹವಾಗಿ ಹೇಳಿರುವ ರೀತಿ ಬೆರಗೂ ಹುಟ್ಟಿಸುತ್ತದೆ. ನಿಜವಾದ ಭಕ್ತಿಯ ರೀತಿಯನ್ನು ಹೇಳಿರುವುದರಿಂದ ಭಕ್ತಿಯನ್ನು ವಿಡಂಬಿಸಿದ್ದಾರೆ ಹಾಗೂ ಸನ್ಮಾರ್ಗವನ್ನು ತೋರಿದ್ದಾರೆ. ಕುಲ ಕುಲವೆಂದು ಹೊಡೆದಾಡುವಿರಿ ಕುಲದ ನೆಲೆ ಏನಾದರೂ ಬಲ್ಲಿರಾ ಎಂದು ಕುಲದಲ್ಲಿ ಮೇಲು ಕೀಳು ಎಂಬ ವ್ಯತ್ಯಾಸವನ್ನು ಮಾಡುವ ಸಮಾಜವನ್ನು ಪ್ರಶ್ನಿಸಿದ್ದಾರೆ.

ದಾನ ಧರ್ಮವ ಮಾಡಿ ಸುಖಿಯಾಗು ಮನವೇ ಹೀನ ವೃತ್ತಿಯಲ್ಲಿ ನೀ ಕೆಡಬೇಡ ಮನವೇ ಎಂದು ಸೂಚಿಸಿದ್ದಾರೆ. ತಲ್ಲಣಿಸದಿರು ಕಂಡ್ಯೆ ತಾಳು ಮನವೇ ಬಲ್ಲಿದನು ಕಾಗಿ ನೆಲೆಯಾದಿ ಕೇಶವರಾಯ ಎಲ್ಲರನ್ನು ಸಲಹುವನು ಇದಕ್ಕೆ ಸಂಶಯವಿಲ್ಲ ಎಂದು ಲೋಕಕ್ಕೆ ಸಾಂತ್ವನ ಹೇಳಿದ್ದಾರೆ. ಕನಕದಾಸರು ಅಚಲವಾದ ಭಕ್ತಿ, ಶ್ರದ್ಧೆ, ನಂಬಿಕೆಗಳನ್ನ ಹೊಂದಿದವರಿಗೆ ದೈವ ಕೃಪೆ ದೊರೆಯುವುದು ಖಂಡಿತ ಎಂದು ತಿಳಿಸಿದ್ದಾರೆ. ಬಾಗಿಲನ್ನು ತೆಗೆದು ಸೇವೆಯನ್ನು ಕೊಡು ಹರಿಯೇ ಕೂಗಿದರು ಧ್ವನಿ ಕೇಳಲಿಲ್ಲವೇ ನರಹರಿಯೇ ಎಂಬ ಹಾಡು ಭಕ್ತಿ ಹೃದಯದಿಂದ ಮೂಡಿ ಬಂದ ಭಾವಗೀತೆಯಾಗಿದೆ. ಈ ಕೃತಿಯಲ್ಲಿ ಭಕ್ತಿಯ ಉತ್ಕಟತೆ, ಸರ್ವಸಮರ್ಪಣ ಭಾವ ಬಹು ಹೃದಯವಾಗಿ ಅಭಿವ್ಯಕ್ತಗೊಂಡಿದೆ. ಕನಕದಾಸರ ರಚನೆಗಳಲ್ಲಿ ಆಡುಮತಿನ ಸತ್ವವಿದೆ. ಆದ್ದರಿಂದಲೇ ಅವು ಇಂದಿಗೂ ಕೂಡ ಸಮಸ್ಟಿ ಬದುಕಿಗೆ ಹತ್ತಿರವಾಗಿದೆ. ಸಿದ್ಧಾಂತಕ್ಕೂ ಜೀವನಕ್ಕೂ ನೇರ ಸಂಬಂಧ ಕಲ್ಪಿಸಿ ಜನಸಾಮಾನ್ಯರ ಮೇಲೆ ಗಾಢ ಪ್ರಭಾವ ಬೀರಿದೆ. ಇಂದು ಕನಕದಾಸರ ಜಯಂತಿ ಪ್ರಯುಕ್ತ ಕನಕದಾಸರನ್ನ ಸ್ಮರಿಸಿ, ನೆನೆಯುತ್ತಾ ಅವರ ಹಾಡು ಮತ್ತು ಕೀರ್ತನೆಗಳ ಮೂಲಕ ಸಮಾಜಕ್ಕೆ ಸಂದೇಶ ಕೊಟ್ಟ ಭಕ್ತಿ ಭಾವಗಳನ್ನ, ಆದರ್ಶಗಳನ್ನ ನಮ್ಮೆಲ್ಲರ ಬದುಕಿನಲ್ಲಿ ಅಳವಡಿಸಿಕೊಂಡರೆ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕುತ್ತದೆ.

# ಹರಿದ್ವಾರ, ಋಷಿಕೇಶ ಗಂಗಾತೀರದಲ್ಲಿ ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ

## ನಾಡಪ್ರಭು ಕೆಂಪೇಗೌಡ ವಿಮಾನ ನಿಲ್ದಾಣ ಕನ್ನಡ ಪುಸ್ತಕ ಮಳಿಗೆ ಆರಂಭ

• ಉದಯವಾಹಿನಿ, ಉತ್ತರಖಂಡ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ.)ವತಿಯಿಂದ ಉತ್ತರಖಂಡ್‌ನ ಹರಿದ್ವಾರ ಮತ್ತು ಋಷಿಕೇಶದ ಸನ್ನಿಧಿಯಲ್ಲಿ ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ ಉದ್ಘಾಟನೆಯನ್ನು ಆದಾಯ ತೆರಿಗೆ ಇಲಾಖೆಯ ಆಯುಕ್ತರಾದ ಆರ್. ಎಲ್.ದೀಪಕ್ ರವರು ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮುಖ್ಯ ಅತಿಥಿಗಳಾಗಿ ಮಾಜಿ ಮಹಾಪೌರರಾದ ಎಂ. ಗೌತಮ್ ಕುಮಾರ್ ,ಚಲನಚಿತ್ರ ನಟ ನೆನಪಿರಲಿ ಪ್ರೇಮ್ ,ಪಲಿಮಾರು ಮಠ ಪ್ರಬಂಧಕರು ಹರಿದ್ವಾರ್ ಹಾಗೂ ರಾಜ್ಯಾಧ್ಯಕ್ಷರು, ಹಿಂದು ರಕ್ಷಾ, ಸೇನಾ ಗೋ ಸೇವಾ ಸಮಿತಿಯ ಪ್ರಭಾಕರ್ ಮಂಜುನಾಥ್ ಮಹದೇವಪುರ ವಲಯ ಜಂಟಿ ಆಯುಕ್ತರಾದ ಡಾ, ದಾಕ್ಷಾಯಿಣಿ, ಕೆ.ಎ.ಎಸ್,ವಕೀಲರಾದ ವಿ. ಶ್ರೀನಿವಾಸ್,ಭೀಮಪುತ್ರಿ ಬ್ರಿಗೇಡ್ ಅಧ್ಯಕ್ಷರಾದ ಭೀಮಪುತ್ರಿ ರೇವತಿರಾಜ್ ರವರು ದೀಪ ಬೆಳಗಿಸಿ ಉದ್ಘಾಟನೆ ಮಾಡಿದರು. ಚಲನಚಿತ್ರ ನಟ ಪ್ರೇಮ್ ರವರು ಮಾತನಾಡಿ ಕನ್ನಡ ಭಾಷೆಯನ್ನ ಪಸರಿಸುವ ಕಾರ್ಯ ಪ್ರತಿಯೊಬ್ಬರು ಮಾಡಬೇಕು. ಬೇರೆ ಭಾಷೆಯನ್ನ ದ್ವೇಷ ಮಾಡುವುದಿಲ್ಲ, ನಮ್ಮ ಭಾಷೆಯನ್ನ ಬಿಟ್ಟುಕೊಡಬಾರದು.

ಬೆಂಗಳೂರಿನ ನಾಡಪ್ರಭು ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಕನ್ನಡ ಪುಸ್ತಕದ ಮಳಿಗೆ ತೆರೆಯಬೇಕು ಎಂದು ಆಯುಕ್ತರಿಗೆ ಮನವಿ ಮಾಡಲಾಗಿದೆ. ಕನ್ನಡ ಸಾಹಿತ್ಯ ಮತ್ತು ಚಲನಚಿತ್ರ ರಂಗ ಉಳಿಯಬೇಕು ಎಂದರೆ ಪ್ರತಿಯೊಬ್ಬರು ಕನ್ನಡ ಪುಸ್ತಕ ಖರೀದಿಸಬೇಕು ಮತ್ತು ಚಲನಚಿತ್ರ ರಂಗಮಂದಿರಕ್ಕೆ ಬಂದು ಚಿತ್ರ ವೀಕ್ಷಣೆ ಮಾಡಬೇಕು ಕನ್ನಡ ಸಾಹಿತ್ಯ, ಚಲನಚಿತ್ರ ರಂಗ ಉಳಿಯುತ್ತದೆ. ಮದುವೆ, ಗೃಹ ಪ್ರವೇಶ ಕಾರ್ಯಕ್ರಮಕ್ಕೆ ಹೋಗುವವರು ಕನ್ನಡ ಪುಸ್ತಕವನ್ನು ಉಡುಗೊರೆಯಾಗಿ ನೀಡಿ ಎಂದು ಹೇಳಿದರು.


ಉದಯವಾಹಿನಿ ಚಿತ್ರ

> **ನಮ್ಮ ಸಂಘದಿಂದ ಕಾಶಿಯಲ್ಲಿ ರಾಷ್ಟ್ರೀಯ ಮತ್ತು ನೇಪಾಳದಲ್ಲಿ ಅಂತರಾಷ್ಟ್ರೀಯ ಹಾಗೂ ಇದೀಗ ಹರಿದ್ವಾರದಲ್ಲಿ ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ ಅಚರಿಸಲಾಗುತ್ತಿದೆ. ಬಿಬಿಎಂಪಿ ಕೇಂದ್ರ ಕಛೇರಿಯಲ್ಲಿ ಡಾ.ರಾಜ್ ಕುಮಾರ್ ಮತ್ತು ಡಾ.ಪುನೀತ್ ರಾಜ್ ಕುಮಾರ್ ಪ್ರತಿಮೆಯನ್ನು ಸ್ಥಾಪಿಸಲಾಗಿದೆ. ಕನ್ನಡ ಭಾಷೆ ಉಳಿಸಿ, ಬೆಳಸಬೇಕು ಎಂದರೆ ಪ್ರತಿಯೊಬ್ಬರು ಕನ್ನಡದಲ್ಲಿ ಮಾತನಾಡಬೇಕು, ಕನ್ನಡದಲ್ಲಿ ವ್ಯವಹಾರಿಸಬೇಕು ಎಂದು ಹೇಳಿದರು.**



ಆಯುಕ್ತರಾದ ಆರ್.ಎಲ್.ದೀಪಕ್ ರವರು ಸಾಹಿತ್ಯ, ಸಂಗೀತದ ಆಸಕ್ತಿ ಎಲ್ಲರು ಬೆಳಸಿಕೊಳ್ಳಿ ಇದರಿಂದ ಮಾನಸಿಕವಾಗಿ ಸದೃಢವಾಗಿ ಇರಬಹುದು. ಕನ್ನಡ ಭಾಷೆಯನ್ನು ಅತ್ಯಂತ ಸರಳ ಸುಂದರ ಆಡು ಭಾಷೆಯಾಗಿದೆ. ಕನ್ನಡ ಭಾಷೆಗೆ 8 ಜ್ಞಾನಪೀಠ ಪ್ರಶಸ್ತಿ ಬಂದಿದೆ ಇದರಿಂದ ತಿಳಿಯುತ್ತದೆ ಕನ್ನಡ ಭಾಷೆ ಎಷ್ಟು ಶ್ರೀಮಂತವಾಗಿದೆ ಎಂದು ಹೇಳಿದರು.

ಮಾಜಿ ಮಹಾಪೌರರಾದ ಗೌತಮ್ ಕುಮಾರ್ ರವರು ಮಾತನಾಡಿ ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡಭಾಷೆ, ಸರಳ, ಸುಂದರ ಭಾಷೆ ಎಂಬ ಹೆಗ್ಗಳಿಕೆ ಪಾತ್ರವಾಗಿದೆ, ಕನ್ನಡ ನಾಡಿನಲ್ಲಿ ಹುಟ್ಟಲು ಏಳು ಜನ್ಮದ ಪುಣ್ಯ ಮಾಡಿರಬೇಕು. ಬೆಂಗಳೂರುನಗರ ಅಭಿವೃದ್ಧಿಗೆ ಮತ್ತು ಕನ್ನಡಿಗರ ಸೇವೆ ಮಾಡಲು ಬಿಬಿಎಂಪಿಯಲ್ಲಿ ಮಹಾಪೌರರಾಗಿ ಸೇವೆ ಸಲ್ಲಿಸಲು ನನಗೆ ಅವಕಾಶ ಸಿಕ್ಕಿರುವುದು ಪೂರ್ವ ಜನ್ಮದ ಪುಣ್ಯದ ಫಲ ಎಂದು ಹೇಳಿದರು. ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮಾತನಾಡಿ ಬಿಬಿಎಂಪಿಯಲ್ಲಿ ಸಂಪೂರ್ಣ ಆಡಳಿತ ವ್ಯವಹಾರ ಕನ್ನಡ ಭಾಷೆಯಲ್ಲಿ ನಡೆಯುತ್ತಿದೆ. ಕನ್ನಡ ಭಾಷೆ ವಿಶ್ವ ಭಾಷೆಯಾಗಬೇಕು, ಕನ್ನಡ ಸಂಸ್ಕೃತಿ ಎಲ್ಲರಿಗೂ ಪರಿಚಯವಾಗಬೇಕು ಎಂದು ಹೊರ ನಾಡಿನಲ್ಲಿ ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ ಅಚರಿಸಲಾಗುತ್ತಿದೆ. ಬಿಬಿಎಂಪಿ ಅಧಿಕಾರಿ, ನೌಕರರಿಂದ ಸಾಂಸ್ಕೃತಿಕ ಕಾರ್ಯಕ್ರಮ ಖ್ಯಾತ ಗಾಯಕಿ ಎಂ.ಡಿ.ಪಲ್ಲವಿರವರಿಂದ ಭಾವಗೀತೆ ಮತ್ತು ಕುಮಾರಿ ಭಾಗ್ಯ ಶ್ರೀ ಗೌಡರವರಿಂದ ಚಲನಚಿತ್ರ ಗೀತೆ ಕಾರ್ಯಕ್ರಮ. ಹರಿದ್ವಾರದ ಕರ್ನಾ ಟಕ ರಾಜ್ಯೋತ್ಸವದಲ್ಲಿ ಉಪ ಆರೋಗ್ಯಧಿಕಾರಿ ಡಾ, ಸಂಧ್ಯಾ ಮತ್ತು ಆಡಳಿತಗಾರರ ಅಪ್ತ ಕಾರ್ಯದರ್ಶಿ ನಾರಾಯಣಸ್ವಾಮಿ , ಬಿಬಿಎಂಪಿ ನೌಕರರ ಕನ್ನಡ ಸಂಘದ ಅಧ್ಯಕ್ಷರಾದ ಸಾಯಿಶಂಕರ್ ರವರಿಗೆ ಗೌರವ ಸನ್ಮಾನ ಮಾಡಲಾಯಿತು ಸಂಘದ ಪದಾಧಿಕಾರಿಗಳಾದ ಬಾಬಣ್ಣ, ಡಾ.ಶೋಭಾ, ಡಿ.ರಾಮಚಂದ್ರ, ಕೆ.ಜಿ.ರವಿ, ರುದ್ರೇಶ್ ಬಿ., ಸೋಮಶೇಖರ್ ಎನ್.ಎಸ್., ಹೆಚ್. ಕೆ.ತಿಪ್ಪೇಶ್, ಹರೀಶ್ ಹೆಚ್.ಬಿ., ನರಸಿಂಹ, ಮಂಜೇಗೌಡ, ಆರ್.ರೇಣುಕಾಂಬ,ಎಸ್.ಜಿ.ಸುರೇಶ್, ಮಂಜುನಾಥ್, ಸಂತೋಷ್ ಕುಮಾರ್ ನಾಯ್ಕ, ಶ್ರೀಧರ್, ಸಂತೋಷ್ ಕುಮಾರ್ ರವರು ಉಪಸ್ಥಿತರಿದ್ದರು.

# ಮಕ್ಕಳಿಗೆ 'ಗಾಂಧಿ ಜೀವನ' ದರ್ಶನ: ಸಾರ್ವಜನಿಕರ ಪ್ರವೇಶಕ್ಕೆ ಮುಕ್ತ

## ನಗರದ ರೈಲ್ವೆ ನಿಲ್ದಾಣ ಬಳಿ ನಿರ್ಮಿಸಲಾಗಿರುವ ಗಾಂಧಿ ಭವನವನ್ನು ಪ್ರವಾಸಿ ತಾಣವನ್ನಾಗಿ ಮಾಡಲು ಜಿಲ್ಲಾಡಳಿತ ಸಿದ್ಧತೆ

• ಉದಯವಾಹಿನಿ ಹಾವೇರಿ

ದೇಶಕ್ಕೆ ಸ್ವಾತಂತ್ರ್ಯ ತಂದುಕೊಡುವಲ್ಲಿ ಮಹತ್ತರ ಪಾತ್ರವಹಿಸಿದ್ದ ಮಹಾತ್ಮ ಗಾಂಧೀಜಿ ಅವರ ಜೀವನ ಹಾಗೂ ತತ್ವಾದರ್ಶಗಳನ್ನು ಜನರಿಗೆ ತಿಳಿಸುವ ಉದ್ದೇಶದಿಂದ ನಿರ್ಮಿಸಲಾಗಿರುವ ಗಾಂಧಿಭವನವನ್ನು ಸಾರ್ವಜನಿಕರ ಪ್ರವೇಶಕ್ಕೆ ಮುಕ್ತಗೊಳಿಸಲು ಜಿಲ್ಲಾಡಳಿತ ಮುಂದಾಗಿದೆ.

ನಗರದ ರೈಲ್ವೆ ನಿಲ್ದಾಣ ಬಳಿ ನಿರ್ಮಿಸಲಾಗಿರುವ ಗಾಂಧಿಭವನವನ್ನು ಪ್ರವಾಸಿ ತಾಣವನ್ನಾಗಿ ಮಾಡಲು ಜಿಲ್ಲಾಡಳಿತ ಸಿದ್ಧತೆ ನಡೆಸುತ್ತಿದೆ. ಆರಂಭಿಕ ಹಂತದಲ್ಲಿ ಶಾಲಾ ಮಕ್ಕಳಿಗೆ ಗಾಂಧಿಭವನದ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ.

ಗಾಂಧಿಭವನಕ್ಕೆ ಭೇಟಿ ನೀಡಿದ್ದ ಕೆಲ ಮಕ್ಕಳು, ಗಾಂಧಿಭವನದಲ್ಲಿರುವ ಪ್ರದರ್ಶನವನ್ನು ವೀಕ್ಷಿಸಿದರು. ಗಾಂಧಿ ಜಯಂತಿ ಹಾಗೂ ಇತರೆ ಸರ್ಕಾರಿ ಕಾರ್ಯಕ್ರಮಗಳಿಗೆ ಮಾತ್ರ ಸೀಮಿತವಾಗಿದ್ದ ಗಾಂಧಿಭವನವನ್ನು ಮುಂದಿನ ದಿನಗಳಲ್ಲಿ ಪ್ರವಾಸಿ ತಾಣವಾಗಿ ಮಾರ್ಪಾಡು ಮಾಡುವ ಉದ್ದೇಶ ಜಿಲ್ಲಾಡಳಿತದ್ದಾಗಿದೆ. ಇದಕ್ಕೆ ಬೇಕಾದ ತಯಾರಿಯೂ ಭರದಿಂದ ನಡೆಯುತ್ತಿದೆ.

**ಪ್ರವೇಶ ದರ ನಿಗದಿಗೆ ಚಿಂತನೆ:** ಗಾಂಧಿಭವನ ನಿರ್ವಹಣೆ ಹಾಗೂ ಇತರೆ ಕೆಲಸಗಳಿಗೆ ಸಿಬ್ಬಂದಿಯ ಅಗತ್ಯವಿದೆ. ಅವರಿಗೆ ವೇತನ ನೀಡಬೇಕು. ಗಾಂಧಿಭವನದಲ್ಲಿ ಮೂಲ ಸೌಕರ್ಯ ಕಲ್ಪಿಸಲೂ ಹಣದ ಅಗತ್ಯವಿರುತ್ತದೆ.

ಹೀಗಾಗಿ, ಪ್ರವೇಶ ಶುಲ್ಕ ನಿಗದಿಪಡಿಸುವ ಬಗ್ಗೆ ಜಿಲ್ಲಾಡಳಿತ ಚಿಂತನೆ ನಡೆಸಿದೆ. 'ಗಾಂಧಿಭವನ ಪ್ರವೇಶಕ್ಕೆ 5 ದರ ನಿಗದಿಪಡಿಸುವ ಬಗ್ಗೆ ಚಿಂತನೆ ನಡೆದಿದೆ. ಸದ್ಯಕ್ಕೆ ಶುಲ್ಕ ಬೇಡವೆಂದು ಜಿಲ್ಲಾಧಿಕಾರಿ ಹೇಳಿದ್ದಾರೆ. ಗಾಂಧಿಭವನಕ್ಕೆ ಬರುವ ಜನರ ಸಂಖ್ಯೆಯನ್ನು ನೋಡಿಕೊಂಡು ಶುಲ್ಕದ ಬಗ್ಗೆ ಮುಂದಿನ ದಿನಗಳಲ್ಲಿ ತೀರ್ಮಾನ ಕೈಗೊಳ್ಳಲಾಗುವುದು' ಎಂದು ಚಿನ್ನಿಕಟ್ಟಿ ಹೇಳಿದರು.

'ಗಾಂಧಿಭವನಕ್ಕೆ ಭೇಟಿ ನೀಡಲು ಮಕ್ಕಳಿಗೆ ಮೊದಲಿಗೆ ಪ್ರವೇಶ ಕಲ್ಪಿಸಲಾಗುತ್ತಿದೆ. ಇದಕ್ಕಾಗಿ ಹಲವು ಶಾಲೆಗಳಿಗೆ ಈಗಾಗಲೇ ಮಾಹಿತಿ ನೀಡಲಾಗಿದೆ. ಕೆಲ ಶಾಲೆಗಳ ಶಿಕ್ಷಕರು, ಮಕ್ಕಳನ್ನು ಗಾಂಧಿಭವನಕ್ಕೆ ಕರೆತಂದು ತೋರಿಸಿದ್ದಾರೆ' ಎಂದು ತಿಳಿಸಿದರು.

ಮಹಾತ್ಮ ಗಾಂಧೀಜಿಯವರು 1934ರಲ್ಲಿ ಹಾವೇರಿಯಲ್ಲಿ ಪ್ರವಾಸ ಕೈಗೊಂಡಿದ್ದರು. ಇದೇ ಸಂದರ್ಭದಲ್ಲಿ ಮಾರ್ಚ್ 1ರಂದು ರೈಲ್ವೆ ನಿಲ್ದಾಣ ಬಳಿಯ ಸ್ಥಳದಲ್ಲಿ ಧರ್ಮಶಾಲಾ ಕಟ್ಟಡದ ಶಂಕುಸ್ಥಾಪನೆ ನೆರವೇರಿಸಿದ್ದರು. ಎರಡು ಅಡಿಗಲ್ಲುಗಳನ್ನು ಸಹ ಇರಿಸಲಾಗಿತ್ತು. ರೈಲ್ವೆ ನಿಲ್ದಾಣಕ್ಕೆ ಹೊಂದಿಕೊಂಡಿರುವ ಈ ಜಾಗದಲ್ಲಿ ಗಾಂಧೀಜಿ ಓಡಾಡಿದ್ದರು. ಅವರು ನೆರವೇರಿಸಿದ್ದ ಶಂಕುಸ್ಥಾಪನೆಯ ಅಡಿಗಲ್ಲುಗಳು ಇಂದಿಗೂ ಸ್ಥಳದಲ್ಲಿವೆ. ಅವುಗಳನ್ನು ಸ್ಮಾರಕ ರೀತಿಯಲ್ಲಿ ಸಂರಕ್ಷಣೆ ಮಾಡಲಾಗಿದೆ. ಗಾಂಧೀಜಿ ಭೇಟಿ ನೀಡಿದ್ದ ಸ್ಥಳವಾಗಿದ್ದರಿಂದ ಇದೇ ಜಾಗದಲ್ಲಿ ಗಾಧೀಜಿ ಭೇಟಿಯ ಸವಿನೆನಪಿನಲ್ಲಿ ಗಾಂಧಿಭವನ ನಿರ್ಮಿಸಲಾಗಿದೆ.

2024ರ ಫೆಬ್ರುವರಿ 18ರಂದು ಗಾಂಧಿಭವನವನ್ನು ಉದ್ಘಾಟಿಸಲಾಗಿದೆ. ಗಾಂಧಿಭವನದ ಆವರಣದಲ್ಲಿ ಗಾಂಧೀಜಿ ಪುತ್ಥಳಿ ದಂಡಿ ಸತ್ಯಾಗ್ರಹ ನೆನಪಿಸುವ ಪ್ರತಿಕೃತಿಗಳಿವೆ. ಗಾಂಧಿಭವನ ಒಳಗೆ ಹೋಗುತ್ತಿದ್ದಂತೆ ಗಾಂಧೀಜಿ ಜೀವನದ ಪ್ರತಿಯೊಂದು ಕ್ಷಣಗಳು ನೆನಪಿಗೆ ಬರುತ್ತವೆ. ಗಾಂಧೀಜಿ ಹಾಗೂ ಕಸ್ತೂರಬಾ ಅವರ ಪ್ರತಿಕೃತಿಗಳು ಕಣ್ಣಿಗೆ ಕಾಣುತ್ತವೆ. ಚರಕದಲ್ಲಿ ನೂಲು ನೇಯ್ಯುವ ಗಾಂಧೀಜಿ ಪ್ರತಿಮೆಯೂ ಇದೆ. ಮೋಹನ್ ದಾಸ್ ಟು ಮಹಾತ್ಮ' ಹೆಸರಿನ ಕೊಠಡಿಯಲ್ಲಿ ಬಾಪೂಜಿ ಜೀವನ ತಿಳಿಸುವ ಸ್ತಬ್ಧಚಿತ್ರಗಳು ಫೋಟೊಗಳು ಹಾಗೂ ಪರಿಕರಗಳನ್ನು ಇರಿಸಲಾಗಿದೆ.





ಉದಯವಾಹಿನಿ ಚಿತ್ರ

### ಗಾಂಧಿಭವನ ಮಕ್ಕಳ ವೀಕ್ಷಣೆಗೆ ಮುಕ್ತ

**ನಗರದ ದೇವಗಿರಿ ಬಳಿ ಪ್ರಾದೇಶಿಕ ವಿಜ್ಞಾನ ಕೇಂದ್ರ ತೆರೆಯಲಾಗಿದ್ದು, ಇದು ಮಕ್ಕಳ ವಿಜ್ಞಾನ ಜ್ಞಾನಾಭಿವೃದ್ಧಿ ಕೇಂದ್ರವಾಗಿದೆ. ಇದರ ಜೊತೆಯಲ್ಲಿಯೇ ಇದೀಗ ಗಾಂಧಿಭವನವನ್ನು ಮಕ್ಕಳ ವೀಕ್ಷಣೆಗೆ ಮುಕ್ತಗೊಳಿಸಲಾಗುತ್ತಿದ್ದು, ಗಾಂಧಿ ಜೀವನ ಹಾಗೂ ತತ್ವಗಳು ಮಕ್ಕಳಿಗೆ ಮನದಟ್ಟಾಗುವಂತೆ ತಿಳಿಯಲಿದೆ. ಸದಾ ಬಾಗಿಲು ಹಾಕಿರುತ್ತಿದ್ದ ಗಾಂಧಿಭವನ, ಶನಿವಾರದಿಂದ ಬಾಗಿಲು ತೆರೆದಿದೆ. ಗಾಂಧಿಭವನ ಹೊರಗಿನ ಸ್ಥಳ ಹಾಗೂ ಒಳಭಾಗದಲ್ಲಿ ಸ್ವಚ್ಛತೆ ಮಾಡಲು ಸಿಬ್ಬಂದಿಯನ್ನೂ ನೇಮಿಸಲಾಗಿದೆ. ನಿರ್ವಹಣೆಗೂ ಪ್ರತ್ಯೇಕ ಸಿಬ್ಬಂದಿ ನಿಯೋಜಿಸಲಾಗಿದೆ.**

**ಗಾಂಧೀಜಿ ಅವರು ಬಂದು ಹೋಗಿದ್ದ ಧರ್ಮಶಾಲಾ ಕಟ್ಟಡವಿದ್ದ ಸ್ಥಳದಲ್ಲಿಯೇ ಗಾಂಧಿಭವನ ನಿರ್ಮಿಸಲಾಗಿದೆ. ಇದುವರೆಗೂ ಕಟ್ಟಡ ವಾರ್ತಾ ಮತ್ತು ಸಾರ್ವಜನಿಮ ಸಂಪರ್ಕ ಇಲಾಖೆ ಅಧೀನದಲ್ಲಿತ್ತು. ಈಗ ಈ ಕಟ್ಟಡವನ್ನು ಜಿಲ್ಲಾಡಳಿತಕ್ಕೆ ಹಸ್ತಾಂತರಿಸಲಾಗಿದೆ. ಈ ಬಗ್ಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳು, ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ ದಾನಮ್ಮನವರ ಅವರಿಗೆ ಪತ್ರ ಬರೆದಿದ್ದಾರೆ**

**-ಆರ್.ವಿ.ಚಿನ್ನಿಕಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ**

**ಪ್ರವಾಸಿ ತಾಣವಾಗಿ ಮಾರ್ಪಾಡು**

---

# ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಗುರು ಸ್ಪಂದನ ಆಯೋಜನೆ: ಜಾಹೀದಾ

• ಉದಯವಾಹಿನಿ, ವಡಗೇರಾ

ಶಿಕ್ಷಕರ ಕುಂದು ಕೊರತೆಗಳ ನಿವಾರಣೆಗೆ ಶಿಕ್ಷಣ ಇಲಾಖೆ ಸದಾ ಸಿದ್ಧವಿದೆ ಎಂದು ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಜಾಹೀದಾ ಬೇಗಂ ಹೇಳಿದರು.

ವಡಗೇರಾ ಪಟ್ಟಣದ ಸರಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾ ಪಂಚಾಯತ್ ಯಾದಗಿರಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮತ್ತು ತಾಲ್ಲೂಕು ಶಿಕ್ಷಕರ ಸಂಘದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಡಗೇರಾ ವಲಯದ ಗುರು ಸ್ಪಂದನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಸ್ಯೆಗಳ ಪರಿಹಾರಕ್ಕೆ ನಿಮ್ಮ ಜೊತೆ ಬೆನ್ನೆಲುಬಾಗಿ ಶಿಕ್ಷಣ ಇಲಾಖೆ ಇರುತ್ತದೆ ಎದೆ ಗುಂದದಿರಿ ಮಕ್ಕಳ ಏಳಿಗೆಯಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವವಾದದ್ದು ಆದ್ದರಿಂದ ಶಿಕ್ಷಕರು ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವುದರ ಜೊತೆಗೆ ಉತ್ತಮ ಸಂಸ್ಕಾರ ಕಲಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಮಕ್ಕಳಿಗಾಗಿ ಸರಕಾರದಿಂದ ಬರುವ ಸಕಲ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವಂತೆ ತಿಳಿಸಿದರು. ಶಿಕ್ಷಕರಿಗಿರುವ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲೆಂದು ವಲಯ ಮಟ್ಟದಲ್ಲಿ ಗುರುಸ್ಪಂದನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಕ್ಷೇತ್ರ ಸಮನ್ವಯಧಿಕಾರಿಗಳಾದ ಶ್ರೀಮತಿ ರೇಣುಕಾ ಪಾಟೀಲ್ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವಡಗೇರಾ ತಾಲ್ಲೂಕು ಅಧ್ಯಕ್ಷ ಶಂಕ್ರಪ್ಪ ಗೊಂದೆನೂರ ವಹಿಸಿಕೊಂಡಿದ್ದರು.

ಈ ಸಂದರ್ಭದಲ್ಲಿ ಚಂದಪ್ಪ ಅಧ್ಯಕ್ಷರು ಪ್ರಾ. ಶಾ.ಶಿ.ಸಂಘ ಶಹಾಪುರ, ಸಾಹೇಬರೆಡ್ಡಿ ಇಟಗಿ ಪ್ರಧಾನ ಕಾರ್ಯದರ್ಶಿ,ಇಸಿಓ ಗಳಾದ ಮಲ್ಲಿಕಾರ್ಜುನ್, ಸಿದ್ದರಾಮಪ್ಪ , ಬಿಆರ್‌ಪಿ ಗಳಾದ ಮೋಹಿಸಿನ ಖಾನ ರವೀಂದ್ರ ಪವಾರ್, ಕಸ್ತೂರಿ ಬಾ ಗಾಂಧಿ ಬಾಲಕಿಯರ ಶಾಲೆಯ ಮುಖ್ಯ ಶಿಕ್ಷಕಿ ಲಲಿತಾಬಾಯಿ ನಾಟೇಕಾರ, ವಲಯ ಸಿ.ಆರ್‌ಪಿಗಳು, ಶಿಕ್ಷಕರು ಹಾಗೂ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗ ಹಾಗೂ ಇನ್ನಿತರರು ಹಾಜರಿದ್ದರು. ಈ ಕಾರ್ಯಕ್ರಮವನ್ನು ಪದವಿಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಖಾಜಾ ಮೈನುದ್ದೀನ್ ಚಟ್ನಳ್ಳಿ ನಿರೂಪಿಸಿ ವಂದಿಸಿದರು.



ಉದಯವಾಹಿನಿ ಚಿತ್ರ

**ಮಕ್ಕಳ ಏಳಿಗೆಯಲ್ಲಿ ಶಿಕ್ಷಕರ ಪಾತ್ರ ಪ್ರಮುಖ**

---

# 3,925 ಬಿಪಿಎಲ್ ಕಾರ್ಡ್‌ಗಳು ಎಪಿಎಲ್‌ಗೆ ಬದಲಾವಣೆ

• ಉದಯವಾಹಿನಿ, ಹಾಸನ

ಜಿಲ್ಲೆಯಲ್ಲಿ ಸುಮಾರು 4,40,506 ಪಡಿತರ ಚೀಟಿಗಳಿದ್ದು, ಇದರಲ್ಲಿ 3,925 ಬಿಪಿಎಲ್ ಪಡಿತರ ಚೀಟಿಗಳನ್ನು ಎಪಿಎಲ್‌ಗೆ ಬದಲಾಯಿಸಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಬಿ. ಅರುಣ್ ಕುಮಾರ್ ಸಂಗಾವಿ ತಿಳಿಸಿದರು.

ನಗರದ ತಮ್ಮ ಕಚೇರಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಜಿಲ್ಲೆಯಲ್ಲಿ ಸುಮಾರು 4,40,506 ಪಡಿತರ ಚೀಟಿಯಲ್ಲಿ 23,068 ಅಂತ್ಯೋದಯ, 4,16,438 ಬಿಪಿಎಲ್ ಪಡಿತರ ಚೀಟಿಗಳಿವೆ.

ಇದರಲ್ಲಿ ಮರಣ ಹೊಂದಿರುವವರು, ವಾಣಿಜ್ಯ ತೆರಿಗೆ ಪಾವತಿದಾರರು, ಸರ್ಕಾರಿ ನೌಕರಿ ಹೊಂದಿರುವವರ ಮಾಹಿತಿಯನ್ನು ಇ-ಗವರ್ನೆನ್ಸ್ ಮತ್ತು ಆಯುಕ್ತರ ಕಚೇರಿ ಮೂಲಕ ಪಡೆದು, 3925 ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್‌ಗೆ ಬದಲಾಯಿಸಲಾಗಿದೆ ಎಂದರು. ಜಿಲ್ಲೆಯಲ್ಲಿ 599 ಕಾರ್ಡ್‌ಗಳಲ್ಲಿ ಮೃತ ಮೃತಪಟ್ಟವರ ಹೆಸರನ್ನು ತೆಗೆಯಲಾಗಿದೆ. ಸತತವಾಗಿ ಆರು ತಿಂಗಳು ಪಡಿತರ ಪಡೆಯದ 9,505 ಕಾರ್ಡ್‌ಗಳನ್ನು ಅಮಾನತಿನಲ್ಲಿ ಇಡಲಾಗಿದೆ. ಆಯಾ ತಾಲ್ಲೂಕು ತಹಶೀಲ್ದಾರರು ತನಿಖೆ ನಡೆಸಿ, ವರದಿ ನೀಡಿದ ಬಳಿಕ ಈ ಕಾರ್ಡ್‌ಗಳಿಗೆ ಮರು ಚಾಲನೆ ನೀಡಲಾಗುವುದು ಎಂದರು. ಜಿಲ್ಲೆಯಲ್ಲಿ ಸರ್ಕಾರಿ ನೌಕರರು ಹೊಂದಿದ್ದ 102 ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್‌ಗೆ ಬದಲಾಯಿಸಲಾಗಿದೆ. ವಾಣಿಜ್ಯ ತೆರಿಗೆ ಪಾವತಿ ಮಾಡುತ್ತಿರುವ ಸುಮಾರು 3,408 ಕಾರ್ಡ್, 1.20 ಲಕ್ಷ ವಾರ್ಷಿಕ ವರಮಾನ ಇರುವ 415 ಕಾರ್ಡ್‌ಗಳನ್ನು ಎಪಿಎಲ್‌ಗೆ ಬದಲಾಯಿಸಲಾಗಿದೆ ಎಂದು ವಿವರಿಸಿದರು.



ಉದಯವಾಹಿನಿ ಚಿತ್ರ

---

# 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ನವ ಕರ್ನಾಟಕ ಜನಪರ ಸಮಿತಿ ವತಿಯಿಂದ 69ನೇಯ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಅದ್ದೂರಿಯಾಗಿ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ಉದ್ಘಾಟಿಸಿದರು,ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಬಸವರಾಜೇಶ್ವರಿ ಹಾಲು ಅಧ್ಯಕ್ಷತೆ ವಹಿಸಿದ್ದರು. ನವ ಕರ್ನಾಟಕ ಜನಪರ ಸಮಿತಿ ಅಧ್ಯಕ್ಷ ಶಿವಪ್ರಕಾಶ ಕಟ್ಟಿಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು,ವಿಶೇಷ ಉಪನ್ಯಾಸಕರಾಗಿ ಮಲ್ಲಿಕಾರ್ಜುನ ಪಾಲಾಮೋರ್ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಪಿಎಸ್ಐ ಗಂಗಮ್ಮ ಜಿನಿಕೆರಿ,ನಾಗಪ್ಪ ಮೇಲ್ವಾರ್, ಸುರೇಶ ದೇಶಪಾಂಡೆ, ಯಲ್ಲಾಲಿಂಗ ದಂಡೀನ್, ಶರಣು ತೆಗಲತಿಪ್ಪಿ, ವಸಿಂ ಆಕ್ರಂ, ಪ್ರವೀಣ ಮೇತ್ರಿ,ಅಂಬರೀಶ್ ಹೋಸಮನಿ, ನಾಗೇಶ ಸುಕಂದ, ಪುಟ್ಟರಾಜ, ನಾಗೇಶ, ಮಂಜುನಾಥ, ರಮೇಶ,ವಿಧ್ಯಾಸಾಗರ, ಅತೀಕ್, ಕಲಿಂ, ಸಂಜೀವಕುಮಾರ ಪಾಟೀಲ, ಶ್ರೀಕಾಂತ ಜಾನಕಿ, ವಿಠ್ಠಲ ಕುಸಾಳೆ, ಉಲ್ಲಾಸಕುಮಾರ, ಸಚಿನ್ ಚವ್ಹಾಣ, ದಯಾನಂದ, ಬಸವರಾಜ, ಶಿವಕುಮಾರ, ಅಜಯ, ಶರಣಪ್ಪಾ, ಭಾಗ್ಯವಂತ, ವಿಲಾಸಕುಮಾರ, ಸಾಗರ ಆನಂದಿ, ಸುರೇಶ, ಸುನಿಲ್, ಮೀನಾಕ್ಷಿ, ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಅನೇಕರಿದ್ದರು.

ಇದಕ್ಕೂ ಮುಂಚೆ ನವ ಕರ್ನಾಟಕ ಜನಪರ ಸಮಿತಿ ವತಿಯಿಂದ 69ನೇ ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮದ ಆಚರಣೆ ಅಂಗವಾಗಿ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಚಂದಾಪೂರದ ಗಾಂಧೀಜಿ ಚೌಕ್ ವರೆಗೆ ಬೈಕ್ ರ್‍ಯಾಲಿ ನಡೆಸಿ ಕನ್ನಡ ನಾಡು ನುಡಿ ಧ್ವಜ ಬಗ್ಗೆ ಕನ್ನಡ ಮೆರಗು ತಂದು ಮೆರವಣಿಗೆ ಮೂಲಕ ಕನ್ನಡ ಅಭಿಮಾನ ಬಿತ್ತರಿಸಿದರು.



ಉದಯವಾಹಿನಿ ಚಿತ್ರ

**ಮೆರವಣಿಗೆ ಮೂಲಕ ಕನ್ನಡ ಅಭಿಮಾನ**

---

# ಪ್ರತಿಭೆಗೊಂದು ರಂಗ ವೇದಿಕೆ ವಿನೂತನ ಕಾರ್ಯಕ್ರಮ

## ನ.23-24ರಂದು ರಂಗ ಸುವರ್ಣ,ರಂಗಸಿರಿ ಪ್ರಶಸ್ತಿ ಪ್ರದಾನ,ಉಚಿತ ನಾಟಕೋತ್ಸವ

• ಉದಯವಾಹಿನಿ,ಚಿಂಚೋಳಿ

ರಂಗಮಿತ್ರ ನಾಟ್ಯ ಸಂಘ ಕಲಬುರ್ಗಿಯಿಂದ ವಿವಿಧ ರೀತಿಯಲ್ಲಿ ಕಾರ್ಯಕ್ರಮಗಳು ಪ್ರತಿ ವರ್ಷದಂತೆ ಈ ವರ್ಷವು ಕೂಡ ಮಾಡುತ್ತಿದ್ದು ಎಲೆಮರಿ ಕಾಯಿಯಂತೆ ಇರುವ ಕಲಾವಿದರುನ್ನು ಗುರುತಿಸಿ ರಂಗ ಸುವರ್ಣ ಪ್ರಶಸ್ತಿ 05ಗ್ರಾಂ. ಚಿನ್ನದ ಜೋತೆ ದಂಪತಿಗಳಿಗೆ ಹೊದಿಕೆ ನೆನಪಿನ ಕಾಣಿಕೆ ಮತ್ತು ರಂಗಸಿರಿ ಪ್ರಶಸ್ತಿ ನೆನಪಿನ ಕಾಣಿಕೆ ಗೌರವ ಸತ್ಕಾರ ಮಾಡಲಾಗುವುದು ಎಂದು ರಂಗಮಿತ್ರ ನಾಟ್ಯ ಸಂಘದ ಜಿಲ್ಲಾ ಪ್ರಧಾನ ಸಂಯೋಜಕ ಲಕ್ಷ್ಮಣ ಆವುಂಟಿ ಹೇಳಿದರು.

ವಿಧಾನಸಭಾ ಮತಕ್ಷೇತ್ರದ ಕಾಳಗಿ ತಾಲ್ಲೂಕಿನ ಪ್ರವಾಸಿ ಮಂದಿರದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿಭೆಗೊಂದು ರಂಗ ವೇದಿಕೆ ವಿನೂತನ ಕಾರ್ಯಕ್ರಮ ಅಡಿಯಲ್ಲಿ ರಂಗಮಿತ್ರ ನಾಟ್ಯ ಸಂಘದಿಂದ ಕಲಬುರ್ಗಿಯ ರಂಗಮಂದಿರದಲ್ಲಿ ನವೆಂಬರ್ 23 ಮತ್ತು 24ರಂದು ಹಮ್ಮಿಕೊಂಡ ಅಳ್ಳೊಳ್ಳಿಯ ಹಂಪಯ್ಯ ಮಹಾಸ್ವಾಮಿಗಳು ಮಹಾತ್ಮಪೀಠ ಇವರ ಸ್ಮರಣಾರ್ಥ ಅಂಗವಾಗಿ ಕೊಡುಮಾರುವ ಕನ್ನಡ ರಾಜ್ಯೋತ್ಸವ ಅಂಗವಾಗಿ ರಂಗ ಸುವರ್ಣ,ರಂಗಸಿರಿ ಪ್ರಶಸ್ತಿ ಪ್ರದಾನ ಜೋತೆ ಸನ್ಮಾನಿಸಿ ಗೌರವಿಸಿ ನೆನಪಿನ ಕಾಣಿಕೆ ನೀಡಲಾಗುವುದು ಹಾಗೂ ತ್ಯಾಗದ ತೊಟ್ಟಿಲು ಮತ್ತು ಅನುಮಾನ ತಂದ ಆಪತ್ತು ಎಂಬ ಎರಡು ದಿನ ಉಚಿತ ನಾಟಕೋತ್ಸವ ಮತ್ತು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಸದರಿ ಕಾರ್ಯಕ್ರಮಕ್ಕೆ ಸರ್ಕಾರದ ಸಚಿವರು ಶಾಸಕರು,ಮಠಾಧೀಶರು,ಕಲಾವಿದರು,ಆಗಮಿಸುತ್ತಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಅಭಿಮಾನಿಗಳು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು.

**ಪತ್ರಿಕಾಗೋಷ್ಠಿಯಲ್ಲಿ:** ಕವಿಗಳು ಶಂಕರಜೀ ಹೂವಿನಹಿಪ್ಪರಗಿ,ಶಿವರಾಜಪಾಟೀಲ ಗೋಣಗಿ, ರಾಜಶೇಖರ,ರೇವಣಸಿದ್ದ ಚೇಂಗಟಾ,ವೀರಣ್ಣ ಗಂಗಾಣಿ,ಸಂತೋಷ ಖನ್ನಾ,ಚಂದ್ರಶೇಟ್ಟಿ,ಜಗದೀಶ ,ಮಹೇಬೂಬಶಾ ಅಣವಾರ ಅನೇಕರಿದ್ದರು.



ಉದಯವಾಹಿನಿ ಚಿತ್ರ

### 8 ಜನರಿಗೆ ರಂಗಶ್ರೀ ಪ್ರಶಸ್ತಿ

**ಕಾಳಗಿ ತಾಲ್ಲೂಕಿನಿಂದ ಪ್ರಶಸ್ತಿಗೆ ಭಾಜನರಾದ ಕಲಾವಿದರು 1) ವೀರಣ್ಣ ಗಂಗಾಣ್ಣೆ,ರಂಗ ಸುವರ್ಣ ಪ್ರಶಸ್ತಿ 05ಗ್ರಾಂ ಚಿನ್ನ ದಂಪತಿಗಳಿಗೆ ಹೊದಿಕೆ, 2) ಸಂತೋಷ ಖನ್ನಾ ರಂಗ ಸುವರ್ಣ ಪ್ರಶಸ್ತಿ 05ಗ್ರಾಂ ಚಿನ್ನ, 3)ಬಾಬು ಗೋಪಾನ್ ಕಲಾ ಚಕ್ರವರ್ತಿ ಬಿರುದು ಪ್ರದಾನ ,4)ವಿರೇಶ ಮಾನಕರ್ ರಂಗಶ್ರೀ ಪ್ರಶಸ್ತಿಗೆ ಭಾಜನ, 5)ರಾಮರಾವ ಪಾಟೀಲ ಮೋಘಾ ವಿಶೇಷ ಸನ್ಮಾನ, ಒಟ್ಟಾರೆ 08ಜನರಿಗೆ ರಂಗಶ್ರೀ ಪ್ರಶಸ್ತಿ ಜೋತೆ ವಿವಿಧ ರೀತಿಯಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.**

---

# ಮಕ್ಕಳ ಕೈಗೆ ಭಗವದ್ಗೀತೆ ನೀಡಿ: ದೀಪಾ ದೇಸಾಯಿ

• ಉದಯವಾಹಿನಿ, ಮುದ್ದೇಬಿಹಾಳ

ಮೊಬೈಲ್ ಇಂದು ಮಕ್ಕಳನ್ನು ಭಾರತೀಯ ಸಂಸ್ಕೃತಿಯಗಳಿಂದ ದೂರ ಮಾಡುತ್ತಿದೆ. ಅಮೇರಿಕಾದಲ್ಲಿ ಗ್ಯಾಂಬ್ಲಿಂಗ್ ತತ್ವದ ಮೇಲೆ ಮೊಬೈಲ್ ಕಂಡು ಹಿಡಿಲಾಗಿದೆ. ಒಮ್ಮೆ ಬಳಸಲು ಆರಂಭಿಸಿದರೆ ಹೊರಬರುವುದೇ ಕಷ್ಟವಾಗಿದೆ. ಹೀಗಾಗಿ ಮಕ್ಕಳ ಕೈಗೆ ಮೊಬೈಲ್ ಬದಲು ಭಗವದ್ಗೀತೆಯನ್ನು ನೀಡಬೇಕು ಎಂದು ಪಟ್ಟಣ ಹೊರವಲಯದ ಆಲಮಟ್ಟಿ ರಸ್ತೆಯ ಲಯನ್ಸ್ ಕ್ಲಬ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಆಡಳಿತ ಅಧಿಕಾರಿ ದೀಪಾ ದೇಸಾಯಿ ಹೇಳಿದರು.

ತಮ್ಮ ಶಾಲೆಯಲ್ಲಿ ಶಿರಸಿಯ ಸೋಂದಾ ಸ್ವರ್ಣವಲ್ಲೀ ಸಂಸ್ಥಾನದ ಯತಿವರೇಣ್ಯರಾದ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಮಹಾಸ್ವಾಮಿಗಳು ಆಯೋಜಿಸಿರುವ ಭಗವದ್ಗೀತಾ ಅಭಿಯಾನ ಕರ್ನಾಟಕ-2024 ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು ನಮ್ಮ ತಂದೆ-ತಾಯಿ ಮಾಡಿಟ್ಟಿರುವ ಆಸ್ತಿಗಳು ಚರ ಆಸ್ತಿಗಳಾದರೆ ಭಗವದ್ಗೀತೆ ಮತ್ತು ಭಗವದ್ಗಾತೆ ಅಭಿಯಾನ ನಮ್ಮ ಮಕ್ಕಳಿಗಾಗಿ ಮಾಡುತ್ತಿರುವ ಸ್ಥಿರ ಆಸ್ತಿ, ಇದು ಎಂದೆಂದೂ ನಾಶವಾಗದು ದುಃಖದಲ್ಲಿದ್ದವರಿಗೆ ಸಾಂತ್ವನ ಹೇಳುವ, ಕಷ್ಟದಲ್ಲಿದ್ದವರಿಗೆ ಶಕ್ತಿ ತುಂಬುವ ಸಾಮರ್ಥ್ಯ ಭಗವದ್ಗೀತೆಗಿದೆ. ಎಲ್ಲರಿಗೂ ಮಾರ್ಗದರ್ಶನ ನೀಡುವ ಮೌಲ್ಯಗಳ ಖಜಾನೆ ಭಗವದ್ಗೀತೆಯಾಗಿದೆ ಎಂದರು.

ಭಗವದ್ಗೀತೆ ಅಭಿಯಾನ ಸಂಚಾಲಕ ರಾಮಚಂದ್ರ ಹೆಗಡೆ ಅಭಿಯಾನ ಆಶಯ ಕುರಿತು ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಈ ವೇಳೆ ಮುಖ್ಯಗುರುಮಾತೆ ಯಶೋಧರ ಮೀರಜಕರ, ರತ್ನಾಬಾಯಿ ಹಾದಿಮನಿ, ಶ್ರೀದೇವಿ ಹಲ್ಯಾಳ ಮೀನಾ ದಾಸ್ , ನಿಖಿತಾ ಎಲ್, ಕುಮಾರ ಇಂಗಳೇಶ್ವರ, ರಂಜಿತಾ ಭಟ್ಟ, ರೂಪಾ ನಾಟಿಕರ ಸೌಮ್ಯ ಹಿರೇಮಠ, ಅನುಷಾ ಭಜಂತ್ರಿ, ಭವಾನಿ ಝಿಂಗಾಡೆ, ಸೃಷ್ಟಿ ಚಲವಾದಿ, ಅಂಕಿತಾ ಬಾದರದಿನ್ನಿ, ಸಂಗೀತಾ ಕುಂಬಾರ, ಸುಹಾನ ಮುಲ್ಲಾ ಯಶೋದಾ ಬಿರಾದಾರ, ದಾನೇಶ್ವರಿ ಅಂಬಿಗೇರ, ಅಭಿರಾಮ ಹೆಗಡೆ. ಸೇರಿದಂತೆ ಇತರರು ಹಾಜರಿದ್ದರು.



ಉದಯವಾಹಿನಿ ಚಿತ್ರ

---

# ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಅಮಾನತು

• ಉದಯವಾಹಿನಿ, ಹಾಸನ

1.49 ಕೋಟಿ ದುರುಪಯೋಗ ಪಡಿಸಿಕೊಂಡ ಆರೋಪದ ಹಿನ್ನೆಲೆಯಲ್ಲಿ ಜಿಲ್ಲೆಯ ಅರಕಲಗೂಡು ತಾಲ್ಲೂಕಿನ ಕೊಣನೂರು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಪಿ.ಎನ್. ಭುವನ್ ಅವರನ್ನು ಅಮಾನತು ಮಾಡಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ಆದೇಶ ಹೊರಡಿಸಿದ್ದಾರೆ.

ಕೊಣನೂರು ಗ್ರಾಮ ಪಂಚಾಯತಿ ಜೊತೆಗೆ ಗಂಗೂರು ಗ್ರಾಮ ಪಂಚಾಯಿತಿ ಪ್ರಭಾರ ಕಾರ್ಯದರ್ಶಿಯಾಗಿದ್ದ ಭುವನ್, 15ನೇ ಹಣಕಾಸು ಯೋಜನೆಯಡಿ, ಗ್ರಾಮ ಪಂಚಾಯಿತಿ ಸ್ವಂತ ಸಂಪನ್ಮೂಲ, ಸಿಬ್ಬಂದಿ ವೇತನ ಖಾತೆ, ಗ್ರಾಮೀಣ ಯೋಜನೆಯಲ್ಲಿ ಹಣ ದುರುಪಯೋಗ ಮಾಡಿಕೊಂಡಿದ್ದಾರೆ ಎಂಬ ಆರೋಪವಿದೆ. ನಿಯಮಬಾಹಿರವಾಗಿ 1,49,78,753 ಹಣ ದುರುಪಯೋಗ ಮಾಡಿರುವುದು ಮೇಲ್ನೋಟಕ್ಕೆ ಸಾಬೀತಾದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದ್ದು, ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುತ್ತದೆ ಎಂದು ಆದೇಶದಲ್ಲಿ ತಿಳಿಸಿದ್ದಾರೆ.




ಉದಯವಾಹಿನಿ ಚಿತ್ರ

---

# ಅತಿಕ್ರಮಣ ತೆರವಿನಲ್ಲಿ ತಾರತಮ್ಯ: ಬಡವರ ಹೊಟ್ಟೆಗೆ ಹೊಡೆತ

## • ನಮ್ಮ ಓಟು ಪಡೆದುಕೊಂಡು ನಮ್ಮ ವ್ಯಾಪಾರದ ಮೂಲಗಳನ್ನೇ ನಾಶಪಡಿಸಿ ನಮ್ಮ ಹೊಟ್ಟೆ ಮೇಲೆ ಹೊಡೆದಿದ್ದಾರೆ

• ಉದಯವಾಹಿನಿ ಮುದ್ದೇಬಿಹಾಳ

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೀಡಿದ ಭರವಸೆ ನಂಬಿ ಶಾಸಕ ಸಿ.ಎಸ್.ನಾಡಗೌಡರಿಗೆ ಓಟು ಹಾಕು ತಪ್ಪು ಮಾಡಿದ್ದೇವೆ. ನಮ್ಮ ಓಟು ಪಡೆದುಕೊಂಡು ನಮ್ಮ ವ್ಯಾಪಾರದ ಮೂಲಗಳನ್ನೇ ನಾಶಪಡಿಸಿ ನಮ್ಮ ಹೊಟ್ಟೆ ಮೇಲೆ ಹೊಡೆದಿದ್ದಾರೆ. ತಹಸೀಲ್ದಾರ್ ಕಚೇರಿ, ಬಸವೇಶ್ವರ ವೃತ್ತ ಮುಂತಾದೆಡೆ ಸಾರ್ವಜನಿಕರಿಗೆ ತೊಂದರೆ ಆಗದಂತೆ ಡಬ್ಬಾ ಅಂಗಡಿ ಇಟ್ಟುಕೊಂಡು ಹೊಟ್ಟೆ ಹೊರೆಯುತ್ತಿದ್ದ ನಮಗೀಗ ದಿಕ್ಕು ತೋಚದಂತಾಗಿದೆ ಎಂದು ಬೀದಿ ಬದಿ ಡಬ್ಬಾ ಅಂಗಡಿ ವ್ಯಾಪಾರಸ್ಥರು ಅಳಲು ತೋಡಿಕೊಂಡರು.

ಮಾಜಿ ಶಾಸಕ, ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿಯವರನ್ನು ಅವರ ಫಾರ್ಮ್ ಹೌಸ್‌ನಲ್ಲಿ ಭಾನುವಾರ ಭೇಟಿಯಾಗಿ ತಮಗಾಗಿರುವ ಅನ್ಯಾಯವನ್ನು ಬಿಡಿಸಿಟ್ಟು ತಮಗೆ ನ್ಯಾಯ ಕೊಡಿಸಲು ತಮ್ಮ ಪರ ನಿಲ್ಲುವಂತೆ ಮನವಿ ಮಾಡಿದ ಅವರು, ನಮಗೆ ನಾಡಗೌಡರಿಂದ ಅನ್ಯಾಯವಾಗಿದೆ.

ಅವರ ಸೂಚನೆಯಂತೆ ಪುರಸಭೆ ಮುಖ್ಯಾಧಿಕಾರಿ ನಮ್ಮ ಉಪಜೀವನಕ್ಕಿದ್ದ ಅಂಗಡಿಗಳನ್ನು ತೆರವು ನೆಪದಲ್ಲಿ ನಾಶಮಾಡಿದ್ದಾರೆ.

ಆಗ ಶಾಸಕರನ್ನು ಭೇಟಿಯಾಗಿ ತೆರವು ನಿಲ್ಲಿಸುವಂತೆ ಮನವಿ ಮಾಡಿದರೂ ಅದು ಸರ್ಕಾರದ ಜಾಗ, ನಾನೇನು ಮಾಡಲು ಬರುವುದಿಲ್ಲ ಎಂದು ಹಾರಿಕೆ ಉತ್ತರ ನೀಡಿ ನಮ್ಮನ್ನು ಕಡೆಗಣಿಸಿದರು. ಪರಿಶಿಷ್ಟ ಜಾತಿಯವರಾದ ನಮಗೆ ಇದರಿಂದ ಅನ್ಯಾಯವಾಗಿದೆ ಎಂದರು.

ಅತಿಕ್ರಮಣ ತೆರವು ಕಾರ್ಯಾಚರಣೆಯಲ್ಲಿ ತಾರತಮ್ಯ ಮಾಡಲಾಗಿದೆ. ಮುಸ್ಲಿಂ ಸಮುದಾಯದವರ ಎಗ್ಗರೈಸ್ ಇನ್ನಿತರ ಡಬ್ಬಾ ಅಂಗಡಿ, ಒತ್ತು ಗಾಡಿ ವ್ಯಾಪಾರಕ್ಕೆ ಅವಕಾಶ ಮಾಡಿಕೊಟ್ಟಿರುವ ಪುರಸಭೆಯವರು ಎಸ್ಸಿ, ಎಸ್ಟಿ, ಹಿಂದುಳಿದ ಸಮುದಾಯದವರು ಕೇಳಲು ಹೋದರೆ ನೀವು ಲೈಸೆನ್ಸ್ ಮಾಡಿಸಿಕೊಂಡು ಬರಬೇಕು ಎನ್ನುತ್ತಾರೆ. ಲೈಸೆನ್ಸ್ ಇದ್ದವರು ಕೇಳಿದರೆ ಬೀದಿ ಬದಿ ಡಬ್ಬಾ ಅಂಗಡಿ ಇಡಲು ಅವಕಾಶ ಕೊಡುವುದಿಲ್ಲ ಎನ್ನುತ್ತಾರೆ. ಪುರಸಭೆ ಹತ್ತಿರ ರಸ್ತೆ ಅತಿಕ್ರಮಿಸಿ ಕಟ್ಟಿರುವ ಅಂಗಡಿಗಳನ್ನು ತೆರವುಗೊಳಿಸದೆ ಇವರು ಅವರ ಪರ ನಿಂತಿದ್ದಾರೆ ಎಂದರು.

ಅಹವಾಲು ಆಲಿಸಿ ಕೆಲವು ಅಧಿಕಾರಿಗಳೊಂದಿಗೆ ಮೊಬೈಲ್‌ನಲ್ಲಿ ಮಾತನಾಡಿದ ನಡಹಳ್ಳಿಯವರು, ಎಸ್ಸಿ, ಎಸ್ಟಿ, ಬಡವರಿಗೆ, ಹಿಂದುಳಿದವರಿಗೆ ಅನ್ಯಾಯವಾದರೆ ನಾನು ಸಹಿಸೊಲ್ಲ. ಅವರಿಗೆ ನ್ಯಾಯ ಕೊಡಿಸುವ ಕೆಲಸ ಮಾಡಬೇಕು. ಒಂದು ವಾರ ಕಾಲಾವಕಾಶ ನೀಡುತ್ತಿದ್ದೇನೆ. ಅಷ್ಟರೊಳಗೆ ಪರ್ಯಾಯ ವ್ಯವಸ್ಥೆ ಮಾಡಿಕೊಡದಿದ್ದರೆ ಬೀದಿ ಬದಿ ವ್ಯಾಪಾರಸ್ಥರು, ಡಬ್ಬಾ ಅಂಗಡಿಯವರೊಂದಿಗೆ ಸೇರಿ ನಾನೇ ಹೋರಾಟಕ್ಕಿಳಿಯುತ್ತೇನೆ.

ಸ್ಪಂಧನೆ ಸಿಗದಿದ್ದರೆ ನಾನೇ ಮುಂದೆ ನಿಂತು ಎಲ್ಲಾ ಕಡೆ ಡಬ್ಬಾ ಅಂಗಡಿ ಇಡಿಸಲು ಮುಂದಾಗುತ್ತೇನೆ. ನನ್ನನ್ನು ಯಾರು ತಡೆಯುತ್ತಾರೋ ತಡೆಯಲಿ ಎಂದು ಎಚ್ಚರಿಸಿದರು.

ಪುರಸಭೆ ಸದಸ್ಯ ಬಸಪ್ಪ ತಟ್ಟಿ, ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ್, ಮುಖಂಡರಾದ ಅಶೋಕ ರಾಠೋಡ ನೇಬಗೇರಿ, ಸಂಜು ಬಾಗೇವಾಡಿ, ಬೀದಿ ಬದಿ ವ್ಯಾಪಾರಸ್ಥರಾದ ಶಿವಾನಂದ ಲಮಾಣಿ, ರಾಮು ಲಮಾಣಿ, ಶಾರದಾ ಲಮಾಣಿ, ಶಾಂತಾಬಾಯಿ ಸುರೇಬಾನ, ಮಾನಪ್ಪ ಚವ್ಹಾಣ, ದೇವುಬಾಯಿ ಚವ್ಹಾಣ, ಮಂಜುಳಾ ಲಮಾಣಿ, ಸುನೀತಾ ನಾಯಕ, ಸೋಮನಾಥ ರಾಠೋಡ, ಮಲ್ಲಿಕಾರ್ಜುನ ಲಮಾಣಿ, ನಾಗೇಶ ರಾಠೋಡ, ಪ್ರೇಮಸಿಂಗ್ ಜಾಧವ, ಸುನೀಲ ಚವ್ಹಾಣ, ಮಂಜುನಾಥ ಚವ್ಹಾಣ ಸೇರಿ ಕಬ್ಬಿನ ಹಾಲು, ಚಹಾದ ಅಂಗಡಿ, ಪಾನ ಶಾಪ್, ಎಳೆನೀರು, ಎಗ್‌ರೈಸ್, ಭಜಿ ಮುಂತಾದ ವ್ಯಾಪಾರ ಮಾಡುವ ವ್ಯಾಪಾರಸ್ಥರು ಇದ್ದರು.



ಉದಯವಾಹಿನಿ ಚಿತ್ರ

**ನಾಡಗೌಡರಿಗೆ ಓಟು ಹಾಕಿ ತಪ್ಪು ಮಾಡಿದ್ದೇವೆ**

**ಶಾಸಕ ನಾಡಗೌಡರಿಗೆ ಎಸ್ಸಿ, ಎಸ್ಟಿ, ಬಡವರು, ಹಿಂದುಳಿದವರನ್ನು ಕಂಡರೆ ಹೊಟ್ಟೆಕಿಚ್ಚು ಇವರು ಜೀವನದಲ್ಲಿ ಸುಧಾರಣೆ ಕಾಣಬಾರದು ಅನ್ನೋ ಮನೋಭಾವದವರು. ಒಂದು ದಿನವೂ ಅವರು ಬಡವರಿಗೆ ಸಹಾಯ ಮಾಡಿದ್ದನ್ನು ನೋಡಿಲ್ಲ. ಬಡವರ ಶಾಪ ಬಲು ಕೆಟ್ಟದ್ದು. ಇವರೀಗ ತಮ್ಮ ಉಪ ಜೀವನವನ್ನೇ ನಾಶಮಾಡಿದ ಶಾಸಕರಿಗೆ ಶಾಪ ಹಾಕುತ್ತಿದ್ದಾರೆ. ಇವರ ಶಾಪದ ಪ್ರಭಾವ ನಿಮ್ಮ ಮೇಲೆ ಕೆಟ್ಟ ಪರಿಣಾಮ ಬೀರುವುದಕ್ಕೂ ಮೊದಲೇ ಎಚ್ಚೆತ್ತುಕೊಂಡು ಎಲ್ಲೆಲ್ಲಿ ಅತಿಕ್ರಮಣದಲ್ಲಿ ತಾರತಮ್ಯವಾಗಿದೆಯೋ ಅದನ್ನೆಲ್ಲ ಸರಿಪಡಿಸಿ ಇನ್ನುಳಿದವರ ಅಂಗಡಿಗಳನ್ನೂ ಕಿತ್ತಿಸಬೇಕು ಮತ್ತು ಈಗಾಗಲೇ ನೊಂದವರು ಉಪಜೀವನ ನಡೆಸಲು ಪರ್ಯಾಯ ಸ್ಥಳ ಒದಗಿಸಿ ಅನುಕೂಲ ಮಾಡಿಕೊಡಬೇಕು -ನಡಹಳ್ಳಿ**

---

# ಮಿನಿ ನ್ಯೂಸ್

### ಕಾಡಾನೆ ದಾಳಿ: ಭತ್ತ, ಕಾಫಿ ನಾಶ

• ಉದಯವಾಹಿನಿ ಹೆತ್ತೂರು

ಸಮೀಪದ ಹಾಡ್ಲಹಳ್ಳಿ, ಐಗೂರು, ಬೂಬ್ಬನಹಳ್ಳಿ, ಹಾಡ್ಯ, ಬಾಚ್ಚಿಹಳ್ಳಿ, ಚಿಕ್ಕಂದೂರು ಗ್ರಾಮದ ಗದ್ದೆ, ಕಾಫಿ ತೋಟದಲ್ಲಿ ಕಾಡಾನೆ ದಾಳಿ ನಡೆಸಿ ಭತ್ತ ಹಾಗೂ ಕಾಫಿ ಫಸಲು ನಾಶ ಮಾಡಿವೆ. ಅರಣ್ಯ ಇಲಾಖೆ ಸೂಕ್ತ ಪರಿಹಾರ ನೀಡಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಹೆತ್ತೂರು ಗ್ರಾಮದ ಷಣ್ಮುಖ ಮಂದ ಪಟೇಲ್ ಮಾತನಾಡಿ, 2023ರಲ್ಲಿ ಭತ್ತದ ಗದ್ದೆಗೆ ಕಾಡಾನೆ ದಾಳಿ ನಡೆಸಿ, ಭತ್ತದ ಫಸಲು ನಾಶ ಮಾಡಿವೆ. ಕಾಡಾನೆಯಿಂದ ಆದ ಬೆಳೆ ನಷ್ಟಕ್ಕೆ ಪರಿಹಾರಕ್ಕಾಗಿ ಅರಣ್ಯ ಇಲಾಖೆಗೆ ಅರ್ಜಿ ಸಲ್ಲಿಸಲಾಗಿತ್ತು. ಆದರೆ ಈವರೆಗೆ ಅರಣ್ಯ ಅಧಿಕಾರಿಗಳು ಪರಿಹಾರ ನೀಡಿಲ್ಲ. ಈ ವರ್ಷವೂ ಮತ್ತೆ ಕಾಡಾನೆ ದಾಳಿ ಮಾಡಿ ಭತ್ತದ ಬೆಳೆ ಹಾಳು ಮಾಡಿವೆ. ನಷ್ಟದ ಪರಿಹಾರ ಕೂಡಲೇ ಒದಗಿಸುವಂತೆ ಆಗ್ರಹಿಸಿದರು. ಹಾಡ್ಯ ರಮೇಶ್ ಮಾತನಾಡಿ, ಈಚೆಗೆ ಹೆತ್ತೂರು, ಯಸಳೂರು ಹೋಬಳಿಯ ಹಲವೆಡೆಗಳಲ್ಲಿ ನಿತ್ಯ ಕಾಡಾನೆಗಳು, ತೋಟ ಮತ್ತು ಗದ್ದೆಗಳಿಗೆ ದಾಳಿ ನಡೆಸುತ್ತಿದೆ. ಈ ಬಗ್ಗೆ ಸರ್ಕಾರ ಎಚ್ಚೆತ್ತುಕೊಳ್ಳಬೇಕು ಎಂದರು.

### ಪಿಂಚಣಿ ಬಿಡುಗಡೆಗೊಳಿಸಲು ಲಂಚ ಸ್ವೀಕರಿಸುತ್ತಿದ್ದ ಇಬ್ಬರು ಲೋಕಾಯುಕ್ತ ಬಲೆಗೆ

• ಉದಯವಾಹಿನಿ ಉಡುಪಿ

ನಿವೃತ್ತ ಶಿಕ್ಷಕರೊಬ್ಬರಿಗೆ ಪಿಂಚಣಿ ಹಣ ಬಿಡುಗಡೆಗೊಳಿಸಲು ಲಂಚ ಪಡೆಯುತ್ತಿದ್ದ ಉಡುಪಿ ಖಜಾನೆಯ ಉಪನಿರ್ದೇಶಕ ಮತ್ತು ಸಹಾಯಕನನ್ನು ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ.

ನಿವೃತ್ತ ಶಿಕ್ಷಕ ಹಿತೇಂದ್ರ ಭಂಡಾರಿ ತಮ್ಮ ಪಿಂಚಣಿ ಹಣ ಪಡೆಯಲು ಕಳೆದ ಐದು ತಿಂಗಳಿಂದ ಖಜಾನೆಯ ಉಪನಿರ್ದೇಶಕ ರವಿಕುಮಾರ್ ಮತ್ತು ಸಹಾಯಕ ರಾಘವೇಂದ್ರ ಎಂಬುವರು ಸತಾಯಿಸುತ್ತಿದ್ದು, 5,000 ರೂ. ಲಂಚ ನೀಡುವಂತೆ ಒತ್ತಾಯಿಸಿದ್ದರು ಎಂದು ಲೋಕಾಯುಕ್ತ ಪೊಲೀಸರಿಗೆ ದೂರು ನೀಡಲಾಗಿತ್ತು. ಲೋಕಾಯುಕ್ತ ಡಿವೈಎಸ್ಪಿ ಮಂಜುನಾಥ್, ನಿರೀಕ್ಷಕರಾದ ಸುರೇಶ್, ಕೆ.ಎನ್. ಚಂದ್ರಶೇಖರ್ ಅವರನ್ನು ಒಳಗೊಂಡ ತಂಡ ಕಾರ್ಯಾಚರಣೆ ನಡೆಸಿದ್ದು, ಲಂಚ ಸ್ವೀಕರಿಸುತ್ತಿದ್ದ ವೇಳೆಯಲ್ಲಿ ರವಿಕುಮಾರ್ ಮತ್ತು ರಾಘವೇಂದ್ರ ಅವರನ್ನು ವಶಕ್ಕೆ ಪಡೆಯಲಾಗಿದೆ. ಕಾರ್ಯಾಚರಣೆಯಲ್ಲಿ ಲೋಕಾಯುಕ್ತ ಸಿಬ್ಬಂದಿಗಳಾದ ನಾಗರಾಜ್, ಸತೀಶ್, ಪ್ರಸನ್ನ, ರಮೇಶ್, ರಾಘವೇಂದ್ರ, ಪುಷ್ಪಲತಾ, ಮಲ್ಲಿಕಾ ಅವರು ಭಾಗವಹಿಸಿದ್ದರು.

### ಹಳೆಯ ಬ್ಯಾಲೆಟ್ ಬಾಕ್ಸ್‌ಕದ್ದಿದ್ದ ಮೂವರು ಆರೋಪಿಗಳ ಬಂಧನ

• ಉದಯವಾಹಿನಿ, ಹಾವೇರಿ

ಇಲ್ಲಿನ ಎಪಿಎಂಸಿಯೊಂದರ ಗೋದಾಮಿನಲ್ಲಿ ಇರಿಸಿದ್ದಂತ ಹಳೆಯ ಬ್ಯಾಲೆಟ್ ಬಾಕ್ಸ್ ಗಳನ್ನು ಕದ್ದಿದ್ದಂತ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ನವೆಂಬರ್.13ರಂದು ಶಿಗ್ಗಾವಿ ಕ್ಷೇತ್ರದ ಯತ್ತಿನಹಳ್ಳಿ ಬಳಿಯ ಕಾಲುವೆಯಲ್ಲಿ ಹಳೆಯ ಬ್ಯಾಲೆಟ್ ಬಾಕ್ಸ್‌ಗಳು ಪತ್ತೆಯಾಗಿದ್ದವು. ಹಾವೇರಿಯ ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಸಂದರ್ಭದಲ್ಲೇ ಪತ್ತೆಯಾದಂತ ಬ್ಯಾಲೆಟ್ ಬಾಕ್ಸ್‌ಗಳಿಂದಾಗಿ ಹಲವು ಅನುಮಾನಗಳಿಗೂ ಕಾರಣವಾಗಿತ್ತು.

ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದಂತ ಹಾವೇರಿ ನಗರ ಠಾಣೆಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆಗೆ ಇಳಿದಿದ್ದರು. ಹಾವೇರಿಯ ಎಪಿಎಂಸಿ ಗೋದಾಮಿನಲ್ಲಿ ಸಂಗ್ರಹಿಸಿ ಇರಿಸಲಾಗಿದ್ದಂತ ಹಳೆಯ ಬ್ಯಾಲೆಟ್ ಬಾಕ್ಸ್‌ಗಳು ಎಂಬುದಾಗಿ ಪತ್ತೆಯಾಗಿತ್ತು. ಈ ಬಳಿಕ ಆರೋಪಿಗಳ ಪತ್ತೆಗೆ ಇಳಿದಿದ್ದರು.ಪ್ರಕರಣ ಸಂಬಂಧ ಆರೋಪಿಗಳಾದಂತ ಸಂತೋಷ್ ಮಾಳಗಿ, ಮುತಪ್ಪ ದೇವಿ ಹೊಸೂರು, ಗಣೇಶ್ ಹರಿಜನ, ಕೃಷ್ಣ ಹರಿಜನ ಹಾಗೂ ಮೊಹಮ್ಮದ್ ಜಾವೆದ್ ಎಂಬುವರನ್ನು ಬಂಧಿಸಿದ್ದಾರೆ.

ಬಂಧಿತ ಐವರು ಆರೋಪಿಗಳಿಂದ 27 ಬ್ಯಾಲೆಟ್ ಬಾಕ್ಸ್, ಕೃತ್ಯಕ್ಕೆ ಬಳಸಿದಂತ 1 ಆಟೋವನ್ನು ಜಪ್ತಿ ಮಾಡಿದ್ದಾರೆ.

### ಕಾಂಗ್ರೆಸ್ ಮುಖಂಡನ ಪುತ್ರನಿಂದಲೇ ಹಿಟ್ ರನ್: ಸ್ಥಳದಲ್ಲೇ ವ್ಯಕ್ತಿ ಸಾವು

• ಉದಯವಾಹಿನಿ ಉಡುಪಿ

ಜಿಲ್ಲೆಯ ಕಾಂಗ್ರೆಸ್ ಮುಖಂಡರೊಬ್ಬರ ಪುತ್ರ ಕಾರನ್ನು ವೇಗವಾಗಿ ಚಲಾಯಿಸಿ ವ್ಯಕ್ತಿಯೊಬ್ಬರಿಗೆ ಗುದ್ದಿ ಪರಾರಿಯಾಗಿರುವಂತ ಘಟನೆ ನಡೆದಿದೆ. ಕಾರು ಹಿಟ್ ಅಂಡ್ ರನ್ ಗೆ ವ್ಯಕ್ತಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಉಡುಪಿಯ ಕಾಂಗ್ರೆಸ್ ಮುಖಂಡ ಬೆಳಪು ದೇವಿ ಪ್ರಸಾದ್ ಶೆಟ್ಟಿ ಅವರ ಪುತ್ರ ಪ್ರಜ್ವಲ್ ಶೆಟ್ಟಿ ಎಂಬುವರೇ ಕಾರನ್ನು ವೇಗವಾಗಿ ಚಲಾಯಿಸಿ, ವ್ಯಕ್ತಿಯೊಬ್ಬರಿಗೆ ಗುದ್ದಿ, ಸಾವಿಗೆ ಕಾರಣವಾಗಿರುವಂತವರು ಎಂಬುದಾಗಿ ತಿಳಿದು ಬಂದಿದೆ. ಬೆಳಪು ಮಿಲಿಟರಿ ಕಾಲೋನಿ ಬಳಿಯಲ್ಲಿ ಮುಂಜಾನೆ ಕೆಲಸಕ್ಕೆ ಹೋಗುತ್ತಿದ್ದಂತ ಮೊಹಮ್ಮದ್ ಹುಸೇನ್ ಎಂಬುವರಿಗೆ ಡಿಕ್ಕಿ ಹೊಡೆದಿದ್ದಾರೆ. ಕಾರು ಡಿಕ್ಕಿಯ ರಭಸಕ್ಕೆ ಮೂರು ಪಲ್ಟಿಯಾಗಿ ಚರಂಡಿಯಲ್ಲಿ ಬಿದ್ದಿದ್ದಾರೆ. ಅಪಘಾತದ ಬಳಿಕ ಆಸ್ಪತ್ರೆಗೆ ಸಾಗಿಸಿ, ಚಿಕಿತ್ಸೆ ಕೊಡಿಸಿದ್ದರೇ ಪುತ್ರ ಮೊಹಮ್ಮದ್ ಹುಸೇನ್ ಸಾವನ್ನಪ್ಪುತ್ತಿರಲಿಲ್ಲ ಎಂಬುದಾಗಿ ಅವರ ತಂದೆ ಉಮರಬ್ಬ ಆರೋಪಿಸಿದ್ದಾರೆ. ಒಂದು ಗಂಟೆಗಳ ಕಾಲ ರಕ್ತದ ಮಡುವಿನಲ್ಲಿ ಒದ್ದಾಡಿ ಮೊಹಮ್ಮದ್ ಹುಸೇನ್ ಸಾವನ್ನಪ್ಪಿದ್ದಾನೆ. ಆತ ಸಾವಿಗೆ ಕಾರಣವಾದಂತ ಪ್ರಜ್ವಲ್ ಶೆಟ್ಟಿಗೆ ಕಠಿಣ ಶಿಕ್ಷೆಯಾಗಬೇಕು ಅಂತ ಆಗ್ರಹಿಸಿದ್ದಾರೆ.

### ಡಿಸೆಂಬರ್‌ನಲ್ಲಿ ಕಿಮೊಥೆರಪಿ ಕೇಂದ್ರಗಳ ಉದ್ಘಾಟನೆ: ಸಚಿವ ದಿನೇಶ್ ಗುಂಡೂರಾವ್

• ಉದಯವಾಹಿನಿ ಮಂಗಳೂರು

ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ತೆರೆಯುವ ಡೇ ಕೇರ್ ಕಿಮೊಥೆರಪಿ ಕೇಂದ್ರಗಳ ಉದ್ಘಾಟನೆ ಡಿಸೆಂಬರ್‌ನಲ್ಲಿ ನಡೆಯಲಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು. 10 ಆಸನಗಳ ಕಿಮೊಥೆರಪಿ ಕೇಂದ್ರಗಳು ಎಲ್ಲಾ ಜಿಲ್ಲೆಗಳಲ್ಲೂ ಸೇವೆಗೆ ಲಭ್ಯವಾಗಲಿವೆ.

ಚಳಿಗಾಲದ ಅಧಿವೇಶನದಲ್ಲಿ ಅಥವಾ ಯಾವುದಾದರೂ ಜಿಲ್ಲಾ ಕೇಂದ್ರದಲ್ಲಿ ಮುಖ್ಯಮಂತ್ರಿಯವರು ಈ ಯೋಜನೆಗೆ ಚಾಲನೆ ನೀಡುವರು ಎಂದು ಇಲ್ಲಿ ತಿಳಿಸಿದರು.

ಸರ್ಕಾರಿ ಆಸ್ಪತ್ರೆಗಳಲ್ಲಿ ಕ್ಯಾನ್ಸರ್ ತಜ್ಞರು ಇರುವುದಿಲ್ಲ. ಇದ್ದರೂ ಕೆಲಸದ ಒತ್ತಡ ಹೆಚ್ಚು ಇರುತ್ತದೆ. ಆದ್ದರಿಂದ ಕಿಮೊಥೆರಪಿ ಕೇಂದ್ರಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ನಿರ್ವಹಿಸಲು ನಿರ್ಧರಿಸಲಾಗಿದೆ. ಎಂಆರ್‌ಐ ಮತ್ತು ಸಿಟಿ ಸ್ಕ್ಯಾನ್ ಜಿಲ್ಲಾಸ್ಪತ್ರೆಗಳಲ್ಲಿ ಉಚಿತವಾಗಿ ಮಾಡಲಾಗುತ್ತದೆ. ಆದರೆ ವೆನ್ಲಾಕ್ ಆಸ್ಪತ್ರೆಯಲ್ಲಿ ಶುಲ್ಕ ಪಡೆಯುತ್ತಿದ್ದಾರೆ ಎಂಬ ದೂರು ಕೇಳಿಬಂದಿದ್ದು ಪರಿಶೀಲಿಸಲಾಗುತ್ತಿದೆ. ಲೋಪಗಳು ಕಂಡುಬಂದರೆ ಈಗ ನಿರ್ವಹಣೆ ಮಾಡುತ್ತಿರುವ ಕಂಪನಿಯನ್ನು ಕೈಬಿಟ್ಟು ಹೊಸ ಗುತ್ತಿಗೆ ನೀಡಲಾಗುವುದು ಎಂದು ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ನಿಮ್ಮ ಭರವಸೆ ಒಂದು ಸಮೃದ್ಧ ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

**ವೃಷಭ** ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು. ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ಮಿಥುನ** ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ.

**ಕರ್ಕಾಟಕ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ಸಿಂಹ** ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಸಂಬಂಧಿಗಳು ನಿಮಗೆ ಸಹಾಯ ಹಸ್ತ ನೀಡಲು ಒಪ್ಪಿಕೊಳ್ಳುತ್ತಾರೆ.

**ಕನ್ಯಾ** ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ಥಿಮಿತ ಕಳೆದುಕೊಳ್ಳಬಾರದು.

**ತುಲಾ** ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸಲು ಗಂಭೀರ ಪ್ರಯತ್ನಗಳನ್ನು ಮಾಡಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು.

**ವೃಶ್ಚಿಕ** ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು.

**ಧನಸ್ಸು** ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

**ಮಕರ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ಪೋಷಕರ ಆರೋಗ್ಯ ಸುಧಾರಿಸುತ್ತದೆ ಮತ್ತು ಅವರು ನಿಮ್ಮ ಮೇಲೆ ಪ್ರೀತಿಯ ಮಳೆಗೈಯುತ್ತಾರೆ.

**ಕುಂಭ** ನಿಮ್ಮ ಹಣವನ್ನು ಉಳಿಸಲು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ.

**ಮೀನ** ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ.

# ಮಹಿಳೆಯರಿಗೂ ಸಮಾನ ಅವಕಾಶ ಸಿಗಲಿ: ಡಾ.ವೆಂಕಟಗಿರಿ ದಳವಾಯಿ

## ಜನನಿ ಸೇವಾ ಟ್ರಸ್ಟ್ ಹಾಗೂ ಜನನಿ ಕಲಾ ಮತ್ತು ಸಾಂಸ್ಕೃತಿಕ ಸಂಘದ ಜನನಿ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ

• **ಉದಯವಾಹಿನಿ ಹಂಪಾಪಟ್ಟಣ**

ಪ್ರಶಸ್ತಿಗಾಗಿ ವಿವಿಧ ಕ್ಷೇತ್ರದ ಸಾಧಕರನ್ನು ಗುರುತಿಸುವ ಸಂದರ್ಭದಲ್ಲಿ ಮಹಿಳೆಯರಿಗೂ ಸಮಾನ ಅವಕಾಶ ಸಿಗುವಂತಾಗಬೇಕು. ಆಗಲೇ ಪ್ರಶಸ್ತಿ ಹಾಗೂ ವೇದಿಕೆಗೆ ಹೆಚ್ಚಿನ ಗೌರವ ದೊರೆಯಲಿದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ವೆಂಕಟಗಿರಿ ದಳವಾಯಿ ಹೇಳಿದರು.

ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಹಂಪಾಪಟ್ಟಣ ಗ್ರಾಮದ ಶ್ರೀ ಆಂಜನೇಯ ಬಯಲು ರಂಗಮಂದಿರದ ಲಿಂ.ಶ್ರೀ ಅಕ್ಕಿ ಕೊಟ್ರಪ್ಪನವರ ವೇದಿಕೆಯಲ್ಲಿ ಜನನಿ ಸೇವಾ ಟ್ರಸ್ಟ್ ಹಾಗೂ ಜನನಿ ಕಲಾ ಮತ್ತು ಸಾಂಸ್ಕೃತಿಕ ಸಂಘದ ಜನನಿ ರತ್ನ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಯಾವ ಸಮಾಜವು ಮಹಿಳೆಯಿಗೆ ಗೌರವ ಕೊಡುವುದಿಲ್ಲವೊ ಆ ಸಮಾಜ ಉದ್ದಾರವಾಗಲು ಸಾಧ್ಯವಿಲ್ಲ. ಮಹಿಳೆಯರ ಸಹನೆ, ತ್ಯಾಗ ಮನೋಭಾವದಿಂದಾಗಿಯೇ ಪುರುಷರು ಹೆಚ್ಚಿನ ಸಾಧನೆ ಮಾಡಲು ಸಾಧ್ಯವಾಗಿದೆ ಎಂದರು.

ಸರ್ಕಾರದ ಪ್ರಶಸ್ತಿಗಳಿಗ ನೂಕುನುಗ್ಗಲು ಇರುತ್ತದೆ. ಆದರೆ ಜನನಿ ಟ್ರಸ್ಟ್ ನೂಕು, ನುಗ್ಗಲು ಇಲ್ಲದ ಸಾಧಕರನ್ನು ಗುರುತಿಸಿದೆ. ಅರ್ಜಿ ಹಾಕಿ ಪ್ರಶಸ್ತಿ ಪಡೆಯುವುದಕ್ಕಿಂತ ಜನರು ಗುರುತಿಸಿ


ಉದಯವಾಹಿನಿ ಚಿತ್ರ

ಕೊಡುವ ಪ್ರಶಸ್ತಿಗೆ ಬೆಲೆ ಹೆಚ್ಚು. ಈ ನಿಟ್ಟಿನಲ್ಲಿ ಸಾಧಕರನ್ನು ಆಯ್ಕೆ ಮಾಡುವಲ್ಲಿ ಟ್ರಸ್ಟ್ ಒಳ್ಳೆಯ ಆಯ್ಕೆ ಮಾನದಂಡಗಳನ್ನು ಇಟ್ಟುಕೊಂಡಿದೆ.

**ಜನನಿ ರತ್ನ ರಾಜ್ಯ ಪ್ರಶಸ್ತಿ**

ರಾಜ್ಯ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಡಾ.ಪರಮೇಶ್ವರಯ್ಯ ಸ್ವಪ್ಪಿಮಠ ಅವರು ಆಶಯ ನುಡಿಗಳನ್ನಾಡುತ್ತಾ, ವೇದಿಕೆಗೆ ಮೌನಸಾಧಕ ಲಿಂ.ಅಕ್ಕಿ ಕೊಟ್ರಪ್ಪ ಅವರ ಹೆಸರನ್ನು ಇಟ್ಟು ಗೌರವಿಸಿರುವುದು ಅವರ ಸಮಾಜ ಸೇವೆಗೆ ಹಿಡಿದ ಕೈಗನ್ನಡಿಯಾಗಿದೆ.

ತಾಲ್ಲೂಕಿನಲ್ಲಿ ಜನನಿ ಸೇವಾ ಟ್ರಸ್ಟ್ ಸಾಮಾಜಿಕ ಕೆಲಸದಲ್ಲಿ ತೊಡಗಿರುವಂತಹ ಎಲೆ ಮರೆ ಕಾಯಿಯಂತಹ ಸಾಧಕರನ್ನು ಗುರುತಿಸುತ್ತಿರುವುದು ಅಭಿನಂದನಾರ್ಹ. ರಾಜ್ಯಾದ್ಯಂತ ಸಾಧಕರನ್ನು ಗುರುತಿಸಿದೆ. ಸಾಮಾನ್ಯ ರೈತನಾದರೂ ಟ್ರಸ್ಟ್‌ನ ಅಧ್ಯಕ್ಷ ಎ.ಕೇಶವಮೂರ್ತಿ ತಾಯಿಯ ಮೇಲಿನ ಪ್ರೀತಿಯಿಂದ ಜನನಿ ಸಂಘಟನೆಯನ್ನು ಹುಟ್ಟುಹಾಕಿ ಸಾಧಕರನ್ನು ಗುರುತಿಸಿ ಗೌರವಿಸುವ ಕೆಲಸ ಮಾಡುತ್ತಿದ್ದಾನೆ. ಇದಕ್ಕೆ ಬೆನ್ನೆಲುಬಾಗಿ ಸಂಘಟನೆಯ ಗೌರವಾಧ್ಯಕ್ಷ ಆರ್.ಖಾಜಾ ಹುಸೇನ್, ಉಪಾಧ್ಯಕ್ಷ ಜಿ.ಸೋಮನಾಥ, ಎಲಿಗಾರ್ ಕುಬೇರಪ್ಪ ಹಾಗೂ ಸ್ನೇಹಿತರ ಬಳಗವು ತುಂಬಾ ಸಹಕಾರ ನೀಡುತ್ತಿದ್ದಾರೆ ಎಂದರು. ಯಾವುದೇ ಅರ್ಜಿಯನ್ನು ಆಹ್ವಾನಿಸದೇ, ವಿಶಿಷ್ಟ ಸಾಧಕರನ್ನು ಆಯ್ಕೆ ಮಾಡಿದ್ದಾರೆ. ಇದು ಟ್ರಸ್ಟ್‌ನ ಗೌರವದ ಕೆಲಸ. ಇಂತವರ ಸಂಖ್ಯೆ ಹೆಚ್ಚಾಗಬೇಕು ಎಂದು ಹೇಳಿದರು.

ಸೊಂಡೂರಿನ ಶ್ರೀ ಪ್ರಭುದೇವರ ಸಂಸ್ಥಾನ ವಿರಕ್ತಮಠದ ಪೂಜ್ಯ ಶ್ರೀ ಪ್ರಭುಮಹಾಸ್ವಾಮಿಗಳು ಸಾನ್ನಿಧ್ಯವಹಿಸಿದ್ದರು. ಜಿಸಿಐ ಮಾಜಿ ಅಧ್ಯಕ್ಷ ಅಕ್ಕಿ ಪ್ರಸನ್ನ, ಗ್ರಾ.ಪಂ ಅಧ್ಯಕ್ಷ ಬಲ್ಲಾಹುಣಸಿ ನಾಗರಾಜ್, ಸದಸ್ಯರಾದ ಸಿ.ಎಲ್.ಕುಬೇರ, ಉಪ್ಪಾರ ಹುಲಿಗೆಮ್ಮ, ಎನ್.ನಾಗರಾಜ, ಜಿ.ತಿಮ್ಮಣ್ಣ, ರೈತ ಸಂಘಟನೆಯ ಜಿಲ್ಲಾ ಉಪಾಧ್ಯಕ್ಷ ಬಂಟ್ರ ಕುಬೇರ, ತಾಲೂಕು ಅಧ್ಯಕ್ಷ ಶಂಕರನಾಯ್ಕ, ಡಿಎಸ್ ಎಸ್ ಜಿಲ್ಲಾಧ್ಯಕ್ಷ ಎಚ್.ರಮೇಶ್, ಕೆ.ಎಸ್.ಹುಲುಗಪ್ಪ, ಉಪ್ಪಾರ ಕನಕಪ್ಪ, ವಜೀರಾ, ಜಿ.ಪಕೀರಪ್ಪ, ಜಿ.ಶ್ರೀನಿವಾಸ, ಜಿ.ರಾಘವೇಂದ್ರ, ಸೋಮೇಶ್ ಉಪ್ಪಾರ, ನೌಕರರ ಸಂಘದ ತಾಲೂಕು ನಿರ್ದೇಶಕ ತಳವಾರ ಸೋಮಶೇಖರ್, ಗೊಂದಳಿ ರಾಮಣ್ಣ, ಎಸ್.ನಿಂಗನಗೌಡ ಸೊನ್ನ, ಬಂಟ್ರ ಸೋಮನಾಥ, ಅಂಬಳಿ ಈಶಪ್ಪ, ಮಾಲವಿ ಉಪಗಪಾರ ಕಿಟ್ಟಪ್ಪ, ಶೀಗೇನಹಳ್ಳಿ ಚಂದ್ರಶೇಖರ್, ಶಿಕ್ಷಕ ಉಪ್ಪಾರ ಹುಲುಗಪ್ಪ, ನಾಗರಾಜ ಘಂಟಿ, ಹಡಗಲಿ ಖಾಜಾ, ಡಿ.ಹನುಮಂತ ಇದ್ದರು. ಜಿ.ಸಂಗೀತ, ಸ್ವಸ್ತಿ ಸ್ವರೂಪಾನಂದ ಅವರು ಪ್ರಾರ್ಥಿಸಿದರು. ಅಂಬಳಿ ವೀರೇಂದ್ರ ಉಪನ್ಯಾಸಕರು ಸ್ವಾಗತಿಸಿದರು. ಹನುಮಂತ ಮುತ್ತೂರು ನಿರೂಪಣೆ ಮಾಡಿದರು.

**ರಾಜ್ಯ ಪ್ರಶಸ್ತಿ ಪುರಸ್ಕೃತರು**

ಶ್ರೀಮತಿ ರಂಗಮ್ಮ ದಾವಣಗೆರೆ(ಜನನಿ ಧಾರ್ಮಿಕ ರತ್ನ), ಶ್ರೀಮತಿ ಸುಜಾತ ಹಿರೇಮಠ ಸಿಂಧನೂರು( ಜನನಿ ಅನಾಥ ರಕ್ಷಕಿ ರತ್ನ) , ಶ್ರೀಮತಿ ಲಲಿತವ್ವ ಪೂಜಾರ್ ಕೊಪ್ಪಳ ( ಜನನಿ ಜಾನಪದ ರತ್ನ), ಕಣಿವಿಹಳ್ಳಿ ಮಂಜುನಾಥ ಹರಪನಹಳ್ಳಿ (ಜನನಿ ಹೋರಾಟ ರತ್ನ), ಡಾ.ಬಸವರಾಜರೆಡ್ಡಿ ಹ.ಬೊ.ಹಳ್ಳಿ ( ಜನನಿ ವೈದ್ಯ ರತ್ನ), ಕೆ.ಮಂಜುನಾಥ ಮರಿಯಮ್ಮನಹಳ್ಳಿ (ಜನನಿ ಶಿಕ್ಷಣ ರತ್ನ), ಯರ್ರಿಸ್ವಾಮಿ ಉಪ್ಪಾರ ಬಳ್ಳಾರಿ ( ಜನನಿ ಸಮಾಜ ಸೇವಾ ರತ್ನ), ಸ್ವರೂಪಾನಂದ ಕೊಟ್ಟೂರು ( ಜನನಿ ಅರಕ್ಷಕ ರತ್ನ), ಡಾ.ನಿಂಗು ಸೊಲಗಿ ಮುಂಡರಗಿ ( ಜನನಿ ಸಾಹಿತ್ಯ ರತ್ನ), ವರದಾಪುರ ಹನುಮಂತ ಹ.ಬೊ.ಹಳ್ಳಿ (ಜನನಿ ಸಾರಿಗೆ ರತ್ನ) ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

> ಸೊಂಡೂರಿನ ಶ್ರೀ ಪ್ರಭುದೇವರ ಸಂಸ್ಥಾನ ವಿರಕ್ತಮಠದ ಪೂಜ್ಯ ಶ್ರೀ ಪ್ರಭುಮಹಾಸ್ವಾಮಿಗಳು ಸೊಂಡೂರಿನ ಪರಿಸರದಲ್ಲಿ ಸಾಮಾಜಿಕ ಕೆಲಸಗಳನ್ನು ಮಾಡುತ್ತಿರುವ ಅವರ ಕಾರ್ಯ ಶ್ಲಾಘನೀಯ. ನಿಸರ್ಗದ ವನವನ್ನಾಗಿ ಸ್ವಾಮೀಜಿಗಳು ಮಾಡಿದ್ದಾರೆ. ಪರಿಸರವನ್ನು ಪ್ರೀತಿಸುವವರು ಮನುಷ್ಯರನ್ನು ಪ್ರೀತಿಸುತ್ತಾರೆ. ಜಾತಿಯನ್ನು ಅಲ್ಲ ಎಂದು ಹೇಳಿದರು.

# ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ ಸಮಾರಂಭ

• **ಉದಯವಾಹಿನಿ, ಚಿತ್ರದುರ್ಗ**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಪತ್ರಿಕೆ ಹಾಗೂ ಪುಸ್ತಕ ಓದುವ ಹವ್ಯಾಸ ರೂಢಿಸಿಕೊಳ್ಳಬೇಕು ಎಂದು ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ ಹೇಳಿದರು.

ನಗರದ ಶ್ರೀ ಕೃಷ್ಣರಾಜೇಂದ್ರ ನಗರ ಕೇಂದ್ರ ಗ್ರಂಥಾಲಯದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆ ಹಾಗೂ ಚಿತ್ರದುರ್ಗ ನಗರ ಕೇಂದ್ರ ಗ್ರಂಥಾಲಯ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ ಸಮಾರಂಭ ಮತ್ತು ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಎಸ್.ಆರ್.ರಂಗನಾಥ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಮಾನಗಳಲ್ಲಿ ಯುವ ಪೀಳಿಗೆ ವಿವಿಧ ರೀತಿಯ ದುಶ್ಚಟ ಹಾಗೂ ಮೊಬೈಲ್ ಗೀಳಿಗೆ ದಾಸರಾಗುತ್ತಿದ್ದಾರೆ. ಇವುಗಳಿಂದ ಹೊರಬಂದು ಗ್ರಂಥಾಲಯದಲ್ಲಿನ ಸಂಪನ್ಮೂಲಗಳನ್ನು ಬಳಸಿಕೊಂಡು ಜ್ಞಾನ ಸಂಪತ್ತು ವೃದ್ಧಿಸಿಕೊಳ್ಳಬೇಕು.

ಪುಸ್ತಕದ ಸಾಂಗತ್ಯದಿಂದ ಉನ್ನತ ಮಟ್ಟಕ್ಕೆ ಬೆಳೆದು ಮುಂದಿನ ಪೀಳಿಗೆಗೆ ಮಾದರಿಯಾಗಬೇಕು ಎಂದು ಸಲಹೆ ನೀಡಿದರು. ಮಕ್ಕಳನ್ನು ಮುನ್ನೆಲೆಗೆ ತರುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳ ಆಯೋಜಿಸಲಾಗುತ್ತಿದೆ. ಅದರಂತೆ ಮಕ್ಕಳಿಗೆ ಗ್ರಂಥಾಲಯ ಮಹತ್ವ ತಿಳಿಸಲು,


ಉದಯವಾಹಿನಿ ಚಿತ್ರ

ಮಕ್ಕಳ ಗ್ರಂಥಾಲಯ ಸ್ಥಾಪಿಸಲಾಗಿದೆ. ಆದ್ದರಿಂದ ವಿದ್ಯಾರ್ಥಿಗಳು, ಮಕ್ಕಳು, ಓದುಗರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್‌ನ ಜಿಲ್ಲಾಧ್ಯಕ್ಷ ಯೋಗೇಶ್ ಸಹ್ಯಾದ್ರಿ ಮಾತನಾಡಿ, ಯಾವುದೇ ಒಂದು ಗ್ರಂಥಾಲಯ ಉಳಿಯಬೇಕು, ಬೆಳೆಯಬೇಕು ಎಂದರೆ ಮುಖ್ಯ ಕಾರಣ ಓದುಗರು. ಗ್ರಂಥಾಲಯಗಳು ಇರುವುದೇ ಓದುಗರಿಗೋಸ್ಕರ. ಪುಸ್ತಕ ಓದುವುದರಿಂದ ಸಿಗುವ ಖುಷಿ, ಸಂತೋಷ ಪರ್ಯಾಯ ವಸ್ತುಗಳಲ್ಲಿ ಸಿಗುವುದಿಲ್ಲ. ಆದ್ದರಿಂದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಉತ್ತಮವಾದ ವೇದಿಕೆ ಕಲ್ಪಿಸಲಾಗಿದೆ. ಇಂತಹ ವೇದಿಕೆಗಳನ್ನು ಬಳಸಿಕೊಂಡು ಉತ್ತಮವಾದ ಓದುಗನಾದರೆ, ಒಳ್ಳೆಯ ಬರಹಗಾರ, ವಾಗ್ಮಿ, ಸಾಹಿತಿ ಅಷ್ಟೇ ಅಲ್ಲದೇ, ಉತ್ತಮವಾದ ಜೀವನ ಶೈಲಿ ರೂಢಿಸಿಕೊಳ್ಳಬಹುದು. ಈ ಸಮಾಜದಲ್ಲಿ ವಿಶ್ವಮಾನವನಾಗಿ ಬಾಳಬೇಕಾದರೆ ಅದು ಓದಿನಿಂದ ಮಾತ್ರ ಸಾಧ್ಯ ಎಂದು ಅಭಿಪ್ರಾಯ ಪಟ್ಟರು.

> ಪ್ರತಿ ವರ್ಷ ನ.14 ರಿಂದ 20ರವರೆಗೆ ದೇಶಾದ್ಯಂತ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಆಚರಿಸಲಾಗುತ್ತದೆ. ದೇಶದಲ್ಲಿ ಗ್ರಂಥಾಲಯ ಎಂಬ ಪರಿಕಲ್ಪನೆ ನೀಡಿದವರು ಎಸ್.ಆರ್.ರಂಗನಾಥ್. ಈ ಮೂಲಕ ಲಕ್ಷಾಂತರ ವಿದ್ಯಾರ್ಥಿಗಳಿಗೆ ವಿದ್ಯೆ, ಜ್ಞಾನಾರ್ಜನೆ, ಉದ್ಯೋಗಾವಕಾಶ ದೊರಕಿಸಿಕೊಟ್ಟ ಮಹಾನ್ ಚೇತನ
>
> –ಕೊಳ್ಳಿ ಬಸವರಾಜ, ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ

ಯಶೋಧ ರಾಜಶೇಖರಪ್ಪ ಅವರು ಕನ್ನಡ ನಾಡಿಗೆ ಚಿತ್ರದುರ್ಗದ ಕೊಡುಗೆ ಹಾಗೂ ಗ್ರಂಥಾಲಯದ ಉಪಯೋಗ ಕುರಿತು ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಚಿತ್ರಕಲೆ, ಪ್ರಬಂಧ ಸ್ಪರ್ಧೆ, ಉತ್ತಮ ಓದುಗ, ಆಶುಭಾಷಣ ಹಾಗೂ ರಂಗೋಲಿ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಪತ್ರ ಮತು ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಾಹಿತಿ ಹೆಚ್.ಆನಂದ್ ಕುಮಾರ್, ನಗರಸಭೆ ಸದಸ್ಯೆ ಪಿ.ಎನ್.ಶ್ವೇತಾ ಸೇರಿದಂತೆ ಗ್ರಂಥಾಲಯದ ಸಿಬ್ಬಂದಿ, ಓದುಗರು ಇದ್ದರು.

# ಅನರ್ಹರ ಬಿಪಿಎಲ್ ಕಾರ್ಡ್ ವಾಪಸ್

• **ಉದಯವಾಹಿನಿ, ಬಾಗಲಕೋಟೆ**



ಅನರ್ಹರ ಬಿಪಿಎಲ್ ಕಾರ್ಡ್ ಗಳನ್ನು ಮಾತ್ರ ವಾಪಾಸ್ ಪಡೆಯಬಹುದು. ಅರ್ಹರ ಕಾರ್ಡ್ ಗಳಿಗೆ ತೊಂದರೆ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟಪಡಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಪಿಎಲ್ ಕಾರ್ಡ್‌ಗಳು ರದ್ದಾಗುತ್ತಿವೆ ಎನ್ನುವ ಪ್ರಶ್ನೆಯೇ ಪೂರ್ತಿ ತಪ್ಪು.

ಪತ್ರಕರ್ತರು ಸರಿಯಾಗಿ ತಿಳಿದುಕೊಂಡು ಬರಬೇಕು. ಅನರ್ಹರ ಕಾರ್ಡ್‌ಗಳನ್ನು ವಾಪಾಸ್ ಪಡೆಯಬಹುದು ಎನ್ನುವ ಆಲೋಚನೆ ಮಾತ್ರ ನಮ್ಮದಾಗಿದೆ. ಇದಿನ್ನೂ ಆಹಾರ ಇಲಾಖೆ ಪರಿಶೀಲಿಸುತ್ತಿದೆ. ಇನ್ನೂ ಅಂತಿಮ ತೀರ್ಮಾನ ಆಗಿಲ್ಲ. ಅನರ್ಹರಿಗೆ ಕೊಡಲ್ಲ, ಅರ್ಹರಿಗೆ ತಪ್ಪಿಸಲ್ಲ ಎಂದು ಮತ್ತೊಮ್ಮೆ ಸ್ಪಷ್ಟಪಡಿಸಿದರು.

ಆದಾಯ ತೆರಿಗೆ ಪಾವತಿಸುವವರಿಗೂ, ಸರ್ಕಾರಿ ನೌಕರರಿಗೂ ಬಿಪಿಎಲ್ ಕಾರ್ಡ್ ಕೊಡಬೇಕಾ ಎಂದು ಮರು ಪ್ರಶ್ನಿಸಿದ ಸಿಎಂ, ಯಾವ ಕಾರ್ಡ್ ಗಳೂ ರದ್ದಾಗುವುದಿಲ್ಲ. ಅನರ್ಹರಿಂದ ವಾಪಾಸ್ ಪಡೆಯಬಹುದು. ಅರ್ಹರು ವಂಚಿತರಾಗಬಾರದು ಎಂದರು. 40% ಕಮಿಷನ್ ಆರೋಪದಿಂದ ಮುಕ್ತರಾಗಿದ್ದೇವೆ ಎನ್ನುವ ಆರ್.ಅಶೋಕ್ ಮಾತಿನ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿ, ಗುತ್ತಿಗೆದಾರರ ಸಂಘದ ಅಧ್ಯಕ್ಷರಾಗಿದ್ದ ಕೆಂಪಣ್ಣ ಅವರು ಕೊಟ್ಟ ದೂರಿನ ಆಧಾರದಲ್ಲಿ ನಾವು ತನಿಖೆಗೆ ಸೂಚಿಸಿದ್ದೆವು. ಸಾಕ್ಷ್ಯಾಧಾರಗಳ ಕೊರತೆಯಿಂದ ಕೊಲೆ ಆರೋಪಿಗಳು ಬಿಡುಗಡೆ ಆಗುತ್ತಾರೆ. ಹಾಗಂತ ಕೊಲೆಯೇ ಆಗಿಲ್ಲ ಅಂದರೆ ಅದರಲ್ಲಿ ಅರ್ಥ ಇಲ್ಲ. ಕೊಲೆ ನಡೆದಿರುತ್ತದೆ. ಸಾಕ್ಷಿಗಳು ಸಾಕ್ಷ್ಯ ಹೇಳಿರುವುದಿಲ್ಲ ಅಷ್ಟೆ ಅಂದರು.

ಆಪರೇಷನ್ ಕಮಲಕ್ಕಾಗಿ ಕಾಂಗ್ರೆಸ್ ಶಾಸಕರಿಗೆ ತಲಾ 50 ಕೋಟಿ ಆಫರ್ ನೀಡಲಾಗಿತ್ತು ಎನ್ನುವ ಪ್ರಶ್ನೆಗೆ ಉತ್ತರಿಸಿದ ಸಿಎಂ, ಬಿಜೆಪಿಯವರು ಆಪರೇಷನ್ ಕಮಲಕ್ಕೆ ಪ್ರಯತ್ನಿಸಿದರು, ವಿಫಲರಾದರು ಎಂದರು.

# ಈಜುಕೊಳದಲ್ಲಿ ಈಜಲು ಇಳಿದ ಮೂವರು ಸಾವು

• **ಉದಯವಾಹಿನಿ, ಮಂಗಳೂರು**

ಇಲ್ಲಿನ ಉಳ್ಳಾಲದ ಬಳಿಯಲ್ಲಿರುವಂತ ರೆಸಾರ್ಟ್ ಒಂದರ ಈಜುಕೊಳದಲ್ಲಿ ಈಜೋದಕ್ಕೆ ಇಳಿದಂತ ಮೂವರು ನೀರಲ್ಲಿ ಮುಳುಗಿ ಧಾರುಣವಾಗಿ ಸಾವನ್ನಪ್ಪಿರುವಂತ ಘಟನೆ ನಡೆದಿದೆ. ಮಂಗಳೂರಿನ ಉಳ್ಳಾಲ–ಸೋಮೇಶ್ವರದಲ್ಲಿರುವಂತ ಖಾಸಗಿ ಬೀಚ್ ರೆಸಾರ್ಟ್‌ನ ಈಜುಕೊಳದಲ್ಲಿ ಈಜಲು ಇಳಿದಂತ ಯುವತಿಯೊಬ್ಬಳು ಅದು ಆಳವಾಗಿದ್ದರಿಂದ ಈಜು ಬಾರದೇ ಮುಳುಗಿದ್ದಳು. ಅವಳನ್ನು ರಕ್ಷಿಸೋದಕ್ಕೆ ಇಳಿದಂತ ಮತ್ತೆ ಇಬ್ಬರು ಸೇರಿ ಮೂವರು ಧಾರುಣವಾಗಿ ಸಾವನ್ನಪ್ಪಿರುವಂತ ಘಟನೆ ನಡೆದಿದೆ. ಮೃತರನ್ನು ನಿಶ್ಚಿತ ಎಂ.ಡಿ (21), ಪಾರ್ವತಿ.ಎಸ್(20) ಹಾಗೂ ಕೀರ್ತನಾ.ಎನ್ (21) ಎಂಬುದಾಗಿ ಗುರುತಿಸಲಾಗಿದೆ. ಈ ಮೂವರು ಮೈಸೂರು ಮೂಲದವರಾಗಿದ್ದು ಎಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದರು.

# ಗ್ರಾಮಸ್ಥರ ನಿದ್ದೆಗೆಡಿಸಿದ್ದ ಚಿರತೆ ಸೆರೆ

• **ಉದಯವಾಹಿನಿ, ಚಿತ್ರದುರ್ಗ**

ಚಿತ್ರದುರ್ಗದ ಕಡ್ಲೆಗುದ್ದು ಗ್ರಾಮದ ಜನರ ನಿದ್ದೆಗೆಡಿಸಿದ್ದ ಚಿರತೆಯನ್ನು ಕೊನೆಗೂ ಅರಣ್ಯ ಇಲಾಖೆ ಸಿಬ್ಬಂದಿ ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

ಕಡ್ಲೆಗುದ್ದು, ಸಿದ್ದಾಪುರ, ಕುರುಬರಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ಕಳೆದ ಒಂದು ತಿಂಗಳಿಂದ ಚಿರತೆ ಹಾವಳಿ ಆತಂಕ ಸೃಷ್ಟಿಸಿತ್ತು.

ಹಲವು ಬಾರಿ ಜಾನುವಾರುಗಳ ಮೇಲೆ ದಾಳಿ ನಡೆಸಿತ್ತು. ಇದರಿಂದ ಸಂಜೆಯಾದರೆ ಗ್ರಾಮಸ್ಥರು ಮನೆಯಿಂದ ಹೊರಬರಲು ಭಯಪಡುತ್ತಿದ್ದರು. ಇದೀಗ ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಾಚರಣೆಗೆ ಚಿರತೆ ಬೋನಿಗೆ ಬಿದ್ದಿದೆ. ಚಿರತೆಯನ್ನು ಆಡುಮಲ್ಲೇಶ್ವರ ಕಿರು ಮೃಗಾಲಯಕ್ಕೆ ಶಿಫ್ಟ್ ಮಾಡಲಾಗಿದೆ.

# ಅಖಿಲ ಭಾರತ ಕವಯಿತ್ರಿ ಸಮ್ಮೇಳನ 22ರಿಂದ

• **ಉದಯವಾಹಿನಿ, ಶಿವಮೊಗ್ಗ**

ಅಖಿಲ ಭಾರತ ಕವಯಿತ್ರಿ ಸಮ್ಮೇಳನವನ್ನು ನ.22, 23 ಹಾಗೂ 24ರಂದು ಕುವೆಂಪು ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಮ್ಮೇಳನದ ಸಂಯೋಜಕಿ ಜಿ.ಎಸ್. ಸರೋಜಾ ತಿಳಿಸಿದರು.

ಸಮ್ಮೇಳನದಲ್ಲಿ ಬಹುಭಾಷಾ ಕವಿಗೋಷ್ಠಿ, ಶೋಧಪತ್ರ ಪ್ರಸ್ತುತಿ, ವಿಚಾರ ಸಂಕಿರಣ, ಮಹಿಳಾ ಯುವಗೋಷ್ಠಿ, ಪುಸ್ತಕಗಳ ಬಿಡುಗಡೆ, ಪಾರಂಪರಿಕ ಹಾಗೂ ಆಧುನಿಕ ಸಾಂಸ್ಕೃತಿಕ ಕಾರ್ಯಕ್ರಮ, ವೈವಿಧ್ಯಮಯ ಸಂಸ್ಕೃತಿ ಆಚಾರ ವಿಚಾರಗಳ ಕೊಡುಕೊಳ್ಳುವಿಕೆ, ಭಾಷಾ ಸಾಮರಸ್ಯ, ರಾಷ್ಟ್ರೀಯ ಏಕತೆ ಕುರಿತಾಗಿ ವೈವಿಧ್ಯ ಮಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ' ಎಂದು ಹೇಳಿದರು. ಸಮ್ಮೇಳನದಲ್ಲಿ ವಿವಿಧ ರಾಜ್ಯ ಹಾಗೂ ವಿಭಿನ್ನ ಭಾಷೆಗಳ 500ಕ್ಕೂ ಹೆಚ್ಚು ಲೇಖಕಿಯರು ಪಾಲ್ಗೊಳ್ಳಲಿದ್ದಾರೆ. ನೇಪಾಳ, ಬಾಂಗ್ಲಾ, ಕೆನಡಾ, ಇಂಗ್ಲೆಂಡ್, ಆಸ್ಟ್ರೇಲಿಯಾದಿಂದಲೂ ಲೇಖಕಿಯರು ಭಾಗವಹಿಸಲಿದ್ದಾರೆ. ಇದೊಂದು ಶಿವಮೊಗ್ಗದ ಸಾರಸತ್ವ ಲೋಕದ ಇತಿಹಾಸದಲ್ಲಿ ಅಪೂರ್ವ ಸಮಾವೇಶವಾಗಲಿದೆ. ಸಮ್ಮೇಳನದಲ್ಲಿ 24 ಭಾಷೆಯ ಪುಸ್ತಕಗಳು ಹಾಗೂ ಕನ್ನಡದ ವಿವಿಧ ಪ್ರಕಾರಗಳ 24 ಪುಸ್ತಕಗಳು ಬಿಡುಗಡೆಯಾಗಲಿವೆ ಎಂದರು. ನ.21ರಂದು ಅಕ್ಕಮಹಾದೇವಿಯ ಜನ್ಮಸ್ಥಳ ಉಡತಡಿಯಲ್ಲಿ ಸಂಸದ ಬಿ.ವೈ.ರಾಘವೇಂದ್ರ ಸಮ್ಮೇಳನದ ಜ್ಯೋತಿ ಬೆಳಗಿಸಲಿದ್ದಾರೆ. ನ.22ರಂದು ಬೆಳಿಗ್ಗೆ 9.30ಕ್ಕೆ ಶಿವಮೊಗ್ಗದ ಶಿವಮೂರ್ತಿ ವೃತ್ತದಲ್ಲಿ ಎಸ್‌ಪಿ ಮಿಥುನ್‌ಕುಮಾರ್ ಜ್ಯೋತಿಯನ್ನು ಸ್ವಾಗತಿಸಲಿದ್ದಾರೆ. ಅಂದು ಬೆಳಿಗ್ಗೆ 11ಕ್ಕೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸಮ್ಮೇಳನ ಉದ್ಘಾಟಿಸುವರು.

**ಆಧುನಿಕ ಸಾಂಸ್ಕೃತಿಕ ಕಾರ್ಯಕ್ರಮ**

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಮಧುಬಂಗಾರಪ್ಪ, ಸಂಸದ ಬಿ.ವೈ. ರಾಘವೇಂದ್ರ, ಜಿಲ್ಲೆಯ ಶಾಸಕರು ಉಪಸ್ಥಿತರಿರುತ್ತಾರೆ ಎಂದರು.

# ಕರಿಯಾಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಿಗೆ ನೀರಿನ ಭಾಗ್ಯ

• **ಉದಯವಾಹಿನಿ, ಹಿರಿಯೂರು**

ತಾಲ್ಲೂಕಿನ ಕರಿಯಾಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಣ್ಣೆ ಈರಪ್ಪನಹಟ್ಟಿಗೆ ಗಾಯತ್ರಿ ಜಲಾಶಯದಿಂದ ಪೈಪ್‌ಲೈನ್ ಮೂಲಕ ನೀರು ಹರಿಸುವ ಕಾರ್ಯಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಚಾಲನೆ ನೀಡಿದರು.

ಬೆಣ್ಣೆ ಈರಪ್ಪನಟ್ಟಿಯಲ್ಲಿ 12 ಕೊಳವೆಬಾವಿ ಕೊರೆಸಿದರೂ ನೀರು ಸಿಕ್ಕಿರಲಿಲ್ಲ. ಟ್ಯಾಂಕರ್‌ಗಳ ಮೂಲಕ ಜನರಿಗೆ ತೃಪ್ತಿಯಾಗುವಷ್ಟು ನೀರು ಕೊಡಲು ಕಷ್ಟವಾಗುತ್ತದೆ.

ಜಾನುವಾರುಗಳಿಗೂ ನೀರು ಬೇಕಾಗಿದೆ. ಭದ್ರಾ ಮೇಲ್ದಂಡೆ ಯೋಜನೆಯಡಿ ತಾಲ್ಲೂಕಿನ ಎಲ್ಲಾ ಭಾಗದ ಕೆರೆಗಳಿಗೆ ನೀರು ತುಂಬಿಸುವ ಮೂಲಕ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ರೂಪಿಸಬೇಕು ಎಂಬುದು


ಉದಯವಾಹಿನಿ ಚಿತ್ರ

ನನ್ನ ಮಹದಾಸೆ. ಹೀಗಾಗಿ ಭದ್ರಾ ಜಲಾಶಯದ ನೀರನ್ನು ವಾಣಿವಿಲಾಸಕ್ಕೆ ಹರಿಸುತ್ತಿದ್ದು, ಕೆಲವೇ ದಿನಗಳಲ್ಲಿ ಜಲಾಶಯ ಕೋಡಿ ಬೀಳುವ ವಿಶ್ವಾಸವಿದೆ' ಎಂದು ಅವರು ತಿಳಿಸಿದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭಾ ಗ್ಯಮ್ಮ, ಉಪಾಧ್ಯಕ್ಷ ವೆಂಕಟೇಶ್, ಸದಸ್ಯರಾದ ರಾಮಣ್ಣ, ಸುಶೀಲಮ್ಮ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯೆ ಗಂಗಮ್ಮ, ಪಿಡಿಒ ಕೆ.ಎನ್. ಮ ಹೇಶ್, ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ ಎಂಜಿನಿಯರ್ ಬಾಷಾ ಸಾಬ್, ಮುಖಂಡರಾದ ದಿಂಡಾವರ ಮಹೇಶ್, ಭೂತೇಶ್ ಹಾಜರಿದ್ದರು.

**ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ**

> ರೈತರ ಹೊಲಗಳಲ್ಲಿನ ಕೊಳವೆಬಾವಿಗಳನ್ನು ಗುತ್ತಿಗೆ ಪಡೆದು ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿತ್ತು. ಈಗ ಗಾಯತ್ರಿಪುರ ಮತ್ತು ಬೆಣ್ಣೆ ಈರಪ್ಪನಹಟ್ಟಿಗಳಿಗೆ ಗಾಯತ್ರಿ ಜಲಾಶಯದ ನೀರನ್ನು ಪೂರೈಸಲಾಗುತ್ತಿದೆ
>
> –ಸಚಿವ ಡಿ. ಸುಧಾಕರ್

# ಜನವರಿಯಲ್ಲಿ ಜಾನುವಾರು, ಕುಕ್ಕುಟ, ಮತ್ಸ್ಯ ಮೇಳ

• **ಉದಯವಾಹಿನಿ, ಬೀದರ್**

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ 2025ರ ಜನವರಿ 17ರಿಂದ 19ರವರೆಗೆ ಜಾನುವಾರು, ಕುಕ್ಕುಟ ಹಾಗೂ ಮತ್ಸ್ಯ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಸಿ. ವೀರಣ್ಣ ಹೇಳಿದರು. ಬೀದರ್ ತಾಲ್ಲೂಕಿನ ಕಮಠಾಣ ಸಮೀಪದ ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಮೇಳದ ಭಿತ್ತಿ ಪತ್ರ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಮೇಳದಲ್ಲಿ ವೈಜ್ಞಾನಿಕ ಜಾನುವಾರು, ಮೀನು ಸಾಕಣೆ ಪದ್ಧತಿ, ವೈಜ್ಞಾನಿಕ ಆಹಾರ ಪದ್ಧತಿ, ಸಮಗ್ರ ಕೃಷಿ ಪದ್ಧತಿ, ಸಾವಯವ ಕೃಷಿ, ಜೈವಿಕ ಗೊಬ್ಬರ, ಮೇವಿನ ಸಂಸ್ಕರಣೆ, ಸಂರಕ್ಷಣೆ ತಂತ್ರಜ್ಞಾನ, ರೋಗ ನಿರ್ಣಯ, ಔಷಧಿ, ಲಸಿಕೆ, ಜಾನುವಾರು, ಕುಕ್ಕುಟ, ಮೀನು ತಂತ್ರಜ್ಞಾನ, ಕೃಷಿ ಉಪಕರಣ, ಯಂತ್ರೋಪಕರಣ, ಸರ್ಕಾರದ ಯೋಜನೆಗಳ ಕುರಿತು ರೈತರಿಗೆ ಮಾಹಿತಿ ಒದಗಿಸಲಾಗುವುದು. ರೈತ–ವಿಜ್ಞಾನಿ, ರೈತ– ರೈತರ ಸಂವಾದ ಏರ್ಪಡಿಸಲಾಗುವುದು.

180ರಿಂದ 200 ಮಳಿಗೆಗಳನ್ನು ಹಾಕಲಾಗುವುದು. ಪಶುಪಾಲನೆ ಮತ್ತು ಮೀನುಗಾರಿಕೆಗೆ ಉತ್ತೇಜನ ನೀಡುವ ದಿಸೆಯಲ್ಲಿ ಪ್ರತಿ ಜಿಲ್ಲೆಗೆ ಶ್ರೇಷ್ಠ ರೈತ, ರೈತ ಮಹಿಳೆ ಪ್ರಶಸ್ತಿ ನೀಡಲಾಗುವುದು' ಎಂದು ಹೇಳಿದರು.

# ಪ್ರಶ್ನೆ ಪತ್ರಿಕೆ ಸೋರಕೆ: ಅಭ್ಯರ್ಥಿಗಳು ರಸ್ತೆ ತಡೆದು ಪ್ರತಿಭಟನೆ

## ಹೈದರಾಬಾದ್–ಕರ್ನಾಟಕ ವೃಂದದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ಪರೀಕ್ಷೆ

• **ಉದಯವಾಹಿನಿ, ಸಿಂಧನೂರು**

ಕರ್ನಾಟಕ ಲೋಕಸೇವಾ ಆಯೋಗದಿಂದ ಹೈದರಾಬಾದ್–ಕರ್ನಾಟಕ ವೃಂದದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ಪರೀಕ್ಷೆಯನ್ನು ನಿಗದಿಯಾಗಿತ್ತು. ಅದರಂತೆ ಸಿಂಧನೂರು ನಗರದ ಸರ್ಕಾರಿ ಮಹಾವಿದ್ಯಾಲಯದಲ್ಲಿ ಪರೀಕ್ಷೆ ನಡೆಸಲಾಯಿತು.

ಪರೀಕ್ಷೆಗೂ ಮುನ್ನವೇ ಪರೀಕ್ಷಾ ಕೇಂದ್ರದಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ಆಗಿದೆ. ಜೊತೆಗೆ ಒಂದು ಪ್ರಶ್ನೆ ಪತ್ರಿಕೆ ಬಂಡಲ್ಲಿನಲ್ಲಿ 24 ಪ್ರಶ್ನೆ ಪತ್ರಿಕೆಗಳಿಗೆ ಬದಲಾಗಿ ಕೇವಲ 12 ಪ್ರಶ್ನೆ ಪತ್ರಿಕೆಗಳು ಮಾತ್ರ ಇದ್ದು.

ಉಳಿದ ಕೊಠಡಿಗಳಲ್ಲಿ ಪ್ರಶ್ನೆ ಪತ್ರಿಕೆ ಹಂಚಿಕೆ ಮಾಡಿ ಇನ್ನೂ ಕೆಲವು ಕೊಠಡಿಗಳಲ್ಲಿ ಸಮಯ 11 ವರಿ ಆದರೂ ಸಹ ಪ್ರಶ್ನೆ ಪತ್ರಿಕೆ ಹಂಚಿಕೆ ಮಾಡಿದೆ ಪ್ರಶ್ನೆ ಪತ್ರಿಕೆ ಹಾಗೂ ಓಎಮ್ ಆರ್ ನೊಂದಣಿ ಪ್ರಕಾರ ಹೊಂದಾಣಿಕೆ ಇಲ್ಲದೆ ಆದರೆ ಕೊಠಡಿಗಳಲ್ಲಿ ಅಭ್ಯರ್ಥಿ ಪ್ರಕಾರ ಪ್ರಶ್ನೆ ಪತ್ರಿಕೆ ಬಂಡಲ್ ಬಂದಿಲ್ಲ. ಹಾಗಾಗಿ ಪ್ರಶ್ನೆ ಪತ್ರಿಕೆ ಸೋರಿಕೆ ಆಗಿದೆ ಎಂದು 4–5 ಕೊಠಡಿಗೆಳಲ್ಲಿ ಸಮಸ್ಯೆ ಉಂಟು ಯಾಗಿ ಕೆಲವು ವಿದ್ಯಾರ್ಥಿಗಳು ಪರೀಕ್ಷೆ ಬರೆಯದೆ ಗೊಂದಲಕ್ಕೆ ತೆರೆ ಎಳೆದ ಕಾಲೇಜಿನಿಂದ ಹೋರಿಗೆ ಬಂದು ಪರೀಕ್ಷೆ ನಡೆಸುವ ಅಧಿಕಾರಿಗಳು ವಿರುದ್ಧ ದಿಕ್ಕಾರ ಕೂಗುತ್ತಾ ಕೆಲವು ಅಭ್ಯರ್ಥಿಗಳು ಪರೀಕ್ಷೆ ಬೆರೆಯದೆ ಕುಷ್ಟಗಿ ರಸ್ತೆ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ರಾಜ್ಯದಲ್ಲಿ ಕಲ್ಯಾಣ ಕರ್ನಾಟಕ (ಹೆಚ್.ಕೆ.) ವಿಭಾಗದಲ್ಲಿ 97 ಸಿಂಧನೂರು ಒಟ್ಟು 16 ಪರೀಕ್ಷೆ ಕೇಂದ್ರ ಗಳ ಇದ್ದ. ಅದರಲ್ಲಿ ಸರ್ಕಾರಿ ಮಹಾವಿದ್ಯಾಲಯ 35 ಕೊಠಡಿ ಗಳು ಪ್ರತಿ ಕೊಠಡಿಗೆ 24 ಅಭ್ಯರ್ಥಿಗಳನ್ನು ನಿಗದಿ ಮಾಡಲಾಗಿದೆ ಎಂದು ಕೆ.ಪಿ.ಎಸ್. ಸಿ ನೋಡಲ್ ಅಧಿಕಾರಿ ಶಂಭುಲಿಂಗ ಹಿರೇಮಠ ತಿಳಿಸಿದರು.


ಉದಯವಾಹಿನಿ ಚಿತ್ರ

> ಈ ಕೂಡಲೇ ಆಯೋಗವು ತನ್ನ ತಪ್ಪನ್ನು ಒಪ್ಪಿಕೊಂಡು ತಕ್ಷಣ ಪತ್ರಿಕಾ ಪ್ರಕಟಣೆ ಹೊರಡಿಸುವುದರ ಮೂಲಕ ಮರು ಪರೀಕ್ಷೆ ನಡೆಸಬೇಕು. ನಮ್ಮ ವಿದ್ಯಾರ್ಥಿಗಳ ಸಂಘಟನೆಯು ಇಂತಹ ಕರ್ತವ್ಯ ಲೋಪ ಮತ್ತು ಭ್ರಷ್ಟಾಚಾರದ ವಿರುದ್ಧ ನಿರಂತರವಾಗಿ ಧ್ವನಿ ಎತ್ತುತ್ತದೆ ಮತ್ತು ಯಾವ ಅಭ್ಯರ್ಥಿಗೂ ಅನ್ಯಾಯವಾಗುವುದನ್ನು ಸಹಿಸುವುದಿಲ್ಲ. ಕೊಡಲೇ ಮರ ಪರೀಕ್ಷೆ ಗೆ ಸರ್ಕಾರ ಆದೇಶ ಹೊರಡಿಸಿಬೇಕು ಪರೀಕ್ಷೆ ಬರೆಯುವ ಕೆಲವು ಅಭ್ಯರ್ಥಿಗಳ ವಾದವಾಗಿತ್ತು.

ಕುಷ್ಟಗಿ ರಸ್ತೆ 4 ಕೀಲೋ ವರಿಗೆ ಟ್ರಾಫಿಕ್ ಜಾಮ್ ಸಂಭವಿಸಿದ್ದು ಪ್ರಯಾಣಿಕರು ಪರದಾಡುವ ಸ್ಥಿತಿ ನಿರ್ಮಾಣವಾಯಿತು ಈ ವಿಷಯ ತಿಳಿದಂತೆ ಸ್ಥಳಕ್ಕೆ ಡಿವೈಎಸ್ಪಿ ಬಿ ಎಸ್ ತಳವಾರ ಹಾಗೂ ಪಿಎಸ್‌ಐ ದುರುಗಪ್ಪ ಡೊಳ್ಳಿನ ಹಾಗೂ ಸಿಬ್ಬಂದಿಗಳ ಆಗಮಿಸಿ ಯಾವುದೇ ಸಮಸ್ಯೆ ಉದ್ಭವಿಸದಂತೆ ಜಾಗ್ರತೆ ವಹಿಸಿ ಇನ್ನೂ ಕೆಲವು ಕೊಠಡಿಗಳು ಅಭ್ಯರ್ಥಿ ಗಳು ಪರೀಕ್ಷೆ ಬರೆಯುವ ಅಭ್ಯರ್ಥಿಗಳಿಗೆ ತೊಂದರೆ ಆಗದಂತೆ ಬೀಗಿ ಬಂದೋಬಸ್ತ್ ವ್ಯವಸ್ಥೆ ಮಾಡಿದರು. ನಂತರ ಸ್ಥಳಕ್ಕೆ ಮಾಜಿ ಸಂಸದರು ಮತ್ತು ಎಂಎಲ್ಸಿ ಬಸನಗೌಡ ಬಾದರ್ಲಿ ಮಾಜಿ ಸಚಿವ ನಾಡಗೌಡ ಆಗಮಿಸಿ ಪರೀಕ್ಷೆ ಬಗ್ಗೆ ಚರ್ಚೆಸಿದರು.

ಪರೀಕ್ಷೆ ಬಂದು ಅಭ್ಯರ್ಥಿಗಳು ಏಕೆ ಪರೀಕ್ಷೆ ತಿರಸ್ಕರಿಸಿದ್ದಾರೆ ಕಾರಣನು ಸ್ಥಳದಲ್ಲಿ ಏನು ಘಟನೆ ನಡೆದಿದೆ ವಿವರವಾಗಿ ತಿಳಿದುಕೊಂಡು ಬಸನಗೌಡ ಬಾದರ್ಲಿ ಅವರು ಕೆ.ಪಿ.ಎಸ್ .ಸಿ. ಮುಖ್ಯ ಕಾರ್ಯದರ್ಶಿ ರಣದೀಪ್ ಚೌದ್ರಿ ಅವರಿಗೆ ಕರೆ ಮಾಡಿ ಈಗಾಗಲೇ ಗೊಂದಲದಿಂದ ಸೃಷ್ಟಿ ಯಾದ ಪರೀಕ್ಷೆ ಬಗ್ಗೆ ಏನು ಕ್ರಮ...? ಮುಂದೆ ಇನ್ನೂ ಒಂದು ಪರೀಕ್ಷೆ ಹೇಗೆ ನಡೆಸಬೇಕು ಎಂದು ಎಲ್ಲಾ ರೀತಿಯ ವಿವರಣೆ ಪಡೆದುಕೊಂಡು ಹೋರಾಟದ ಸ್ಥಳಕ್ಕೆ ಬಂದು ಕೆಲವು ಪರೀಕ್ಷೆ ಬರೆಯದೆ ಇರುವ ಅಭ್ಯರ್ಥಿಗಳು ಎರಡನೇ ಪರೀಕ್ಷೆ ಎಲ್ಲರೂ ಬರೆಯಿರಿ ಮತ್ತು ಮೊದಲನೇ ಪರೀಕ್ಷೆ ಗೆ ಇನ್ನು ಒಂದು ಸಲ ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು. ಆಗ ಕೆಲವು ಅಭ್ಯರ್ಥಿಗಳು ಪರೀಕ್ಷೆ ಪರೀಕ್ಷೆ ಬರೆಯಲು ಮುಂದಾದರು ಇನ್ನೂ ಕೆಲವು ಅಭ್ಯರ್ಥಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ನಂತರ ನಾಲ್ಕು ಗಂಟೆಗೆ ಪರೀಕ್ಷೆ ಬರೆದು ಬಂದು ಅಭ್ಯರ್ಥಿ ಗಳನ್ನು ಪೊಲೀಸ್ ಬಂದೋಬಸ್ತ್ ಮೂಲಕ ಅವರನ್ನು ಬೇರೆ ಕಡೆ ದಾರಿ ಮೂಲಕ ಕಳಿಸಿ ನಂತರ ರಸ್ತೆ ಕ್ಲಿಯರ್ ಮಾಡಲಾಯಿತು.

> ಹೋರಾಟದ ಸ್ಥಳಕ್ಕೆ ಬಂದು ಬಸನಗೌಡ ಬಾದರ್ಲಿ ಮತ್ತು ಸಹಾಯಕ ಲೋಕಾಯುಕ್ತ. ಲಿಂಗಸೂರ ಕಲ್ಯಾಣ ಶೆಟ್ಟಿ. ತಾಲ್ಲೂಕು ತಹಶೀಲ್ದಾರ್ ಅರುಣ್ ಕುಮಾರ್ ಎಚ ದೇಸಾಯಿ. ಪೌರಾಯುಕ್ತ ಮಂಜುನಾಥ ಗುಂಡೂರ ಅವರು ನಿಮ್ಮ ಭವಿಷ್ಯ ಹಾಳ ಮಾಡಿಕೊಳ್ಳಬೇಕು ಬನ್ನಿ ಪರೀಕ್ಷೆ ಬರೆಯಿರಿ ನಿಮಗೂ ಮತ್ತೊಮ್ಮೆ ಅವಕಾಶ ಇದೆ ತಿಳಿಸಿದರು.

# ವಿಶೇಷ ಚೇತನ ಮಕ್ಕಳನ್ನು ದೇವರ ಮಕ್ಕಳೆಂದು ಭಾವಿಸಿ

• ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆಯ ಕಾರ್ಯಕ್ರಮ

• **ಉದಯವಾಹಿನಿ, ಶಿವಮೊಗ್ಗ**

ಮಾನಸ ಸಮೂಹ ಸಂಸ್ಥೆಯ ಮನಸ್ಫೂರ್ತಿ ಕಲಿಕಾ ತರಬೇತಿ ಕೇಂದ್ರದಲ್ಲಿ ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆಯ ಕಾರ್ಯಕ್ರಮವನ್ನು ಆಚರಿಸಲಾಯಿತು.

ಈ ಕಾರ್ಯಕ್ರಮವನ್ನು ಶಿವಮೊಗ್ಗದ ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆಯ ಹಿರಿಯ ಉಪನ್ಯಾಸಕರಾದ ಶ್ರೀಮತಿ ರೇಣುಕಾರವರು ಉದ್ಘಾಟಿಸಿ ತಮ್ಮ ಉದ್ಘಾಟನಾ ಭಾಷಣದಲ್ಲಿ ವಿಶೇಷ ಚೇತನ ಮಕ್ಕಳನ್ನು ದೇವರ ಮಕ್ಕಳೆಂದು ನಾವು ಭಾವಿಸಬೇಕು. ಆ ಮಕ್ಕಳ ಪ್ರತಿಭೆಗೆ ತಕ್ಕಂತೆ ಅವಕಾಶಗಳನ್ನು ನೀಡಲು ಪೋಷಕರು ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶ್ರೀಮತಿ ಶೃತಿಯವರು ಮಕ್ಕಳಲ್ಲಿ ಮಾತೃ ಭಾಷೆ ಬೆಳೆಸುವ, ಉಳಿಸುವ ಕನ್ನಡ ಶಾಲೆಗಳಿಗೆ ಮಕ್ಕಳನ್ನು ಸೇರಿಸಬೇಕು ಎಂದರು.

ಈ ಸಂದರ್ಭದಲ್ಲಿ ಮಾನಸ ಸಮೂಹ ಸಂಸ್ಥೆಗಳ ಶೈಕ್ಷಣಿಕ ನಿರ್ದೇಶಕರಾದ ಡಾ. ಪ್ರೀತಿ. ವಿ. ಶಾನ್ ಭಾಗ್‌ರವರು ಜಿಲ್ಲಾ ಮಟ್ಟದ ಸ್ಪೆಷಲ್ ಒಲಂಪಿಕ್ಸ್ ನಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಿ ಶುಭ ಹಾರೈಸಿದರು.

ಮಾನಸ ಸಂಸ್ಥೆಯ ಮತ್ತೋರ್ವ ವೈದ್ಯರಾದ ಡಾ. ಸುಧಾರವರು ಮನಸ್ಪೂರ್ತಿಯಲ್ಲಿ ನಡೆಸಿದ ವಿವಿಧ ಕ್ರೀಡೆಗಳಲ್ಲಿ ಹಾಗೂ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿಶೇಷ ಚೇತನ ಮಕ್ಕಳಿಗೆ ಬಹುಮಾನವನ್ನು ವಿತರಿಸಿ ಮಕ್ಕಳಲ್ಲಿರುವ ಸ್ಪೂರ್ತಿಯೇ ಯಶಸ್ಸಿಗೆ ಕಾರಣ ಎಂದರು.


ಉದಯವಾಹಿನಿ ಚಿತ್ರ

**ಕನ್ನಡ ಶಾಲೆಗಳಿಗೆ ಮಕ್ಕಳನ್ನು ಸೇರಿಸಬೇಕು**

ಮಾನಸ ಸಮೂಹ ಸಂಸ್ಥೆಯ ವೈದ್ಯರಾದ ಡಾ. ವಿತಿಕಾ, ಚೀಫ್ ಆಪರೇಟಿಂಗ್ ಆಫೀಸರ್ ಆದಂತಹ ಶ್ರೀ ಮತಿ ವೀಣಾ ಸ್ವಾಮಿಯವರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನಸ ಸಮೂಹ ಸಂಸ್ಥೆಗಳ ನಿರ್ದೇಶಕರಾದ ಡಾ. ರಜನಿ ಪೈರವರು ವಹಿಸಿದ್ದರು. ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆಯ ಮಹತ್ವದ ಬಗ್ಗೆ ಮನಸ್ಪೂರ್ತಿ ಕಲಿಕಾ ತರಬೇತಿ ಕೇಂದ್ರದ ಸಂಯೋಜಕರಾದ ಶ್ರೀಮತಿ ರಂಗನಾಯಕಿಯವರು ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಮನಸ್ಪೂರ್ತಿಯ ವಿಶೇಷ ಚೇತನ ಮಕ್ಕಳು ಪ್ರಾರ್ಥನೆ ಮಾಡಿದರು. ಶ್ರೀಮತಿ ಜ್ಯೋತಿ ಅರುಣ್ ಕುಮಾರ್'ವರು ಸ್ವಾಗತಿಸಿ, ಶ್ರೀಮತಿ ಸವಿತಾ ರಾಣಿಯವರು ವಂದಿಸಿದರು.

ಮನಸ್ಪೂರ್ತಿ ಕಲಿಕಾ ತರಬೇತಿ ಕೇಂದ್ರದ ಎಲ್ಲಾ ಶಿಕ್ಷಕ ವೃಂದದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ಗೋವಾದಲ್ಲಿ ಹಸೆಮಣೆ ಏರಲು ರೆಡಿಯಾದ್ರಾ ಕೀರ್ತಿ ಸುರೇಶ್


ಮಹಾನಟಿ' ಕೀರ್ತಿ ಸುರೇಶ್ ಅವರ ಬಳಿ ಕೈತುಂಬಾ ಸಿನಿಮಾಗಳಿವೆ. ಇದೀಗ ಅವರು ವೈಯಕ್ತಿಕ ವಿಚಾರವಾಗಿ ಸುದ್ದಿಯಲ್ಲಿದ್ದಾರೆ. ಕೀರ್ತಿ ಸುರೇಶ್ ಸದ್ಯದಲ್ಲೇ ದಾಂಪತ್ಯ ಜೀವನಕ್ಕೆ ಕಾಲಿಡಲಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ನಟಿಯ ಮದುವೆ ಮ್ಯಾಟರ್ ನೆಟ್ಟಿಗರ ಚರ್ಚೆಗೆ ಗ್ರಾಸವಾಗಿದೆ.

ಮೂಲಗಳ ಪ್ರಕಾರ, ಕುಟುಂಬಸ್ಥರು ನೋಡಿದ ಹುಡುಗನ ಜೊತೆ ಕೀರ್ತಿ ಮದುವೆಯಾಗಲು ಒಪ್ಪಿಗೆ ನೀಡಿದ್ದಾರೆ ಎನ್ನಲಾಗಿದೆ. ಇದೇ ಡಿಸೆಂಬರ್‌ನಲ್ಲಿ ಗೋವಾದಲ್ಲಿ ಕೀರ್ತಿ ಸುರೇಶ್ ಮದುವೆ ನಡೆಯಲಿದೆ ಎಂದು ಹೇಳಲಾಗುತ್ತಿದೆ. ವರ ಕೂಡ ನಟಿಯ ಸಂಬಂಧಿ ಎಂದು ಹೇಳಲಾಗುತ್ತಿದೆ. ಇದು ವಿಚಾರ ಅದೆಷ್ಟರ ಮಟ್ಟಿಗೆ ನಿಜ ಎಂಬುದನ್ನು ಕಾದುನೋಡಬೇಕಿದೆ.

ಕೀರ್ತಿ ಸುರೇಶ್ ಅವರ ಹೆಸರು ಅನೇಕರೊಂದಿಗೆ ತಳುಕು ಹಾಕಿಕೊಂಡಿದೆ. ಈ ಹಿಂದೆ ಸಂಗೀತ ನಿರ್ದೇಶಕ ಅನಿರುದ್ಧ ರವಿಚಂದರ್ ಜೊತೆ ಕೂಡ ತಳುಕು ಹಾಕಿಕೊಂಡಿತ್ತು. ಆ ನಂತರ ನಟಿ ಇದು ಸುಳ್ಳು ಸುದ್ದಿ. ನಾವಿಬ್ಬರೂ ಫ್ರೆಂಡ್ಸ್ ಎಂದು ಪ್ರತಿಕ್ರಿಯೆ ನೀಡಿದರು. ಹಾಗಾಗಿ ಈ ಬಾರಿ ಹರಿದಾಡುತ್ತಿರುವ ಮದುವೆ ವಿಚಾರಕ್ಕೆ ನಟಿ ಏನು ಹೇಳ್ತಾರೋ ಕಾಯಬೇಕಿದೆ.

ಇನ್ನೂ 'ಬೇಬಿ ಜಾನ್' ಸಿನಿಮಾ ಮೂಲಕ ನಟಿ ಕೀರ್ತಿ ಸುರೇಶ್ ಬಾಲಿವುಡ್‌ಗೆ ಎಂಟ್ರಿ ಕೊಡುತ್ತಿದ್ದಾರೆ.

# ಶಿವಕಾರ್ತಿಕೇಯನ್, ಸಾಯಿ ಪಲ್ಲವಿ ಪಡೆದ ಸಂಭಾವನೆ ಎಷ್ಟು



ದೀಪಾವಳಿ ಉಡುಗೊರೆಯಾಗಿ ಅಕ್ಟೋಬರ್ 31 ರಂದು ಬಿಡುಗಡೆಯಾದ ಅಮರನ್ ಚಿತ್ರ ಸೂಪರ್ ಹಿಟ್ ಆಗಿದ್ದು ಗೊತ್ತೇ ಇದೆ. ಮೇಜರ್ ಮುಕುಂದ್ ವರದರಾಜನ್ ಅವರ ಜೀವನಾಧಾರಿತ ಈ ಚಿತ್ರಕ್ಕೆ ಎಲ್ಲಾ ವರ್ಗದ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಅಮರನ್ ಈ ವರ್ಷ ತಮಿಳಿನಲ್ಲಿ ದೊಡ್ಡ ಹಿಟ್ ಆಗಿದೆ. ಈ ಚಿತ್ರವು ತೆಲುಗಿನಲ್ಲೂ ಸಕಾರಾತ್ಮಕ ವಿಮರ್ಶೆಗಳನ್ನು ಚಿತ್ರ ಪಡೆದಿದೆ.

ಕಾಲಿವುಡ್ ಹೀರೋ ಶಿವಕಾರ್ತಿಕೇಯನ್ ಅವರು ಮುಕುಂದ್ ಪಾತ್ರದಲ್ಲಿ ನಟಿಸಿದ್ದರೆ, ಸಾಯಿ ಪಲ್ಲವಿ ಅವರ ಪತ್ನಿ ಇಂದೂ ರೆಬೆಕಾ ವರ್ಗೀಸ್ ಪಾತ್ರದಲ್ಲಿ ನಟಿಸಿದ್ದಾರೆ. ನಿರ್ದೇಶಕ ರಾಜ್‌ಕುಮಾರ್ ಪೆರಿಯಸ್ವಾಮಿ ನಿರ್ದೇಶನದ ಈ ಚಿತ್ರ 175 ಕೋಟಿ ರೂಪಾಯಿ ಸಂಗ್ರಹಿಸಿದೆ. ಶಿವಕಾರ್ತಿಕೇಯನ್ ಅವರ ವೃತ್ತಿಜೀವನದಲ್ಲಿ ಅತಿ ಹೆಚ್ಚು ಗಳಿಕೆ ಮಾಡಿದ ಚಿತ್ರ ಇದಾಗಿದೆ. ಇವರ ಸಂಭಾವನೆ ಬಗ್ಗೆ ಈ ಸ್ಟೋರಿಯಲ್ಲಿ ನೋಡೋಣ.

ಈ ಸಿನಿಮಾ ಹಿಟ್ ಆದ ಬಳಿಕ ಸದ್ಯ ಸಾಯಿಪಲ್ಲವಿ ಹಾಗೂ ಶಿವಕಾರ್ತಿಕೇಯನ್ಗೆ ಸಾಕಷ್ಟು ಆಫರ್‌ಗಳು ಬರುತ್ತಿವೆ. ಶಿವಕಾರ್ತಿಕೇಯನ್ ಅವರು ಚಲನಚಿತ್ರಗಳಿಗೆ ಪ್ರವೇಶಿಸುವ ಮೊದಲು ತಮಿಳು ಟಿವಿ ನಿರೂಪಕರಾಗಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು. 2012ರಲ್ಲಿ ಪಾಂಡಿರಾಜ್ ನಿರ್ದೇಶನದ 'ಮರೀನಾ' ಚಿತ್ರದ ಮೂಲಕ ನಾಯಕನಾಗಿ ಪಾದಾರ್ಪಣೆ ಮಾಡಿದರು. ಈ ಸಿನಿಮಾದ ನಂತರ 3 ಸಿನಿಮಾಗಳಲ್ಲಿ ಪೋಷಕ ನಟನಾಗಿ ನಟಿಸಿದ್ದು, ನಾಯಕನಾಗಿ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. ಮಾನ್ ಕರಾಟೆ, ಖಾಕಿ ಸತ್ತೈ, ರಜನಿ ಮುರುಗನ್, ರೆಮೋ ಮುಂತಾದ ಸಿನಿಮಾಗಳು ಜನಮನ್ನಣೆ ತಂದುಕೊಟ್ಟವು. ಸದ್ಯ ಸುಧಾ ಕೊಂಗರ ನಿರ್ದೇಶನದಲ್ಲಿ 'ಪುರನಾನೂರು' ಎಂಬ ಸಿನಿಮಾದಲ್ಲಿ ನಟಿಸುತ್ತಿದ್ದಾರೆ.



# ಸರಳವಾಗಿ ನಡೆಯಿತು ಡಾಲಿ ಧನಂಜಯ್ ಧನ್ಯತಾ ನಿಶ್ಚಿತಾರ್ಥ- ಫೆ.16ಕ್ಕೆ ಮದುವೆ



## ಸರಳವಾಗಿ ನಿಶ್ಚಿತಾರ್ಥ ಕಾರ್ಯಕ್ರಮ

ಸ್ಯಾಂಡಲ್‌ವುಡ್ ನಟ ಡಾಲಿ ಧನಂಜಯ್ ಮತ್ತು ವೈದ್ಯೆ ಧನ್ಯತಾ ನಿಶ್ಚಿತಾರ್ಥ ಕಾರ್ಯಕ್ರಮ ನಡೆಯಿತು.

ಅರಸಿಕೆರೆ ತಾಲ್ಲೂಕು ಕಾಳೇನಹಳ್ಳಿಯಲ್ಲಿರುವ ಧನಂಜಯ್ ನಿವಾಸದಲ್ಲಿ ಸರಳವಾಗಿ ನಿಶ್ಚಿತಾರ್ಥ ಕಾರ್ಯಕ್ರಮ ನಡೆಯಿತು. ಮೈಸೂರಿನಲ್ಲಿ ಫೆ.16 ರಂದು ಮದುವೆ ಕಾರ್ಯಕ್ರಮ ನಡೆಯಲಿದೆ. ದೀಪಾವಳಿ ಹಬ್ಬದ ಸಂಭ್ರಮದಲ್ಲಿ ಡಾಲಿ ತನ್ನ ಬಾಳಸಂಗಾತಿಯನ್ನು ಪರಿಚಯಿಸಿದ್ದರು. ಭಾವಿ ಪತ್ನಿ ಗೈನೋಕಾಲಾಜಿಸ್ಟ್ ಆಗಿರುವ ಧನ್ಯತಾ ಜೊತೆಗಿನ ಸುಂದರವಾದ ವಿಡಿಯೋ ಹಂಚಿಕೊಳ್ಳುವ ಮೂಲಕ ಮದುವೆ ಸುದ್ದಿಯನ್ನು ಹಂಚಿಕೊಂಡಿದ್ದರು. ಡಾಲಿ ಮತ್ತು ಧನ್ಯತಾ ಇಬ್ಬರು ಅನೇಕ ವರ್ಷಗಳ ಪರಿಚಯ, ಈ ಪರಿಚಯ ಪ್ರೀತಿಗೆ ತಿರುಗಿ ಇದೀಗ ಹಸೆಮಣೆ ಏರುತ್ತಿದ್ದಾರೆ. ಚಿತ್ರದುರ್ಗ ಮೂಲದ ಧನ್ಯತಾ ಅಪ್ಪಟ ಕನ್ನಡತಿ, ಓದಿದ್ದು ಮೈಸೂರಿನಲ್ಲಿ. ಅರಸೀಕೆರೆ ಮೂಲದ ನಟ ಧನಂಜಯ ಓದಿದ್ದು ಕೂಡ ಮೈಸೂರಿನಲ್ಲಿಯೇ ಎನ್ನುವುದು ವಿಶೇಷ. ಧನ್ಯತಾ ಮಿಡಲ್ ಕ್ಲಾಸ್ ಹುಡುಗಿ ಕಷ್ಟಪಟ್ಟು ಡಾಕ್ಟರ್ ಆಗಿದ್ದಾರೆ. ಅಲ್ಲದೆ ಅವರ ವರ್ಕ್ ಎಥಿಕ್ಸ್ ಯೋಚನೆಗಳು ನನಗೆ ಇಷ್ಟ ಆಯ್ತು ಎಂದು ಡಾಲಿ ವಾಹಿನಿಯೊಂದರ ಸಂದರ್ಶನದಲ್ಲಿ ಈ ಹಿಂದೆ ಹೇಳಿದ್ದರು. ಫೆಬ್ರವರಿ 16ರಂದು ಮೈಸೂರಿನ ಎಕ್ಸಿಬಿಷನ್ ಗ್ರೌಂಡ್‌ನಲ್ಲಿ ಡಾಲಿ ಮತ್ತು ಧನ್ಯತಾ ಮದುವೆ ನಡೆಯಲಿದೆ.

ಮೈಸೂರು ಧನಂಜಯ ಧನ್ಯತಾ ಇಬ್ಬರಿಗೂ ಭಾವನಾತ್ಮಕವಾಗಿ ಸಂಬಂಧ ಬೆಸೆದ ಸ್ಥಳ ಹಾಗಾಗಿ ಅಲ್ಲಿಯೇ ಹಸೆಮಣೆ ಏರುವ ನಿರ್ಧಾರ ಮಾಡಿದ್ದಾರೆ.

ಅದ್ದೂರಿಯಾಗಿ ನಡೆಯುವ ಮದುವೆ ಸಮಾರಂಭದಲ್ಲಿ ಸಿನಿಮಾರಂಗ, ರಾಜಕೀಯ ಸೇರಿದಂತೆ ಬೇರೆ ಬೇರೆ ಕ್ಷೇತ್ರದ ಗಣ್ಯರು ಹಾಜರಾಗಲಿದ್ದಾರೆ.


# ಕಾಂತಾರ ಚಾಪ್ಟರ್-1 ಸಿನಿಮಾ ಬಿಡುಗಡೆಗೆ ಡೇಟ್ ಫಿಕ್ಸ್



ರಾಷ್ಟ್ರಪ್ರಶಸ್ತಿ ವಿಜೇತ ರಿಷಬ್ ಶೆಟ್ಟಿ ನಟಿಸಿ, ನಿರ್ದೇಶನ ಮಾಡುತ್ತಿರುವ 'ಕಾಂತಾರ ಚಾಪ್ಟರ್-1' ಸಿನಿಮಾ ಬಿಡುಗಡೆಗೆ ಕೊನೆಗೂ ದಿನಾಂಕ ಫಿಕ್ಸ್ ಆಗಿದೆ. 2025ರ ಅಕ್ಟೋಬರ್ 2ರಂದು ಸಿನಿಮಾ ಬಿಡುಗಡೆ ಮಾಡುವುದಾಗಿ ಹೊಂಬಾಳೆ ಫಿಲ್ಮ್ಸ್ ಘೋಷಣೆ ಮಾಡಿದೆ.

ಏಕಕಾಲಕ್ಕೆ ಕನ್ನಡ, ಹಿಂದಿ, ಇಂಗ್ಲಿಷ್ ಹಾಗೂ ತೆಲುಗು ಭಾಷೆಗಳಲ್ಲಿ ಸಿನಿಮಾ ತೆರೆಯ ಮೇಲೆ ಬರಲಿದೆ ಎಂದು ಹೊಂಬಾಳೆ ಸಂಸ್ಥೆ ತನ್ನ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದೆ. ಈಗಾಗಲೇ ಕೇವಲ ಕಾಂತಾರ ಚಾಪ್ಟರ್ 1 ಸಿನಿಮಾದ ಪೋಸ್ಟರ್ ನೋಡಿದ ಅಭಿಮಾನಿಗಳು ಚಿತ್ರದ ಮೇಲೆ ಭಾರೀ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಈ ಕಾಂತಾರ ಚಾಪ್ಟರ್ 1 ಸಿನಿಮಾ ಏಳು ಭಾಷೆಯಲ್ಲಿ ಬಿಡುಗಡೆಯಾಗಲಿದೆ. ಕನ್ನಡ ಸೇರಿ, ತಮಿಳು, ತೆಲುಗು, ಹಿಂದಿ, ಮಲಯಾಳಂ, ಬೆಂಗಾಳಿ ಹಾಗೂ ಇಂಗ್ಲೀಷ್‌ನಲ್ಲೂ ರಿಲೀಸ್ ಮಾಡುವ ನಿರ್ಧಾರವಾಗಿದೆ. 'ಕಾಂತಾರ' ಸಿನಿಮಾ ಸಕ್ಸಸ್ ನಂತರ 'ಕಾಂತಾರ ಚಾಪ್ಟರ್ 1' ಕೂಡ ಉತ್ತಮ ಕಥೆಯೊಂದಿಗೆ ಅದ್ದೂರಿಯಾಗಿ ತರಲು ಈಗಾಗಲೇ ಚಿತ್ರತಂಡ ಚಿತ್ರೀಕರಣದಲ್ಲಿ ತೊಡಗಿದೆ.

# ವೈಲ್ಡ್ ಫೈಯರ್ ಟ್ರೇಲರ್‌ನಲ್ಲಿ ಅಲ್ಲು ಅರ್ಜುನ್ ಖದರ್



ಕೇವಲ ಟಾಲಿವುಡ್ ಮಾತ್ರವಲ್ಲ, ಇಡೀ ಭಾರತ ಚಿತ್ರರಂಗವೇ ಪುಷ್ಪ-2 ಚಿತ್ರ ರಿಲೀಸ್ ಆಗುವ ದಿನಕ್ಕಾಗಿ ತುದಿಗಾಲಲ್ಲಿ ನಿಂತಿದೆ. ಪುಷ್ಪ ಮೊದಲ ಭಾಗದ ಯಶಸ್ಸಿನ ಬಳಿಕ ಈ ಸಿನಿಮಾ ಮೇಲೆ ಎಲ್ಲರಿಗೂ ಎಲ್ಲಿಲ್ಲದ ಕುತೂಹಲ ಹುಟ್ಟಿದೆ. ಪುಷ್ಪರಾಜ್ ಪಾತ್ರದಲ್ಲಿ ಅಲ್ಲು ಅರ್ಜುನ್ ಖದರ್ ಲುಕ್‌ಗಳು ಈಗಾಗಲೇ ಅಭಿಮಾನಿಗಳಲ್ಲಿ ಕ್ರೇಸ್ ಹೆಚ್ಚಿಸಿದೆ. ಇದೀಗ ಪುಷ್ಪ 2; ದಿ ರೂಲ್ ಚಿತ್ರದ ಟ್ರೇಲರ್ ಬಿಡುಗಡೆ ಆಗಿದ್ದು, ಸಿನಿಮಾ ಮೇಲಿನ ಕುತೂಹಲಕ್ಕೆ ಮತ್ತಷ್ಟು ಒಗ್ಗರಣೆ ಹಾಕಿದಂತಿದೆ ಟ್ರೇಲರ್. ಬಿಡುಗಡೆಯಾದ ಟ್ರೈಲರ್‌ನಲ್ಲಿ ಅಲ್ಲು ಅರ್ಜುನ್ ಜೊತೆಗೆ ಫಹಾದ್ ಫಾಸಿಲ್ ಖದರ್ ಲುಕ್‌ನಲ್ಲಿ ಕಾಣಿಸಿಕೊಂಡರೆ, ರಶ್ಮೀಕಾ ಮಂದಣ್ಣ ಕೂಡ ಶೈನ್ ಆಗಿದ್ದಾರೆ. ಕಾಡಾನೆಯ ಜೋರು ಸೌಂಡು, ಯಾರವನು ಹಣ ಎಂದರೆ ಲೆಕ್ಕಕ್ಕಿಲ್ಲ. ಅಧಿಕಾರ ಅಂದ್ರೆ, ಭಯ ಇಲ್ಲ ಎನ್ನುವ ಜಗಪತಿ ಬಾಬು ಡೈಲಾಗ್‌ನೊಂದಿಗೆ ಟ್ರೈಲರ್ ತೆರೆದುಕೊಳ್ಳುತ್ತದೆ. ಅಲ್ಲಿಂದ ಶುರುವಾಗುವ ಟ್ರೈಲರ್ ತನ್ನದೇ ಆದ ದೊಡ್ಡ ಸಾಮ್ರಾಜ್ಯವನ್ನೇ ಸೃಷ್ಟಿಸಿಕೊಂಡ ಪುಷ್ಪರಾಜ್‌ನ ಇನ್ನೊಂದು ಮುಖದ ಅನಾವರಣ ಮಾಡಿದ್ದಾರೆ ನಿರ್ದೇಶಕರು. ಪೊಲೀಸ್ ಇಲಾಖೆ ಮಾತ್ರವಲ್ಲದೆ, ರಾಜಕಾರಣಿಗಳಿಗೂ ಈ ಪುಷ್ಪರಾಜ್ ನಡುಕ ಹುಟ್ಟಿಸಿದ್ದಾನೆ. ಹೇಳಿ ಕೇಳಿ ಅಲ್ಲು ಅರ್ಜುನ್ ಮಾಸ್ ಹೀರೋ. ಆ ಪ್ರಭಾವಳಿಗೆ ತಕ್ಕಂತೆಯೇ ಅವರನ್ನೇ ಟ್ರೇಲರ್‌ನಲ್ಲಿ ಎತ್ತಿ ಮೆರೆಸಲಾಗಿದೆ.

# ಮುಖ್ಯ ಕೋಚ್ ಹುದ್ದೆಗೆ ಜೇಸನ್ ಗಿಲ್ಲೆಸ್ಪಿ ಗುಡ್ ಬೈ

ವಿವಾದ ಹಾಗೂ ಪಾಕಿಸ್ತಾನ ಕ್ರಿಕೆಟ್‌ಗೆ ಅದೊಂದು ರೀತಿಯ ಅವಿನಾಭಾವ ಸಂಬಂಧ. ಒಂದು ವಿವಾದಕ್ಕೆ ತೆರೆ ಬಿತ್ತು ಎನ್ನುವಷ್ಟರಲ್ಲಿ ಮತ್ತೊಂದು ವಿವಾದ ಪಾಕ್ ಕ್ರಿಕೆಟ್‌ನ ಹೆಗಲೇರಿರುತ್ತದೆ. ಪ್ರಸ್ತುತ ಚಾಂಪಿಯನ್ಸ್ ಟ್ರೋಫಿಗೆ ಸಂಬಂಧಿಸಿದಂತೆ ಎದ್ದಿರುವ ವಿವಾದಕ್ಕೆ ತೆರೆ ಬೀಳುವ ಮುನ್ನವೇ, ಪಾಕಿಸ್ತಾನ ಕ್ರಿಕೆಟ್‌ನಲ್ಲಿ ಮತ್ತೊಂದು ವಿವಾದ ಹುಟ್ಟಿಕೊಂಡಿದೆ. ವಾಸ್ತವವಾಗಿ ಕಳೆದ ಕೆಲವು ತಿಂಗಳುಗಳಿಂದ ಪಾಕಿಸ್ತಾನ ಕ್ರಿಕೆಟ್ ತಂಡದಲ್ಲಿ ಸಾಕಷ್ಟು ಬದಲಾವಣೆಗಳಾಗುತ್ತಿವೆ. ಆ ಪ್ರಕಾರ ತಂಡಕ್ಕೆ ಬೇರೆ ಬೇರೆ ನಾಯಕರು ಮತ್ತು ಕೋಚ್‌ಗಳು ಬಂದು ಹೋಗಿದ್ದಾರೆ. ಇದೀಗ ಪಾಕಿಸ್ತಾನ ಕ್ರಿಕೆಟ್ ಮಂಡಳಿ ಮತ್ತೊಮ್ಮೆ ಮಹತ್ವದ ನಿರ್ಧಾರವನ್ನು ತೆಗೆದುಕೊಳ್ಳುವ ಸಾಧ್ಯತೆ ಇದ್ದು, ಹಲವು ತಿಂಗಳುಗಳ ನಂತರ ಆಸ್ಟ್ರೇಲಿಯಾದಲ್ಲಿ ಟೆಸ್ಟ್ ಸರಣಿ ಮತ್ತು ಏಕದಿನ ಸರಣಿಯನ್ನು ಪಾಕಿಸ್ತಾನ ಗೆಲ್ಲುವಂತೆ ಮಾಡಿದ ಕೋಚ್ ಜೇಸನ್ ಗಿಲ್ಲೆಸ್ಪಿ ಅವರನ್ನು ಮುಖ್ಯ ಕೋಚ್ ಹುದ್ದೆಯಿಂದ ವಜಾಗೊಳಿಸಲು ಪಾಕ್ ಮಂಡಳಿ ಮುಂದಾಗಿದೆ ಎಂದು ವರದಿಯಾಗಿದೆ.

**6 ತಿಂಗಳೊಳಗೆ ಗಿಲ್ಲೆಸ್ಪಿ ಅಧಿಕಾರವದಿ ಅಂತ್ಯ:** ವರದಿಯೊಂದರ ಪ್ರಕಾರ, ಪಾಕಿಸ್ತಾನ ಕ್ರಿಕೆಟ್ ಮಂಡಳಿ ಕೇವಲ 6 ತಿಂಗಳೊಳಗೆ ಗಿಲ್ಲೆಸ್ಪಿ ಅವರನ್ನು ಮುಖ್ಯ ಕೋಚ್ ಹುದ್ದೆಯಿಂದ ತೆಗೆದುಹಾಕಲು ನಿರ್ಧರಿಸಿದೆ. ಕಳೆದ ತಿಂಗಳು, ಗ್ಯಾರಿ ಕರ್ಸ್ಟನ್ ಕೂಡ ಪಾಕಿಸ್ತಾನಿ ಮಂಡಳಿಯೊಂದಿಗಿನ ಭಿನ್ನಾಭಿಪ್ರಾಯದಿಂದಾಗಿ ತಂಡದ ಕೋಚ್ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಇದೀಗ ವರದಿಯ ಪ್ರಕಾರ, ಪಾಕಿಸ್ತಾನ ಕ್ರಿಕೆಟ್ ಮಂಡಳಿಯು ಪ್ರಸ್ತುತ ಎಲ್ಲಾ ಮೂರು ಸ್ವರೂಪಗಳ ಮುಖ್ಯ ಕೋಚ್ ಆಗಿರುವ ಗಿಲ್ಲೆಸ್ಪಿಯನ್ನು ಈ ಹುದ್ದೆಯಿಂದ ತೆಗೆದುಹಾಕಲು ನಿರ್ಧರಿಸಿದೆ. ಗಿಲ್ಲೆಸ್ಪಿ ಪ್ರಸ್ತುತ ಪಾಕಿಸ್ತಾನಿ ತಂಡದೊಂದಿಗೆ ಆಸ್ಟ್ರೇಲಿಯಾದಲ್ಲಿದ್ದಾರೆ. ಅವರ ನೇತೃತ್ವದಲ್ಲಿ ಪಾಕಿಸ್ತಾನ, ಆಸ್ಟ್ರೇಲಿಯಾವನ್ನು ಏಕದಿನ ಸರಣಿಯಲ್ಲಿ ಮಣಿಸಿತ್ತು. ಆದರೆ ಟಿ20 ಸರಣಿ ಗೆಲ್ಲುವಲ್ಲಿ ವಿಫಲವಾಗಿದೆ. ಇದೀಗ ನವೆಂಬರ್ 18 ರಂದು ಸೋಮವಾರ ಪಾಕಿಸ್ತಾನ ಮತ್ತು ಆಸ್ಟ್ರೇಲಿಯಾ ನಡುವೆ ಮೂರನೇ ಟಿ20 ಪಂದ್ಯ ನಡೆಯಲಿದ್ದು, ಇದು ಗಿಲ್ಲೆಸ್ಪಿ ತರಬೇತುದಾರರಾಗಿ ಕೊನೆಯ ಪಂದ್ಯ ಎಂದು ಹೇಳಲಾಗುತ್ತಿದೆ. ಪಿಸಿಬಿ ಈ ವರ್ಷದ ಮೇ ತಿಂಗಳಿನಲ್ಲಿಯೇ ಕರ್ಸ್ಟನ್ ಮತ್ತು ಗಿಲ್ಲೆಸ್ಪಿ ಅವರನ್ನು ತಂಡದ ಮುಖ್ಯ ಕೋಚ್‌ಗಳಾಗಿ ನೇಮಿಸಿತ್ತು. ಕರ್ಸ್ಟನ್ ಅವರನ್ನು ಏಕದಿನ ಮತ್ತು ಟಿ20 ಮಾದರಿಗೆ ತರಬೇತುದಾರರಾಗಿ ನೇಮಿಸಿದರೆ, ಗಿಲ್ಲೆಸ್ಪಿ ಅವರನ್ನು ಟೆಸ್ಟ್ ಸ್ವರೂಪಕ್ಕೆ ಮುಖ್ಯ ಕೋಚ್ ಆಗಿ ನೇಮಿಸಲಾಗಿತ್ತು. ಆದರೆ ಕರ್ಸ್ಟನ್ ಕಳೆದ ತಿಂಗಳಷ್ಟೇ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದರು. ಹೀಗಾಗಿ ಪಿಸಿಬಿ, ಸ್ವಲ್ಪ ಸಮಯದವರೆಗೆ ಗಿಲ್ಲೆಸ್ಪಿಯನ್ನು ಮೂರು ಮಾದರಿಗೂ ಕೋಚ್ ಆಗಿ ನೇಮಿಸಿತ್ತು.

**ವೇತನದಲ್ಲಿ ತಾರತಮ್ಯ:** ಗಿಲ್ಲೆಸ್ಪಿ ಅವರ ಮಾರ್ಗದರ್ಶನದಲ್ಲಿ ಪಾಕ್ ತಂಡ ಮತ್ತೆ ಗೆಲುವಿನ ಲಯಕ್ಕೆ ಮರಳಿದೆ. ಹೀಗಾಗಿ ಪಿಸಿಬಿ, ಚಾಂಪಿಯನ್ಸ್ ಟ್ರೋಫಿಯವರೆಗೆ ಎಲ್ಲಾ ಮೂರು ಸ್ವರೂಪಗಳಲ್ಲಿ ಗಿಲ್ಲೆಸ್ಪಿ ಅವರನ್ನು ತಂಡದ ಮುಖ್ಯ ತರಬೇತುದಾರರಾಗಿ ಮುಂದುವರೆಸಲು ಬಯಸಿದೆ. ಆದರೆ ಅವರ ವೇತನ ಒಪ್ಪಂದದಲ್ಲಿ ಮಾತ್ರ ಯಾವುದೇ ಬದಲಾವಣೆಗಳನ್ನು ಮಾಡಲು ಪಿಸಿಬಿ ಸಿದ್ದವಿಲ್ಲ ಎಂದು ಕ್ರಿಕ್‌ಇನ್ಫೋ ವರದಿ ಹೇಳುತ್ತಿದೆ. ಅಂದರೆ ಗಿಲ್ಲೆಸ್ಪಿ ಅವರನ್ನು ಎಲ್ಲಾ 3 ಸ್ವರೂಪಗಳಿಗೆ ತರಬೇತುದಾರರಾಗಿ ಆಯ್ಕೆ ಮಾಡಿದರೂ ಅವರಿಗೆ ಕೇವಲ ಟೆಸ್ಟ್ ತರಬೇತುದಾರರಾಗಿ ನೀಡುತ್ತಿದ್ದ ವೇತನವನ್ನು ನೀಡಲು ಪಿಸಿಬಿ ಮುಂದಾಗಿದೆ. ಆದರೆ ಪಿಸಿಬಿಯ ಈ ಪ್ರಸ್ತಾಪವನ್ನು ಗಿಲ್ಲೆಸ್ಪಿ ತಿರಸ್ಕರಿಸಿದ್ದಾರೆ. ಇದರಿಂದಾಗಿ ಅಸಮಾಧಾನಗೊಂಡಿರುವ ಪಿಸಿಬಿ, ಗಿಲ್ಲೆಸ್ಪಿ ಅವರನ್ನು ಎಲ್ಲಾ ಮೂರು ಸ್ವರೂಪಗಳ ಕೋಚಿಂಗ್ ಹುದ್ದೆಯಿಂದ ತೆಗೆದುಹಾಕಲು ನಿರ್ಧರಿಸಿದೆ. ಆದಾಗ್ಯೂ, ಪಿಸಿಬಿ ತನ್ನ ಈ ನಡೆಯನ್ನು ಮುಚ್ಚಿಹಾಕಲು ಯತ್ನಿಸುತ್ತಿದ್ದು, ಗಿಲ್ಲೆಸ್ಪಿ ಅವರ ಮೇಲೆ ಆರೋಪವನ್ನು ಹೊರಿಸಲಾರಂಭಿಸಿದೆ. ಪಾಕ್ ಮಂಡಳಿಯ ಆರೋಪದ ಪ್ರಕಾರ, ಒಪ್ಪಂದದಲ್ಲಿ ನಿಗದಿಪಡಿಸಿದಂತೆ ಗಿಲ್ಲೆಸ್ಪಿ ತಂಡದೊಂದಿಗೆ ಹೆಚ್ಚು ಸಮಯವನ್ನು ಕಳೆಯುತ್ತಿಲ್ಲವಂತೆ.




# ರಾಹುಲ್ ಜೊತೆಗೆ ಮತ್ತೊಬ್ಬ ಕನ್ನಡಿಗನಿಗೆ ತಂಡದಲ್ಲಿ ಸ್ಥಾನ..!




ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯ ಮೊದಲ ಪಂದ್ಯಕ್ಕೂ ಮುನ್ನ ಶುಭ್ಮನ್ ಗಿಲ್ ಗಾಯಗೊಂಡಿದ್ದಾರೆ. ಇದರಿಂದಾಗಿ ಅವರ ಸ್ಥಾನಕ್ಕೆ ಕನ್ನಡಿಗ ದೇವದತ್ ಪಡಿಕ್ಕಲ್ ಅವರನ್ನು ಆಯ್ಕೆ ಮಾಡಲಾಗಿದೆ. ಪಡಿಕ್ಕಲ್ ಆಸ್ಟ್ರೇಲಿಯಾದ ಪಿಚ್‌ಗಳಲ್ಲಿ ಉತ್ತಮ ಪ್ರದರ್ಶನ ನೀಡಿದ್ದಾರೆ.ಹೀಗಾಗಿ ಪಡಿಕ್ಕಲ್ ಪರ್ತ್ ಟೆಸ್ಟ್‌ನಲ್ಲಿ ಮೂರನೇ ಕ್ರಮಾಂಕದಲ್ಲಿ ಬ್ಯಾಟ್ ಮಾಡುವ ಸಾಧ್ಯತೆ ಇದೆ. ಐದು ಪಂದ್ಯಗಳ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯ ಮೊದಲ ಪಂದ್ಯ ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ಶುಕ್ರವಾರ ನವೆಂಬರ್ 22 ರಿಂದ ಪರ್ತ್‌ನ ಆಪ್ಟಸ್ ಕ್ರೀಡಾಂಗಣದಲ್ಲಿ ಪ್ರಾರಂಭವಾಗಲಿದೆ. ಈ ಸರಣಿ ಆರಂಭಕ್ಕೂ ಮುನ್ನವೇ ಟೀಂ ಇಂಡಿಯಾ ಸಂಕಷ್ಟಕ್ಕೆ ಸಿಲುಕಿದ್ದು, ತಂಡದ ಯುವ ಬ್ಯಾಟ್ಸ್‌ಮನ್ ಶುಭ್‌ಮನ್ ಗಿಲ್ ಇಂಜುರಿಯಿಂದಾಗಿ ಮೊದಲ ಟೆಸ್ಟ್‌ಗೆ ಅಲಭ್ಯರಾಗಲಿದ್ದಾರೆ ಎಂದು ವರದಿಯಾಗಿದೆ. ವಾಸ್ತವವಾಗಿ ತಂಡದ ನಾಯಕ ರೋಹಿತ್ ಶರ್ಮಾ ಮೊದಲ ಟೆಸ್ಟ್‌ನಲ್ಲಿ ಆಡುವ ಬಗ್ಗೆ ಇನ್ನು ಖಚಿತವಾಗಿಲ್ಲ. ಹೀಗಾಗಿ ಅವರ ಸ್ಥಾನದಲ್ಲಿ ಶುಭ್‌ಮನ್ ಗಿಲ್ ಇನ್ನಿಂಗ್ಸ್ ಆರಂಭಿಸುವ ಸಾಧ್ಯತೆ ಇತ್ತು. ಆದರೆ ಇದೀಗ ಗಿಲ್ ಕೂಡ ಗಾಯಕ್ಕೆ ತುತ್ತಾಗಿದ್ದು, ಮೊದಲ ಟೆಸ್ಟ್ ಆಡುವುದು ಬಹುತೇಕ ಅನುಮಾನವಾಗಿದೆ. ಹೀಗಾಗಿ ಗಿಲ್ ಬದಲಿಯಾಗಿ ಮತ್ತೊಬ್ಬ ಆರಂಭಿಕನ ಹುಡುಕಾಟ ಶುರುವಾಗಿದ್ದು, ಕನ್ನಡಿಗನತ್ತ ಬಿಸಿಸಿಐ ದೃಷ್ಟಿ ನೆಟ್ಟಿದೆ. ಶುಭ್‌ಮನ್ ಗಿಲ್ ಮೊದಲ ಟೆಸ್ಟ್ ಆಡುವುದಿಲ್ಲ ಎಂಬುದು ಸ್ಪಷ್ಟವಾಗಿದ್ದು, ಅವರ ಸ್ಥಾನಕ್ಕೆ ಯಾರನ್ನು ಆಯ್ಕೆ ಮಾಡಬೇಕು ಎಂಬುದು ದೊಡ್ಡ ಪ್ರಶ್ನೆಯಾಗಿದೆ. ಪ್ರಸ್ತುತ ಟೀಂ ಇಂಡಿಯಾ ಅಭಿಮನ್ಯು ಈಶ್ವರನ್, ಧ್ರುವ್ ಜುರೆಲ್ ಮತ್ತು ಸರ್ಫರಾಜ್ ಖಾನ್ ರೂಪದಲ್ಲಿ ಮೂರು ಆಯ್ಕೆಗಳನ್ನು ಹೊಂದಿದೆ. ಈ ಮೂವರಲ್ಲಿ ಜುರೆಲ್ ಮತ್ತು ಸರ್ಫರಾಜ್ ಮಧ್ಯಮ ಕ್ರಮಾಂಕದ ಬ್ಯಾಟ್ಸ್‌ಮನ್‌ಗಳಾಗಿದ್ದರೆ, ಈಶ್ವರನ್ ಮಾತ್ರ ಅಗ್ರ ಕ್ರಮಾಂಕದ ಬ್ಯಾಟ್ಸ್‌ಮನ್ ಆಗಿದ್ದಾರೆ. ಈಗಾಗಲೇ ಆಸ್ಟ್ರೇಲಿಯಾ ಎ ವಿರುದ್ಧ ನಡೆದ ಅಭ್ಯಾಸ ಪಂದ್ಯದಲ್ಲಿ ಈಶ್ವರನ್, ಭಾರತ ಎ ಪರವಾಗಿ ಆಡಿದ್ದರು. ಆದರೆ ಯಾವುದೇ ಪ್ರಭಾವ ಬೀರಲು ಅವರಿಗೆ ಸಾಧ್ಯವಾಗಲಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಈಗಾಗಲೇ ಭಾರತ ಎ ತಂಡದೊಂದಿಗೆ ಆಸ್ಟ್ರೇಲಿಯಾದಲ್ಲಿ ಕಾಣಿಸಿಕೊಂಡು ಉತ್ತಮ ಪ್ರದರ್ಶನ ನೀಡಿರುವ ಕನ್ನಡಿಗೆ ದೇವದತ್ ಪಡಿಕ್ಕಲ್ ಅವರನ್ನು ತಂಡಕ್ಕೆ ಸೇರಿಸಿಕೊಳ್ಳಲು ಈಗ ತಂಡದ ಆಡಳಿತ ಮಂಡಳಿ ನಿರ್ಧರಿಸಿದೆ. ಕ್ರಿಕ್‌ಬಜ್‌ನ ವರದಿಯ ಪ್ರಕಾರ, ಕಳೆದ ಕೆಲವು ವಾರಗಳಿಂದ ಆಸ್ಟ್ರೇಲಿಯಾದಲ್ಲಿರುವ ಭಾರತ ಎ ತಂಡವು ಶೀಘ್ರದಲ್ಲೇ ಭಾರತಕ್ಕೆ ಮರಳಲಿದೆ. ಆದರೆ ಪಡಿಕ್ಕಲ್ ಆಸ್ಟ್ರೇಲಿಯಾದಲ್ಲಿಯೇ ಉಳಿಯುತ್ತಾರೆ. ಈ ತಂಡದಲ್ಲಿ ಈಶ್ವರನ್, ಜುರೆಲ್, ಕೆಎಲ್ ರಾಹುಲ್, ನಿತೀಶ್ ಕುಮಾರ್ ರೆಡ್ಡಿ ಸೇರಿದಂತೆ ಕೆಲವು ಆಟಗಾರರಿದ್ದೂ, ಅವರು ಕೂಡ ಬಾರ್ಡರ್-ಗವಾಸ್ಕರ್ ಟ್ರೋಫಿಗೆ ತಂಡದಲ್ಲಿ ಆಯ್ಕೆಯಾಗಿದ್ದಾರೆ.

# ಮುಂಬೈ ತಂಡದ ನಾಯಕತ್ವ ವಹಿಸಿಕೊಂಡ ಶ್ರೇಯಸ್ ಅಯ್ಯರ್



ಮುಂಬೈ ಕ್ರಿಕೆಟ್ ಸಂಸ್ಥೆಯ ಹಿರಿಯ ಆಯ್ಕೆ ಸಮಿತಿಯು ಸೈಯದ್ ಮುಷ್ತಾಕ್ ಅಲಿ ಟ್ರೋಫಿಗಾಗಿ ಮುಂಬೈ ಟಿ20 ತಂಡದ ನಾಯಕರಾಗಿ ಶ್ರೇಯಸ್ ಅಯ್ಯರ್ ಅವರನ್ನು ನೇಮಿಸಿದೆ. ಅಯ್ಯರ್ ಅವರ ಯಶಸ್ವಿ ನಾಯಕತ್ವವನ್ನು ಗಮನದಲ್ಲಿಟ್ಟುಕೊಂಡು ಮುಂಬೈ ಈ ದೊಡ್ಡ ಜವಾಬ್ದಾರಿಯನ್ನು ಅವರಿಗೆ ನೀಡಿದೆ. 2025 ರ ಐಪಿಎಲ್‌ನ ಮೆಗಾ ಹರಾಜು ಸೌದಿ ಅರೇಬಿಯಾದ ಜೆಡ್ಡಾದಲ್ಲಿ ನವೆಂಬರ್ 24 ಮತ್ತು 25 ರಂದು ನಡೆಯಲಿದೆ. ಈ ಹರಾಜಿನಲ್ಲಿ ಟೀಂ ಇಂಡಿಯಾದ ಸ್ಟಾರ್ ಬ್ಯಾಟ್ಸ್‌ಮನ್ ಶ್ರೇಯಸ್ ಅಯ್ಯರ್ ಕೂಡ ಕಾಣಿಸಿಕೊಳ್ಳಲಿದ್ದಾರೆ. ಕಳೆದ ಸೀಸನ್‌ನಲ್ಲಿ ಶ್ರೇಯಸ್ ಅಯ್ಯರ್ ತಮ್ಮ ನಾಯಕತ್ವದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ತಂಡವನ್ನು ಚಾಂಪಿಯನ್ ಮಾಡಿದ್ದರು. ಆದರೆ ಈ ಬಾರಿ ಕೆಕೆಆರ್ ಅವರನ್ನು ತಂಡದಲ್ಲಿ ಉಳಿಸಿಕೊಂಡಿಲ್ಲ. ಈ ಬಗ್ಗೆ ನಾನಾ ಹೇಳಿಕೆಗಳು ಈಗಾಗಲೇ ಹೊರಬಿದ್ದಿವೆ. ಇದೀಗ ಅಯ್ಯರ್ ಹೊಸ ತಂಡವನ್ನು ಸೇರುವ ತವಕದಲ್ಲಿದ್ದಾರೆ. ವಾಸ್ತವವಾಗಿ ಐಪಿಎಲ್‌ನಲ್ಲಿ ಅಯ್ಯರ್ ಅವರ ನಾಯಕತ್ವದ ದಾಖಲೆಯು ಅತ್ಯುತ್ತಮವಾಗಿದೆ. ಆದ್ದರಿಂದ ಮೆಗಾ ಹರಾಜಿನಲ್ಲಿ ಅವರಿಗೆ ಹೆಚ್ಚಿನ ಬೇಡಿಕೆಯಿದೆ. ಇದಕ್ಕೆ ಪೂರಕವಾಗಿ ಅನೇಕ ತಂಡಗಳು ಈ ಬಾರಿ ಹೊಸ ನಾಯಕರನ್ನು ಹುಡುಕುತ್ತಿವೆ. ಇದೆಲ್ಲದರ ನಡುವೆ ಅಯ್ಯರ್ ಮತ್ತೊಮ್ಮೆ ನಾಯಕನಾಗಿ ಕಾಣಿಸಿಕೊಳ್ಳಲು ಸಿದ್ದರಾಗಿದ್ದಾರೆ.ವಾಸ್ತವವಾಗಿ ಮುಂಬೈ ಕ್ರಿಕೆಟ್ ಸಂಸ್ಥೆಯ (ಎಂಸಿಎ) ಹಿರಿಯ ಆಯ್ಕೆ ಸಮಿತಿಯು ಸೈಯದ್ ಮುಷ್ತಾಕ್ ಅಲಿ ಟ್ರೋಫಿಗಾಗಿ ಮುಂಬೈ ಟಿ20 ತಂಡದ ನಾಯಕರಾಗಿ ಶ್ರೇಯಸ್ ಅಯ್ಯರ್ ಅವರನ್ನು ನೇಮಿಸಿದೆ. ಅಯ್ಯರ್ ಅವರ ಯಶಸ್ವಿ ನಾಯಕತ್ವವನ್ನು ಗಮನದಲ್ಲಿಟ್ಟುಕೊಂಡು ಮುಂಬೈ ಈ ದೊಡ್ಡ ಜವಾಬ್ದಾರಿಯನ್ನು ಅವರಿಗೆ ನೀಡಿದೆ.

# ಕಣಕ್ಕಿಳಿದು ವಿಶ್ವದಾಖಲೆಯ ಇನ್ನಿಂಗ್ಸ್ ಆಡಿದ ಒಮಾನ್ ಬ್ಯಾಟರ್



ಪ್ರಸ್ತುತ ಒಮಾನ್ ಮತ್ತು ನೆದರ್ಲೆಂಡ್ಸ್ ನಡುವೆ 3 ಪಂದ್ಯಗಳ ಟಿ20 ಸರಣಿ ನಡೆಯುತ್ತಿದೆ. ಈಗಾಗಲೇ ಉಭಯ ತಂಡಗಳ ನಡುವೆ ಎರಡು ಪಂದ್ಯಗಳು ನಡೆದಿದ್ದು, ಎರಡೂ ತಂಡಗಳು ತಲಾ ಒಂದೊಂದು ಪಂದ್ಯವನ್ನು ಗೆಲ್ಲುವ ಮೂಲಕ ಸರಣಿಯನ್ನು 1-1ರಿಂದ ಸಮಬಲಗೊಳಿಸಿದ್ದವು. ಹೀಗಾಗಿ ಸರಣಿಯ ಕೊನೆಯ ಪಂದ್ಯದ ಮೇಲೆ ನಿರೀಕ್ಷೆ ಹೆಚ್ಚಿತ್ತು. ಅದರಂತೆ ನಡೆದ ಸರಣಿಯ ಕೊನೆಯ ಪಂದ್ಯದಲ್ಲಿ ನೆದರ್ಲೆಂಡ್ಸ್ 29 ರನ್‌ಗಳಿಂದ ಗೆದ್ದು ಒಮಾನ್ ವಿರುದ್ಧ 2-1 ಅಂತರದಲ್ಲಿ ಸರಣಿ ವಶಪಡಿಸಿಕೊಂಡಿತು. ಇಲ್ಲಿ, ಒಮಾನ್ ಪಂದ್ಯವನ್ನು ಸೋತರೂ ಸಹ, ತಂಡದ ಆಟಗಾರನೊಬ್ಬ 10ನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿ ಟಿ20 ಕ್ರಿಕೆಟ್‌ನಲ್ಲಿ ಯಾರೂ ಮಾಡದ ವಿಶ್ವದಾಖಲೆ ನಿರ್ಮಿಸಿದ್ದಾರೆ.

**47 ರನ್ ಕಲೆಹಾಕಿದ ನೆದರ್ಲೆಂಡ್ಸ್:** ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ನೆದರ್ಲೆಂಡ್ಸ್ ತಂಡ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ಕಳೆದುಕೊಂಡು 147 ರನ್ ಕಲೆಹಾಕಿತು. ತಂಡದ ಪರ ಮ್ಯಾಕ್ಸ್ ಒ'ಡೌಡ್ ಅತಿ ಹೆಚ್ಚು ರನ್ ಗಳಿಸಿದರು. ಅವರು 55 ಎಸೆತಗಳಲ್ಲಿ 66 ರನ್ ಗಳಿಸಿದರು. ಉಳಿದಂತೆ ತೇಜ ನಿಡಮನೂರು 36 ರನ್‌ಗಳ ಕಾಣಿಕೆ ನೀಡಿದರು. ಈ ಇಬ್ಬರನ್ನು ಬಿಟ್ಟರೆ, ತಂಡದ ಮತ್ತಾವ ಆಟಗಾರನಿಂದಲೂ ಗಮನಾರ್ಹ ಪ್ರದರ್ಶನ ನೀಡಲು ಸಾಧ್ಯವಾಗಲಿಲ್ಲ. ಇತಿಹಾಸ ನಿರ್ಮಿಸಿದ ಶಕೀಲ್: ಈ ಗುರಿ ಬೆನ್ನಟ್ಟಿದ ಒಮಾನ್ ತಂಡದ ಪರ ಬರೋಬ್ಬರಿ 8 ಆಟಗಾರರು ಒಂದಂಕಿಗೆ ಸುಸ್ತಾದರು. ಅದರಲ್ಲೂ ಮೊದಲ 6 ಆಟಗಾರರಿಗೆ 10 ರನ್ ಕಲೆಹಾಕಲು ಸಾಧ್ಯವಾಗಲಿಲ್ಲ. ಆದರೆ 10ನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬಂದ ಶಕೀಲ್ ಅಹ್ಮದ್ ತಮ್ಮ ಹೆಸರಿನಲ್ಲಿ ದೊಡ್ಡ ದಾಖಲೆ ನಿರ್ಮಿಸಿದರು. ಅವರು 33 ಎಸೆತಗಳಲ್ಲಿ 3 ಬೌಂಡರಿ ಹಾಗೂ 2 ಸಿಕ್ಸರ್‌ಗಳ ನೆರವಿನಿಂದ 45 ರನ್ ಗಳಿಸಿದರಾದರೂ ತಮ್ಮ ತಂಡಕ್ಕೆ ಗೆಲುವು ತಂದುಕೊಡಲು ಸಾಧ್ಯವಾಗಲಿಲ್ಲ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966